ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಜುಲೈ 24 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 45 | ಸಂಚಿಕೆ: 99 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಯಾವುದು ಅಗ್ಗ

- ಚಿನ್ನ, ಬೆಳ್ಳಿ, ಪ್ಲಾಟಿನಂ ಮೇಲಿನ ಆಮದು ಸುಂಕ ಕಡಿತ
- ತಾಮ್ರದ ಪದಾರ್ಥಗಳು..
- ಮೊಬೈಲ್ ಫೋನ್ ಬಿಡಿ ಭಾಗಗಳು
- ಮೊಬೈಲ್ ಫೋನ್
- ಮೊಬೈಲ್ ಫೋನ್ ಚಾರ್ಜರ್
- ಮೂರು ಕ್ಯಾನ್ಸರ್ ಔಷಧಿಗಳು
- ಸೋಲಾರ್ ಪ್ಯಾನಲ್‌ಗಳು
- ವಿದ್ಯುತ್ ತಂತಿ & ಎಕ್ಸ್ ರೇ ಉಪಕರಣಗಳು
- ವಿದೇಶಿ ಬಟ್ಟೆ, ಚರ್ಮೋತ್ಪನ್ನಗಳು, ಟಿವಿ
- 20 ಖನಿಜಗಳ ಮೇಲೆ ಅಬಕಾರಿ ಸುಂಕ ಇಳಿಕೆ
- ಇ–ಕಾಮರ್ಸ್ ಮೇಲಿನ ಟಿಡಿಎಸ್ ಶೇ.0.1ಕ್ಕೆ ಇಳಿಕೆ
- ಸ್ಟಾರ್ಟ್‌ಅಪ್ ವ್ಯವಸ್ಥೆ: ಏಂಜೆಲ್ ಟ್ಯಾಕ್ಸ್ ರದ್ದು





ಯಾವುದು ದುಬಾರಿ

- ಮರು ಬಳಕೆ ಆಗದ ಎಲ್ಲಾ ರೀತಿಯ ಪ್ಲಾಸ್ಟಿಕ್ ವಸ್ತುಗಳು
- ಬ್ರಾಂಡೆಡ್ ಹಾಗೂ ಆಮದು ಬಟ್ಟೆ, ವಸ್ತ್ರಗಳು
- ಎಲ್ಲಾ ರೀತಿಯ ವಿದ್ಯುತ್ ಉಪಕರಣಗಳು
- ಮೊಬೈಲ್ ಟವರ್ ಬಿಡಿ ಭಾಗಗಳು
- ಸ್ಟೇಟ್ ಸ್ಟ್ಯಾಂಪ್ ಡ್ಯೂಟಿ ಹೆಚ್ಚಳಕ್ಕೆ ಅವಕಾಶ
- ಫ್ಲೆಕ್ಸ್ ಮತ್ತು ಬ್ಯಾನರ್







ಮಹಿಳೆಯರಿಗೆ ಮಹಾಶಕ್ತಿ

ವಿವಿಧ ಕ್ಷೇತ್ರದಲ್ಲಿ ಉತ್ತೇಜಿಸಲು 3 ಲಕ್ಷ ಕೋಟಿ ಮೀಸಲು

● ನವ ಉದ್ಯೋಗಿಗೆ ಕಂಪನಿ ಸಂಬಳದ ಜೊತೆ ಸರ್ಕಾರದಿಂದಲೂ ಒಂದು ತಿಂಗಳ ಸಂಬಳ ● ಚಿನ್ನ–ಬೆಳ್ಳಿ ಕಸ್ಟಮ್ಸ್ ಇಳಿಕೆ ● ವಿದ್ಯಾರ್ಥಿಗಳಿಗೆ 7.5 ಲಕ್ಷ ರೂ.ವರೆಗೆ ಕೌಶಲ್ಯ ಸಾಲ ● 3 ಕ್ಯಾನ್ಸರ್ ಔಷಧಿಗಳ ಸುಂಕ ರಿಯಾಯ್ತಿ ● ರಕ್ಷಣಾ ಇಲಾಖೆಗೆ 6.21 ಲಕ್ಷ ಕೋಟಿ ಮೀಸಲು ● ಬಿಹಾರ, ಆಂಧ್ರಗೆ ಬಂಪರ್ ಕೊಡುಗೆ

ನವದೆಹಲಿ, ಜು.23–ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮೋದಿ ಸರ್ಕಾರದ 3.0 ಅವಧಿಯ ಮೊದಲ ಬಜೆಟ್ ಮಂಡನೆ ಮಾಡುವ ಮೂಲಕ ಸತತ 7 ಬಾರಿ ಬಜೆಟ್ ಮಂಡಿಸಿದ ದಾಖಲೆ ನಿರ್ಮಿಸಿದ್ದಾರೆ.

ಅವರ ಈ ಬಜೆಟ್‌ನಲ್ಲಿ ಯುವ ಜನಾಂಗ, ಅನ್ನದಾತ, ಬಡವರು, ಮಹಿಳೆಯರು, ಕೌಶಲ್ಯಾಭಿವೃದ್ಧಿ ಸೇರಿದಂತೆ 9 ಕ್ಷೇತ್ರಗಳಿಗೆ ಆದ್ಯತೆ ನೀಡಲಾಗಿದೆ.

ಕೃಷಿ ಸಂಬಂಧಿತ ಕ್ಷೇತ್ರಗಳಿಗೆ ಬರೋಬ್ಬರಿ 1.52 ಲಕ್ಷ ಕೋಟಿ ರೂ. ಅನುದಾನ ನೀಡಲಾಗಿದೆ. ತರಕಾರಿ ಬೆಳೆಗಳಿಗೆ ಉತ್ತೇಜನ ನೀಡಲು ವಿಶೇಷ ಯೋಜನೆ ರೂಪಿಸಲಾಗಿದೆ. ರೈತರಿಗಾಗಿ ಕಿಸಾನ್ ಕ್ರೆಡಿಟ್ ವ್ಯವಸ್ಥೆ ಜಾರಿ ಮಾಡಲಾಗಿದೆ. ಶಿಕ್ಷಣ, ಉದ್ಯೋಗ ಹಾಗೂ ಕೌಶಲಾಭಿವೃದ್ಧಿಗೆ 1.42 ಲಕ್ಷ ಕೋಟಿ ರೂ. ನೀಡಲಾಗಿದೆ. ಉದ್ಯೋಗ ಸೃಷ್ಟಿಗಾಗಿ 3 ಕೌಶಲ ಯೋಜನೆಗಳನ್ನು ಜಾರಿ ಮಾಡಲಾಗಿದೆ.

ಮೂಲಭೂತ ಸೌಕರ್ಯಗಳ ಪೈಕಿ ಎಕ್ಸ್‌ಪ್ರೆಸ್‌ವೇಗೆ ಹೆಚ್ಚಿನ ಒತ್ತು ನೀಡಲಾಗಿದೆ. ಉತ್ಪಾದನಾ ವಲಯದಲ್ಲಿ ಕ್ರೆಡಿಟ್ ವ್ಯವಸ್ಥೆ ಜಾರಿಗೊಳಿಸಲಾಗಿದ್ದು, ಹಳ್ಳಿಗಳ ಅಭಿವೃದ್ಧಿಗೆ ವಿಶೇಷ ಯೋಜನೆ ಘೋಷಿಸಲಾಗಿದೆ. ಗ್ರಾಮೀಣಾಭಿವೃದ್ಧಿಗೆ 2.66 ಲಕ್ಷ ಕೋಟಿ ರೂ. ಅನುದಾನ ಮೀಸಲಿಡಲಾಗಿದೆ. ಮುದ್ರಾ ಸಾಲವನ್ನು 10 ಲಕ್ಷದಿಂದ 20 ಲಕ್ಷಗಳಿಗೆ ಏರಿಕೆ ಮಾಡಲಾಗಿದೆ. ಮಹಿಳೆಯರ ಸಬಲೀಕರಣ ಹಾಗೂ ಅವರು ವಿವಿಧ ಕ್ಷೇತ್ರದಲ್ಲಿ ಪಾಲ್ಗೊಳ್ಳುವಂತೆ ಉತ್ತೇಜಿಸುವ ನಿಟ್ಟಿನಲ್ಲಿ 3 ಲಕ್ಷ ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ. ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರು ಭಾಗವಹಿಸಲು ಅನುಕೂಲವಾಗುವಂತೆ ಉದ್ಯೋಗಸ್ಥ ಮಹಿಳಾ ವಸತಿ ನಿಲಯಗಳನ್ನು ಸ್ಥಾಪಿಸುವುದಾಗಿ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಅಲ್ಲದೇ ಪ್ರಧಾನಮಂತ್ರಿ ಮಾತೃವಂದನಾ ಯೋಜನೆ, ಸ್ವಾಧಾರ್ ಗ್ರೆಹ್, ವಸತಿ ನಿಲಯ ಯೋಜನೆಗಳಿಗೆ 2516 ಕೋಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಮುಖ ಯೋಜನೆಗಳಾದ ಸಕ್ಷಮ್ ಅಂಗನವಾಡಿ ■6ನೇ ಪುಟಕ್ಕೆ

ಸ್ಟಾಂಡರ್ಡ್ ಡಿಡಕ್ಷನ್ ಮೊತ್ತ 75 ಸಾವಿರ ರೂ.ಗೆ ಏರಿಕೆ

ನವದೆಹಲಿ, ಜು.23– ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಮ್ಮ ಬಜೆಟ್ ಮಂಡನೆಯಲ್ಲಿ ಸ್ಟಾಂಡರ್ಡ್ ಡಿಡಕ್ಷನ್ ಮೊತ್ತವನ್ನು 50 ಸಾವಿರ ರೂ.ನಿಂದ 75 ಸಾವಿರ ರೂಗೆ ಏರಿಕೆ ಮಾಡಿದ್ದು, ಇದರಿಂದ 4 ಕೋಟಿ ಜನರಿಗೆ ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಪಿಂಚಣಿದಾರರಿಗೆ 15 ಸಾವಿರ ರೂ.ನಿಂದ 25 ಸಾವಿರ ರೂ.ಗೆ ಏರಿಕೆ ಮಾಡಲಾಗಿದ್ದು, ಸದ್ಯ ಮೂರನೇ 2 ಭಾಗದಷ್ಟು ಜನರು ಹೊಸ ತೆರಿಗೆ ಪದ್ಧತಿಯನ್ನು ಆಯ್ಕೆ ಮಾಡಿದ್ದಾರೆ ಎಂದು ಹಣಕಾಸು ಸಚಿವರು ತಿಳಿಸಿದ್ದಾರೆ. ತೆರಿಗೆ ವ್ಯವಸ್ಥೆಯ ಬಗ್ಗೆ ಮಾತನಾಡಿದ ನಿರ್ಮಲಾ ಸೀತಾರಾಮನ್, ವಿವಿಧ ಪಾವತಿಗಳಿಗೆ ಐದು ಪ್ರತಿಶತ ಟಿಡಿಎಸ್ ಬದಲಿಗೆ ಎರಡು ಪ್ರತಿಶತ ಟಿಡಿಎಸ್ ಅನ್ನು ಒದಗಿಸಲಾಗುತ್ತದೆ ಎಂದರು. ಮ್ಯೂಚುವಲ್ ಫಂಡ್ ಅಥವಾ ಯುಟಿಐ ಮರುಖರೀದಿಯಲ್ಲಿ ಟಿಡಿಎಸ್ ಅನ್ನು ಶೇ. 20ರಷ್ಟು ಹಿಂಪಡೆಯಲಾಗಿದೆ. ಇ–ಕಾಮರ್ಸ್ ಆಪರೇಟರ್‌ಗಳಿಗೆ TDS ಅನ್ನು ಶೇಕಡಾ 1 ರಿಂದ 0.1 ಕ್ಕೆ ಇಳಿಸಲಾಗಿದೆ. ಅಲ್ಲದೆ, ಟಿಡಿಎಸ್ ತುಂಬುವಲ್ಲಿ ವಿಳಂಬವನ್ನು ಅಪರಾಧ ಎಂದು ಪರಿಗಣಿಸಲಾಗುವುದಿಲ್ಲ ಎಂದರು.

ಹೊಸ ತೆರಿಗೆ ಪದ್ಧತಿಯಲ್ಲಿ ಕೂಡ ಬದಲಾವಣೆ ಮಾಡಲಾಗಿದ್ದು, 17,500 ರೂ. ತೆರಿಗೆ ಉಳಿತಾಯ ಮಾಡಬಹುದಾಗಿದೆ ಎಂದು ಕೇಂದ್ರ ಸಚಿವೆ ತಿಳಿಸಿದ್ದಾರೆ.

ಇನ್ನು, ಎನ್‌ಜಿಒ ಸೇರಿ ಯಾವುದೇ ರೀತಿಯ ದಾನ ಮಾಡುವವರಿಗೆ ಎರಡು ಸ್ಲ್ಯಾಬ್ ಬದಲು, ■6ನೇ ಪುಟಕ್ಕೆ

ಹೊಸ ತೆರಿಗೆ ಸ್ಲ್ಯಾಬ್‌ಗಳು

- 3 ಲಕ್ಷದವರೆಗಿನ ಆದಾಯಕ್ಕೆ ತೆರಿಗೆ ಇಲ್ಲ
- 3 ಲಕ್ಷದಿಂದ 7 ಲಕ್ಷದವರೆಗಿನ ಆದಾಯಕ್ಕೆ ಶೇ.5 ತೆರಿಗೆ
- 7 ಲಕ್ಷದಿಂದ 10 ಲಕ್ಷದವರೆಗಿನ ಆದಾಯಕ್ಕೆ ಶೇ.10 ತೆರಿಗೆ
- 10 ಲಕ್ಷದಿಂದ 12 ಲಕ್ಷದವರೆಗಿನ ಆದಾಯಕ್ಕೆ ಶೇ.15 ತೆರಿಗೆ
- 12 ಲಕ್ಷದಿಂದ 15 ಲಕ್ಷದವರೆಗಿನ ಆದಾಯಕ್ಕೆ ಶೇ.20 ತೆರಿಗೆ
- 15 ಲಕ್ಷಕ್ಕಿಂತ ಹೆಚ್ಚಿನ ಆದಾಯಕ್ಕೆ 30% ತೆರಿಗೆ

ದೇಶದ ಸರ್ವಾಂಗೀಣ ಏಳಿಗೆಗೆ ಅಕ್ಷಯಪಾತ್ರೆ, ಮಧ್ಯಮ ವರ್ಗಕ್ಕೆ ಶಕ್ತಿ

ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಬಜೆಟ್ ದೇಶದ ಸರ್ವಾಂಗೀಣ ಏಳಿಗೆಗೆ ಅಕ್ಷಯ ಪಾತ್ರೆಯಾಗಿದ್ದು, ಮಧ್ಯಮ ವರ್ಗಕ್ಕೆ ಶಕ್ತಿ ನೀಡಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬಜೆಟ್ ಮಂಡನೆ ಕುರಿತು ಟ್ವಿಟರ್‌ನಲ್ಲಿ ವಿಡಿಯೋ ಸಂದೇಶ ನೀಡಿರುವ ಪ್ರಧಾನಿ ಮೋದಿ, 'ದೇಶದ ಸರ್ವಾಂಗೀಣ ಏಳಿಗೆಗೆ ಈ ಬಜೆಟ್ ಏಣಿಯಾಗಿದ್ದು, ದೇಶದ ಎಲ್ಲ ವರ್ಗದವರನ್ನು ದೃಷ್ಟಿಯಲ್ಲಿಟ್ಟುಕೊಂಡು ಬಜೆಟ್ ಮಂಡಿಸಲಾಗಿದೆ. ಯುವಕರಿಗೆ ಉದ್ಯೋಗ, ಬಡವರಿಗೆ ಮನೆ ನಿರ್ಮಾಣ, ಸಣ್ಣ ಉದ್ಯಮಗಳು, ಶಿಕ್ಷಣ ಸೇರಿ ಎಲ್ಲ ಕ್ಷೇತ್ರಗಳ ಏಳಿಗೆಯನ್ನು ಗಮನದಲ್ಲಿಟ್ಟುಕೊಂಡು ಮಂಡಿಸಲಾಗಿದೆ. ಅಷ್ಟೇ ಅಲ್ಲ, ಭಾರತವು ■6ನೇ ಪುಟಕ್ಕೆ



ಇದು ಬಿಜೆಪಿ ಮಿತ್ರರು, ಆಪ್ತ ಉದ್ಯಮಿಗಳ ಓಲೈಕೆಯ 'ಕುರ್ಚಿ ಉಳಿಸುವ ಬಜೆಟ್'

ನವದೆಹಲಿ, ಜು.23– ಕೇಂದ್ರ ಬಜೆಟ್ 2024ಕ್ಕೆ ಪ್ರತಿಕ್ರಿಯೆ ನೀಡಿರುವ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಇದು ಬಿಜೆಪಿ ಮಿತ್ರರು ಹಾಗೂ ಆಪ್ತ ಉದ್ಯಮಿಗಳು ಓಲೈಕೆಗೆಂದೇ ತಯಾರಿಸಿರುವ ಆಯವ್ಯಯ ಎಂದು ಟೀಕಿಸಿದ್ದಾರೆ. ಇದು ಕುರ್ಚಿ ಉಳಿಸುವ ಬಜೆಟ್' ಎಂದು ಲೇವಡಿ ಮಾಡಿರುವ ಅವರು, 2024ರ ಲೋಕಸಭೆ ಚುನಾವಣೆಯ ಕಾಂಗ್ರೆಸ್ ಪ್ರಣಾಳಿಕೆಯ ನಕಲು ಎಂದು ವ್ಯಂಗ್ಯವಾಡುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಸರಕಾರದ ಮೂರನೇ ಅವಧಿಯ ಬಜೆಟ್ ಅನ್ನು ಲೇವಡಿ ಮಾಡಿದ್ದಾರೆ. ಇದೊಂದು 'ಕಾಪಿಕ್ಯಾಟ್ ಬಜೆಟ್' ಎಂದು ಅವರು ಜರಿದಿದ್ದಾರೆ. ■6ನೇ ಪುಟಕ್ಕೆ





ಅ.3ರಿಂದ 12ರವರೆಗೆ ಮೈಸೂರು ದಸರಾ ಉತ್ಸವ

ಮಾಸಾಂತ್ಯಕ್ಕೆ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಉನ್ನತ ಮಟ್ಟದ ಸಭೆ

ಮೈಸೂರು ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಅವರಿಂದ ಪೂರ್ವಭಾವಿ ಸಭೆ; ಅಧಿಕಾರಿಗಳಿಂದ ಮಾಹಿತಿ ಸಂಗ್ರಹ



ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ್ ರೆಡ್ಡಿ ಅವರು ಮಂಗಳವಾರ ತಮ್ಮ ಕಚೇರಿ ಸಭಾಂಗಣದಲ್ಲಿ ದಸರಾ ಸಂಬಂಧ ಪೂರ್ವಭಾವಿ ಸಭೆ ನಡೆಸಿ, ಮಾಹಿತಿ ಕಲೆ ಹಾಕಿದರು. ಎಡಿಸಿ ಪಿ.ಶಿವರಾಜು, ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್, ಎಸ್ಪಿ ಎನ್.ವಿಷ್ಣುವರ್ಧನ್, ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ, ಪಾಲಿಕೆ ಕಮಿಷನರ್ ಆಶಾದ್ ಉರ್ ರೆಹಮಾನ್ ಷರೀಫ್, ಮುಡಾ ಕಮಿಷನರ್ ರಘುನಂದನ್, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ, ಅರಮನೆ ಮಂಡಳಿ ಉಪನಿರ್ದೇಶಕ ಸುಬ್ರಹ್ಮಣ್ಯ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಮೈಸೂರು, ಜು.23(ಆರ್‌ಕೆ)– 2024ನೇ ಸಾಲಿನ ಮೈಸೂರು ದಸರಾ ಮಹೋತ್ಸವದ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಜುಲೈ ಅಂತ್ಯದಲ್ಲಿ ಉನ್ನತ ಮಟ್ಟದ ಸಭೆ ನಡೆಯಲಿದೆ.

ಅ. 3ರಿಂದ 12ರವರೆಗೆ ಪ್ರಸಕ್ತ ಸಾಲಿನ ನಾಡಹಬ್ಬ ಆಚರಣೆಯಾಗಲಿದ್ದು, ಉನ್ನತ ಮಟ್ಟದ ಸಮಿತಿ ಸಭೆಗೆ ಪೂರಕ ಮಾಹಿತಿ ಒದಗಿಸಲು ಮೈಸೂರು ಜಿಲ್ಲಾಧಿಕಾರಿ ಜಿ.ಲಕ್ಷ್ಮೀಕಾಂತ ರೆಡ್ಡಿ, ಇಂದು ತಮ್ಮ ಕಚೇರಿ ಸಭಾಂಗಣದಲ್ಲಿ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ದಸರಾ ಪೂರ್ವಭಾವಿ ಸಭೆ ನಡೆಸಿದರು. 2023ರ ದಸರಾ ಕಾರ್ಯಕ್ರಮಗಳಲ್ಲಿ ಏನಾದರೂ ಲೋಪವಾಗಿದ್ದರೆ ಸರಿಪಡಿಸಿಕೊಂಡು ಈ ಬಾರಿ ವ್ಯವಸ್ಥಿತವಾಗಿ ನಾಡಹಬ್ಬ ನಡೆಸಲು ಕೈಗೊಳ್ಳಬೇಕಾದ ಕ್ರಮಗಳು, ದಸರಾ ಉದ್ಘಾಟನೆ, ಗಜ ಪಯಣ, ಆನೆಗಳ ಆರೈಕೆ, ವಿದ್ಯುದ್ದೀಪಾಲಂಕಾರ, ವಿಜಯದಶಮಿ ಮೆರವಣಿಗೆ, ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಜಿಲ್ಲಾಧಿಕಾರಿಗಳು ಮಾಹಿತಿ ಕಲೆ ಹಾಕಿದರು.

ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಮಾಸಾಂತ್ಯಕ್ಕೆ ಬೆಂಗಳೂರಿನಲ್ಲಿ ದಸರಾ ಉನ್ನತ ಮಟ್ಟದ ಸಭೆ ನಡೆಯುವ ನಿರೀಕ್ಷೆ ಇರುವುದರಿಂದ 2024ನೇ ಸಾಲಿನಲ್ಲಿ ವಿಶೇಷವಾಗಿ ಏನು ಮಾಡಬಹುದು, ದೇಶ–ವಿದೇಶಗಳ ಪ್ರವಾಸಿಗರನ್ನು ವಿಶ್ವಪ್ರಸಿದ್ಧ ದಸರಾ ಹಬ್ಬಕ್ಕೆ ಸೆಳೆಯಲು ಸಿದ್ಧತೆ ಬಗ್ಗೆಯೂ ಲಕ್ಷ್ಮೀಕಾಂತ ರೆಡ್ಡಿ ಇಂದಿನ ಸಭೆಯಲ್ಲಿ ಸಮಾಲೋಚನೆ ಮಾಡಿ, ಈ ಹಿಂದಿನ ಉತ್ಸವದಲ್ಲಿ ಕರ್ತವ್ಯ ನಿರ್ವಹಿಸಿದ ಅಧಿಕಾರಿಗಳ ಅನುಭವ ■6ನೇ ಪುಟಕ್ಕೆ

ರಾಜ್ಯಕ್ಕೆ ಚೊಂಬು ನೀಡಿದ ನಿರ್ಮಲಾ ಸೀತಾರಾಮನ್!

ಬೆಂಗಳೂರು, ಜು.23(ಕೆಎಂಶಿ)– ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಯಾವುದೇ ಬೇಡಿಕೆಗಳಿಗೂ ಮನ್ನಣೆ ನೀಡದೆ ಅತ್ಯಂತ ನಿರಾಶಾದಾಯಕ ಬಜೆಟ್ ಮಂಡಿಸಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಿರ್ಮಲಾ ಸೀತಾರಾಮನ್ ಅವರು ರಾಜ್ಯದ ಹಿತವನ್ನು ಸಂಪೂರ್ಣವಾಗಿ ನಿರ್ಲಕ್ಷಿಸುವ ಮೂಲಕ ರಾಜ್ಯದ ಜನತೆಯ ಕೈಗೆ ಚೊಂಬು ಕೊಟ್ಟಿದ್ದಾರೆ. ಪ್ರಧಾನ ಮಂತ್ರಿಗಳು ತನ್ನ ಅಧಿಕಾರ ■6ನೇ ಪುಟಕ್ಕೆ

ಆಯ...	
ಸಾಲ	– 27%
ಆದಾಯ ತೆರಿಗೆ	– 19%
ಜಿಎಸ್‌ಟಿ	– 18%
ಕಾರ್ಪೊರೇಟ್ ತೆರಿಗೆ	– 17%
ತೆರಿಗೆಯೇತರ ಆದಾಯ	– 9%
ಅಬಕಾರಿ ಸುಂಕ	– 5%
ಸೀಮಾ ಸುಂಕ	– 4%
ಸಾಲದ ಹೊರತಾದ ಆದಾಯ	– 1%

ವ್ಯಯ...	
ರಾಜ್ಯಗಳಿಗೆ ತೆರಿಗೆ ಪಾಲು	– 21%
ಸಾಲದ ಮೇಲಿನ ಬಡ್ಡಿ	– 19%
ಕೇಂದ್ರ ಸರ್ಕಾರದ ಯೋಜನೆಗಳು	– 16%
ಹಣಕಾಸು ಆಯೋಗ	– 9%
ಇತರೆ ಖರ್ಚುಗಳು	– 9%
ಕೇಂದ್ರದ ಯೋಜನೆಗಳು	– 8%
ರಕ್ಷಣಾ ಇಲಾಖೆ	– 8%
ಸಬ್ಸಿಡಿ	– 6%
ಪಿಂಚಣಿ	– 4%

ಅನುದಾನ ಹಂಚಿಕೆ	
ರಕ್ಷಣೆ	– 4,54,773 ಕೋಟಿ ರೂ.
ಗ್ರಾಮೀಣಾಭಿವೃದ್ಧಿ	– 2,65,808 ಕೋಟಿ ರೂ.
ಕೃಷಿ	– 1,51,851 ಕೋಟಿ ರೂ.
ಗೃಹ	– 1,50,983 ಕೋಟಿ ರೂ.
ಶಿಕ್ಷಣ	– 1,25,638 ಕೋಟಿ ರೂ.
ಐಟಿ ಮತ್ತು ಟೆಲಿಕಾಂ	– 1,16,349 ಕೋಟಿ ರೂ.
ಆರೋಗ್ಯ	– 89,287 ಕೋಟಿ ರೂ.
ಇಂಧನ	– 68,769 ಕೋಟಿ ರೂ.
ಸಮಾಜ ಕಲ್ಯಾಣ	– 56,501 ಕೋಟಿ ರೂ.
ಕೈಗಾರಿಕೆ	– 47,559 ಕೋಟಿ ರೂ.

ಖೇಲೊ ಇಂಡಿಯಾಕ್ಕೆ ಮತ್ತೊಮ್ಮೆ ಸಿಂಹಪಾಲು



ನವದೆಹಲಿ: ಕೇಂದ್ರ ಬಜೆಟ್‌ನಲ್ಲಿ ಕ್ರೀಡಾ ಸಚಿವಾಲಯಕ್ಕೆ ನಿಗದಿಪಡಿಸಿದ ಮೊತ್ತದಲ್ಲಿ ಖೇಲೊ ಇಂಡಿಯಾ ಯೋಜನೆಗೆ ಸಿಂಹಪಾಲು ದೊರಕಿದೆ. ತಳಮಟ್ಟದಲ್ಲಿ ಕ್ರೀಡೆಯನ್ನು ಪ್ರೋತ್ಸಾಹಿಸಲು ಈ ಯೋಜನೆ ಜಾರಿಗೊಳಿಸಲಾಗಿದೆ.

ಬಜೆಟ್‌ನಲ್ಲಿ ಕ್ರೀಡಾ ಸಚಿವಾಲಯಕ್ಕೆ 3,442 ಕೋಟಿ ನಿಗದಿಪಡಿಸಿದ್ದು, ಇದರಲ್ಲಿ 900 ಕೋಟಿ ಮೊತ್ತ ಖೇಲೊ ಇಂಡಿಯಾಕ್ಕೆ ಹಂಚಿಕೆ ಮಾಡಲಾಗಿದೆ. ಕಳೆದ ಹಣಕಾಸು ವರ್ಷದಲ್ಲಿ ಈ ಯೋಜನೆಗೆ 880 ಕೋಟಿ ನೀಡಲಾಗಿತ್ತು.

ಒಲಿಂಪಿಕ್ಸ್ ಹತ್ತಿರದಲ್ಲೇ ಇರುವುದರಿಂದ ಮತ್ತು ಮುಂದಿನ ಪ್ರಮುಖ ಕ್ರೀಡಾಕೂಟಗಳಿಗೆ (ಏಷ್ಯನ್ ಗೇಮ್ಸ್ ಮತ್ತು ಕಾಮನ್ವೆಲ್ತ್ ಗೇಮ್ಸ್) ಎರಡು ವರ್ಷಗಳು ಇರುವ ಕಾರಣ ಸಚಿವಾಲಯಕ್ಕೆ ಹಂಚಿಕೆ ಮಾಡಿರುವ ಮೊತ್ತದಲ್ಲಿ ಅಲ್ಪ ಏರಿಕೆ ಆಗಿದೆ. ಕ್ರೀಡಾ ಸಚಿವಾಲಯಕ್ಕೆ ಈ ಬಾರಿ ನಿಗದಿಪಡಿಸಿದ ಮೊತ್ತ ಕಳೆದ ಬಾರಿಗಿಂತ 45.36 ಕೋಟಿ ಹೆಚ್ಚು. ಖೇಲೊ ಇಂಡಿಯಾ ಯೋಜನೆಗೆ ಕೇಂದ್ರ ಸರ್ಕಾರ ಇತ್ತೀಚಿನ ವರ್ಷಗಳಲ್ಲಿ ಅತಿ ಹೆಚ್ಚು ಮೊತ್ತ ನೀಡುತ್ತ ಬಂದಿದೆ.

ರಾಷ್ಟ್ರೀಯ ಕ್ರೀಡಾ ಫೆಡರೇಷನ್‌ಗಳಿಗೆ ನೀಡಲಾಗುವ ನೆರವಿನಲ್ಲಿ 15 ಕೋಟಿ ಹೆಚ್ಚಳವಾಗಿದೆ. 2023–24ರಲ್ಲಿ 325 ಕೋಟಿ ಹಂಚಿಕೆ ಮಾಡಿದ್ದರೆ, ಈ ಸಲ 340 ಕೋಟಿ ನಿಗದಿಪಡಿಸಲಾಗಿದೆ.

ತನಗೆ ವಹಿಸಿರುವ ಕ್ರೀಡಾಂಗಣಗಳನ್ನು ಮತ್ತು 'ಟಾಪ್ಸ್' (ಟಾರ್ಗೆಟ್ ಒಲಿಂಪಿಕ್ಸ್ ಪೋಡಿಯಂ ಸ್ಕೀಮ್) ಯೋಜನೆಯನ್ನು ನಿರ್ವಹಿಸುವ ಭಾರತ ಕ್ರೀಡಾ ಪ್ರಾಧಿಕಾರಕ್ಕೆ ನಿಗದಿಪಡಿಸಿರುವ ಮೊತ್ತದಲ್ಲೂ 28 ಕೋಟಿ ಏರಿಕೆ ಆಗಿದೆ. ಈ ಸಲ 822.60 ಕೋಟಿ (ಕಳೆದ ಸಲ 795.77 ಕೋಟಿ) ಹಂಚಿಕೆ ಮಾಡಲಾಗಿದೆ.

ರಾಷ್ಟ್ರೀಯ ಉದ್ದೀಪನ ಮದ್ದು ಸೇವನೆ ತಡೆ ಘಟಕ (ನಾಡಾ) ಮತ್ತು ರಾಷ್ಟ್ರೀಯ ಡೋಪ್ ಟೆಸ್ಟಿಂಗ್ ಲ್ಯಾಬೊರೇಟರಿಗೆ (ಎನ್‌ಡಿಟಿಎಲ್) ನಿಗದಿಪಡಿಸಿರುವ ಮೊತ್ತದಲ್ಲೂ ಅಲ್ಪ ಏರಿಕೆಯಾಗಿದೆ. 'ನಾಡಾ'ಕ್ಕೆ ಈ ಬಾರಿ 22.30 ಕೋಟಿ (ಕಳೆದ ಬಾರಿ 21.73 ಕೋಟಿ) ಹಂಚಿಕೆ ಮಾಡಲಾಗಿದೆ. ಎನ್‌ಡಿಟಿಎಲ್‌ಗೆ 22 ಕೋಟಿ (ಕಳೆದ ಬಜೆಟ್‌ನಲ್ಲಿ 19.50 ಕೋಟಿ) ನಿಗದಿ ಮಾಡಲಾಗಿತ್ತು.

ವೈಟ್‌ಬೋರ್ಡ್, ಎಲೆಕ್ಟ್ರಿಕ್ ವಾಹನಗಳ ಟ್ಯಾಕ್ಸಿಗಳಾಗಿ ಬಳಕೆ ಖಂಡಿಸಿ
ಮೈಸೂರಲ್ಲಿ ಆಟೋ ಚಾಲಕರ ಪ್ರತಿಭಟನೆ; ಈ ಹಾವಳಿ ತಡೆಗೆ ಆಗ್ರಹ

ಮೈಸೂರು, ಜು.23(ಜಿಎ)–ಅನಧಿಕೃತವಾಗಿ ವೈಟ್ ಬೋರ್ಡ್ ಮತ್ತು ಎಲೆಕ್ಟ್ರಿಕ್ ವಾಹನಗಳನ್ನು ಟ್ಯಾಕ್ಸಿಯಾಗಿ ಬಳಸುತ್ತಿರುವುದನ್ನು ಖಂಡಿಸಿ ಕರ್ನಾಟಕ ಚಾಲಕರ ಒಕ್ಕೂಟದ ಜಿಲ್ಲಾ ಘಟಕದಿಂದ ಚಾಮರಾಜಪುರಂನ ಆರ್‌ಟಿಓ ಕಚೇರಿ(ಪಶ್ಚಿಮ) ಬಳಿ ಪ್ರತಿಭಟನೆ ನಡೆಸಲಾಯಿತು.

ಲಕ್ಷ್ಮೀಪುರಂನ ಡಬಲ್ ಟ್ಯಾಂಕ್ ಬಳಿಯಿಂದ ಆರ್‌ಟಿಓ ಕಚೇರಿವರೆಗೆ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ನಂತರ ನೂರಾರು ಆಟೋಗಳೊಂದಿಗೆ ಜಮಾಯಿಸಿ ವಿವಿಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರ್‍ಯಾಪಿಡೊ ಮತ್ತು ಇತರ ಇ–ಬೈಕ್‌ಗಳು ಕಾನೂನುಬಾಹಿರವಾಗಿ ಕಾರ್ಯಾಚರಿಸುತ್ತಿವೆ. ಇವುಗಳ ಸೇವೆಯಿಂದ ಆಟೋ ಚಾಲಕರ ಜೀವನೋಪಾಯಕ್ಕೆ ತೊಂದರೆಯಾಗುತ್ತಿದೆ. ರ್‍ಯಾಪಿಡೋ ಬೈಕ್ ಚಾಲಕರು ಮತ್ತು ರಿಕ್ಷಾ ಚಾಲಕರ ನಡುವಿನ ಘರ್ಷಣೆ ಇತ್ತೀಚೆಗೆ ಹೆಚ್ಚಾಗುತ್ತಿದೆ ಎಂದು ಕಿಡಿಕಾರಿದರು.

ಕೋವಿಡ್ ಸಮಯದಲ್ಲಿ ಆಟೋ ಚಾಲಕರು ಸಂಕಷ್ಟ ಸ್ಥಿತಿಯನ್ನು ಅನುಭವಿಸಿದ್ದು, ಈಗ ಸರ್ಕಾರ ಬೈಕ್ ಟ್ಯಾಕ್ಸಿಗಳಿಗೆ ಅನುಮತಿ ನೀಡಿರುವುದರಿಂದ ಮತ್ತಷ್ಟು ಸಂಕಷ್ಟಕ್ಕೆ ಒಳಗಾಗಿದ್ದಾರೆ. ನಗರದಲ್ಲಿ ಹಲವರು ತಮ್ಮ ವೈಯಕ್ತಿಕ ದ್ವಿಚಕ್ರ ವಾಹನಗಳನ್ನು ಬೈಕ್ ಟ್ಯಾಕ್ಸಿಯಾಗಿ ಬಳಸುತ್ತಿದ್ದು, ಆಟೋ ಚಾಲಕರ ಆದಾಯಕ್ಕೆ ಮತ್ತಷ್ಟು ಹೊಡೆತ ಬಿದ್ದಿದೆ. ದೆಹಲಿ, ಮಹಾರಾಷ್ಟ್ರ, ತೆಲಂಗಾಣ ರಾಜ್ಯಗಳಲ್ಲಿ ಬೈಕ್ ಟ್ಯಾಕ್ಸಿ ನಿಷೇಧಿಸಲಾಗಿದೆ. ಇದೇ ರೀತಿ ರಾಜ್ಯದಲ್ಲಿಯೂ ಬೈಕ್ ಟ್ಯಾಕ್ಸಿ ಸೇವೆ ನಿಷೇಧಿಸಬೇಕು ಎಂದು ಆಗ್ರಹಿಸಿದರು.

ಆಟೋರಿಕ್ಷಾ ಚಲಾಯಿಸಲು ಇಲ್ಲವೆ ಕೊಂಡುಕೊಳ್ಳಲು ಚಾಲನಾ ಪರವಾನಗಿ ಜೊತೆ ಬ್ಯಾಡ್ಜ್ ಕಡ್ಡಾಯವಾಗಬೇಕು. ಬೇರೆ ರಾಜ್ಯ ಹಾಗೂ ಜಿಲ್ಲೆಯ ಪರ್ಮಿಟ್ ಹೊಂದಿರುವ ವಾಹನಗಳನ್ನು ನಿಷೇಧಿಸಬೇಕು. ಆಟೋರಿಕ್ಷಾ ಆನ್‌ಲೈನ್ ದರ ಪರಿಷ್ಕರಣೆ ಮಾಡಬೇಕು. ನಗರದಲ್ಲಿ 25 ಕಿ.ಮೀ.ವರೆಗೆ ಪರಿಮಿತಿ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

ಕರ್ನಾಟಕ ಚಾಲಕರ ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ಶಿವಕುಮಾರ್ ಮಾತನಾಡಿ, ಕಾನೂನುಬಾಹಿರವಾಗಿ ರ್‍ಯಾಪಿಡೊ ಬೈಕ್ ಟ್ಯಾಕ್ಸಿ ಸಂಚಾರ ಮಾಡುತ್ತಿದ್ದ 6 ವಾಹನಗಳನ್ನು ಆರ್‌ಟಿಓ ಅಧಿಕಾರಿ ಈಚೆಗೆ ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸದೇ ಹಾಗೇ ಬಿಟ್ಟು ಕಳುಹಿಸಿದ್ದಾರೆ. ಈ ಮೂಲಕ ಕಾನೂನು ಪಾಲಿಸಬೇಕಾದ ಅಧಿಕಾರಿಗಳು ಕಾನೂನಿಗೆ ವಿರುದ್ಧ ಕೆಲಸ ಮಾಡಿದ್ದಾರೆ ಎಂದು ದೂರಿದರು.

ಕೊನೆಗೆ ಆರ್‌ಟಿಓ ದೇವಿಕಾ ಅವರಿಗೆ ರ್‍ಯಾಪಿಡೊ ಬೈಕ್ ನಿಷೇಧಕ್ಕೆ ಮನವಿ ಸಲ್ಲಿಸಲಾಯಿತು. ಈ ವೇಳೆ ಅವರು ಮಾತನಾಡಿ, ರ್‍ಯಾಪಿಡೋ ಕಂಪನಿಯವರು ನ್ಯಾಯಾಲಯಕ್ಕೆ ಹೋಗಿದ್ದು, ಪ್ರಕರಣ ಕೋರ್ಟ್‌ನಲ್ಲಿ ಇರುವುದರಿಂದ ನಾವು ಯಾವುದೇ ರೀತಿ ಕ್ರಮ ಜರುಗಿಸಲು ಆಗುವುದಿಲ್ಲ. ಆದರೂ ಎಲೆಕ್ಟ್ರಿಕ್, ವೈಟ್ ಬೋರ್ಡ್ ವಾಹನಗಳನ್ನು ತಪಾಸಣೆ ಮಾಡಿ ಅವರಿಗೆ ಎಚ್ಚರಿಕೆ ನೀಡಲಾಗುತ್ತಿದೆ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ಚಾಲಕರ ಒಕ್ಕೂಟದ ಅಧ್ಯಕ್ಷ ಜಿ.ನಾರಾಯಣ, ಬೆಂಗಳೂರು ನಗರಾಧ್ಯಕ್ಷ ಮಂಜೇಗೌಡ, ಜಿಲ್ಲಾಧ್ಯಕ್ಷ ಮುರುಗನ್, ನಗರಾಧ್ಯಕ್ಷ ಸತ್ಯನಾರಾಯಣಸಿಂಗ್, ನಗರ ಉಪಾಧ್ಯಕ್ಷ ಸುರೇಶ್, ಪ್ರಧಾನ ಕಾರ್ಯದರ್ಶಿ ವಿನಾಯಕ್, ಮಹಿಳಾ ಚಾಲಕಿ ಛಾಯಾ, ಸಿದ್ದರಾಜು ಸೇರಿದಂತೆ ನೂರಾರು ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



ಮೈಸೂರಿನ ಆರ್‌ಟಿಓ ಕಚೇರಿ(ಪಶ್ಚಿಮ)ಮುಂಭಾಗ ಅನಧಿಕೃತವಾಗಿ ವೈಟ್‌ಬೋರ್ಡ್, ಎಲೆಕ್ಟ್ರಿಕ್ ವಾಹನಗಳನ್ನು ಟ್ಯಾಕ್ಸಿಯಾಗಿ ಬಳಸುತ್ತಿರುವುದನ್ನು ಖಂಡಿಸಿ ಕರ್ನಾಟಕ ಚಾಲಕರ ಒಕ್ಕೂಟದ ಜಿಲ್ಲಾ ಘಟಕದಿಂದ ಪ್ರತಿಭಟನೆ ನಡೆಸಲಾಯಿತು.

ಮೊಬೈಲ್, ಟ್ಯಾಬ್ ದರ ಇಳಿಕೆ



ಹೊಸದಿಲ್ಲಿ, ಜು.23– ಭಾರತದ ಎಲೆಕ್ಟ್ರಾನಿಕ್ಸ್ ವಲಯಕ್ಕೆ ಈ ಬಾರಿಯ ಕೇಂದ್ರ ಬಜೆಟ್‌ನಲ್ಲಿ ಉತ್ತಮ ಪ್ರೋತ್ಸಾಹ ಸಿಕ್ಕಿದೆ. ಈ ಬಾರಿಯ ಬಜೆಟ್‌ನಲ್ಲಿ ಮೊಬೈಲ್ ಫೋನ್‌ಗಳ ಬಿಡಿಭಾಗಗಳ ಆಮದಿನ ಮೇಲೆ ಬೇಸಿಕ್ ಕಸ್ಟಮ್ಸ್ ಸುಂಕವನ್ನು (ಬಿಸಿಡಿ) ಶೇ.15ರಷ್ಟು ಇಳಿಸಲಾಗಿದೆ. ಮೊಬೈಲ್‌ಗಳಲ್ಲಿ ಬಳಸಲಾಗುವ ಪ್ರಿಂಟೆಂಡ್ ಸರ್ಕ್ಯೂಟ್ ಬೋರ್ಡ್‌ಗಳ ಅಸೆಂಬ್ಲಿಗಳ (ಸಿಲಿಬಿಎ) ಮೇಲೂ ಇದು ಅನ್ವಯವಾಗುತ್ತದೆ.

ಈ ಮೂಲಕ, ದೇಶೀಯವಾಗಿ ಉತ್ಪನ್ನವಾಗುವ ಮೊಬೈಲ್‌ಗಳ ಮೇಲಿನ ಉತ್ಪಾದನಾ ಖರ್ಚನ್ನು ಗಣನೀಯವಾಗಿ ತಗ್ಗಿಸುವ ಪ್ರಯತ್ನ ಮಾಡಲಾಗಿದೆ. ಅದರಿಂದ ಮೇಕ್ ಇನ್ ಇಂಡಿಯಾ ಅಡಿಯಲ್ಲಿ ಭಾರತದಲ್ಲಿ ಉತ್ಪಾದನೆಯಾಗುವ ಮೊಬೈಲ್‌ಗಳ ಬೆಲೆ ಕಡಿಮೆಯಾಗಲಿದೆ. ಮೊಬೈಲ್‌ಗಳಷ್ಟೇ ಅಲ್ಲದೆ ಟ್ಯಾಬ್‌ಗಳ ಬೆಲೆಯೂ ಗಣನೀಯ ಮಟ್ಟದಲ್ಲಿ ಇಳಿಕೆಯಾಗುವ ಸಾಧ್ಯತೆಗಳಿವೆ.

ಯಾವುದೇ ಮೊಬೈಲ್ ಆಗಲೀ, ಅವುಗಳ ಬಿಡಿಭಾಗಗಳ ಮೇಲೆ ಕಸ್ಟಮ್ಸ್ ಶುಲ್ಕವನ್ನು ಹೆಚ್ಚು ಮಾಡಿದರೆ ಅದರ ಖರ್ಚನ್ನು ಆಯಾ ಕಂಪನಿಗಳು ನೇರವಾಗಿ ಗ್ರಾಹಕರ ಮೇಲೆ ವರ್ಗಾವಣೆ ಮಾಡುತ್ತವೆ. ಈಗ, ಬಿಡಿಭಾಗಗಳು, ಪ್ರಿಂಟೆಂಡ್ ಸರ್ಕ್ಯೂಟ್ ಬೋರ್ಡ್‌ಗಳ ಅಸೆಂಬ್ಲಿಗಳ (ಸಿಲಿಬಿಎ) ಮೇಲೆ ಬೇಸಿಕ್ ಕಸ್ಟಮ್ಸ್ ಸುಂಕವನ್ನು (ಬಿಸಿಡಿ) ಕಡಿಮೆ ಮಾಡಿದರೆ, ಈಗಿರುವ ಮೊಬೈಲ್ ದರಗಳ ಮೇಲೆ ಕನಿಷ್ಠ ಶೇ. 10ರಿಂದ 15ರಷ್ಟು ಬೆಲೆ ಕಡಿಮೆಯಾಗುತ್ತದೆ ಎಂದು ಅಂದಾಜಿಸಲಾಗಿದೆ.

ಐಫೋನ್ 14ನ ಬೆಲೆ ಮಾರುಕಟ್ಟೆಯಲ್ಲಿ 78,999 ರೂ.ಗಳಾಗಿದ್ದರೆ, ಅದರ ಮೇಲೆ ಶೇ.5ರಷ್ಟು ಬೆಲೆ ಕಡಿಮೆಯಾಗಬಹುದು ಎಂದು ಅಂದಾಜಿದೆ. ಈಗ ಮಾರುಕಟ್ಟೆಯಲ್ಲಿ ಹಳೆಯ ಕಸ್ಟಮ್ಸ್ ದರದಡಿ ತಯಾರಾದ ಮೊಬೈಲ್ ಫೋನ್‌ಗಳೇ ಇರುವುದರಿಂದ ಅವುಗಳ ದರ ಕಡಿಮೆಯಾಗದು. ಇನ್ನು ಮುಂದೆ, ಆಗಸ್ಟ್ 1ರ ನಂತರ ತಯಾರಾಗುವ ಐಫೋನ್ ಸೇರಿದಂತೆ ಎಲ್ಲಾ ರೀತಿಯ ಮೊಬೈಲ್‌ಗಳ ದರ ಕೊಂಚ ತಗ್ಗುವ ಸಾಧ್ಯತೆಗಳಿವೆ.

ಬೆಂಗಳೂರು 5 ಭಾಗಗಳಾಗಿ ವಿಭಜನೆ: ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮಸೂದೆ ಮಂಡನೆ

● 10 ಪಾಲಿಕೆ ರಚಿಸಲು ಪ್ರಸ್ತಾಪ ● ಪಾಲಿಕೆಗಳ ಆದಾಯದಲ್ಲಿ ಪ್ರಾಧಿಕಾರಕ್ಕೆ ಪಾಲು



ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚಿಸಿ ಬೆಂಗಳೂರು ನಗರವನ್ನು 10 ಪಾಲಿಕೆಗಳವರೆಗೆ ವಿಭಜಿಸುವ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಆಡಳಿತ ಮಸೂದೆ–2024ನ್ನು ಡಿಸಿಎಂ ಡಿ.ಕೆ.ಶಿವಕುಮಾರ್ ಇಂದು ವಿಧಾನ ಸಭೆಯಲ್ಲಿ ಮಂಡನೆ ಮಾಡಿದ್ದಾರೆ.

ಮೇಯರ್ ಹಾಗೂ ಉಪ ಮೇಯರ್ ಅವಧಿಯನ್ನು 5 ವರ್ಷಕ್ಕೆ ಹೆಚ್ಚಳ, 400 ವಾರ್ಡ್‌ಗಳನ್ನು ಮಾಡುವುದು ಸೇರಿದಂತೆ ಹಲವು ಮಹತ್ವದ ಅಂಶಗಳು ಗ್ರೇಟರ್ ಬೆಂಗಳೂರು ಆಡಳಿತ ಮಸೂದೆಯಲ್ಲಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಹೊಸಕೋಟೆ, ನೆಲಮಂಗಲ, ದೇವನಹಳ್ಳಿ, ದೊಡ್ಡಬಳ್ಳಾಪುರ, ಎಲೆಕ್ಟ್ರಾನಿಕ್ ಸಿಟಿ, ಬಿಡದಿ, ಆನೇಕಲ್ ಸೇರಿ ಎರಡೂ ಜಿಲ್ಲೆ ಹಾಗೂ ಸುತ್ತಮುತ್ತ ಪ್ರದೇಶಗಳನ್ನು ಸೇರಿಸಿ ಗ್ರೇಟರ್ ಬೆಂಗಳೂರು ರಚಿಸುವ ಮಸೂದೆ ಇದಾಗಿದೆ.

ಮಸೂದೆಯಲ್ಲಿ ಏನಿದೆ: 10 ಪಾಲಿಕೆ ರಚಿಸಲು ಪ್ರಸ್ತಾಪ: ಕನಿಷ್ಠ ಹತ್ತು ಲಕ್ಷ ಜನಸಂಖ್ಯೆಗೆ ಕಡಿಮೆ ಇಲ್ಲದಂತೆ ಒಂದೊಂದು ನಗರ ಪಾಲಿಕೆ ರಚನೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಈ ವೇಳೆ ಪ್ರತಿ ಚದರ ಕಿ.ಮೀ.ಗೆ 5 ಸಾವಿರ ಜನಸಂಖ್ಯೆ ಇರಬೇಕು ಎಂಬುದನ್ನು ಗಮನದಲ್ಲಿಟ್ಟುಕೊಂಡು ಒಂದೊಂದು ಪಾಲಿಕೆಗೆ 200 ವಾರ್ಡ್‌ವರೆಗೆ ರಚನೆ ಮಾಡಲು ಅವಕಾಶ ಕಲ್ಪಿಸಲಾಗಿದೆ. ಕನಿಷ್ಠ 50 ರಿಂದ ಗರಿಷ್ಠ 200 ವಾರ್ಡ್‌ವರೆಗೆ ರಚನೆ ಮಾಡಲು ಅವಕಾಶ ಕಲ್ಪಿಸಿದ್ದು, ಈ ಮೂಲಕ ಗರಿಷ್ಠ 2,000 ವಾರ್ಡ್ ರಚನೆಗೆ ಬಿಲ್‌ನಲ್ಲಿ ಅವಕಾಶ ಸಿಗಲಿದೆ.

ಬಿಬಿಎಂಪಿ ವ್ಯಾಪ್ತಿ ಸದ್ಯ 708 ಚ.ಕಿ.ಮೀ. ಇದೆ. ಪ್ರತಿಯೊಂದು ಪಾಲಿಕೆಯು ಸರಾಸರಿ 200 ಚ.ಕಿ.ಮೀ. ವಿಸ್ತೀರ್ಣ ಹೊಂದಿರಲಿವೆ. ಜಿಬಿಎ ವ್ಯಾಪ್ತಿ ಸುಮಾರು 1400 ಚ.ಕಿ.ಮೀ. ಇರಲಿದೆ. ಎಲೆಕ್ಟ್ರಾನಿಕ್ ಸಿಟಿ ಸೇರಿದಂತೆ ಹೊರವಲಯದಲ್ಲಿ ಹೆಚ್ಚು ಅಭಿವೃದ್ಧಿ ಹೊಂದಿರುವ ಪ್ರದೇಶಗಳು ಜಿಬಿಎ ವ್ಯಾಪ್ತಿಗೆ ತರಲು ಶಿಫಾರಸು ಮಾಡಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ರಚನೆ ಬಳಿಕ ಬಿಡಿಎ ಭೂಬಳಕೆ ಮತ್ತು ಅಭಿವೃದ್ಧಿ ನಕ್ಷೆ ಅನುಮೋದಿಸುವ ಅಧಿಕಾರ ಕಳೆದುಕೊಳ್ಳಲಿದೆ. ಕೇವಲ ಯೋಜನೆಗಳನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಮಾತ್ರ ಹೊಂದಿರುತ್ತದೆ. ರಾಜ್ಯ ಸರ್ಕಾರವು ಬಿಡುಗಡೆ ಮಾಡುವ ಅನುದಾನವನ್ನು ಯಾವ ಪಾಲಿಕೆಗೆ ಎಷ್ಟು ಹಂಚಿಕೆ ಮಾಡಬೇಕೆಂಬುದನ್ನು ಪ್ರಾಧಿಕಾರವೇ ನಿರ್ಧರಿಸಲಿದೆ.

ಮೂರು ಹಂತದ ಆಡಳಿತ ವ್ಯವಸ್ಥೆ: ಗ್ರೇಟರ್ ಬೆಂಗಳೂರು, ನಗರ ಪಾಲಿಕೆ ಹಾಗೂ ವಾರ್ಡ್ ಸಮಿತಿಗಳು ಸೇರಿ ಮೂರು ಹಂತದ ಆಡಳಿತ ವ್ಯವಸ್ಥೆ ಜಾರಿಗೆ ಬರಲಿದೆ. ಇದರಡಿ ಮೇಯರ್, ಆಯುಕ್ತರು, ಜಂಟಿ ಆಯುಕ್ತರು, ಸ್ಥಾಯಿ ಸಮಿತಿ, ವಲಯ ಸಮಿತಿ, ವಾರ್ಡ್ ಸಮಿತಿ ಹಾಗೂ ಏರಿಯಾ ಸಭೆ ಕಾರ್ಯ ನಿರ್ವಹಿಸಲಿವೆ. ಪ್ರಮುಖ ಮೇಲ್ಸೇತುವೆಗಳು, ಎಕ್ಸ್‌ಪ್ರೆಸ್ ಎಲಿವೇಟೆಡ್ ರಸ್ತೆಗಳು, ಆರ್ಟಿರಿಯಲ್, ಸಬ್ ಆರ್ಟಿರಿಯಲ್ ರಸ್ತೆ ನಿರ್ಮಾಣ ಹಾಗೂ ನಿರ್ವಹಣೆ ಮಳೆ ನೀರು ಕಾಲುವೆಗಳ ನಿರ್ವಹಣೆ, ಕುಡಿಯುವ ನೀರು ಸರಬರಾಜು ಹಾಗೂ ಒಳಚರಂಡಿ ವ್ಯವಸ್ಥೆಯೂ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಗೆ ಬರಲಿದೆ. ಆಸ್ತಿ ತೆರಿಗೆ ನಿಗದಿ, ರಿಬೇಟರ್ ಘೋಷಣೆ, ಹೊಸ ತೆರಿಗೆಗಳ ಬಗ್ಗೆ ಸರ್ಕಾರಕ್ಕೆ ಶಿಫಾರಸು ಮಾಡುವುದು ಸೇರಿ ಬಹುತೇಕ ಅಧಿಕಾರಿಗಳನ್ನು ಪ್ರಾಧಿಕಾರಕ್ಕೆ ನೀಡಲಾಗಿದೆ.

ಸೌರಶಕ್ತಿಗೆ ಬಲ ತುಂಬಲು ನಿರ್ಮಲಾ ಚಿತ್ತ



ನವದೆಹಲಿ, ಜು.23– ಭಾರತದ ಇಂಧನ ಭದ್ರತೆಯನ್ನು ಬಲಪಡಿಸುವ ಸಲುವಾಗಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು 2024ರ ಕೇಂದ್ರ ಬಜೆಟ್ ನಲ್ಲಿ ಸಮಗ್ರ ಯೋಜನೆಯನ್ನು ರೂಪಿಸಿದ್ದಾರೆ. ಗೃಹ ಮತ್ತು ಕೈಗಾರಿಕೆಗಳಲ್ಲಿ ಬಳಸುವ ವಿದ್ಯುತ್‌ನ ಸ್ಥಿರತೆ ವೃದ್ಧಿಗಾಗಿ ಈ ಯೋಜನೆಯಲ್ಲಿ ಹಲವು ಹೊಸ ನೀತಿ ನತ್ತು ಉಪಕ್ರಮಗಳನ್ನು ಅಳವಡಿಸಲಾಗಿದೆ. ಇದು ಇಂಧನ ವಲಯದಲ್ಲಿ ಘೋಷಿಸಲಾಗಿರವ ಕೆಲವು ಪ್ರಮುಖ ಅಂಶಗಳು. ಭಾರತದ ಇಂಧನ ಭವಿಷ್ಯಕ್ಕಾಗಿ ಅನುಸರಿಸಬೇಕಾದ ಸರಿಯಾದ ಮಾರ್ಗಗಳ ನೀಲನಕ್ಷೆ ರಚಿಸಿ ಹೊಸ ನೀತಿಯ ದಾಖಲೆಯನ್ನು ರೂಪಿಸಲಾಗಿದೆ. ಈ ದಾಖಲೆಯು ಭಾರತವು ಹೆಚ್ಚು ಸುಸ್ಥಿರ ಮತ್ತು ಭದ್ರವಾದ ಶಕ್ತಿಯ ಮೂಲಗಳನ್ನು ಹೊಂದಲು ಮಾರ್ಗದರ್ಶನ ನೀಡಲಿದೆ. ಪುನಶ್ಚೇತನಗೊಳಿಸಲಾಗದ ಇಂಧನ ಮೂಲಗಳ ಬಳಕೆಯನ್ನು ಕಡಿಮೆಗೊಳಿಸುವ ಬಗ್ಗೆ ಇದು ಗಮನ ಕೇಂದ್ರೀಕರಿಸಲಿದೆ.

ಈಗಾಗಲೇ ಸೌರಶಕ್ತಿಯ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಪಿಎಂ ಸೂರ್ಯ ಘರ್ ಉಚಿತ ವಿದ್ಯುತ್ ಯೋಜನೆಯನ್ನು ಪರಿಚಯಿಸಲಾಗಿದೆ. ದೇಶದ 1 ಕೋಟಿಗೂ ಹೆಚ್ಚಿಗೂ ಮನೆಗಳಿಗೆ ಪ್ರತಿ ತಿಂಗಳೂ 300 ಯೂನಿಟ್ ವಿದ್ಯುತ್ ಉಚಿತವಾಗಿ ಸಿಗುವಂತೆ ವಿದ್ಯುತ್ ಒದಗಿಸಲು ಹಮ್ಮಿಕೊಂಡಿರುವ ಯೋಜನೆ ಇದು. ಇದಕ್ಕೆ ಪ್ರಾರಂಭಿಕ ಹಂತದಲ್ಲೇ ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆತಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಇದಕ್ಕೆ ಮತ್ತಷ್ಟು ಬಲ ತುಂಬಲು ನಿರ್ಧರಿಸಿದೆ.

ಪರಿಣಾಮಕಾರಿ ವಿದ್ಯುತ್ ಬಳಕೆಗಾಗಿ ಹೊಸ ಪಂಪ್ ಸ್ಟೋರೇಜ್ ನೀತಿಯನ್ನು ಜಾರಿಗೆ ತರುವುದಾಗಿ ಕೇಂದ್ರ ಸರ್ಕಾರ ಘೋಷಿಸಿದೆ. ಇದರಿಂದ ಕಡಿಮೆ ಬೇಡಿಕೆ ಇರುವ ಸಮಯದಲ್ಲಿ ವಿದ್ಯುತ್ ಅನ್ನು ಸಂಗ್ರಹಿಸಿ ಬೇಡಿಕೆ ಹೆಚ್ಚಿರುವ ಸಮಯದಲ್ಲಿ ನೀಡುವ ಸಲುವಾಗಿ ಇದು ಪರಿಣಾಮಕಾರಿ ಪದ್ಧತಿಯಾಗಿದೆ.

ಇಷ್ಟೇ ಅಲ್ಲದೆ ಇಂಧನ ಉತ್ಪಾದನೆಯ ಹೆಚ್ಚಳಕ್ಕಾಗಿ ನೂತನ ಅಣು ತಂತ್ರಜ್ಞಾನದಲ್ಲಿ ಹೂಡಿಕೆ ಮಾಡುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ. ಇದು ಅಧಿಕ ಕ್ಷಮತೆಯುಳ್ಳ, ಸುರಕ್ಷಿತವಾದ ಸುಧಾರಿತ ಅಣು ರಿಯಾಕ್ಟರ್‌ಗಳ ಅಭಿವೃದ್ಧಿ ಮೂಲಕ ಪರಿಶುದ್ಧವಾದ ಇಂಧನ ಮಿಶ್ರಣವನ್ನು ಮಾಡುವ ಬಗ್ಗೆ ಸರ್ಕಾರ ಯೋಜನೆ ಹಮ್ಮಿಕೊಂಡಿದೆ. ಕಲ್ಲಿದ್ದಲು ಆಧಾರಿತ ಶಕ್ತಿ ಉತ್ಪಾದನೆಯಲ್ಲಿ ಕ್ಷಮತೆಯನ್ನು ಸುಧಾರಿಸಲು 800 ಮೆಗಾ ವ್ಯಾಟ್ ಬಜೆಟ್‌ನಲ್ಲಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.

ಸ್ಥಳೀಯ ಶಕ್ತಿ ಉತ್ಪಾದನಾ ತಂತ್ರಜ್ಞಾನದ ಅಭಿವೃದ್ಧಿಯ ಕಡೆಗೂ ಕೇಂದ್ರ ಸರ್ಕಾರ ಬಲವಾದ ದೃಷ್ಟಿ ನೆಟ್ಟಿದೆ. ಇದರಿಂದ ವಿದೇಶಿ ತಂತ್ರಜ್ಞಾನಗ ಮೇಲಿನ ಅವಲಂಬನೆಯನ್ನು ಕಡಿಮೆಗೊಳಿಸುವುದು ಮತ್ತು ಇಂಧನ ಉತ್ಪಾದನೆ ಮತ್ತು ನಿರ್ವಹಣೆಯಲ್ಲಿ ಸ್ಥಳೀಯ ಸಾಮರ್ಥ್ಯವನ್ನು ಬಲಗೊಳಿಸಲಾಗುವುದು ಎಂದು ಬಜೆಟ್‌ನಲ್ಲಿ ತಿಳಿಸಲಾಗಿದೆ.

ವಿವಿಧ ಇಂಧನ ಮೂಲಗಳಲ್ಲಿ ಸ್ವಾವಲಂಬನೆ ಸಾಧಿಸುವುದರಿಂದ ಅತೀ ಸಣ್ಣ ಮತ್ತು ಸಣ್ಣ ಕೈಗಾರಿಕೆಗಳಿಗೆ ಉತ್ತೇಜನ ದೊರೆಯುತ್ತದೆ. ಇದರಿಂದಾಗಿ ಅವುಗಳ ನಿರ್ವಹಣಾ ವೆಚ್ಚ, ಉತ್ಪಾದನಾ ವೆಚ್ಚವನ್ನು ಕಡಿಮೆಗೊಳಿಸಿ ಅಭಿವೃದ್ಧಿ ಸಾಧಿಸಲು ನೆರವಾಗುತ್ತದೆ.

ದೇಶದ ಭವಿಷ್ಯ ಬರೆಯುವ ಬಜೆಟ್



ಬೆಂಗಳೂರು, ಜು.23(ಕೆಎಂಶಿ)– ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ರೈತ ಸ್ನೇಹಿ, ತೆರಿಗೆ ಹೊರೆ ರಹಿತ, ಜನಕೇಂದ್ರಿತ ಹಾಗೂ ದೇಶದ ಭವಿಷ್ಯ ಬರೆಯುವ ಸುಭದ್ರ ಬಜೆಟ್ ನೀಡಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಇಂದಿಲ್ಲಿ ಶ್ಲಾಘಿಸಿದ್ದಾರೆ.

ಕೇಂದ್ರ ಬಜೆಟ್ ಕುರಿತು ಪ್ರತಿಕ್ರಿಯೆ ನೀಡಿರುವ ಅವರು, ಆರ್ಥಿಕ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿರುವ ಆಯವ್ಯಯ ಭಾರತ ಜಗತ್ತಿನಲ್ಲೇ ಮೂರನೇ ಅತಿದೊಡ್ಡ ಆರ್ಥಿಕ ಶಕ್ತಿಯಾಗಿ ಬೆಳೆಯಲು ಸಹಕಾರಿಯಾಗಲಿದೆ ಎಂದರು.

ರೈತರು, ಮಹಿಳೆಯರು, ಯುವಜನರು, ತೆರಿಗೆ ಪಾವತಿಸುವವರ ಬದುಕನ್ನು ವಿಶ್ಲೇಷಿಸಿ ಅವರ ಅನುಕೂಲಕ್ಕೆ ತಕ್ಕಂತಹ ಬಜೆಟ್ ನೀಡಲಾಗಿದೆ, ಇದಕ್ಕಾಗಿ ಆರ್ಥಿಕ ಸಚಿವರಿಗೆ ಧನ್ಯವಾದ ಎಂದಿದ್ದಾರೆ.

ಕಾಂಗ್ರೆಸ್ ಸರ್ಕಾರ ಯಾವಾಗಲೂ ಅನುದಾನ ತಾರತಮ್ಯದ ಬಗ್ಗೆ ಹೇಳುತ್ತದೆ, 50 ವರ್ಷಗಳ ಅವಧಿಗೆ ಬಡ್ಡಿರಹಿತ ಸಾಲ ನೀಡುವ ಪ್ರಧಾನ ಮಂತ್ರಿ ಗತಿಶಕ್ತಿ ಮಾಸ್ಟರ್ ಪ್ಲಾನ್ ಇನ್ನೂ ಒಂದು ವರ್ಷ ಮುಂದುವರೆಯಲಿದೆ, ಇದಕ್ಕಾಗಿ 1.5 ಲಕ್ಷ ಕೋಟಿ ರೂ. ಮೀಸಲಿಟ್ಟಿದ್ದು, ಖಾಲಿ ಖಜಾನೆಯ ರಾಜ್ಯ ಸರ್ಕಾರ ಇಂತಹ ಯೋಜನೆಗಳನ್ನು ಬಳಸಿಕೊಂಡಾದರೂ ಜನಕಲ್ಯಾಣಕ್ಕೆ ಶ್ರಮಿಸಲಿ ಎಂದು ಸಲಹೆ ನೀಡಿದ್ದಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರ ಅನ್ನಭಾಗ್ಯ ಯೋಜನೆ ಮುಂದುವರಿಸಲು ಹಾಗೂ ಅಕ್ಕಿ ನೀಡಲು ಇನ್ನೂ ತಿಣುಕಾಡುತ್ತಿದೆ, ಕೇಂದ್ರ ಸರ್ಕಾರ ಪ್ರಧಾನಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯನ್ನು 5 ವರ್ಷಕ್ಕೆ ವಿಸ್ತರಿಸಿ, 80 ಕೋಟಿ ಜನರಿಗೆ ಆಹಾರ ಭದ್ರತೆ ಕಲ್ಪಿಸಿದೆ.

ಇದು 'ತಾರತಮ್ಯದ ಬಜೆಟ್': ನಾಳೆ 'ಇಂಡಿಯಾ' ಬಣ ಪ್ರತಿಭಟನೆ

ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಮಂಡಿಸಿರುವುದು 'ತಾರತಮ್ಯದ ಬಜೆಟ್' ಎಂದು 'ಇಂಡಿಯಾ' ಬಣದ ಸಂಸದರು ದೂರಿದ್ದಾರೆ. ಬಜೆಟ್‌ನಲ್ಲಿ ರಾಜ್ಯಗಳಿಗೆ ಅನುದಾನ ಮತ್ತು ಹೊಸ ಯೋಜನೆಗಳ ಘೋಷಣೆ ಮಾಡುವಲ್ಲಿ ತಾರತಮ್ಯ ಮಾಡಲಾಗಿದೆ ಎಂದು 'ಇಂಡಿಯಾ' ಬಣದ ನಾಯಕರು ಆಕ್ರೋಶ ಹೊರಹಾಕಿದ್ದು, ನಾಳೆ (ಬುಧವಾರ) ಸಂಸತ್‌ನಲ್ಲಿ ಪ್ರತಿಭಟನೆ ನಡೆಸಲು ತೀರ್ಮಾನಿಸಿದ್ದಾರೆ.

ದೆಹಲಿಯಲ್ಲಿರುವ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ 'ಇಂಡಿಯಾ' ಬಣದ ನಾಯಕರು ಸಭೆ ನಡೆಸುತ್ತಿದ್ದು, ಪ್ರತಿಭಟನೆ ನಡೆಸುವ ಕುರಿತು ಚರ್ಚೆ ನಡೆಸುತ್ತಿದ್ದಾರೆ ಎನ್ನಲಾಗಿದೆ. ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ರಚಿಸಲು ಮುಖ್ಯ ಪಾತ್ರವಹಿಸಿರುವ ಜೆಡಿಯು ಮತ್ತು ಟಿಡಿಪಿ ನಾಯಕರು ಕ್ರಮವಾಗಿ ಬಿಹಾರ, ಆಂಧ್ರಪ್ರದೇಶಕ್ಕೆ ವಿಶೇಷ ಸ್ಥಾನಮಾನ ನೀಡುವಂತೆ ಒತ್ತಾಯಿಸಿದ್ದರು. ಆದರೆ, ಎರಡೂ ರಾಜ್ಯಗಳಿಗೂ ವಿಶೇಷ ಸ್ಥಾನಮಾನ ನೀಡದಿದ್ದರೂ ಭರಪೂರ ಅನುದಾನ ಮತ್ತು ಹೊಸ ಯೋಜನೆಗಳನ್ನು ಘೋಷಣೆ ಮಾಡಲಾಗಿದೆ.

ನಿಧನ

ಬಿ.ಎನ್.ಗುಂಡೂರಾವ್



ಮೈಸೂರು, ಜು. 23–ನಿವೃತ್ತ ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಎನ್. ಗುಂಡೂರಾವ್ (89) ಸೋಮವಾರ ನಿಧನರಾದರು. ಮೃತರು ಪತ್ನಿ ಮಣಿಯಮ್ಮ, ಪುತ್ರ ಮಂಜುನಾಥ್ (ಅಡ್ವೊಕೇಟ್) ಮತ್ತು ಪುತ್ರಿಯರಾದ ಸುಮಾ ಮತ್ತು ಉಮಾ ಸೇರಿದಂತೆ ಅಪಾರ ಬಂಧು ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ರಸ್ತೆಯಲ್ಲಿರುವ ಚಿತಾಗಾರದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪಿ.ಜಿ.ಸತ್ಯನಾರಾಯಣ



ನಿವೃತ್ತ ಪೋಸ್ಟ್ ಮಾಸ್ಟರ್, ಮೈಸೂರು ಡಿಸ್ಟ್ರಿಕ್ಟ್ ಮಾಸ್ಟರ್ಸ್ ಅಥ್ಲೆಟಿಕ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಹಾಗೂ ಮೈಸೂರಿನ ಚಾಮರಾಜ ಮೊಹಲ್ಲಾದ ಡಿ.ಸುಬ್ಬಯ್ಯ ರಸ್ತೆ ನಿವಾಸಿ ಪಿ.ಜಿ.ಸತ್ಯನಾರಾಯಣ (86) ಮಂಗಳವಾರ ಬೆಳಗ್ಗೆ ನಿಧನರಾದರು.

ಮೃತರು ಪುತ್ರ, ಪುತ್ರಿ, ಸಹೋದರ ಪಿ.ಜಿ.ಚಂದ್ರಶೇಖರ್ (ಪಿಜಿಸಿ) ಸೇರಿದಂತೆ ಅಪಾರ ಬಂಧು–ವರ್ಗ ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.


ವಿನ್‌ಸ್ಟನ್ ಸುರೇಶ್ ವೆಸ್ಲಿ



ಹಳೇ ಕೆಸರೆ ಕಾಮನಕೆರೆಹುಂಡಿಯ ಕೆಹೆಚ್‌ಬಿ ಲೇಔಟ್‌ನ ನಿವಾಸಿ ವಿನ್‌ಸ್ಟನ್ ಸುರೇಶ್ ವೆಸ್ಲಿ (66) ಅನಾರೋಗ್ಯ ಕಾರಣ ಮಂಗಳವಾರ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಪತ್ನಿ ಜೋಸೆಫೀನ್ ವೆಸ್ಲಿ, ಪುತ್ರಿ ಮಿಚೆಲ್ ಬೋಸ್ಲೆ, ಅಳಿಯ, ನಾಲ್ವರು ಸಹೋದರರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ದಿವಂಗತ ಪ್ರೊ.ಬಿ.ಸಿ.ವೆಸ್ಲಿ ಮತ್ತು ದಿವಂಗತ ಪ್ರೊ.ಲಲಿತಾ ಕುಮಾರಿ ದಂಪತಿಯ ನಾಲ್ಕನೇ ಪುತ್ರರಾದ ವಿನ್‌ಸ್ಟನ್ ಸುರೇಶ್ ವೆಸ್ಲಿ, ಅತ್ಯುತ್ತಮ ಕ್ರಿಕೆಟ್ ಪಟು ಆಗಿದ್ದರು. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸಿದ್ದರಲ್ಲದೆ, ವಿಶ್ವ ಆರೋಗ್ಯ ಸಂಸ್ಥೆ ಕಾರ್ಯಕ್ರಮಗಳಡಿ ಕರ್ನಾಟಕ ಗ್ರಾಮೀಣ ಆರೋಗ್ಯಕ್ಕೆ ಸಂಬಂಧಿಸಿದಂತೆ ಹಲವು ಕಾರ್ಯಕ್ರಮಗಳನ್ನು ಅಭಿವೃದ್ಧಿಪಡಿಸಿದ್ದರು. ಕೆಹೆಚ್‌ಬಿ ಲೇಔಟ್‌ನ ಮೃತರ ನಿವಾಸದಲ್ಲಿ ನಾಳೆ ಬೆಳಗ್ಗೆ 11ರವರೆಗೆ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಮೈಸೂರಿನ ಗಾಂಧಿನಗರದ ಸಿಎಸ್‌ಐ ಸ್ಮಶಾನದಲ್ಲಿ ಜು.24ರ ಬುಧವಾರ ಮಧ್ಯಾಹ್ನ 12ಕ್ಕೆ ಮೃತರ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

24.07.2024 ಬುಧವಾರ, ಮಳೆ ನಕ್ಷತ್ರ: ಪುಷ್ಯ, 20.07.2024 ರಿಂದ 02.08.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಗ್ರೀಷ್ಮ ಋತು, ಆಷಾಢ ಮಾಸ, ಕೃಷ್ಣ ಪಕ್ಷ,
ತಿಥಿ: ತದಿಗೆ, ನಕ್ಷತ್ರ: ಶತಭಿಷ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಮಧುಮೇಹ ತೊಂದರೆ ಮತ್ತು ಚರ್ಮರೋಗಿಗಳಿಗೆ ಆಯುರ್ವೇದ ಪಂಚಕರ್ಮ ಪ್ರತ್ಯೇಕ ಚಿಕಿತ್ಸಾ ಶಿಬಿರ. ಸ್ಥಳ: ಆಸ್ಪತ್ರೆ ಆವರಣ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.

■ **ಕಾವೇರಿ ಆಯುರ್ವೇದ ಆಸ್ಪತ್ರೆ:** ಸೈನೊಸೈಟಿಸ್, ತಲೆನೋವಿಗೆ ಉಚಿತ ಚಿಕಿತ್ಸಾ ಶಿಬಿರ. ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್. ಬೆಳಗ್ಗೆ 10ರಿಂದ ಸಂಜೆ 4ರವರೆಗೆ.

■ **ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಗಮ:** ಸೌಹಾರ್ದ ಸಹಕಾರಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ವಾಹಕರಿಗಾಗಿ ಸಂಪರ್ಕ ಸಭೆ ಹಾಗೂ ವಿಷಯಾಧಾರಿತ ತರಬೇತಿ ಕಾರ್ಯಕ್ರಮ, ಉದ್ಘಾಟನೆ: ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಗಮದ ಅಧ್ಯಕ್ಷ ಜಿ.ನಂಜನಗೌಡ, ಅಧ್ಯಕ್ಷತೆ: ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿಗಮದ ನಿರ್ದೇಶಕ ಎಸ್.ಕೆ.ಮಂಜುನಾಥ್, ಮುಖ್ಯ ಅತಿಥಿಗಳು: ನಿರ್ದೇಶಕರಾದ ಭಾರತಿ ಜಿ.ಭಟ್, ಹೆಚ್.ವಿ.ರಾಜೀವ್, ಮೈಸೂರು, ಮಂಡ್ಯ ಮತ್ತು ಕೊಡಗು ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಅಧ್ಯಕ್ಷ ಎಸ್.ಆರ್.ನಾರಾಯಣ ರಾವ್, ಉದ್ದೇಶಿತ ಚಾಮರಾಜನಗರ ಜಿಲ್ಲಾ ಸೌಹಾರ್ದ ಸಹಕಾರಿಗಳ ಒಕ್ಕೂಟದ ಮುಖ್ಯ ಪ್ರವರ್ತಕ ಎಸ್. ಬಾಲಸುಬ್ರಮಣ್ಯ, ಸ್ಥಳ: ಹೋಟೆಲ್ ಶ್ರೀ ಗುರು ರೆಸಿಡೆನ್ಸಿ, ಜೆಎಲ್‌ಬಿ ರಸ್ತೆ, ಬೆಳಗ್ಗೆ 10ಕ್ಕೆ.

■ **ಜೆಎಸ್‌ಎಸ್ ಮಹಿಳಾ ಕಾಲೇಜು :** ಶಿಕ್ಷಕರ ಸಾಮರ್ಥ್ಯ ನಿರ್ಮಾಣ ಕುರಿತು ಕಾರ್ಯಾಗಾರ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಉದ್ಘಾಟನೆ : ಜೆಎಸ್‌ಎಸ್ ಮಹಾವಿದ್ಯಾಪೀಠ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ.ಬೆಟಸೂರ ಮಠ, ಅಧ್ಯಕ್ಷತೆ : ಶಿವಮೊಗ್ಗ ಕುವೆಂಪು ವಿವಿ ವಿಶ್ರಾಂತ ಕುಲಪತಿ ಪ್ರೊ. ಪಿ. ವೆಂಕಟರಾಮಯ್ಯ, ಸ್ಥಳ: ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಅವಧೂತ ದತ್ತಪೀಠ :** ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮತ್ತು ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿಯವರ 21ನೇ ಚಾತುರ್ಮಾಸ್ಯ ವ್ರತದೀಕ್ಷಾ ಮಹೋತ್ಸವ, ಸಂಕಷ್ಟಹರ ಚತುರ್ಥಿ, ಸ್ಥಳ: ಆಶ್ರಮದ ಆವರಣ, ಊಟಿ ರಸ್ತೆ.

■ **ಶ್ರೀ ದುರ್ಗಾ ಫೌಂಡೇಷನ್:** ಆಷಾಢ ಮಾಸದ ಪ್ರಯುಕ್ತ ಚಾಮುಂಡಿಬೆಟ್ಟದ ದೇವಸ್ಥಾನದ ಮಹಿಳೆಯರಿಗೆ ಬಾಗಿನ ನೀಡುವ ಕಾರ್ಯಕ್ರಮ, ಮುಖ್ಯ ಅತಿಥಿಗಳು: ದೇವಸ್ಥಾನದ ಪ್ರಧಾನ ಅರ್ಚಕ ಡಾ.ಶಶಿಶೇಖರ್ ದೀಕ್ಷಿತ್, ಚಾಮುಂಡಿಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರೂಪ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ದೇವಸ್ಥಾನದ ನೌಕರ ಸೋಮಣ್ಣ, ಮೈವಿವಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಆರ್.ಎಚ್.ಪವಿತ್ರ, ಕಾಂಗ್ರೆಸ್ ಮುಖಂಡರಾದ ಎನ್.ಎಂ.ನವೀನ್‌ಕುಮಾರ್, ಸಮಾಜ ಸೇವಕ ಬನ್ನೂರು ಮಹೇಂದ್ರ ಸಿಂಗ್ ಕಾಳಪ್ಪ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಮುತ್ತಣ್ಣ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಸ್ಥಳ: ಚಾಮುಂಡಿಬೆಟ್ಟದ ದೇವಸ್ಥಾನದ ಮುಂಭಾಗ, ಬೆಳಗ್ಗೆ 11ಕ್ಕೆ.

■ **ಧ್ವನಿ ಫೌಂಡೇಷನ್ :** ಪಂಡಿತ್ ರಾಜೀವ್ ತಾರಾನಾಥ್ ಹಾಗೂ ನ. ರತ್ನ ಸ್ಮರಣೆ ಕಾರ್ಯಕ್ರಮ, ಅಧ್ಯಕ್ಷತೆ : ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಉಪಸ್ಥಿತರು : ಹಿರಿಯ ಕಲಾವಿದೆ ಎಚ್.ಆರ್. ಲೀಲಾವತಿ, ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 5.30ಕ್ಕೆ.

■ **ದಿವ್ಯ ಜೀವನ ಸಂಘ, ಮಹಿಳಾ ಶಾಖೆ:** ಗುರು ಪೂರ್ಣಿಮೆ. ಸಾಧನಾ ಸಪ್ತಾಹ ಹಾಗೂ ಆರಾಧನಾ ಕಾರ್ಯಕ್ರಮ. ಚಿನ್ಮಯ ಮಿಷನ್‌ನ ಗುರುಸರ್ವಸ್ವ ಪೂಜ್ಯ ಸ್ವಾಮಿನಿ ಕಾಶಿಕಾನಂದ ಅವರಿಂದ ಪ್ರವಚನ. ಸ್ಥಳ: ಶಿವಾನಂದ ಜ್ಞಾನಾಲಯ, ಜೆಎಲ್‌ಬಿ ರಸ್ತೆ, ಲಕ್ಷ್ಮೀಪುರಂ. ಸಂಜೆ: 6.30ರಿಂದ 7.30ರವರೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 "ಬದುಕು ಬದಲಿಸಿದ ಶೋಧ"–ಬಾನುಲಿ ಸರಣಿ, ಪ್ರಸ್ತುತಿ: ಎನ್.ಎನ್.ಸುರೇಂದ್ರನಾಥ್ ಸಾತ್ವಿಕ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ರೋಹಿಣಿ ಸುಧಾಮ್ ಮತ್ತು ಕೆ.ಶ್ರೇಯಾ, ವ್ಯಾಖ್ಯಾನ: ಡಾ.ಪ್ರದೀಪ್‌ಕುಮಾರ್ ಹೆಬ್ರಿ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 9.00 ವೃತ್ತಿ ಮಾರ್ಗದರ್ಶನ – 'ಪಶುಸಂಗೋಪನೆ ಡಿಪ್ಲೊಮಾ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕು ಬರಗಿಯಲ್ಲಿರುವ ಸರ್ಕಾರಿ ಪಶುಸಂಗೋಪನಾ ಡಿಪ್ಲೊಮಾ ಕಾಲೇಜಿನ ಪ್ರಾಂಶುಪಾಲರಾದ ಡಾ. ರವಿಕುಮಾರ್. ಸಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ವಿಶ್ವಮೋಹನ್ ಭಟ್–ಮೋಹನವೀಣಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ.

ಮಧ್ಯಾಹ್ನ: 12.30 ದೇವರನಾಮ – ಸುಹಾಸಿನಿ, 12.45 ಜನಪದ ಸಂಗೀತ, 1.20 ಭಾವಗೀತೆಗಳು : ಚಿನ್ಮಯ ಆತ್ರೇಯಸ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಹಂಸಿನಿ ನಾಗೇಂದ್ರ– ಹಾಡುಗಾರಿಕೆ, 4.00 ಮಹಿಳಾರಂಗ : "ಹೀಗಿದೆ ನೋಡಿ ನಮ್ ಜೋಡಿ", ಭಾಗವಹಿಸುವವರು : ಹುಟ್ಟಿನಿಂದಲೇ ಅಂಧರಾದ ವಿಶೇಷ ಚೇತನ ದಂಪತಿ ಶಿವನಂಜಯ್ಯ ಮತ್ತು ಪುಷ್ಪಾವತಿ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಸ್ಮಿತಾ ಚಿಪ್ಳೂಣ್‌ಕರ್, 6.50 ಕೃಷಿರಂಗ : "ಕೃಷಿ ದೀವಿಗೆ" ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ ಕುರಿತ ಬಾನುಲಿ ಸರಣಿ. ರಾಗಿ ಮತ್ತು ಸಿರಿಧಾನ್ಯಗಳ ಸುಧಾರಿತ ತಳಿಗಳು. ಈ ಕುರಿತು ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ವಿಜ್ಞಾನಿ ಡಾ. ಆರ್. ನಂದಿನಿ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಕ್ಷಿತಿಜ ಲಿಟರರಿ ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ. 8.15 ಸಂಸತ್ತಿನ ಉಭಯ ಕಲಾಪಗಳ ಸಮೀಕ್ಷೆ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಕಾರ್ತಿಕ್‌ಕುಮಾರ್–ಸಿತಾರ್ ವಾದನ, 10.00 ಹಳ್ಳಿಹಾಡು, 10.30 ಸವಿನೆನಪು

ಬಜೆಟ್‌ನಲ್ಲಿ ಬಿಹಾರಕ್ಕೆ ಬಂಪರ್: ರಾಜ್ಯ 'ಆತ್ಮನಿರ್ಭರ್'ಗೆ ನಾಂದಿ

ನವದೆಹಲಿ: ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಗಳವಾರ ಮಂಡಿಸಿದ 2024–25ನೇ ಸಾಲಿನ ಬಜೆಟ್‌ನಲ್ಲಿ ಬಿಹಾರಕ್ಕೆ ಬಂಪರ್ ಕೊಡುಗೆ ನೀಡಿದ್ದು, ಎನ್‌ಡಿಎ ಮಿತ್ರ ಪಕ್ಷ ಜೆಡಿಯು ಈ ನಿರ್ದಿಷ್ಟ ಘೋಷಣೆಗಳನ್ನು ಸ್ವಾಗತಿಸಿದೆ.

ಬಜೆಟ್ ಬಗ್ಗೆ ಪ್ರತಿಕ್ರಿಯಿಸಿದ ಜೆಡಿಯು ವಕ್ತಾರ ಕೆ ಸಿ ತ್ಯಾಗಿ ಅವರು ಬಿಹಾರಕ್ಕೆ 'ವಿಶೇಷ ಹಣಕಾಸು ನೆರವು' ನೀಡಿರುವುದನ್ನು ಶ್ಲಾಘಿಸಿದರು. ಈ ಅಭಿವೃದ್ಧಿ ಕ್ರಮಗಳು ರಾಜ್ಯವನ್ನು 'ಆತ್ಮನಿರ್ಭರ್' ಮಾಡುವಲ್ಲಿ ಒಂದು ದೊಡ್ಡ ಹೆಜ್ಜೆಯಾಗಲಿದೆ ಎಂದು ಅವರು ಪ್ರತಿಪಾದಿಸಿದ್ದಾರೆ.

ಹೆದ್ದಾರಿಗಳಿಗಾಗಿ 26,000 ಕೋಟಿ ರೂ., ಪ್ರವಾಹವನ್ನು ತಗ್ಗಿಸುವ ಕ್ರಮಗಳಿಗಾಗಿ 11,500 ಕೋಟಿ ರೂ., ರಾಜ್ಯದಲ್ಲಿ ಹೊಸ ವಿಮಾನ ನಿಲ್ದಾಣ ಮತ್ತು ವೈದ್ಯಕೀಯ ಕಾಲೇಜು ಸ್ಥಾಪನೆ ಜೊತೆಗೆ ಗಂಗಾ ನದಿಗೆ ಎರಡು ಹೊಸ ಸೇತುವೆಗಳನ್ನು ಘೋಷಿಸಲಾಗಿದೆ ಎಂದು ಹೇಳಿದರು. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಳಂದಾ ವಿಶ್ವ ವಿದ್ಯಾಲಯವನ್ನು ಅಭಿವೃದ್ಧಿಪಡಿಸಲು ಮತ್ತು ನಳಂದ–ರಾಜಗೀರ್ ಕಾರಿಡಾರ್ ಸೇರಿದಂತೆ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವುದಾಗಿ ಘೋಷಿಸಿದ್ದಾರೆ ಎಂದು ತ್ಯಾಗಿ ತಿಳಿಸಿದರು. ಕೋಲ್ಕತ್ತಾ–ಅಮೃತಸರ ಕಾರಿಡಾರ್‌ಗೆ ಗಯಾ ಪ್ರಧಾನ ಕಚೇರಿಯಾಗಲಿದೆ. ಬಿಹಾರಕ್ಕೆ ಮೂರು ಹೊಸ ಎಕ್ಸ್‌ಪ್ರೆಸ್‌ವೇಗಳನ್ನು ನೀಡಲಾಗಿದೆ. ಬಜೆಟ್‌ನಲ್ಲಿ ರಾಜ್ಯದಲ್ಲಿ ಕ್ರೀಡಾ ಮೂಲಸೌಕರ್ಯವನ್ನು ಅಭಿವೃದ್ಧಿಪಡಿಸಲು ಮತ್ತು ವಿವಿಧ ಸಂಸ್ಥೆಗಳಿಂದ ಸಾಲಕ್ಕಾಗಿ ಬಿಹಾರ ಸರ್ಕಾರದ ಮನವಿಯನ್ನು ತ್ವರಿತಗೊಳಿಸಲು ಒತ್ತು ನೀಡಲಾಗಿದೆ ಎಂದು ಅವರು ಹೇಳಿದರು.

ಬಜೆಟ್‌ನಲ್ಲಿ ಹೆಸರು ಹೇಳದೆ ಇದ್ರೂ ಹಣ ಬರುತ್ತೆ

ರಾಜ್ಯಕ್ಕೆ ಏನಿಲ್ಲ ಆರೋಪಕ್ಕೆ ಎಚ್‌ಡಿಕೆ ಸಮರ್ಥನೆ



ನವದೆಹಲಿ/ಬೆಂಗಳೂರು: ಆಂಧ್ರ, ಬಿಹಾರಕ್ಕೆ ಹೆಚ್ಚು ನೆರವು ಕೊಟ್ಟಿದ್ದಾರೆ ಎಂದು ವಿಪಕ್ಷಗಳು ಟೀಕೆ ಮಾಡುತ್ತಿವೆ. ಹೆಚ್ಚು ಅಭಿವೃದ್ಧಿಗೆ ಒತ್ತು ನೀಡುವುದಕ್ಕೆ ಕಾರಣವೇನು ರಾಜ್ಯ ಇಬ್ಭಾಗವಾದಾಗ ಆಂಧ್ರಕ್ಕೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಲಾಗಿತ್ತು. ಘೋಷಣೆ ಮಾಡಿದ್ದೇ ಕಾಂಗ್ರೆಸ್. ಆದರೆ ಜಾರಿಗೆ ತಂದಿರಲಿಲ್ಲ. ಈಗ ಪ್ರಧಾನಿ ಮೋದಿಯವರು ಜಾರಿಗೆ ತಂದಿದ್ದಾರೆ. ನಮ್ಮ ರಾಜ್ಯದ ಯೋಜನೆಗಳು ಯಾವುದು ಇಲ್ಲ ಎನ್ನುವ ಆರೋಪವಿದೆ. ಈ ರೀತಿಯ ಟೀಕೆ ಮಾಡುವುದು ಸಹಜ. ಬಜೆಟ್ ಮಂಡನೆ ವೇಳೆ ಹೆಸರು ಹೇಳದೆ ಇದ್ದರೂ ಸಹ ರಾಜ್ಯಗಳಿಗೆ ಹಣ ಬಿಡುಗಡೆಯಾಗಲಿದೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ.

ಗ್ರಾಮೀಣ ಅಭಿವೃದ್ಧಿಗೆ 2.65 ಲಕ್ಷ ಕೋಟಿ ಹಣ ಹಂಚಿಕೆ ಮಾಡಲಾಗಿದೆ. ದೇಶದ ಸಮಗ್ರ ಅಭಿವೃದ್ಧಿಗೆ ಬಜೆಟ್ ಪೂರಕವಾಗಿದೆ. ನಮ್ಮ ರಾಜ್ಯಕ್ಕೆ ಯಾವುದು ಯೋಜನೆ ಇಲ್ಲ ಎನ್ನುವ ಆರೋಪವಿದೆ. ಈ ರೀತಿಯ ಟೀಕೆ ಮಾಡುವುದು ಸಹಜ. ಬಜೆಟ್ ಮಂಡನೆ ವೇಳೆ ಹೆಸರು ಹೇಳದೆ ಇದ್ದರೂ ರಾಜ್ಯಗಳಿಗೆ ಹಣ ಬಿಡುಗಡೆಯಾಗಲಿದೆ. ಗ್ರಾಮೀಣ ಅಭಿವೃದ್ಧಿಗೆ ನೀಡುವ ಹಣದಲ್ಲಿ ರಾಜ್ಯಕ್ಕೂ ಬರಲಿದೆ ಎಂದು ಸ್ಪಷ್ಟಪಡಿಸಿದರು. ಕನ್ನಡನಾಡಿನ ಜನತೆಗೆ ನಾನು ಮನವಿ ಮಾಡುತ್ತೇನೆ. ಕಾಂಗ್ರೆಸ್‌ನವರು ಮೊದಲು ಟೀಕೆ ಮಾಡುವುದನ್ನು ನಿಲ್ಲಿಸಬೇಕು. ನಾವು ಕರ್ನಾಟಕಕ್ಕೆ ಹೋದಲು ಯಾಕೆ ಬಂದ್ರಿ ಅಂತಾರೆ. ಈಗ ರಾಜ್ಯಕ್ಕೆ ಏನು ತಂದರು ಎಂದು ಕೇಳುತ್ತಾರೆ. ಪ್ರಧಾನಿಯವರನ್ನು ಭೇಟಿಯಾಗಿ ರಾಜ್ಯಕ್ಕೆ ಯೋಜನೆಗಳನ್ನು ತರಲು ನಾನು ಶ್ರಮಿಸುತ್ತೇನೆ. ಒಂದು ತಿಂಗಳಲ್ಲೇ ಎಲ್ಲವನ್ನು ತಂದು ಇಳಿಸಲು ಸಾಧ್ಯವಿಲ್ಲ. ಯೋಜನೆಗಳನ್ನು ತರುತ್ತೇವೆ ಎಂದು ಭರವಸೆ ನೀಡುತ್ತೇನೆ ಎಂದರು. ರಾಜ್ಯಗಳಿಗೆ ಅನುದಾನ ಹಂಚಿಕೆಗೆ ಮಾರ್ಗಸೂಚಿ ಇರುತ್ತವೆ. ಸಿದ್ದರಾಮಯ್ಯನವರು ಎಲ್ಲಾ ಜಿಲ್ಲೆಗಳಿಗೆ ಸರಿಸಮನಾಗಿ ಹಣ ಹಂಚಿಕೆ ಮಾಡಿದ್ದಾರಾ ಎಂದು ಪ್ರಶ್ನಿಸಿದ ಕುಮಾರಸ್ವಾಮಿ, ಕೆಲವು ರಾಜ್ಯಗಳಿಗೆ ವಿಶೇಷ ಪ್ಯಾಕೇಜ್ ಕೊಡುವುದು ನಡೆದುಕೊಂಡು ಬಂದಿದೆ. ಕಲ್ಯಾಣ ಕರ್ನಾಟಕಕ್ಕೆ ಯಾಕೆ ವಿಶೇಷ ಪ್ಯಾಕೇಜ್ ಕೊಡುವುದಕ್ಕೆ ಬಂತು. ಈಶಾನ್ಯ ರಾಜ್ಯಗಳಿಗೆ ವಿಶೇಷ ಪ್ಯಾಕೇಜ್ ಕೊಡುತ್ತಾರೆ. ದೇವೇಗೌಡರು ಈಶಾನ್ಯ ರಾಜ್ಯಗಳಿಗೆ ವಿಶೇಷ ಪ್ಯಾಕೇಜ್ ನೀಡಿದ್ದರು. ಹಾಸನಕ್ಕೆ ಐಐಟಿ ಬಗ್ಗೆ ಬೇಡಿಕೆ ಇದೆ, ರಾಯಚೂರಿನ ಜನರು ಏಮ್ಸ್ ಕೇಳುತ್ತಿದ್ದಾರೆ. ಬಜೆಟ್‌ನಲ್ಲಿ ಘೋಷಣೆ ಮಾಡದೆ ಇದ್ದರೂ ಕೊಡಬಾರದು ಎಂದೇನಿಲ್ಲ. ಕುರ್ಚಿ ಉಳಿಸಿಕೊಳ್ಳುವುದು ಎಷ್ಟು ಮುಖ್ಯವೋ ಹಿಂದುಳಿದ ರಾಜ್ಯಗಳಿಗೆ ಹಣಕಾಸು ಸಹಾಯ ಮಾಡು ವುದು ಅಷ್ಟೇ ಮುಖ್ಯ ಎಂದರು.

ವಿಕಸಿತ ಭಾರತ ಪ್ರಧಾನಿ ಮೋದಿ ಚಿಂತನೆಯಾಗಿದೆ. 2047ಕ್ಕೆ ಅಮೃತಕಾಲದ ದೂರದೃಷ್ಟಿಯ ಬಜೆಟ್ ಇದಾಗಿದೆ. ಕೌಶಲ್ಯ ತರಬೇತಿ, ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಿದ್ದಾರೆ. 4.10ಕೋಟಿ ಉದ್ಯೋಗ ಸೃಷ್ಟಿಗೆ ಯೋಜನೆ ರೂಪಿಸಿದ್ದಾರೆ. MSMS ಗಳಿಗೆ ಆರ್ಥಿಕ ಶಕ್ತಿ ತುಂಬುವುದು ಮೋದಿ ಕಲ್ಪನೆ. ನಗರ ಮತ್ತು ಗ್ರಾಮಗಳಲ್ಲಿ ಮನೆ ನಿರ್ಮಾಣಕ್ಕೆ ಹೆಚ್ಚು ಹಣ ನೀಡಿದ್ದಾರೆ. ಕೃಷಿ ವಲಯಕ್ಕೆ ಈ ಬಾರಿ ಹೆಚ್ಚು ಆದ್ಯತೆ ನೀಡಿದ್ದಾರೆ. ಸಂಶೋಧನಾ ಕೇಂದ್ರಗಳನ್ನು ತೆರೆಯುವ ಉದ್ದೇಶವನ್ನು ಸರಕಾರ ಹೊಂದಿದೆ ಎಂದು ಹೇಳಿದರು.

ಇದು ವೋಟ್ ಬ್ಯಾಂಕ್ ಬಜೆಟ್ ಅಲ್ಲ, ವಿಕಸಿತ ಭಾರತದ ಬಜೆಟ್

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರಾಜಕೀಯ ಬಜೆಟ್ ಮಂಡಿಸದೆ, ರಾಷ್ಟ್ರೀಯ ಬಜೆಟ್ ಮಂಡಿಸಿದೆ. ವೋಟ್ ಬ್ಯಾಂಕ್ ಬಜೆಟ್ ಮಂಡಿಸದೇ ವಿಕಸಿತ ಭಾರತದ ಬಜೆಟ್ ನೀಡಿದೆ ಎಂದು ಸಂಸದ ಡಾ.ಕೆ.ಸುಧಾಕರ್ ಹೇಳಿದ್ದಾರೆ. ಆರ್ಥಿಕ ಅಭಿವೃದ್ಧಿ ಮತ್ತು ಜನ ಕಲ್ಯಾಣದ ಸಮತೋಲನ ಸಾಧಿಸಿರುವ ಕೇಂದ್ರ ಬಜೆಟ್, ತನ್ನ ಆಡಳಿತದ ರಾಜ್ಯಗಳನ್ನು ಆರ್ಥಿಕವಾಗಿ ದಿವಾಳಿ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಗಳಿಗೆ ಒಂದು ಒಳ್ಳೆಯ ಪಾಠವಾಗಿದೆ. ಕೇಂದ್ರ ಸರ್ಕಾರದ 2024ನೇ ಸಾಲಿನ ಬಜೆಟ್ ಕುರಿತು ಪ್ರತಿಕ್ರಿಯಿಸಿದ ಅವರು, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಅಭಿವೃದ್ಧಿ ಗುರಿಯ ಹಾಗೂ ತೆರಿಗೆ ಹೊರೆ ಇಲ್ಲದ, ಸಮತೋಲಿತ ಬಜೆಟ್ ನೀಡಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿಗೆ ಕಡಿಮೆ ಸ್ಥಾನಗಳು ಬಂದಿದ್ದರಿಂದ ಬಜೆಟ್‌ನಲ್ಲೂ ತಾರತಮ್ಯ ಮಾಡಬಹುದು ಎಂಬ ವಿರೋಧ ಪಕ್ಷಗಳ ಸುಳ್ಳಿನ ಊಹೆಗಳಿಗೆ ಈ ಬಜೆಟ್ ತಣ್ಣೀರು ಎರಚಿದೆ. ಈ ಬಜೆಟ್ ಯುವಜನರು, ಮಹಿಳೆಯರು, ರೈತರು ಸೇರಿದಂತೆ ಎಲ್ಲಾ ವರ್ಗದ ಆಶೋತ್ತರಗಳಿಗೆ ಸ್ಪಂದಿಸಿದೆ. ಇದು ಚುನಾವಣಾ ದೃಷ್ಟಿಯ ಬಜೆಟ್ ಆಗಿರದೆ ದೂರದೃಷ್ಟಿಯಿಂದ ದೇಶದ ಭವಿಷ್ಯವನ್ನು ಊಹಿಸಿ ಮಾಡಿದ ಬಜೆಟ್ ಎಂದು ಅವರು ಹೇಳಿದ್ದಾರೆ.



ಸುಧಾಕರ್




ಹೊಸ ತೆರಿಗೆಗೆ ಒಂದಷ್ಟು ವಿನಾಯ್ತಿ, ಹಳೇ ತೆರಿಗೆ ಪದ್ಧತಿಗಿಲ್ಲ ರಿಲೀಫ್

ನವದೆಹಲಿ, ಜು.23– ಹಳೆಯ ತೆರಿಗೆ ಪದ್ಧತಿ ಅಡಿ ತಮ್ಮ ಆದಾಯ ತೆರಿಗೆ ರಿಟರ್ನ್ ಸಲ್ಲಿಕೆ ಮಾಡುವ ಆದಾಯ ತೆರಿಗೆ ಪಾವತಿದಾರರಿಗೆ ಕೇಂದ್ರ ಸರ್ಕಾರ ಈ ಬಾರಿಯೂ ಯಾವುದೇ ರಿಲೀಫ್ ಕೊಟ್ಟಿಲ್ಲ. ಆದರೆ ಹೊಸ ತೆರಿಗೆ ಪದ್ಧತಿ ಅಡಿ ತಮ್ಮ ಇನ್ ಕಂ ಟ್ಯಾಕ್ಸ್ ರಿಟರ್ನ್ಸ್ ಸಲ್ಲಿಕೆ ಮಾಡುವವರಿಗೆ ಈ ವರ್ಷ ಕೂಡಾ ಒಂದಿಷ್ಟು ವಿನಾಯಿತಿಗಳನ್ನು ಕೇಂದ್ರ ಬಜೆಟ್‌ನಲ್ಲಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೀಡಿದ್ದಾರೆ.

ಆದಾಯ ತೆರಿಗೆ ರಿಟರ್ನ್ಸ್ ಸಲ್ಲಿಕೆ ಮಾಡುವ ವೇಳೆ ಆದಾಯ ತೆರಿಗೆ ಪಾವತಿದಾರರು ಹಳೆಯ ಅಥವಾ ಹೊಸ ತೆರಿಗೆ ಪದ್ಧತಿ ಎರಡನ್ನೂ ಪಾಲನೆ ಮಾಡಬಹುದು. ಯಾವುದಾದರೂ ಒಂದು ಆರ್ಥಿಕ ವರ್ಷದಲ್ಲಿ ಹಳೆಯ ತೆರಿಗೆ ಪದ್ಧತಿ ಪಾಲನೆ ಮಾಡುವ ಪಾವತಿದಾರರು ಹೊಸ ತೆರಿಗೆ ಪದ್ಧತಿಗೆ ವರ್ಗಾವಣೆಗೊಂಡರೆ ಅವರು ಮತ್ತೆ ಹಳೆಯ ತೆರಿಗೆ ಪದ್ಧತಿಗೆ ವರ್ಗಾವಣೆ ಆಗಲು ಸಾಧ್ಯವಿಲ್ಲ. ಹೀಗಾಗಿ, ಕಾಲಾಂತರದಲ್ಲಿ ಹಳೆಯ ತೆರಿಗೆ ಪದ್ಧತಿ ಮರೆಯಾಗುವ ಸಾಧ್ಯತೆ ಇದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಈ ಕುರಿತಾಗಿ ಮಾಹಿತಿ ನೀಡಿದ್ದು, ಹಳೆಯ ತೆರಿಗೆ ಪದ್ಧತಿಯನ್ನು ತೆಗೆದು ಹಾಕುವ ಪ್ರಸ್ತಾಪ ನಮ್ಮ ಮುಂದೆ ಇಲ್ಲ ಎಂದಿದ್ದಾರೆ. ತೆರಿಗೆ ಪದ್ಧತಿಯನ್ನು ಸರಳೀಕರಣ ಮಾಡುವುದಷ್ಟೇ ನಮ್ಮ ಮುಂದಿರುವ ಉದ್ದೇಶ ಎಂದು ಹೇಳಿರುವ ನಿರ್ಮಲಾ ಸೀತಾರಾಮನ್, ಹಳೆ ತೆರಿಗೆ ಪದ್ಧತಿಯ ಕಾಲ ಮುಗಿಯುತ್ತಿದೆಯಾ, ನಿಧಾನವಾಗಿ ಮರೆಯಾಗುತ್ತಿದೆಯಾ ಎಂದು ನಾವು ಹೇಳಲು ಸಾಧ್ಯವಿಲ್ಲ ಎಂದಿದ್ದಾರೆ.

ಹೊಸ ತೆರಿಗೆ ಪದ್ಧತಿಗೆ ಪ್ರೋತ್ಸಾಹ ನೀಡುತ್ತಿರುವ ಕೇಂದ್ರ ಹಣಕಾಸು ಸಚಿವರು, 50 ಸಾವಿರ ರೂ.ವರೆಗೆ ಇದ್ದ ಸ್ಟಾಂಡರ್ಡ್ ಡಿಡಕ್ಷನ್ ಅನ್ನು ಈ ಬಾರಿಯ ಬಜೆಟ್‌ನಲ್ಲಿ 75 ಸಾವಿರ ರೂ.ಗೆ ಏರಿಕೆ ಮಾಡಿದ್ದಾರೆ. ಜೊತೆಗೆ ಸ್ಲಾಬ್‌ಗಳಲ್ಲೂ ಒಂದಿಷ್ಟು ಏರಿಳಿತ ಮಾಡಲಾಗಿದೆ. ಹೀಗಾಗಿ, ಒಟ್ಟಾರೆಯಾಗಿ ಆದಾಯ ತೆರಿಗೆ ಪಾವತಿ ದಾರರಿಗೆ 17,500 ಸಾವಿರ ರೂ. ಲಾಭ ಆಗಲಿದೆ ಎಂದು ಲೆಕ್ಕ ಕೊಟ್ಟಿದ್ದಾರೆ. ಆದರೆ, ಹಳೆಯ ತೆರಿಗೆ ಪದ್ಧತಿಯಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ಹೊಸ ತೆರಿಗೆ ಪದ್ಧತಿಯಲ್ಲಿ ಸಾಕಷ್ಟು ಸುಧಾರಣೆ ಮಾಡುತ್ತಿರುವ ಹಿನ್ನೆಲೆಯಲ್ಲಿ ಹಳೆಯ ತೆರಿಗೆ ಪದ್ಧತಿ ಅನುಸರಿಸುತ್ತಿರುವವರು ನಿಧಾನವಾಗಿ ಹೊಸ ತೆರಿಗೆ ಪದ್ಧತಿಯತ್ತ ವಲಸೆ ಬರಲಿ ಎಂಬುದು ಸರ್ಕಾರದ ನಿಲುವು ಆಗಿರಬಹುದು.

ಹಳೆಯ ತೆರಿಗೆ ಪದ್ಧತಿಯಲ್ಲಿ ಉಳಿತಾಯ, ಜೀವ ವಿಮೆ, ಗೃಹ ಸಾಲದ ಮೇಲಿನ ಅಸಲು, ಬಡ್ಡಿ ಪಾವತಿ, ಮನೆ ಬಾಡಿಗೆ ಸೇರಿದಂತೆ ಹಲವು ಹೂಡಿಕೆಗಳನ್ನು ರಿಟರ್ನ್ಸ್ ಸಲ್ಲಿಕೆ ವೇಳೆ ತೋರಿಸಿ ಆದಾಯದಿಂದ ವಿನಾಯಿತಿ ಪಡೆಯಬಹುದಾಗಿದೆ. ಈ ಮೂಲಕ ಉಳಿತಾಯ ಯೋಜನೆಗಳಲ್ಲಿ ಹಣ ತೊಡಗಿಸುವುದನ್ನು ಪ್ರೋತ್ಸಾಹಿಸಲು, ಗೃಹ ಸಾಲ ಪಡೆಯಲು ಹಳೆಯ ತೆರಿಗೆ ಪದ್ಧತಿ ಪ್ರೋತ್ಸಾಹಿಸುತ್ತದೆ. ಜೊತೆಯಲ್ಲೇ 60 ವರ್ಷ ದಾಟಿದವರಿಗೆ ಹಾಗೂ 80 ವರ್ಷ ದಾಟಿದವರಿಗೆ ಸಾಕಷ್ಟು ಸವಲತ್ತುಗಳಿವೆ. ಆದರೆ, ಹೊಸ ತೆರಿಗೆ ಪದ್ಧತಿಯಲ್ಲಿ ಈ ರೀತಿಯಾದ ಯಾವುದೇ ವಿನಾಯ್ತಿ ಇರುವುದಿಲ್ಲ. ಯಾವುದೇ ದಾಖಲೆ ಕೊಡಬೇಕಿಲ್ಲ. ಜನರು ತಮ್ಮ ಒಟ್ಟು ಆದಾಯದ ಮೇಲೆ ಶೇಕಡಾವಾರು ತೆರಿಗೆ ಕಟ್ಟಬೇಕಾಗುತ್ತದೆ.



ಎನ್‌ಡಿಎ ಸರ್ಕಾರ ಉಳಿಸಿಕೊಳ್ಳುವ ಸರ್ಕಸ್!

ಬೆಂಗಳೂರು, ಜು.23(ಕೆಎಂಶಿ)–ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಲೋಕಸಭೆಯಲ್ಲಿ ಮಂಡಿಸಿದ ಬಜೆಟ್ ಎನ್‌ಡಿಎ ಸರ್ಕಾರ ಉಳಿಸಿಕೊಳ್ಳುವ ಪ್ರಯತ್ನವಾಗಿದೆ ಎಂದು ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಜೆಟ್‌ನಲ್ಲಿ ಕರ್ನಾಟಕಕ್ಕೆ ಯಾವುದೇ ನೆರವು ನೀಡದೆ, ನಿರೀಕ್ಷೆಗಳನ್ನು ಹುಸಿ ಮಾಡಿದ್ದಾರೆ ಎಂದರು. ಬಜೆಟ್‌ನಲ್ಲಿ ಬಿಹಾರ ಹಾಗೂ ಆಂಧ್ರಪ್ರದೇಶಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಇದು ಅತ್ಯಂತ ನಿರಾಶಾದಾಯಕ ಬಜೆಟ್. ಬಜೆಟ್‌ನಲ್ಲಿ ದೇಶವನ್ನು ಒಂದಾಗಿ ನೋಡಿಲ್ಲ, ಇಂಡಿಯಾ ಮೈತ್ರಿಕೂಟದ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳನ್ನು ಕಡೆಗಣಿಸಲಾಗಿದೆ. ಇದು ಕೇವಲ ಬಿಜೆಪಿ ಹಾಗೂ ಎನ್‌ಡಿಎ ಮೈತ್ರಿಕೂಟ ಪಕ್ಷಗಳ ಆಡಳಿತ ರಾಜ್ಯಗಳಿಗೆ ನೆರವು ನೀಡುವ ಬಜೆಟ್, ತಾರತಮ್ಯ ಹೆಚ್ಚಾಗಿದೆ. ಇದು ಖಂಡನೀಯ ಎಂದು ಟೀಕಿಸಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರ ಮೇಲೆ ಬಹಳಷ್ಟು ವಿಶ್ವಾಸ ಇಟ್ಟುಕೊಂಡಿದ್ದೆವು, ಭಾರತವನ್ನು ಇಡೀ ವಿಶ್ವ ಬೆಂಗಳೂರಿನ ಮೂಲಕ ನೋಡುತ್ತಿದೆ.

ಬೆಂಗಳೂರು ಹಾಗೂ ಕರ್ನಾಟಕ ಹೆಚ್ಚು ಉದ್ಯೋಗ ಸೃಷ್ಟಿ ಮಾಡಿ ಜಾಗತಿಕ ಮಟ್ಟದಲ್ಲಿ ಛಾಪು ಮೂಡಿಸಿದೆ, ನಿರ್ಮಲಾ ಸೀತಾರಾಮನ್ ಕರ್ನಾಟಕವನ್ನು ಪ್ರತಿನಿಧಿಸಿದ್ದು, ತಮ್ಮ ರಾಜ್ಯಕ್ಕೆ ಆದ್ಯತೆ ನೀಡುತ್ತಾರೆ, ಕರ್ನಾಟಕದ ಹಿತರಕ್ಷಣೆ ಮಾಡುತ್ತಾರೆ, ಬಾಕಿ ಇರುವ ಯೋಜನೆಗಳಿಗೆ ಅನುದಾನ ನೀಡುತ್ತಾರೆ ಎಂಬ ನಿರೀಕ್ಷೆ ಹುಸಿಯಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಡಿ.ಕೆ.ಶಿವಕುಮಾರ್

ರಕ್ಷಣಾ ವ್ಯವಸ್ಥೆಗೆ ಆಧುನಿಕ ತಂತ್ರಜ್ಞಾನದ ಸ್ಪರ್ಶ

ನವದೆಹಲಿ, ಜು.23– ದೇಶದ ಮಿಲಿಟರಿ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು, ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ರೂ.6.21 ಲಕ್ಷ ಕೋಟಿಯನ್ನು ರಕ್ಷಣಾ ಕ್ಷೇತ್ರಕ್ಕೆ ಈ ಬಾರಿಯ ಬಜೆಟ್‌ನಲ್ಲಿ ಘೋಷಿಸಲಾಗಿದೆ

ರಕ್ಷಣಾ ಕ್ಷೇತ್ರವನ್ನು ಬಲಪಡಿಸಲು ಹೊಸ ಶಸ್ತ್ರಾಸ್ತ್ರಗಳು, ವಿಮಾನಗಳು, ಯುದ್ಧನೌಕೆಗಳು ಮತ್ತು ಇತರ ಮಿಲಿಟರಿ ವಸ್ತುಗಳನ್ನು ಖರೀದಿಸಲು ರೂ.1.72 ಲಕ್ಷ ಕೋಟಿ ಅನ್ನು ಮೀಸಲಿಡಲಾಗಿದೆ. ತಂತ್ರಜ್ಞಾನವನ್ನು ಮಿಲಿಟರಿ ಕ್ಷೇತ್ರದಲ್ಲಿ ಮತ್ತಷ್ಟು ಅಳವಡಿಸಿಕೊಳ್ಳುವ ಮೂಲಕ ಸ್ವಾಲಂಬನೆಯ ಭಾರತವನ್ನು ನಿರ್ಮಾಣ ಮಾಡಲು ಹೊಸ ಯೋಜನೆಗಳನ್ನು ಜಾರಿ ಮಾಡಲಾಗವುದು ಎಂದು ಸೀತಾರಾಮನ್ ಹೇಳಿದ್ದಾರೆ.



ರಕ್ಷಣಾ ಸೇವೆಗಳಿಗೆ ರೂ. 2,82,772 ಕೋಟಿ, ನೌಕರರ ಪಿಂಚಣಿಗಾಗಿ ರೂ.1,41,205 ಕೋಟಿ, ಮತ್ತು ರಕ್ಷಣಾ ಸಚಿವಾಲಯ (ಸಿವಿಲ್) ರೂ. 15,322 ಕೋಟಿ ಸೇರಿದಂತೆ ಒಟ್ಟು ರೂ. 4,39,300 ಕೋಟಿ ಮೀಸಲಿಡಲಾಗಿದೆ.

24–25ರ ಸಾಲಿನಲ್ಲಿ ಸೇನೆಗೆ ರೂ. 1,92,680 ಕೋಟಿ ನಿಗದಿಪಡಿಸಲಾಗಿದ್ದು, ನೌಕಾಪಡೆ ಮತ್ತು ಭಾರತೀಯ ವಾಯುಪಡೆಗೆ ಕ್ರಮವಾಗಿ ರೂ.32,778 ಕೋಟಿ ಮತ್ತು ರೂ.46,223 ಕೋಟಿ ಮೀಸಲಿಡಲಾಗಿದೆ.

2023–24ರ ಬಜೆಟ್‌ನಲ್ಲಿ ಭಾರತೀಯ ವಾಯುಪಡೆಯ ಬಂಡವಾಳದ ವೆಚ್ಚವು ರೂ.57,137.09 ಕೋಟಿಗಳಷ್ಟಿತ್ತು. ಇದರಲ್ಲಿ ವಿಮಾನ ಮತ್ತು ಏರೋ ಇಂಜಿನ್‌ಗಳ ಖರೀದಿಗಾಗಿ ರೂ.15,721 ಕೋಟಿ ಮತ್ತು ಇತರೆ ಉಪಕರಣಗಳಿಗೆ ರೂ.36,223.13 ಕೋಟಿ ಒಳಗೊಂಡಿದೆ.

ತಂಬಾಕು ತೆರಿಗೆ ಹೆಚ್ಚಳ ಇಲ್ಲ; ಸಿಗರೇಟ್ ಬೆಲೆ ಏರಿಕೆ ಆಗಲ್ಲ

ನವದೆಹಲಿ, ಜು. 23– 2024ರ ಕೇಂದ್ರ ಬಜೆಟ್‌ನಲ್ಲಿ ತಂಬಾಕು ಉತ್ಪನ್ನಗಳ ಮೇಲಿನ ತೆರಿಗೆ ದರಗಳಲ್ಲಿ ಯಾವುದೇ ಹೆಚ್ಚಳವನ್ನು ಸರ್ಕಾರ ಘೋಷಿಸದೇ ಇರುವ ಕಾರಣ ಸಿಗರೇಟ್ ಬೆಲೆ ಜಾಸ್ತಿ ಆಗಲ್ಲ. ಭಾರತದ ಅತಿದೊಡ್ಡ ಸಿಗರೇಟ್ ಉತ್ಪಾದಕ ITC ಈ ಕ್ರಮವನ್ನು ಸ್ವಾಗತಿಸಿದ್ದು, ಅದರ ಷೇರುಗಳು ಶೇಕಡಾ 5 ರಷ್ಟು ಏರಿಕೆಯಾಗಿದೆ. ರಾಷ್ಟ್ರೀಯ ಷೇರು ವಿನಿಮಯ ಕೇಂದ್ರದಲ್ಲಿ ಈ ಷೇರು ಕಳೆದ ಬಾರಿ ಶೇ.4.67ರಷ್ಟು ಏರಿಕೆ ಕಂಡು 488.35ಕ್ಕೆ ವಹಿವಾಟು ನಡೆಸಿತ್ತು.



ತಂಬಾಕು ಉತ್ಪನ್ನಗಳ ತೆರಿಗೆಯು ಪ್ರಾಥಮಿಕವಾಗಿ ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಕೌನ್ಸಿಲ್‌ನ ವ್ಯಾಪ್ತಿಗೆ ಬರುತ್ತದೆ. ಆದರೂ ಕೇಂದ್ರ ಸರ್ಕಾರವು ಸಿಗರೇಟ್‌ಗಳ ಮೇಲೆ ರಾಷ್ಟ್ರೀಯ ವಿಪತ್ತು ಅನಿಶ್ಚಿತ ಸುಂಕವನ್ನು (ಎನ್‌ಸಿಸಿಡಿ) ವಿಧಿಸುತ್ತದೆ. ಇದು ಕೇಂದ್ರ ಬಜೆಟ್ ಸಮಯದಲ್ಲಿ ಹೊಂದಾಣಿಕೆಗಳಿಗೆ ಒಳಪಟ್ಟಿರುತ್ತದೆ. ಈ ಬಜೆಟ್‌ನಲ್ಲಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಂಬಾಕು ತೆರಿಗೆಗಳನ್ನು ಹೆಚ್ಚಿಸದಿರಲು ನಿರ್ಧರಿಸಿದ್ದು, ಹಿಂದಿನ ವರ್ಷ NCCDಯಲ್ಲಿ 16 ಶೇಕಡಾ ಹೆಚ್ಚಳದೊಂದಿಗೆ ಕೊನೆಯ ಬಾರಿಗೆ ಬದಲಾಯಿಸಲಾದ ದರಗಳನ್ನು ಉಳಿಸಿಕೊಂಡರು.

ಮಹಿಳಾ ಸಬಲೀಕರಣಕ್ಕೆ 3 ಲಕ್ಷ ಕೋಟಿ ರೂ. ಘೋಷಣೆ

ನವದೆಹಲಿ, ಜು.23– ಮಹಿಳೆಯರ ಸಬಲೀಕರಣ ಹಾಗೂ ಅವರನ್ನು ವಿವಿಧ ಕ್ಷೇತ್ರಗಳಲ್ಲಿ ಪಾಲ್ಗೊಳ್ಳುವ ಸಲುವಾಗಿ ಉತ್ತೇಜಿಸುವ ನಿಟ್ಟಿನಲ್ಲಿ ಮಹಿಳೆಯರು ಹಾಗೂ ಹೆಣ್ಣುಮಕ್ಕಳಿಗೆ ಅನುಕೂಲವಾಗುವ ಯೋಜನೆಗಳಿಗೆ ರೂ.3 ಲಕ್ಷ ಕೋಟಿಯನ್ನು ಮೀಸಲಿಡುವುದಾಗಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.


ದೇಶದ ಆರ್ಥಿಕತೆಯಲ್ಲಿ ಮಹಿಳೆಯರು ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸಲು ಬಜೆಟ್‌ನಲ್ಲಿ ರೂ.3 ಲಕ್ಷ ಕೋಟಿಯನ್ನು ಘೋಷಿಸಲಾಗಿದೆ. ಉದ್ಯೋಗ ಕ್ಷೇತ್ರದಲ್ಲಿ ಮಹಿಳೆಯರನ್ನು ಭಾಗವಹಿಸಲು ಅನುಕೂಲವಾಗುವಂತೆ ಉದ್ಯೋಗಿ ಮಹಿಳಾ ವಸತಿ ನಿಲಯಗಳನ್ನು ಸ್ಥಾಪಿಸುವುದಾಗಿ ಹೇಳಿದ್ದಾರೆ. ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ, ಸ್ವಾಧಾರ್ ಗ್ರೆಹ್, ವಸತಿ ನಿಲಯ ಯೋಜನೆಗಳಿಗೆ ರೂ. 2,516 ಕೋಟಿ ಮೀಸಲಿಡಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಮುಖ ಯೋಜನೆಗಳಾದ ಸಕ್ಷಮ್ ಅಂಗನವಾಡಿ ಮತ್ತು ಪೋಷಣ 2.0, ಮಿಷನ್ ವಾತ್ಸಲ್ಯ ಮತ್ತು ಮಿಷನ್ ಶಕ್ತಿ, ಪೌಷ್ಟಿಕತೆ, ಮಕ್ಕಳ ರಕ್ಷಣೆ ಮತ್ತು ಮಹಿಳಾ ಸಬಲೀಕರಣವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಬಜೆಟ್‌ನಲ್ಲಿ ಮಹಿಳೆಯರಿಗೆ ಅನುದಾನ ಮೀಸಲಿಡಲಾಗಿದೆ.

ಮಿಷನ್ ವಾತ್ಸಲ್ಯ ಯೋಜನೆಗೆ ರೂ. 472 ಕೋಟಿ, ಸಂಬಲ್ ಯೋಜನೆಯಡಿ ಬೇಟಿ ಬಚಾವೋ ಬೇಟಿ ಪಢಾವೋ ಮತ್ತು ಮಹಿಳಾ ಸುರಕ್ಷತೆಗಾಗಿ ಒನ್ ಸ್ಟಾಪ್ ಸೆಂಟರ್‌ಗಳಂತಹ ಯೋಜನೆಗಳಿಗೆ ರೂ.629 ಕೋಟಿ ಘೋಷಸಲಿದೆ. ಮಿಷನ್ ಶಕ್ತಿ ಇನ್ನಿತರೆ ಯೋಜನೆಗಳಿಗೆ ರೂ. 3,145 ಕೋಟಿ ಘೋಷಿಸಲಾಗಿದೆ.

ಸರ್ಕಾರದಿಂದ ಮೊದಲ ತಿಂಗಳ ವೇತನ ಸೇರಿ ಉದ್ಯೋಗಿಗಳಿಗೆ ಬಂಪರ್ ಗಿಫ್ಟ್ ಘೋಷಣೆ

ನವದೆಹಲಿ, ಜು.23–ಮೊದಲ ಬಾರಿಗೆ ಕೆಲಸಕ್ಕೆ ಸೇರುವ ಉದ್ಯೋಗಿಗಳಿಗೆ ನೆರವಾಗಲು ವಿಶೇಷ ಯೋಜನೆ ಘೋಷಣೆ ಮಾಡಲಾಗಿದೆ. ಇದರ ಅಡಿಯಲ್ಲಿ ಕಂಪನಿ ವೇತನದ ಜೊತೆಗೆ ಸರ್ಕಾರ ಮೊದಲ ತಿಂಗಳ ಸಂಬಳವನ್ನು ಉದ್ಯೋಗಿಗೆ ನೀಡಲಿದೆ. ಇದೇ ವೇಳೆ ಕೌಶಲ್ಯ ಹಾಗೂ ಉದ್ಯೋಗ ಸೃಷ್ಟಿಗೆ ಒತ್ತು ನೀಡಲಾಗಿದೆ. ಯುವ ಸಮೂಹಕ್ಕೆ ಹೊಸ ಯೋಜನೆಗಳ ಮೂಲಕ ಹೆಚ್ಚಿನ ಉದ್ಯೋಗ ಅವಕಾಶ ಕಲ್ಪಿಸಲು ವಿಶೇಷ ಯೋಜನೆ ರೂಪಿಸಲಾಗಿದೆ. ಇದಕ್ಕೂ ಅನುದಾನ ಮೀಸಲಿಡಲಾಗಿದೆ.

ಇಂಟರ್ನ್‌ಶಿಪ್‌ಗಾಗಿ ವಿಶೇಷ ಯೋಜನೆ ಜಾರಿಗೊಳಿಸಲಾಗಿದೆ. ಈ ಪೈಕಿ ಅಗ್ರಗಣ್ಯ 500 ಕಂಪನಿಗಳಲ್ಲಿ ಇಂಟರ್ನ್‌ಶಿಪ್ ಯೋಜನೆ ಜಾರಿ ಮಾಡಲಾಗಿದೆ. ಇಂಟರ್ನ್‌ಶಿಪ್ ತರಬೇತಿ ಪಡೆಯುವವರಿಗೆ ಭತ್ಯೆಯಾಗಿ 5,000 ರೂಪಾಯಿ ಹಾಗೂ ಒಂದು ಬಾರಿ ಪ್ರೋತ್ಸಾಹ ಧನವಾಗಿ 6,000 ರೂಪಾಯಿ ಹಣವನ್ನು ಇಂಟರ್ನ್‌ಶಿಪ್ ಯೋಜನೆಯಡಿ ನೀಡಲಾಗುತ್ತದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.



ಪ್ರಮುಖವಾಗಿ ಉತ್ಪಾದನಾ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿ ಮಾಡಲು ಎನ್‌ಡಿಎ ಸರ್ಕಾರ ಪ್ರಮುಖ ಆದ್ಯತೆ ನೀಡಲಿದೆ ಎಂದು ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ. ಉದ್ಯೋಗ ಅಭದ್ರತೆ ಸವಾಲು ಎದುರಿಸಲು ಹೊಸ ಯೋಜನೆ ಜಾರಿ ಮಾಡಲಾಗಿದೆ. ಉದ್ಯೋಗ ಕ್ಷೇತ್ರದ ಜೊತೆಗೆ ಕೃಷಿ, ಶಿಕ್ಷಣ, ಮಹಿಳೆ, ಬಡತನ ಸೇರಿದಂತೆ 9 ಕ್ಷೇತ್ರಗಳಿಗೆ ಆದ್ಯತೆ ನೀಡಿದೆ. ಪ್ರಮುಖವಾಗಿ ಕೃಷಿ ಕ್ಷೇತ್ರಕ್ಕೆ 1.52 ಲಕ್ಷ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ. ಈ ಮೂಲಕ ಕೃಷಿ ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಿ ಬೆಳೆಗಳ ಉತ್ಪಾದನೆ ಒತ್ತು ನೀಡಲಾಗಿದೆ. ಬೆಳೆ ಸಮೀಕ್ಷೆಗೆ ಡಿಜಿಟಲ್ ವ್ಯವಸ್ಥೆ ಜಾರಿ ಮಾಡಲಾಗಿದೆ. 400ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಡಿಜಿಟಲ್ ಬೆಲೆ ಸಮೀಕ್ಷೆ ಜಾರಿ ಮಾಡಲಾಗಿದೆ ಎಂದು ನಿರ್ಮಲಾ ಸೀತಾರಾಮನ್ ಘೋಷಿಸಿದ್ದಾರೆ.

ಬಜೆಟ್ ಮಂಡನೆ ಬೆನ್ನಲ್ಲೇ ಕುಸಿದ ಷೇರು ಮಾರುಕಟ್ಟೆ

ನವದೆಹಲಿ, ಜು.23–ಎನ್‌ಡಿಎ ಮೈತ್ರಿ ಸರ್ಕಾರ ಹಲವು ಸವಾಲುಗಳ ನಡುವೆ 3.0 ಸರ್ಕಾರದ ಮೊದಲ ಬಜೆಟ್ ಮಂಡಿಸಿದೆ. ಉದ್ಯೋಗ ಸೃಷ್ಟಿ, ತೆರಿಗೆ ಕಡಿತ, ಆದಾಯ ತೆರಿಗೆ ನೀತಿಯಲ್ಲಿ ಬದಲಾವಣೆ, ಕೃಷಿ ಜೊತೆಗೆ ಕೆಲ ಹೊಸ ಯೋಜನೆಗಳ ಘೋಷಣೆ ಮಾಡಲಾಗಿದೆ. ಅದರಲ್ಲೂ ಪ್ರಮುಖವಾಗಿ ಬಂಡವಾಳ ಹೂಡಿಕೆಯ ಲಾಭ ಮೇಲಿನ ತೆರಿಗೆಯಿಂದ ಹೂಡಿಕೆದಾರರು ನಿರಾಸೆಗೊಂಡಿದ್ದಾರೆ. ಇದರ ಪರಿಣಾಮ ಷೇರುಮಾರುಕಟ್ಟೆ ಕುಸಿತ ಕಂಡಿದೆ. ಸೆನ್ಸೆಕ್ಸ್ 1,200 ಅಂಕ ಕುಸಿತ ಕಂಡರೆ, ನಿಫ್ಟಿ 350 ಅಂಕ ಕುಸಿತ ಕಂಡಿದೆ. ನಿರ್ಮಲಾ ಸೀತರಾಮನ್ ಮಂಡಿಸಿದ ಬಜೆಟ್ ಷೇರು ಮಾರುಕಟ್ಟೆಯಲ್ಲಿ ನಿರಾಸೆ ಮೂಡಿಸಿದೆ. ಪ್ರಮುಖವಾಗಿ ಬಂಡವಾಳ ಹೂಡಿಕೆಯ ಲಾಭದ ಮೇಲೆ ತೆರಿಗೆಯನ್ನು ಏರಿಕೆ ಮಾಡಲಾಗಿದೆ. ಶೇಕಡಾ 10 ರಿಂದ ಶೇಕಡಾ 12ಕ್ಕೆ ತೆರಿಗೆ ಹೆಚ್ಚಳ ಮಾಡಲಾಗಿದೆ. ಬಂಡವಾಳ ಹೂಡಿಕೆಯ ಲಾಭದ ತೆರಿಗೆ ಹೆಚ್ಚಳದಿಂದ ಹೂಡಿಕೆದಾರರಿಗೆ ತೀವ್ರ ಹೊಡೆತ ಬಿದ್ದಿದೆ. ಈ ಘೋಷಣೆ ಹೊರಬೀಳುತ್ತಿದ್ದಂತೆ ಭಾರತದ ಷೇರು ಮಾರುಕಟ್ಟೆ ಕುಸಿತ ಕಂಡಿದೆ.



ಆರೋಗ್ಯ ಕ್ಷೇತ್ರಕ್ಕೆ 89,287 ಕೋಟಿ: ಕ್ಯಾನ್ಸರ್ ಔಷಧಿಗಳ ಕಸ್ಟಮ್ಸ್ ಸುಂಕ ಇಳಿಕೆ

ನವದೆಹಲಿ, ಜು.23– ಮೂರು ಕ್ಯಾನ್ಸರ್ ಔಷಧಗಳ ಮೇಲಿನ ಕಸ್ಟಮ್ ಡ್ಯೂಟಿ ತೆರವುಗೊಳಿಸಲಾಗಿದ್ದು, ಎಕ್ಸ್–ರೇ ಟ್ಯೂಬ್‌ಗಳು ಮತ್ತು ಫ್ಲಾಟ್ ಪ್ಯಾನಲ್ ಡಿಟೆಕ್ಟರ್‌ಗಳ ಮೇಲಿನ ಕಸ್ಟಮ್ಸ್ ಸುಂಕವನ್ನು ಶೇ.6ರಷ್ಟು ಮತ್ತು ಪ್ಲಾಟಿನಂ ಮೇಲೆ ಶೇಕಡಾ 6.4ರಷ್ಟು ಕಡಿಮೆ ಮಾಡಲಾಗುವುದು ಎಂದು ಹಣಕಾಸು ಸಚಿವರು ಬಜೆಟ್‌ನಲ್ಲಿ ಘೋಷಿಸಿದ್ದಾರೆ.

ದೇಶದ ಆರೋಗ್ಯ ವ್ಯವಸ್ಥೆಗೆ ಸರ್ಕಾರವು 89,287 ಕೋಟಿ ರೂ ಗಳನ್ನು ನಿಗದಿಪಡಿಸಿದ್ದು, ಇದ್ದು ಈ ಹಿಂದಿನ ವರ್ಷದ 88,956 ಕೋಟಿಗಿಂತ ಸ್ವಲ್ಪ ಹೆಚ್ಚಾಗಿದೆ. ಔಷಧ ಉದ್ಯಮಕ್ಕೆ ಪಿಎಲ್‌ಐಗೆ ಸರ್ಕಾರ 2,143 ಕೋಟಿ ರೂ ಮಂಜೂರು ಮಾಡಿದೆ. ಅಂತೆಯೇ ಮಧ್ಯಂತರ ಬಜೆಟ್ ಆರೋಗ್ಯ ಮೂಲ ಸೌಕರ್ಯವನ್ನು ಬಲಪಡಿಸುವುದು, ಅಸ್ತಿತ್ವದಲ್ಲಿರುವ ಆಸ್ಪತ್ರೆಯ ಮೂಲ ಸೌಕರ್ಯವನ್ನು ಬಳಸಿಕೊಂಡು ಹೆಚ್ಚಿನ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವುದು ಮತ್ತು ತಡೆಗಟ್ಟುವ ಆರೈಕೆಯ ಮೇಲೆ ಕೇಂದ್ರೀಕರಿಸುತ್ತದೆ. 9–14 ವರ್ಷ ವಯಸ್ಸಿನ ಹುಡುಗಿಯರಿಗೆ ಗರ್ಭಕಂಠದ ಕ್ಯಾನ್ಸರ್ ಲಸಿಕೆಯನ್ನು ಪ್ರೋತ್ಸಾಹಿಸಲು ಹೊಸ ಉಪಕ್ರಮವನ್ನು ಘೋಷಿಸಲಾಗಿದೆ. ಆ ಮೂಲಕ ತಡೆಗಟ್ಟುವ ರೋಗದ ಸಂಭವವನ್ನು ಕಡಿಮೆ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ. ಅಸಂಘಟಿತ ಕಾರ್ಮಿಕರ ಗುರುತಿನ ಸಂಖ್ಯೆ (U-WIN) ಪ್ಲಾಟ್‌ಫಾರ್ಮ್‌ನ ಪರಿಚಯವು ಲಸಿಕೆ ವಿತರಣೆಯನ್ನು ಸುವ್ಯವಸ್ಥಿತಗೊಳಿಸುವ ಮೂಲಕ ಮತ್ತು ನೈಜ–ಸಮಯದ ಡೇಟಾ ಟ್ರ್ಯಾಕಿಂಗ್ ಅನ್ನು ಖಾತ್ರಿಪಡಿಸುವ ಮೂಲಕ ಪ್ರತಿರಕ್ಷಣೆ ಮತ್ತು ಬೆಂಬಲ ಮಿಷನ್ ಇಂದ್ರಧನುಷ್ ಅನ್ನು ನಿರ್ವಹಿಸುವ ಗುರಿಯನ್ನು ಹೊಂದಿದೆ ಎಂದರು. ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ್ ಆರೋಗ್ಯ ಮೂಲ ಸೌಕರ್ಯ ಮಿಷನ್‌ಗೆ 2023–24 ರಲ್ಲಿ 2,100 ಕೋಟಿಯಿಂದ 2024–25 ರಲ್ಲಿ 4,108 ಕೋಟಿ ರೂಗೆ ಹೆಚ್ಚಿಸಲಾಗಿದೆ. ಅಪೌಷ್ಟಿಕತೆಯನ್ನು ಎದುರಿಸಲು ಮತ್ತು ಆರಂಭಿಕ ಹಂತದ ಆರೋಗ್ಯ ಸೇವೆಗಳನ್ನು ಹೆಚ್ಚಿಸಲು 'ಸಕ್ಷಮ್ ಅಂಗನವಾಡಿ ಮತ್ತು ಪೋಷಣೆ 2.0 ಉಪಕ್ರಮದ ಅಡಿಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಮೇಲ್ದರ್ಜೆಗೆ ಏರಿಸಲು ಯೋಜಿಸಲಾಗಿದೆ. ಆಯುಷ್ಮಾನ್ ಭಾರತ್ ಅಡಿಯಲ್ಲಿ ಆರೋಗ್ಯ ರಕ್ಷಣೆಯನ್ನು ಎಲ್ಲಾ ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕರಿಗೆ ವಿಸ್ತರಿಸಲಾಗಿದೆ. ಜೈವಿಕ ತಂತ್ರಜ್ಞಾನ ಸಂಶೋಧನೆ ಮತ್ತು ಅಭಿವೃದ್ಧಿಗೆ 2023–24ರಲ್ಲಿ 500 ಕೋಟಿಯಿಂದ 2024–25ರಲ್ಲಿ 1,100 ಕೋಟಿಗೆ ಮೀಸಲಿಡಲಾಗಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು.



ನಕ್ಕರೆ ಅದೇ ಸ್ವರ್ಗ

ಬಸ್ಯಾ : ಸಂಸಾರಿ ಸನ್ಯಾಸಿಯಾಗಲು ಬಯಸುತ್ತಾನೆ.
ಸನ್ಯಾಸಿ ಸಂಸಾರಿಯಾಗಲು ಬಯಸುತ್ತಾನೆ. ಗೊತ್ತಾ?
ಸಂತ : ಕಾರಣ?
ಬಸ್ಯಾ : ಮೊದಲನೆಯದು 'ಭಯಕ್ಕೆ', ಎರಡನೆಯದು 'ಬಯಕೆ'.

ಮೈಸೂರು ಮಿತ್ರ

ಬುಧವಾರ, 24 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ.........

ನಿಮ್ಮ ಸಂತೋಷಕ್ಕಾಗಿ ಜೀವಿಸಿ, ಇತರರ ಸಂತೋಷಕ್ಕಲ್ಲ – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹುಟ್ಟಿದ ಮಗು ತೊಟ್ಟಿಲಿಗೆ ನಗು.

ನಿಮ್ಮ ಪತ್ರಗಳು

ಪ್ರತಾಪ್ ಸಿಂಹಗೆ ಪಕ್ಷ ಉನ್ನತ ಹುದ್ದೆ ನೀಡುವ ಮೂಲಕ ಸದ್ಬಳಕೆ ಮಾಡಿಕೊಳ್ಳಲಿ

ಮಾನ್ಯರೆ,



ಎರಡು ಬಾರಿ ಲೋಕಸಭಾ ಸದಸ್ಯರಾಗಿ ಬದಲಾದ ರಾಜಕೀಯ ಪರಿಸ್ಥಿತಿಯಲ್ಲಿ ಕ್ಷೇತ್ರ ತ್ಯಾಗ ಮಾಡಿದ ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಇತ್ತೀಚೆಗೆ ಪಕ್ಷದ ಚಟುವಟಿಕೆಗಳಿಂದ ದೂರ ಸರಿಯುತ್ತಿದ್ದಾರೆಯೇ ಎಂಬ ಸಂಶಯ ವ್ಯಕ್ತವಾಗುತ್ತಿದೆ.

ಕಳೆದ ಕೆಲವು ದಿನಗಳಿಂದ ಪಕ್ಷದ ವೇದಿಕೆ ಹಾಗೂ ಚಟುವಟಿಕೆಗಳಲ್ಲಿ ಪ್ರತಾಪ್ ಸಿಂಹ ಅವರ ಗೈರು ಹಾಜರಿ ಎದ್ದು ಕಾಣುತ್ತಿದೆ. ಸರ್ಕಾರದ ಹಗರಣಗಳ ವಿರುದ್ಧ ನಡೆಯುತ್ತಿರುವ ಬಿಜೆಪಿ ಪ್ರತಿಭಟನೆ ಹಾಗೂ ಮುಡಾ ಹಗರಣದ ವಿರುದ್ಧ ಮೈಸೂರಿನಲ್ಲಿ ನಡೆದ ಚಳುವಳಿಗಳಲ್ಲೂ ಅವರ ಉಪಸ್ಥಿತಿ ಕಂಡುಬರುತ್ತಿಲ್ಲ. ಸರ್ಕಾರದ ಸಾಲು ಸಾಲು ಹಗರಣಗಳ ಬಗ್ಗೆ ಮುಗಿ ಬೀಳಬೇಕಿದ್ದ ಪ್ರತಾಪ್ ಸಿಂಹ ಎಲ್ಲಿದ್ದಾರೆ? ಹಾಗೂ ಅವರ ಮೌನದ ಹಿಂದಿರುವ ರಹಸ್ಯವಾದರೂ ಏನು ಎಂಬುದು ಬಹಿರಂಗವಾಗಬೇಕಿದೆ.

ಕಳೆದ ಎರಡು ಅವಧಿಯಲ್ಲಿ ಮೈಸೂರು ಲೋಕಸಭಾ ಸದಸ್ಯರಾಗಿ ರೈಲ್ವೆ, ವಿಮಾನ, ಮೈಸೂರು – ಬೆಂಗಳೂರು ದಶಪಥ ಹೆದ್ದಾರಿ ಸೇರಿದಂತೆ ಹಲವಾರು ರಾಷ್ಟ್ರೀಯ ಹೆದ್ದಾರಿಗಳ ಯೋಜನೆಯಲ್ಲಿ ಪ್ರತಾಪ್ ಸಿಂಹ ಅವರ ಪರಿಶ್ರಮವನ್ನು ಯಾರೂ ಅಲ್ಲಗಳೆಯುವಂತಿಲ್ಲ. ರಾಜಕೀಯ ಎದುರಾಳಿಗಳಿಗೆ ಹರಿತವಾದ ಮಾತಿನಿಂದಲೇ ಠಕ್ಕರ್ ನೀಡುತ್ತಿದ್ದ ಯುವ ನಾಯಕನನ್ನು ಬಿಜೆಪಿ ಕಡೆಗಣಿಸಿದೆಯೇ ಎಂಬ ಶಂಕೆ ವ್ಯಕ್ತವಾಗುತ್ತಿದೆ. ರಾಜಕೀಯದ ಆಳ–ಅಂತರ ಹಾಗೂ ಮಜಲುಗಳನ್ನು ಚೆನ್ನಾಗಿ ಅರಿತಿರುವ ಪ್ರತಾಪ್ ಸಿಂಹ ಅವರಿಗೆ ಪಕ್ಷ ಉನ್ನತ ಹುದ್ದೆ ನೀಡುವ ಮೂಲಕ ಅವರನ್ನು ಸದ್ಬಳಕೆ ಮಾಡಿಕೊಳ್ಳಲಿ.

– ಹೆಚ್. ಆರ್. ಪ್ರಸಾದ್, ವಿವೇಕಾನಂದ ನಗರ, ಮೈಸೂರು.

ಸಾರ್ವಜನಿಕ ಸ್ಥಳಗಳಲ್ಲಿ ಪೊಲೀಸ್ ಗಸ್ತು ಸ್ವಾಗತಾರ್ಹ

ಮಾನ್ಯರೆ,

ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ್ ರಾಜ್ಯ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ ನೀಡಿದ ನಿರ್ದೇಶನದಂತೆ ರಾಜ್ಯಾದ್ಯಂತ ಸಾರ್ವಜನಿಕ ಸ್ಥಳಗಳಲ್ಲಿ ಪೊಲೀಸರ ಗೋಚರತೆ ತೀರಾ ಕಡಿಮೆ ಆಗಿದ್ದು ಇನ್ನು ಮುಂದೆ ಪೊಲೀಸ್ ಸಮವಸ್ತ್ರದಲ್ಲಿ ಎಲ್ಲಾ ಪೊಲೀಸ್ ಅಧಿಕಾರಿಗಳು ಬೆಳಿಗ್ಗೆ ಹಾಗೂ ಸಂಜೆ ಸಾರ್ವಜನಿಕರಿಗೆ ಕಾಣುವಂತೆ ಗಸ್ತು ತಿರುಗುವಂತೆ ಆದೇಶ ನೀಡಿರುವುದು ನಿಜಕ್ಕೂ ಸ್ವಾಗತಾರ್ಹ ಹಾಗೂ ಅಭಿನಂದನಾರ್ಹ.

ಈ ವ್ಯವಸ್ಥೆ ಹಿಂದೆ ಇದ್ದಿತಾದರೂ ಇತ್ತೀಚೆಗೆ ಅದು ಕಡಿಮೆ ಆಗಿತ್ತು. ಅಲ್ಲದೆ ಕಾನೂನು ಉಲ್ಲಂಘಿಸುವವರಿಗೆ ಪೊಲೀಸರೆಂದರೆ ಭಯವು ಇದ್ದಂತೆ ಕಾಣುವುದಿಲ್ಲ. ಹಿಂದೆ ಜನಸ್ಪಂದನ ಸಭೆಗಳು ಕೂಡ ನಡೆಯುತ್ತಿತ್ತು. ನಿರ್ದಿಷ್ಟ ಸ್ಥಳಗಳಲ್ಲಿ ರಾತ್ರಿ ಗಸ್ತಿನಲ್ಲಿ ಪುಸ್ತಕ ಇಟ್ಟು ಪೊಲೀಸರು ಸಹಿ ಕೂಡ ಮಾಡುವುದಿತ್ತು. ಇನ್ನು ಮುಂದಾದರೂ ಇಂತಹ ಜನಸ್ನೇಹಿ ನಿಯಮಗಳು ಜಾರಿಗೆ ಬಂದು ಪೊಲೀಸರು ಮತ್ತು ಸಾರ್ವಜನಿಕರ ಪರಸ್ಪರ ಒಡನಾಟ ಬೆಳೆದು ತಮ್ಮ ಕಾನೂನಿನ ಸಮಸ್ಯೆಗಳು, ಮಾನಸಿಕ ನೋವುಗಳ ಬಗ್ಗೆ ಸಾರ್ವಜನಿಕರು ಮುಕ್ತವಾಗಿ ಹಂಚಿಕೊಳ್ಳಲು ಮತ್ತು ಕಾನೂನು ಸುವ್ಯವಸ್ಥೆ ಬಗ್ಗೆ ದೂರು ನೀಡಲು ಇದು ಅನುಕೂಲವಾಗುತ್ತದೆ. ಏಕೆಂದರೆ ಸಣ್ಣಪುಟ್ಟ ಕಾನೂನಿನ ಸಮಸ್ಯೆಗಳನ್ನು ಹೊತ್ತು ಪೊಲೀಸ್ ಠಾಣೆ ಮೆಟ್ಟಿಲು ಹತ್ತಲು ಕೆಲವರಲ್ಲಿ ಅಂಜಿಕೆ, ಭಯ, ಮುಜುಗರವು ಇರುತ್ತಿತ್ತು. ಸಾರ್ವಜನಿಕರಿಗೆ ತಮ್ಮ ವ್ಯಾಪ್ತಿಯ ಪೊಲೀಸ್ ಅಧಿಕಾರಿಗಳ ಮುಖ ಪರಿಚಯವೇ ಇರುವುದಿಲ್ಲ. ಹೊಸ ಆದೇಶದಿಂದ ಪುಂಡ ಪೋಕರಿಗಳ ಭಯವಿಲ್ಲದೆ ಮುಕ್ತವಾಗಿ ಜೀವನ ನಡೆಸುತ್ತಾರೆ. ಹಾಗೆ ಕಾನೂನು ಉಲ್ಲಂಘನೆ ಮಾಡುವವರಿಗೂ ಇದರಿಂದ ಭಯವಿರುತ್ತದೆ. ಇದರೊಂದಿಗೆ ರಾತ್ರಿ ಬೀಟ್ ನಿಯೋಜನೆಯನ್ನು ಸಹ ಹೆಚ್ಚು ಮಾಡಬೇಕಿದೆ. ಇದರೊಂದಿಗೆ ಮಹಾನಗರ ಪಾಲಿಕೆ ಮತ್ತು ಜಿಲ್ಲಾ ಆಡಳಿತ ಜೊತೆಗೂಡಿ ಕೆಲವು ಸಾರ್ವಜನಿಕ ಸಮಸ್ಯೆಗಳು, ಪಾರ್ಕಿಂಗ್ ಉಲ್ಲಂಘನೆ, ಫುಟ್‌ಪಾತ್ ಆಕ್ರಮಣ, ಬೀದಿನಾಯಿಗಳ ಕಾಟ, ಶ್ವಾನ ಮಾಲೀಕರು ತಮ್ಮ ಶ್ವಾನಗಳನ್ನು ವಾಕಿಂಗ್ ನೆಪದಲ್ಲಿ ತಂದು ಎಲ್ಲೆಂದರಲ್ಲಿ ಮಲಮೂತ್ರ ವಿಸರ್ಜನೆ ಮಾಡಿಸುವುದು, ಸ್ವಚ್ಛತೆ ಇವೆ ಮುಂತಾದ ಜ್ವಲಂತ ಸಮಸ್ಯೆಗಳ ಬಗ್ಗೆ ಸಾರ್ವಜನಿಕ ಸಭೆಗಳನ್ನು ಆಗಾಗ ಹಮ್ಮಿಕೊಳ್ಳುವ ಮೂಲಕ ಸ್ಪಂದಿಸಬೇಕಿದೆ.

–ಎನ್.ಕುಮಾರಸ್ವಾಮಿ, ಮೈಸೂರು.

ಕುವೆಂಪುನಗರದ ನೃಪತುಂಗ ರಸ್ತೆ ಸರಿಪಡಿಸಿ

ಮಾನ್ಯರೆ,

ಮೈಸೂರಿನ ವಾರ್ಡ್ ನಂ. 59ರ ವ್ಯಾಪ್ತಿಯ ಕುವೆಂಪುನಗರದ ನೃಪತುಂಗ ರಸ್ತೆ, ಕಾಂಪ್ಲೆಕ್ಸ್‌ನಿಂದ ಕುವೆಂಪುನಗರದ ಕೆಎಸ್‌ಆರ್‌ಟಿಸಿ ಬಸ್ ಡಿಪೋದವರೆಗೂ ಹಳ್ಳಕೊಳ್ಳಗಳಿಂದ ಕೂಡಿದೆ. ಈ ರಸ್ತೆಯಲ್ಲಿ ವ್ಯಾಪಾರ ವಹಿವಾಟು ಹೆಚ್ಚಾಗಿದೆ. ಹೋಟೆಲ್‌ಗಳು, ಬೇಕರಿಗಳು, ಬಟ್ಟೆ ಅಂಗಡಿಗಳು, ಪಾತ್ರೆ ಅಂಗಡಿಗಳು ಇತ್ಯಾದಿ, ವ್ಯಾಪಾರ ವಹಿವಾಟು ಮಾಡುವವರು ನೀರಿನ ಸೌಲಭ್ಯ ಹಾಗೂ ವಿದ್ಯುತ್ ಸಂಪರ್ಕ ಪಡೆಯುವ ಸಲುವಾಗಿ ಈ ರಸ್ತೆಯನ್ನು ಅಗೆದು, ನಂತರ ಸರಿಯಾಗಿ ಮುಚ್ಚದೆ ಹಾಳು ಮಾಡಿದ್ದಾರೆ. ಇದರ ಪರಿಣಾಮ ವಾಹನ ಸವಾರರಿಗೆ ತುಂಬಾ ಕಿರಿಕಿರಿಯಾಗುವಂತಾಗಿದೆ. ಅಲ್ಲದೆ ಸಂಜೆ ವೇಳೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿರುವುದರಿಂದ ವಾಹನ ಚಲಾಯಿಸಲು ತುಂಬಾ ಕಷ್ಟವಾಗಿದ್ದು, ಅಪಘಾತಗಳು ಸಂಭವಿಸಿರುವುದುಂಟು. ಪಾದಚಾರಿಗಳು, ಶಾಲಾ ಮಕ್ಕಳು ಈ ರಸ್ತೆಯಲ್ಲಿ ಓಡಾಡಲು ತುಂಬಾ ಕಷ್ಟವಾಗಿದೆ. ಮಳೆ ಬಂದರೆ ಹಳ್ಳ ಯಾವುದು ರಸ್ತೆ ಯಾವುದು ಒಂದೂ ತಿಳಿಯುವುದಿಲ್ಲ. ಇದರ ಬಗ್ಗೆ ಸಂಬಂಧಪಟ್ಟ ಜನಪ್ರತಿನಿಧಿಗಳು, ಅಧಿಕಾರಿಗಳಲ್ಲಿ ಮನವಿ ಮಾಡಿದರೂ ಯಾವುದೇ ಸ್ಪಂದನೆ ಇಲ್ಲ. ಕೂಡಲೇ ಇತ್ತ ಗಮನಹರಿಸಿ ರಸ್ತೆ ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಮನವಿ.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ತಿದ್ದುಪಡಿ

ಬಸವಣ್ಣನ ನುಡಿ–
ಗೊಂದು ತಿದ್ದುಪಡಿ;
ದಯವಿಲ್ಲದ ಹೃದಯ
ಅದೇವುದಯ್ಯ!
ಅರ್ಥ
ಅರ್ಥ ಜಗತ್ತು
ಹಾಸಿಗೆ ಬಿಟ್ಟೇಳುವ ಹೊತ್ತಿಗೆ
ಇನ್ನರ್ಥ ಜಗತ್ತಿನ ಚಕ್ರ
ಅರ್ಥ ಉರುಳಿರುತ್ತದೆ!

–ಸಿಪಿಕೆ, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಭಗವದ್ಗೀತೆಯ ಪ್ರಸ್ತುತತೆ ಅಂದು, ಇಂದು, ಮುಂದೆ...

ಭಗವದ್ಗೀತೆ ಭಾರತೀಯ ಸಂಸ್ಕೃತಿಯ ಭವ್ಯ ಭವನ. ಮಹಾಭಾರತದ ಮಧ್ಯದಲ್ಲಿ, ಎಂದರೆ ಭೀಷ್ಮ ಪರ್ವದ ಆರಂಭದಲ್ಲಿರುವ ಈ ಗ್ರಂಥ ಹದಿನೆಂಟು ಅಧ್ಯಾಯಗಳನ್ನು ಹೊಂದಿ ಏಳು ನೂರು ಶ್ಲೋಕಗಳನ್ನು ಒಳಗೊಂಡಿದೆ. ಕಾಶ್ಮೀರ ಪಾಠದಲ್ಲಿ ಕೆಲವು ಅಧಿಕ ಶ್ಲೋಕಗಳಿದ್ದರೂ ಅರ್ಥದ ದೃಷ್ಟಿಯಿಂದ ಅವೇನೂ ಆಧಿಕ್ಯವನ್ನು ಹೊಂದಿಲ್ಲ. ಇದು ಇಂದಿಗೆ ಐದು ಸಾವಿರ ವರ್ಷಗಳಷ್ಟು ಹಿಂದಿನದೆಂಬುದು ಸಂಪ್ರದಾಯವಾದಿಗಳ ಅಭಿಪ್ರಾಯ. ಏಕೆಂದರೆ ಮಹಾಭಾರತ ಯುದ್ಧ ಯುಗಸಂಧಿ ಕಾಲದಲ್ಲಿ, ಎಂದರೆ ದ್ವಾಪರ ಕಲಿಯುಗಗಳು ಸೇರುವ ಸಂದರ್ಭದಲ್ಲಿ ನಡೆಯಿತಂತೆ. ಕಲಿಯುಗವು ಆರಂಭಗೊಂಡು ಈಗ (2024) ಐದು ಸಾವಿರದ ಒಂದು ನೂರ ಇಪ್ಪತ್ತೈದು (5125) ವರ್ಷಗಳು ಸಂದಿವೆ ಎಂದು ಪಂಚಾಂಗಗಳಲ್ಲಿ ಉಕ್ತವಾಗಿದೆ. ಈಗ ನಮಗೆ ಉಪಲಬ್ಧವಾಗಿರುವ ಭಗವದ್ಗೀತೆ ಅಷ್ಟು ಪ್ರಾಚೀನವಲ್ಲವೆಂದು ಆಧುನಿಕರು ಹೇಳುತ್ತಾರೆ. ಸಾವಿರದ ಇನ್ನೂರು (1200) ವರ್ಷಗಳ ಹಿಂದೆ ಶ್ರೀ ಶಂಕರಾಚಾರ್ಯರು ರಚಿಸಿದ ಭಾಷ್ಯವೇ ಅತ್ಯಂತ ಪ್ರಾಚೀನವಾದದ್ದು. ಅದಕ್ಕೂ ಹಿಂದೆ ಇದ್ದ ಭಾಷ್ಯಗಳು ಅಥವಾ ವ್ಯಾಖ್ಯಾನಗಳು ಕಣ್ಮರೆಯಾಗಿವೆ.


ದ್ವಾಪರಯುಗ: ಯುಗಗಳಲ್ಲಿ ಮೂರನೆಯದು ದ್ವಾಪರ. ಮೊದಲನೆಯದಾದ ಕೃತಯುಗದಲ್ಲಿ ಸತ್ಯದ ಬಲದಿಂದಲೇ ಜನರು ಸಿದ್ಧಿಯನ್ನು ಪಡೆಯುತ್ತಿದ್ದರು. ಎರಡನೆಯದು ತ್ರೇತಾ ಯುಗ. ತ್ರೇತ ಎಂದರೆ ಅಗ್ನಿಹೋತ್ರದ ಮೂರು ಅಗ್ನಿಗಳು (ಅಗ್ನಿತ್ರಯಮಿದಂ ತ್ರೇತಾ–ಅಮರಕೋಶ). ಅಗ್ನಿಪೂಜೆಯಿಂದ ಜನರು ಸಿದ್ಧಿಗಳನ್ನು ಪಡೆಯುತ್ತಿದ್ದ ಯುಗ. ಇದರಲ್ಲಿ ಯಜ್ಞಗಳ ಪ್ರಾಬಲ್ಯ. ಮೂರನೆಯದು ದ್ವಾಪರಯುಗ. ದ್ವಾಪರ ಎಂದರೆ ಸಂದೇಹ. ವೇದ ಪ್ರಾಮಾಣ್ಯ, ಭಗವಂತನ ಅಸ್ತಿತ್ವ, ಸ್ವರ್ಗನರಕಗಳು ಇವುಗಳಲ್ಲಿ ಸಂಶಯವೇ ಬಲವತ್ತಾಗಿ ಬೆಳೆಯುತ್ತಿದ್ದ ಕಾಲ. ಇಂತಹ ಕಾಲದಲ್ಲಿ ಭಗವದ್ಗೀತೆ ಹುಟ್ಟಿತು. ತನ್ನ ಧರ್ಮದ ಬಗೆಗೆ, ಕರ್ತವ್ಯದ ಬಗೆಗೆ ಸಂದೇಹವನ್ನು ಹೊಂದಿದ್ದ ಜನರ ಪ್ರತಿನಿಧಿಯಾಗಿ ಅರ್ಜುನನು ಚಿತ್ರಿತನಾಗಿದ್ದಾನೆ. ಭಗವಚ್ಛಕ್ತಿಯ ಪರಿಪೂರ್ಣ ಅಭಿವ್ಯಕ್ತ ಸ್ವರೂಪವಾಗಿ ಭಗವಾನ್ ಶ್ರೀಕೃಷ್ಣನು ನಿಂತಿದ್ದಾನೆ. ಭಗವದ್ ಗೀತೆಯಲ್ಲಿ ಧೃತರಾಷ್ಟ್ರ, ಸಂಜಯ ಮುಂತಾದವರ ಮಾತುಗಳಿದ್ದರೂ ಮುಖ್ಯವಾಗಿ ಅದು ಕೃಷ್ಣಾರ್ಜುನ ಸಂವಾದ. ಅರ್ಜುನನಲ್ಲಿ ಉಂಟಾಗಿದ್ದ ಮೋಹವನ್ನು ನಿವಾರಿಸಿ ಕರ್ತವ್ಯೋನ್ಮುಖನನ್ನಾಗಿ ಮಾಡುವುದು ಭಗವದ್ಗೀತೆಯ ಪ್ರಥಮೋದ್ದೇಶವಾಗಿತ್ತು. ಆದ್ದರಿಂದಲೇ ಅರ್ಜುನನು ಹೇಳುವ ಕೊನೆಯ ಮಾತು.

"ನಷ್ಟೋಮೋಹಃಸ್ಮೃತಿರ್ಲಬ್ಧಾ ತ್ವತ್‌ಪ್ರಸಾದಾನ್ಮಯಾರ್ಜುನ ।
ಸ್ಥಿತೋಽಸ್ಮಿ ಗತ ಸಂದೇಹಃ ಕರಿಷ್ಯೇ ವಚನಂ ತವ॥ (18.73)

ಎಂಬುದಾಗಿದೆ.

ಕೇವಲ ಅರ್ಜುನನ ಮೋಹವನ್ನು ತೊಲಗಿಸಲು ಇಷ್ಟು ದೀರ್ಘವಾದ ಗೀತೆಯನ್ನು ಶ್ರೀಕೃಷ್ಣನು ಉಪದೇಶಿಸ ಬೇಕಾಗಿತ್ತೆ? ಎಂಬುದು ಮುಖ್ಯ ಪ್ರಶ್ನೆ. ಎರಡನೆಯ ಅಧ್ಯಾಯದ ಮೂವತ್ತೆಂಟನೆಯ ಶ್ಲೋಕದವರೆಗೆ ಮಾಡಿರುವ ಉಪದೇಶವೇ ಸಾಕಾಗಿತ್ತು. ಲೌಕಿಕವಾಗಿ 'ನೀನು ಯುದ್ಧ ಮಾಡದೆ ಓಡಿಹೋದರೆ ಜನರು ನಿನ್ನನ್ನು ಹೇಡಿ ಎಂದು ನಿಂದಿಸುತ್ತಾರೆ. ಯುದ್ಧ ಮಾಡಿ ಗೆದ್ದರೆ ನಿನ್ನ ಕೀರ್ತಿ ಲೋಕದಲ್ಲಿ ಹರಡುತ್ತದೆ. ನೀನು ಯುದ್ಧದಲ್ಲಿ ಮಡಿದರೂ ವೀರಸ್ವರ್ಗಕ್ಕೆ ಹೋಗುವೆ. ಆದ್ದರಿಂದ ಕ್ಷತ್ರಿಯನಾಗಿ ನಿನ್ನ ಕರ್ತವ್ಯವನ್ನು ಮಾಡು' ಎಂದು ಕೃಷ್ಣನು ಹೇಳಿದ್ದಾಯಿತು. ಆಧ್ಯಾತ್ಮಿಕವಾಗಿ 'ಆತ್ಮ ಅವಿನಾಶಿ ಶರೀರ ಹೋದರೂ ಇನ್ನೊಂದು ಶರೀರ ಬರುತ್ತದೆ. ಯಾರ ಶರೀರವೂ ಶಾಶ್ವತವಲ್ಲ. ಹುಟ್ಟಿದವನು ಸಾಯಲೇಬೇಕು' ಎಂಬ ತತ್ತ್ವವನ್ನೂ ಉಪದೇಶಿಸಿದ್ದಾಗಿದೆ. ಇಷ್ಟಾದ ಮೇಲೆ ಕರ್ಮಯೋಗ, ಜ್ಞಾನಯೋಗ, ಅಭ್ಯಾಸಯೋಗ, ಭಕ್ತಿಯೋಗ ಇತ್ಯಾದಿಗಳನ್ನೆಲ್ಲ ಏಕೆ ಹೇಳಬೇಕಾಗಿತ್ತು?

ಅರ್ಜುನನು ನಿಮಿತ್ತ ಮಾತ್ರ. 'ನಿಮಿತ್ತಮಾತ್ರಂ ಭವ ಸವ್ಯಸಾಚಿನ್' ಎಂಬ ಮಾತು ಗೀತೆಯಲ್ಲೇ ಬರುತ್ತದೆ. ಶ್ರೀಕೃಷ್ಣನು ಅರ್ಜುನನನ್ನು ಕರ್ತವ್ಯದಲ್ಲಿ ತೊಡಗಿಸುವ ನೆವದಲ್ಲಿ ಆ ಕಾಲದ ಮತ್ತು ಮುಂದಿನ ಸಕಲ ಮಾನವ ಕುಲಕ್ಕೂ ಬೇಕಾದ ಜ್ಞಾನವನ್ನು ಹಂಚಿದ್ದಾನೆ. ಆ ಕಾಲದಲ್ಲೂ ದುರ್ಯೋಧನಾದಿಗಳು ಅಸುರ ಸಂಪತ್ತನ್ನೇ ಸರ್ವಸ್ವವೆಂದು ತಿಳಿದು ನ್ಯಾಯ–ಧರ್ಮಗಳನ್ನು ಕಡೆಗಣಿಸಿದ್ದರು.



ಇದಮದ್ಯ ಮಯಾ ಲಬ್ಧಮಿಮಂ ಪ್ರಾಪ್ಸ್ಯೇ ಮನೋರಥಮ್।
ಇದಮಸ್ತೀದಮಪಿ ಮೇ ಭವಿಷ್ಯತಿ ಪುನರ್ಧನಮ್ ॥
ಅಸೌ ಮಯಾ ಹತಃ ಶತ್ರುರ್ಹನಿಷ್ಯೇ ಚಾಪರಾನಪಿ।
ಯಕ್ಷ್ಯೇ ದಾಸ್ಯಾಮಿ ಮೋದಿಷ್ಯೇ ಇತ್ಯಜ್ಞಾನವಿಮೋಹಿತಾಃ॥
(16.14–15)

ಇಂದು ಇದು ನನಗೆ ಸಿಕ್ಕಿತು. ನನ್ನ ಮನೋರಥ ಈಡೇರುತ್ತಿದೆ. ಈ ಹಣವೂ ನನ್ನದಾಯಿತು. ಬೇರೆ ಹಣವೂ ನನ್ನದಾಗಲಿದೆ. ನನ್ನ ಶತ್ರುವನ್ನು ಕೊಂದು ಹಾಕಿದೆ, ಬೇರೆಯವರನ್ನೂ ಕೊಲ್ಲುವೆನು, ನನ್ನ ಇಷ್ಟ ಬಂದಂತೆ ಯಜ್ಞ ಮಾಡುವೆನು, ಬೇಕಾದವರಿಗೆ ದಾನಗಳನ್ನು ಕೊಡುವೆನು, ಬೇಕಾದ ಹಾಗೆ ಆನಂದ ಪಡುವೆನು ಎಂಬ ಅಜ್ಞಾನದಿಂದ ಇವರು ಮೋಹವಿಷ್ಟರಾಗಿದ್ದಾರೆ ಎಂದು ಅವರನ್ನು ಶ್ರೀಕೃಷ್ಣನು ವರ್ಣಿಸಿದ್ದಾನೆ.

ಹೀಗೆ ಹರಡಿದ್ದ ಅಧರ್ಮವನ್ನು ತೊಡೆದು ಹಾಕಿ ಧರ್ಮದ ಕಡೆಗೆ ಜನರ ಮನಸ್ಸನ್ನು ತಿರುಗಿಸಲು ಅಂದು ಭಗವದ್ಗೀತೆ ಅವಶ್ಯವಾಗಿತ್ತು. ಇಷ್ಟೇ ಅಲ್ಲ. ಭಾರತ ದೇಶದಲ್ಲಿ ಪರಂಪರಾಗತವಾಗಿ ಬೆಳೆದಿದ್ದ ಯೋಗವು ನಷ್ಟವಾಗಿತ್ತು. ಅದರ ಉಜ್ಜೀವನವನ್ನು ಮಾಡಿ ಮತ್ತೆ ಜನರಿಗೆ ಅದರ ಮಹತ್ತ್ವವನ್ನು ತಿಳಿಸಬೇಕಾಗಿತ್ತು.

ಏವಂ ಪರಂಪರಾಪ್ರಾಪ್ತಮಿಮಂ ರಾಜರ್ಷಯೋ ವಿದುಃ।
ಸ ಕಾಲೇನೇಹ ಮಹತಾ ಯೋಗೋ ನಷ್ಟಃ ಪರಂತಪ॥
ಸ ಏವಾಯಂ ಮಯಾ ತೇಽದ್ಯ ಯೋಗಃ ಪ್ರೋಕ್ತಃ ಪುರಾತನಃ
ಭಕ್ತೋಽಸಿ ಮೇ ಸಖಾಚೇತಿ ರಹಸ್ಯಂ ಹ್ಯೇತದುತ್ತಮಮ್ ॥
(4.2–3)

ಈ ಯೋಗವು ಪರಂಪರೆಯಿಂದ ಬಂದಿದೆ ಎಂಬುದನ್ನು ರಾಜರ್ಷಿಗಳು ಬಲ್ಲರು. ಆದರೆ ದೀರ್ಘಕಾಲದ ಮಹಿಮೆಯಿಂದ ಯೋಗವು ಮರೆಯಾಗಿದೆ. ಆ ಪುರಾತನವಾದ ಯೋಗವನ್ನೇ ನಾನು ನಿನಗೆ ಹೇಳುತ್ತಿದ್ದೇನೆ. ಏಕೆಂದರೆ ನೀನು ನನ್ನ ಭಕ್ತನೂ, ಮಿತ್ರನೂ ಆಗಿರುವೆ. ಈ ಯೋಗ ರಹಸ್ಯವಾದುದು ಮತ್ತು ಉತ್ತಮವಾದುದು. ಆದ್ದರಿಂದಲೇ ಭಗವಂತನು ಯೋಗದ ನಾನಾ ಪ್ರಕಾರಗಳನ್ನು ಗೀತೆಯಲ್ಲಿ ವಿವರಿಸಿದ್ದಾನೆ.

ದ್ವಾಪರಯುಗದಲ್ಲೂ ನಾಸ್ತಿಕ್ಯವು ಬೆಳೆದಿತ್ತು. ಕೃಷ್ಣನು ಭಗವಂತನೇ ಅಲ್ಲ. ಅಸಲಿಗೆ, ಭಗವಂತ ಎನಿಸಿಕೊಳ್ಳುವ ದೇವರೇ ಇಲ್ಲ. ಕೃಷ್ಣನೂ ನಮ್ಮ ಹಾಗೆ ಮನುಷ್ಯ ಅಷ್ಟೇ ಎಂದು ಹೇಳುವವರೂ ಆಗ ಇದ್ದರು.

ಅವಜಾನಂತಿ ಮಾಂ ಮೂಢಾ ಮಾನುಷೀಂ ತನುಮಾಶ್ರಿತಮ್ ।
ಪರಂ ಭಾವಮಜಾನಂತೋ ಮಮ ಭೂತಮಹೇಶ್ವರಮ್॥
(9–11)

ಮೂಢರು ಮನುಷ್ಯ ರೂಪದಲ್ಲಿ ಕಾಣಿಸಿಕೊಂಡಿರುವ ನನ್ನನ್ನು ತಿರಸ್ಕರಿಸುತ್ತಾರೆ. ಏಕೆಂದರೆ ನನ್ನ ಮಹೇಶ್ವರತ್ವದ ಅರಿವು ಅವರಿಗಿಲ್ಲ– ಎಂದು ಕೃಷ್ಣನೇ ಹೇಳಿದ್ದಾನೆ. ಈ ಕಾರಣದಿಂದ ಕೃಷ್ಣನು ವಿಶ್ವರೂಪವನ್ನು ತೋರಿಸಿ ಸಂದೇಹವನ್ನು ಪರಿಹರಿಸಬೇಕಾಯಿತು.

ಉಪನಿಷತ್ತುಗಳಲ್ಲಿ ಪ್ರತಿಪಾದಿತವಾಗಿದ್ದ ಆತ್ಮವಿದ್ಯೆಯು ಆಗ ಮಸುಕಾಗಿತ್ತು. ಅದನ್ನು ಬೆಳಕಿಗೆ ತಂದು ಮತ್ತೆ ಜಗತ್ತಿನಲ್ಲಿ ಆತ್ಮವಿದ್ಯೆಯನ್ನು ಬೆಳಗಿಸುವುದು ಅಂದಿನ ತುರ್ತಾಗಿತ್ತು. ಕೇವಲ ಕರ್ಮಕಾಂಡದಲ್ಲಿ ಮುಳುಗಿದ್ದವರು ಯಜ್ಞಯಾಗಾದಿಗಳು, ಅವುಗಳಿಂದ ಸಿಕ್ಕುವ ಸ್ವರ್ಗಭೋಗಗಳು ಮಾನವ ಜೀವನದ ಮುಖ್ಯ ಉದ್ದೇಶ ಎಂದು ಭಾವಿಸಿದ್ದರು.

ಈ ಅಜ್ಞಾನವನ್ನು ನಿವಾರಿಸಿ ಔಪನಿಷದವಾದ ಜ್ಞಾನ ಮಾರ್ಗಕ್ಕೆ ಜನತೆಯನ್ನು ತಿರುಗಿಸುವುದು ಭಗವದ್ಗೀತೆಯ ಮುಖ್ಯೋದ್ದೇಶವಾಗಿತ್ತು. ಆದ್ದರಿಂದ ಭಗವಂತನ ಈ ಮಾತುಗಳನ್ನು ಗಮನಿಸಬೇಕು.

ಯಾಮಿಮಾಂ ಪುಷ್ಪಿತಾಂ ವಾಚಂ ಪ್ರವದಂತ್ಯವಿಪಶ್ಚಿತಃ।
ವೇದವಾದರತಾಃ ಪಾರ್ಥ ನಾನ್ಯದಸ್ತೀತಿ ವಾದಿನಃ॥
ಕಾಮಾತ್ಮಾನಃ ಸ್ವರ್ಗಪರಾಃ ಜನ್ಮಕರ್ಮಫಲಪ್ರದಾಮ್ ।
ಕ್ರಿಯಾವಿಶೇಷಬಹುಲಾಂ ಭೋಗೈಶ್ವರ್ಯಗತಿಂ ಪ್ರತಿ ॥
(2.42–43)

ಸತ್ಯವನ್ನು ತಿಳಿಯದ ಅವಿದ್ವಾಂಸರು ಹೂವಿನಂತೆ ಮೃದುವಾದ ಮಾತುಗಳನ್ನು ಹೇಳುತ್ತಾರೆ. ಅವರಿಗೆ ವೇದವಾದಗಳಲ್ಲಿ ಅತ್ಯಂತಾಸಕ್ತಿ. ಸ್ವರ್ಗಸುಖಕ್ಕಿಂತ ದೊಡ್ಡದು ಬೇರೆ ಯಾವುದೂ ಇಲ್ಲ ಎಂದು ಅವರು ಹೇಳುತ್ತಾರೆ. ಕೇವಲ ಸುಖಾಸಕ್ತರಾಗಿ, ಸ್ವರ್ಗವನ್ನೇ ಉದ್ದೇಶವೆಂದು ತಿಳಿದು ಜನ್ಮ ಮರಣ ಕರ್ಮಗಳನ್ನು ತರುವ, ಕ್ರಿಯಾಕಲಾಪವೇ ಅಧಿಕವಾಗಿರುವ ಕರ್ಮಕಾಂಡವನ್ನು ಭೋಗೈಶ್ವರ್ಯಪ್ರಾಪ್ತಿಗಾಗಿ ಹೊಗಳುತ್ತಾರೆ.

ಇದು ಕರ್ಮಕಾಂಡ– ಉಪನಿಷತ್ತುಗಳಾದರೋ ಜ್ಞಾನ ಕಾಂಡದ ಪ್ರಾಧಾನ್ಯವನ್ನು ಎತ್ತಿ ಹಿಡಿಯುತ್ತವೆ. ಅದನ್ನು ಉದ್ಧರಿಸುವುದೇ ಅಂದಿನ ತುರ್ತಾಗಿತ್ತು. ಆದ್ದರಿಂದಲೇ ಗೀತಾಮಹಾತ್ಮ್ಯದಲ್ಲಿ –

ಸರ್ವೋಪನಿಷದೋ ಗಾವೋ ದೋಗ್ಧಾ
ಗೋಪಾಲನಂದನಃ।
ಪಾರ್ಥೋ ವತ್ಸಃ ಸುಧೀರ್ಭೋಕ್ತಾ ದುಗ್ಧಂ
ಗೀತಾಮೃತಂ ಮಹತ್ ॥

ಎಂದು ಹೇಳಲಾಗಿದೆ. ಎಲ್ಲ ಉಪನಿಷತ್ತುಗಳೂ ಗೋವುಗಳು. ಅವುಗಳ ಹಾಲನ್ನು ಕರೆಯುವವನು ಕೃಷ್ಣ. ಮುಂದೆ ಕರುವಿನಂತೆ ನಿಮಿತ್ತವಾಗಿ ನಿಂತಿರುವವನು ಅರ್ಜುನ. ಗೀತೆಯ ಅಮೃತವೇ ಹಾಲು. ಬುದ್ಧಿ ಚೆನ್ನಾಗಿರುವವನು ಆ ಹಾಲನ್ನು ಕುಡಿಯುತ್ತಾನೆ ಎಂದು ಇದರ ಭಾವಾರ್ಥ. ಹೀಗೆ ಉಪನಿಷತ್ತುಗಳ ಪ್ರಾಧಾನ್ಯವನ್ನೂ ಪ್ರಾಶಸ್ತ್ಯವನ್ನೂ ಎತ್ತಿ ಹಿಡಿಯುವುದು ಅಂದು ಆವಶ್ಯಕವಾಗಿತ್ತು. ಅದರಲ್ಲಿ ಭಗವದ್ಗೀತೆ ಸಮರ್ಥವಾಗಿದೆ. ಉಪನಿಷತ್ತುಗಳ ಸಾರವೆಲ್ಲ ಈ ಪುಟ್ಟ ಗ್ರಂಥದಲ್ಲಿ ಸೇರಿಕೊಂಡಿದೆ. ಉಪನಿಷತ್ತುಗಳ ಅನೇಕ ಶ್ಲೋಕಗಳು ಅಲ್ಪಸ್ವಲ್ಪ ಬದಲಾವಣೆಯೊಂದಿಗೆ ಭಗವದ್ಗೀತೆಯಲ್ಲಿ ಕಾಣಿಸಿಕೊಂಡಿದೆ. ಹೀಗೆ ಅಂದು ಭಗವದ್ಗೀತೆ ಪ್ರಸ್ತುತವಾಗಿತ್ತು. ಇಂದು ಅದರ ಪ್ರಸ್ತುತತೆಯನ್ನು ಮುಂದಿನ ವಾರದ ಲೇಖನದಲ್ಲಿ ನೋಡೋಣ.


* * *

ಅಂಬೇಡ್ಕರ್ ವಿದ್ವತ್ ಅರಿಯುವಲ್ಲಿ ಭಾರತೀಯರು ವಿಫಲರಾಗಿದ್ದೇವೆ

ಡಾ.ಬಿ.ಆರ್.ಅಂಬೇಡ್ಕರ್ ಜನ್ಮದಿನೋತ್ಸವ ಕಾರ್ಯಕ್ರಮದಲ್ಲಿ ಬಿ.ಎನ್.ಬಹದ್ದೂರ್ ಸಂಸ್ಥೆ ನಿರ್ದೇಶಕ ಪ್ರೊ.ಆನಂದ್ ವಿಷಾದ

ಮೈಸೂರು, ಜು.23(ಎಂಟಿವೈ)– ವಿಶ್ವಸಂಸ್ಥೆ ಡಾ.ಅಂಬೇಡ್ಕರ್ ಹುಟ್ಟಿದ ದಿನವನ್ನು ಜ್ಞಾನದ ದಿನವನ್ನಾಗಿ ಆಚರಿಸುತ್ತಿದೆ. ಆದರೆ ಭಾರತೀಯರು ಇಂದಿಗೂ ಅಂಬೇಡ್ಕರ್ ಅವರನ್ನು ಅರ್ಥ ಮಾಡಿಕೊಳ್ಳುವಲ್ಲಿ ವಿಫಲರಾಗಿದ್ದಾರೆ ಎಂದು ಬಿ.ಎನ್.ಬಹದ್ದೂರ್ ವಾಣಿಜ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ. ಡಿ. ಆನಂದ್ ವಿಷಾದಿಸಿದ್ದಾರೆ.

ಮೈಸೂರಿನ ಕೆಸರೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಸರ್ಕಾರಿ ವೃತ್ತಿಪರ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ನಡೆದ ಡಾ.ಬಿ. ಆರ್.ಅಂಬೇಡ್ಕರ್ ಜನ್ಮದಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದಲ್ಲಿ ನಾವು ದ್ವಂದ್ವದಲ್ಲಿ ಬದುಕುತ್ತಿದ್ದೇವೆ. ದ್ವೇಷ, ಅಸೂಯೆಯಿಂದಾಗಿ ಕಾಲಹರಣ ಮಾಡುತ್ತಿದ್ದೇವೆ. ಇದಕ್ಕೆ ಅಂಬೇಡ್ಕರ್ ಅವರ ಸಂದೇಶ ಪಾಲಿಸದೇ ಇರುವುದೇ ಕಾರಣವಾಗಿದೆ. ಅಂಬೇಡ್ಕರ್ ಅವರಲ್ಲಿ ಜ್ಞಾನ ಸಂಪತ್ತು ಅಡಗಿತ್ತು. ಆ ಕಾರಣದಿಂದಲೇ ವಿಶ್ವಸಂಸ್ಥೆ ಅಂಬೇಡ್ಕರ್ ಅವರ ಜನ್ಮದಿನವನ್ನು ಜ್ಞಾನದ ದಿನ ಎಂದು ಆಚರಿಸುತ್ತಿದೆ. ದೇಶಕ್ಕೆ ಸಂವಿಧಾನ ಕೊಡುಗೆ ನೀಡಿದ ಮಹನೀಯರ ಅರ್ಥ ಮಾಡಿಕೊಳ್ಳುವಲ್ಲಿ ಹಿಂದೆ ಬಿದ್ದಿದ್ದೇವೆ. ಈ ಕಾರಣದಿಂದ ಇಂದು ಅಸಮಾನತೆ, ಶೋಷಣೆ ಸೇರಿದಂತೆ ಇನ್ನಿತರ ಸಮಸ್ಯೆ ಬೇರೂರಿವೆ ಎಂದು ತಿಳಿಸಿದರು.



ಮೈಸೂರಿನ ಕೆಸರೆಯಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಸರ್ಕಾರಿ ವೃತ್ತಿಪರ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಮಂಗಳವಾರ ನಡೆದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಬಿ.ಎನ್.ಬಹದ್ದೂರ್ ವಾಣಿಜ್ಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ.ಡಿ.ಆನಂದ್, ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ನಲ್ಲಿ ಓದುವ ಮಕ್ಕಳು ಸಾಧನೆ ಮಾಡುವ ಗುರಿ ಹೊಂದಿರಬೇಕು. ಹಾಸ್ಟೆಲ್‌ಗೆ ಸೇರುವವರು ಬಡ ಕುಟುಂಬದಿಂದ ಬಂದ ಮಕ್ಕಳಾಗಿರುತ್ತಾರೆ. ನಿರ್ದಿಷ್ಟ ಗುರಿಯೊಂದಿಗೆ ಓದಿ ಸಾಧನೆ ಮಾಡಬೇಕು. ಅಲ್ಪತೃಪ್ತರಾಗದೇ ಜ್ಞಾನವನ್ನು ಆಸ್ತಿ ಮಾಡಿಕೊಳ್ಳಿ, ಅಂಬೇಡ್ಕರ್ ಜಗತ್ತಿನ ಜ್ಞಾನದ ಸಂಕೇತ. ಜಗತ್ತು ಕಂಡ ಶ್ರೇಷ್ಠ ಚಿಂತಕರಾಗಿದ್ದರು. ಮೀಸಲಾತಿಯನ್ನು ನಂಬಿಕೊಂಡು ನಾವು ಹೆಚ್ಚು ಕಾಲ ಬದುಕಲು ಆಗುವುದಿಲ್ಲ. ಆದ್ದರಿಂದ ಸ್ಪರ್ಧಾತ್ಮಕ ಪರೀಕ್ಷೆಗೆ ಸಜ್ಜಾಗಬೇಕು. ಜ್ಞಾನವನ್ನು ವೃದ್ಧಿಸಿಕೊಂಡು ಜೀವನದಲ್ಲಿ ಯಶಸ್ಸು ಗಳಿಸುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಧ್ಯಾಪಕ ಸೋಮಶೇಖರ್, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಧ್ಯಾಪಕ ಡಾ.ದೊಡ್ಡಯ್ಯ, ಸಮಾಜ ಸೇವಕ ಅಜೀಜುಲ್ಲಾ (ಅಜ್ಜು), ನಗರಪಾಲಿಕೆ ಮಾಜಿ ಸದಸ್ಯ ಸಮೀವುಲ್ಲಾ ಅಜ್ಜು, ಸಹಾಯಕ ನಿರ್ದೇಶಕ ಸಿದ್ದಲಿಂಗು, ನಿಲಯ ಪಾಲಕರಾದ ಆರ್.ಕಾರ್ತಿಕ್, ಪ್ರದೀಪ್‌ಕುಮಾರ್, ಮಹೇಶ್, ವಸಂತಕುಮಾರಿ, ಜಗದೀಶ್, ಶಿವಮಲ್ಲಯ್ಯ, ದೊಡ್ಡಹೆಜ್ಜೂರು ದಿಲೀಪ್ ಹಾಜರಿದ್ದರು. ಇದೇ ಸಂದರ್ಭದಲ್ಲಿ ವಿವಿಧ ಕ್ರೀಡೆಗಳಲ್ಲಿ ಪಾಲ್ಗೊಂಡು ವಿಜೇತ ಸ್ಪರ್ಧೆಯಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visweswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ನೀರು ಸರಬರಾಜು, ಒಳಚರಂಡಿ ಕಾಮಗಾರಿಗಳಿಗೆ ಮೈಸೂರು ಪಾಲಿಕೆಯಿಂದ 15 ಕೋಟಿ ಟೆಂಡರ್



ಮೈಸೂರು,ಜು.23(ಆರ್‌ಕೆ)– ಮೈಸೂರು ಮಹಾನಗರ ಪಾಲಿಕೆಯು 15ನೇ ಹಣಕಾಸು ಅನುದಾನದಡಿ 4, ಪಾಲಿಕೆ ಅನುದಾನದಡಿ 8 ಕಾಮಗಾರಿಗಳನ್ನು 15.18 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ಟೆಂಡರ್ ಆಹ್ವಾನಿಸಿದೆ. ನೀರು ಸರಬರಾಜು ಮತ್ತು ಒಳಚರಂಡಿ ವಿಭಾಗದಿಂದ ಪೂರ್ವ ಭಾಗದ ಬಡಾವಣೆಗಳಲ್ಲಿ ಕುಡಿಯುವ ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಪಾಲಿಕೆ ಮುಂದಾಗಿದೆ. ಜರ್ಮನ್ ಪ್ರೆಸ್ ಯಂತ್ರಾಗಾರದ ಜಲಸಂಗ್ರಹಾಗಾರದಿಂದ ಕೊಳವೆ ಮಾರ್ಗಕ್ಕೆ ಲಿಂಕಿಂಗ್ ಮಾಡಿ ವಾಲ್ ಅಳವಡಿಸುವ ಕಾಮಗಾರಿ, ದೇವನೂರು ಯಂತ್ರಾಗಾರದ ಕಟ್ಟಡ ನಿರ್ಮಾಣ, ಯಂತ್ರ ಅಳವಡಿಸುವುದು, ಜ್ಯೋತಿ ನಗರ ಕೆಇಬಿ ಕಚೇರಿವರೆಗೆ ಎಂಎಸ್ ಕೊಳವೆ ಮಾರ್ಗ ಅಳವಡಿಸುವ ಕೆಲಸಕ್ಕೆ 3.35 ಕೋಟಿ ರೂ.ಗಳಿಗೆ ಟೆಂಡರ್ ಕರೆಯಲಾಗಿದೆ. 2.33 ಕೋಟಿ ರೂ.ಗಳ ಮೈಸೂರು ನಗರದ ಭಾಗಶಃ ಪ್ರದೇಶಕ್ಕೆ ನೀರು ಸರಬರಾಜು ಮಾಡಲು ಕುವೆಂಪುನಗರದ ಕೆಹೆಚ್‌ಬಿ ಕಾಲೋನಿ 1ನೇ ಹಂತದ ಬೋಧಿ ಸತ್ವ ಪಾರ್ಕ್ ಬಳಿ 10 ಲಕ್ಷ ಲೀ. ಸಾಮರ್ಥ್ಯದ ಓವರ್‌ಹೆಡ್ ಟ್ಯಾಂಕ್ ನಿರ್ಮಿಸಿ ಸಂಪರ್ಕ ಕಲ್ಪಿಸುವುದು, 4.30 ಕೋಟಿ ರೂ. ವೆಚ್ಚದಲ್ಲಿ ಮುಡಾ ನೌಕರರ ಬಡಾವಣೆ ಬಳಿ 600 ಮಿಮೀ ವ್ಯಾಸದ ಒಳಚರಂಡಿ ಮಾರ್ಗದಿಂದ 450 ಎಂಎಂ ವ್ಯಾಸದ ಕೊಳವೆ ಮಾರ್ಗವನ್ನು ವಾಸು ಬಡಾವಣೆ, ರಾಮಕೃಷ್ಣನಗರ 'ಐ' ಬ್ಲಾಕ್ ವರೆಗೆ ಅಳವಡಿಸುವುದು, ಆದಿಚುಂಚನಗಿರಿ ಮುಖ್ಯ ರಸ್ತೆಯಿಂದ ಪೂಜಾ ಬೇಕರಿ ಸೇರಿ ವಿವಿಧ ಬಡಾವಣೆಗಳಲ್ಲಿ ಯಂತ್ರ ಗುಂಡಿ ನಿರ್ಮಿಸಿ ತ್ಯಾಜ್ಯ ನೀರು ನಿರ್ವಹಣೆ ಕಾಮಗಾರಿಗೆ ಟೆಂಡರ್ ಆಹ್ವಾನಿಸಲಾಗಿದೆ.

ಚಾಮುಂಡೇಶ್ವರಿ ಪೂಜಾ ಮೆರವಣಿಗೆಗೆ ಚಾಲನೆ



ಮೈಸೂರು ಮಂಡಕಳ್ಳಿ ವಿಮಾನ ನಿಲ್ದಾಣದ ಹಿಂಭಾಗದಲ್ಲಿ ವಾಸವಿರುವ ಪೌರಕಾರ್ಮಿಕರ ಜೈ ಭೀಮ್ ಬಡಾವಣೆಯಲ್ಲಿ ನಡೆದ ಚಾಮುಂಡೇಶ್ವರಿ ಪೂಜಾ ಮೆರವಣಿಗೆಗೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಚಾಲನೆ ನೀಡಿದರು. ಈ ವೇಳೆ ಮುಖಂಡರಾದ ಕುಮಾರ್, ರಾಜು, ರವಿ ಮತ್ತಿತರರು ಉಪಸ್ಥಿತರಿದ್ದರು.

ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಸಜ್ಜಾಗಿ

ಮೈಸೂರು ಜಿಲ್ಲಾ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಕರೆ



ಮೈಸೂರಿನ ಬೋಗಾದಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಮೈಸೂರು ಜಿಲ್ಲೆಯ ವಿಶೇಷ ಕಾರ್ಯಕಾರಿಣಿ ಸಭೆಯನ್ನು ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಉದ್ಘಾಟಿಸಿದರು. ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ಮಾಜಿ ಸಂಸದ ಸಿ.ಹೆಚ್.ವಿಜಯಶಂಕರ್, ಮಾಜಿ ಶಾಸಕ ಹರ್ಷವರ್ಧನ್, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಅಲ್ಪ ಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಅನಿಲ್ ಥಾಮಸ್ ಚಿತ್ರದಲ್ಲಿದ್ದಾರೆ.

ಮೈಸೂರು, ಜು.23(ಬಿಎಲ್‌ಯು)– ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಉತ್ಸಾಹದಲ್ಲೇ ನಗರಪಾಲಿಕೆ ಸೇರಿದಂತೆ ಇತರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಲು ಕಾರ್ಯಕರ್ತರು ಸಜ್ಜಾಗಬೇಕು ಎಂದು ಬಿಜೆಪಿ ಹಿಂದುಳಿದ ಮೋರ್ಚಾ ರಾಜ್ಯಾಧ್ಯಕ್ಷ ರಘು ಕೌಟಿಲ್ಯ ಕರೆ ನೀಡಿದರು.

ಮೈಸೂರಿನ ಬೋಗಾದಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ನಡೆದ ಮೈಸೂರು ಜಿಲ್ಲೆಯ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಇನ್ನು ಕೆಲವೇ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯಲಿದ್ದು, ಬಿಜೆಪಿ ಜಯಭೇರಿ ಬಾರಿಸಲು ಕಾರ್ಯಕರ್ತರ ಪಡೆ ಸಂಘಟಿತರಾಗಿ ಶ್ರಮಿಸಬೇಕು ಎಂದರು.

ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಯದುವೀರ್ ಅಭೂತಪೂರ್ವ ಗೆಲುವು ಸಾಧಿಸಿದ್ದಾರೆ. ಇದಕ್ಕೆ ಕಾರ್ಯಕರ್ತರ ಶ್ರಮ ಬಹಳ ಮುಖ್ಯವಾಗಿತ್ತು. ಅದೇ ರೀತಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಕೂಡ ಶ್ರಮ ವಹಿಸಿ ಪಕ್ಷದ ಪ್ರಾಬಲ್ಯ ಮೆರೆಯಬೇಕು ಎಂದು ಹೇಳಿದರು.

ಕುತಂತ್ರಗಳ ಮೂಲಕ ಗೆಲುವು ಸಾಧ್ಯವಿಲ್ಲ ಎಂಬುದನ್ನು ಕಾಂಗ್ರೆಸ್‌ಗೆ ಮನವರಿಕೆ ಮಾಡಿಕೊಟ್ಟಿದ್ದೀರಾ. ಅದೇ ಮಾದರಿಯಲ್ಲಿ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ಕೂಡ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್‌ಗೆ ಸ್ಪಷ್ಟ ಸಂದೇಶ ನೀಡಬೇಕು ಎಂದು ರಘು ಕೌಟಿಲ್ಯ ತಿಳಿಸಿದರು.

ದಕ್ಷಿಣ ಭಾರತದಲ್ಲಿ ಕರ್ನಾಟಕ ಬಿಜೆಪಿ ಭದ್ರಕೋಟೆಯಾಗಿದೆ. ಲೋಕಸಭಾ ಹಾಗೂ ವಿಧಾನಸಭಾ ಚುನಾವಣೆಯಲ್ಲಿ ಮತ್ತೊಬ್ಬರ ಗೆಲುವಿಗೆ ಶ್ರಮಿಸಿದ್ದೀರಾ. ಆದರೆ ಈಗ ನಿಮ್ಮ ಗೆಲುವಿಗಾಗಿ ಪಕ್ಷ ಸಂಘಟನೆ ಮಾಡಬೇಕು. ಆಗ ಮಾತ್ರ ನೀವು ಗೆಲುವಿನ ದಡ ಸೇರಲು ಸಾಧ್ಯ ಎಂದು ರಘು ಕೌಟಿಲ್ಯ ಅಭಿಪ್ರಾಯಪಟ್ಟರು. ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ಮಾಜಿ ಸಂಸದ ಸಿ.ಹೆಚ್.ವಿಜಯಶಂಕರ್, ಮಾಜಿ ಶಾಸಕರಾದ ಹರ್ಷವರ್ಧನ್, ಎಸ್.ಬಾಲರಾಜು, ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಅಲ್ಪಸಂಖ್ಯಾತ ಮೋರ್ಚಾ ರಾಜ್ಯಾಧ್ಯಕ್ಷ ಅನಿಲ್ ಥಾಮಸ್ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಶೀಘ್ರ ಪತನ

ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಭವಿಷ್ಯ



ಜಿಲ್ಲಾ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಮಾತನಾಡಿದರು.

ಮೈಸೂರು, ಜು.23(ಬಿಎಲ್‌ಯು)– ರಾಜ್ಯ ಕಾಂಗ್ರೆಸ್ ಸರ್ಕಾರ ಜನತೆಗೆ ಕೊಟ್ಟ ಭರವಸೆ ಈಡೇರಿಸಲು ಸಾಧ್ಯವಾಗದೆ ಪರಿತಪಿಸುವುದನ್ನು ಗಮನಿಸಿದರೆ ಶೀಘ್ರ ಪತನವಾಗಲಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಭವಿಷ್ಯ ನುಡಿದರು.

ಮೈಸೂರಿನ ಬೋಗಾದಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಇಂದು ನಡೆದ ಜಿಲ್ಲಾ ಬಿಜೆಪಿ ವಿಶೇಷ ಕಾರ್ಯಕಾರಿಣಿ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನವರು ಸುಳ್ಳು ಭರವಸೆ ನೀಡಿ ವಾಮಮಾರ್ಗದಿಂದ ಅಧಿಕಾರ ಹಿಡಿದಿದ್ದಾರೆ ಎಂದು ಆರೋಪಿಸಿದರು.

ಮೂರನೇ ಬಾರಿಗೆ ಪ್ರಧಾನಮಂತ್ರಿಯಾಗಿರುವ ನರೇಂದ್ರ ಮೋದಿ ಅವರ ಸ್ವಚ್ಛ ರಾಜಕಾರಣಿಯಾಗಿದ್ದು, ಈ ತನಕ ಅವರ ಆಡಳಿತದಲ್ಲಿ ಸಣ್ಣ ಲೋಪ ಕೂಡ ಕಂಡು ಬಂದಿಲ್ಲ. ಇಂತಹ ಪ್ರಧಾನಿ ಪಡೆದಿರುವುದು ನಮಗೆ ಹೆಮ್ಮೆ ವಿಚಾರ ಎಂದು ಎಲ್.ಆರ್.ಮಹದೇವಸ್ವಾಮಿ ಹೇಳಿದರು.

ಇದೇ ವೇಳೆ ಮಾತನಾಡಿದ ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ನಂದೀಶ್ ರೆಡ್ಡಿ, ರಾಜ್ಯ ಕಾಂಗ್ರೆಸ್ ಸರ್ಕಾರ ಜನ ವಿರೋಧಿ ನೀತಿ ಅನುಸರಿಸುತ್ತಿದ್ದು, ಕೆಲವು ತೀರ್ಮಾನಗಳಿಂದ ಜನರು ಬೇಸತ್ತಿದ್ದಾರೆ. ಈ ಹಿನ್ನೆಲೆ ರಾಜ್ಯದಲ್ಲಿ ಈಗಲೇ ವಿಧಾನಸಭಾ ಚುನಾವಣೆ ನಡೆದರೂ ಬಿಜೆಪಿ ಸ್ಪಷ್ಟ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದೆ ಎಂದು ಹೇಳಿದರು.

ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವು ಸಾಧಿಸಲು ಕಾರ್ಯಕರ್ತರ ಪಡೆಯ ಶ್ರಮ ಮುಖ್ಯವಾಗಿದೆ. ಇದೇ ರೀತಿ ಮುಂದೆಯೂ ಪಕ್ಷ ಸಂಘಟನೆಗೆ ಒತ್ತು ನೀಡಬೇಕು ಎಂದು ಮನವಿ ಮಾಡಿದರು.

ಕೆಆರ್‌ಎಸ್‌ನಿಂದ ನದಿಗೆ ನೀರು ಬಿಡುಗಡೆ

ನಗುವನ ತೋಟದ ಬಳಿ ತಡೆಗೋಡೆ ಕುಸಿತ



ಕೆಆರ್‌ಎಸ್‌ನ ನಗುವನ ತೋಟದ ಬಳಿ ತಡೆಗೋಡೆ ಕುಸಿದಿರುವುದು.

ಶ್ರೀರಂಗಪಟ್ಟಣ, ಜು.23– ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ವಿಶ್ವ ವಿಖ್ಯಾತ ಕೆಆರ್‌ಎಸ್ ಜಲಾಶಯದಿಂದ ನದಿಗೆ ಸಾವಿರಾರು ಕ್ಯೂಸೆಕ್ ನೀರು ಹರಿಸಲಾಗುತ್ತಿದ್ದು, ನಗುವನ ತೋಟದ ಬಳಿ ತಡೆಗೋಡೆ ಕುಸಿದಿದೆ.


ಕೆಆರ್‌ಎಸ್ ಜಲಾಶಯದ ಗೇಟ್ ತೆರೆದು ನೀರು ಬಿಟ್ಟ ಕೆಲ ತಾಸಿನಲ್ಲೇ ನಗುವನ ತೋಟದ ಬಳಿ ತಡೆಗೋಡೆ ಕುಸಿದಿದೆ. ಕಳೆದ 6 ತಿಂಗಳ ಹಿಂದೆ ತಡೆಗೋಡೆಯನ್ನು ನವೀಕರಣಗೊಳಿಸಲಾಗಿತ್ತು. ಅಲ್ಲದೇ ಕೋಟ್ಯಾಂತರ ರೂ. ವೆಚ್ಚದಲ್ಲಿ ಜಲಾಶಯದಲ್ಲಿ ದುರಸ್ತಿ ಕಾರ್ಯ ಕೈಗೊಳ್ಳಲಾಗಿತ್ತು. ಆದರೆ ಇದೀಗ ಕುಸಿದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ. ಕಳಪೆ ಕಾಮಗಾರಿ ಹಾಗೂ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳ ನಿರ್ಲಕ್ಷ್ಯದಿಂದ ಈ ಘಟನೆ ನಡೆದಿದೆ ಎಂದು ಆರೋಪಿಸಿರುವ ಸಾರ್ವಜನಿಕರು ತಡೆಗೋಡೆ ಕುಸಿದ ವೇಳೆ ನೀರು ನಿಲ್ಲಿಸದಿದ್ದರೇ ಭಾಗಶಃ ಕೊಚ್ಚಿ ಹೋಗುತ್ತಿತ್ತು ಎಂದು ಸ್ಥಳೀಯರು ತಿಳಿಸಿದ್ದಾರೆ. ಕೆಲ ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಕಾವೇರಿ ಮಾತೆಗೆ ಬಾಗಿನ ಅರ್ಪಿಸಲು ಕೆಆರ್‌ಎಸ್ ಜಲಾಶಯಕ್ಕೆ ಆಗಮಿಸುತ್ತಿರುವ ವೇಳೆ ತಡೆಗೋಡೆ ಕುಸಿದಿರುವುದು ಸಾರ್ವಜನಿಕ ವಲಯದಲ್ಲಿ ಟೀಕೆಗೆ ಕಾರಣವಾಗಿದೆ.

ರೈತ ಮುಖಂಡ ಕೆ.ಎಸ್.ನಂಜುಂಡೇಗೌಡ ಮಾತನಾಡಿ, ಅಧಿಕಾರಿಗಳು ಅಣೆಕಟ್ಟೆಯನ್ನು ಸರಿಯಾಗಿ ನಿರ್ವಹಣೆ ಮಾಡದಿದ್ದರೆ ಈ ರೀತಿ ಅವಘಡಗಳು ಜರುಗುತ್ತವೆ. ಈಗ ಸಂಭವಿಸಿರುವ ಅನಾಹುತ ಮುಂದಿನ ದಿನಗಳಲ್ಲಿ ಅಣೆಕಟ್ಟೆಗೆ ಅಪಾಯ ತಂದೊಡ್ಡಲಿದೆ. ಹೀಗಾಗಿ ಕೃಷ್ಣರಾಜಸಾಗರ ಜಲಾಶಯದ ಭದ್ರತೆ ಸೂಕ್ತ ಕ್ರಮ ಕೈಗೊಳ್ಳುವ ಮೂಲಕ ಜಲಾಶಯ ಸದೃಢಗೊಳಿಸಬೇಕು. ಸರ್ಕಾರ ಬಂಡವಾಳಶಾಹಿಗಳೊಂದಿಗೆ ಸೇರಿ ಕೆಆರ್‌ಎಸ್ ಬೃಂದಾವನವನ್ನು ಅಭಿವೃದ್ಧಿ ಪಡಿಸುವ ಬದಲು ಜಲಾಶಯದ ಭದ್ರತೆಗೆ ಕ್ರಮ ಕೈಗೊಳ್ಳಬೇಕು. ಅಲ್ಲದೇ ಅಧಿಕಾರಿಗಳು ಕುಸಿದಿರುವ ತಡೆಗೋಡೆಯನ್ನು ತಕ್ಷಣ ದುರಸ್ತಿಗೊಳಿಸಬೇಕು ಎಂದು ಆಗ್ರಹಿಸಿದರು.

ಹಡಪದ ಅಪ್ಪಣ್ಣನವರ ಸಾಧನೆ ಅಪಾರ: ಡಾ.ರೋಹಿಣಿ

ಮಂಡ್ಯ, ಜು.23– 12ನೇ ಶತಮಾನದ ವಚನ ಚಳವಳಿ ಮತ್ತು ಸಾಮಾಜಿಕ ಕ್ರಾಂತಿ ಹರಿಕಾರರಲ್ಲಿ ಹಡಪದ ಅಪ್ಪಣ್ಣ ಪ್ರಮುಖರು. ತಮ್ಮ ವಚನಗಳ ಮೂಲಕ ಅಂದಿನ ಸಮಾಜದಲ್ಲಿದ್ದ ಜಾತಿ ವ್ಯವಸ್ಥೆ ಹೋಗಲಾಡಿಸುವಲ್ಲಿ ಅವರ ಸಾಧನೆ ಅಪಾರ ಎಂದು ಜಿಲ್ಲಾಧಿಕಾರಿ ಕಚೇರಿ ಸಹಾಯಕಿ ಡಾ.ರೋಹಿಣಿ ತಿಳಿಸಿದರು.

ನಗರದ ಗಾಂಧಿ ಭವನದಲ್ಲಿ ನಡೆದ ಶ್ರೀಶಿವಶರಣ ಹಡಪದ ಅಪ್ಪಣ್ಣ ಜಯಂತಿ ಉದ್ಘಾಟಿಸಿ, ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ಹಡಪದ ಅಪ್ಪಣ್ಣನವರು ಭಕ್ತಿ ಭಂಡಾರಿ ಬಸವಣ್ಣನವರ ಅನುಯಾಯಿಯಾಗಿದ್ದವರು. ಅಂದಿನ ಕಾಲದಲ್ಲಿ 250ಕ್ಕಿಂತ ಹೆಚ್ಚು ವಚನ ಸಾಹಿತ್ಯ ರಚಿಸಿದ್ದ ಅವರು ಬಸವಣ್ಣನವರ ಸ್ಥಾಪಿಸಿದ್ದ ಅನುಭವ ಮಂಟಪದಲ್ಲಿ ಪದಾಧಿಕಾರಿಗಳಾಗಿ ಸೇವೆ ಸಲ್ಲಿಸಿ ಅಂದಿನ ಸಮಾಜದಲ್ಲಿದ್ದ ಮೂಢ ನಂಬಿಕೆಗಳನ್ನು ಹೋಗಲಾಡಿಸುವಲ್ಲಿ ಶ್ರಮಿಸಿದ್ದಾರೆ ಎಂದರು.



ಹಡಪದ ಅಪ್ಪಣ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಡಾ. ರೋಹಿಣಿ.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಉದಯ ಕುಮಾರ್, ಇಂದು ಕಾಯಕ ಯೋಗಿ ಬಸವಣ್ಣನವರ ಬಾಲ್ಯದ ಒಡನಾಡಿ ಹಾಗೂ ಅಂದಿನ ಸಮಾಜದ ಅಂಕು ಡೊಂಕುಗಳನ್ನು ತಿದ್ದಿದ ಶ್ರೀಹಡಪದ ಅಪ್ಪಣ್ಣನವರ ಜಯಂತಿ ಆಚರಿಸುತ್ತಿದ್ದೇವೆ. ಜಿಲ್ಲಾಡಳಿತ ಎಲ್ಲಾ ಮಹನೀಯರ ಜಯಂತಿ ಆಚರಿಸುತ್ತಿರುವುದು ಸಂತೋಷದ ವಿಷಯ ಎಂದರು.

ಅಪ್ಪಣ್ಣನವರು ಬಸವಣ್ಣನವರು ಸ್ಥಾಪಿಸಿದ್ದ ಅನುಭವ ಮಂಟಪದಲ್ಲಿ ಪ್ರಧಾನ ಕಾರ್ಯದರ್ಶಿಯಾಗಿ ದಕ್ಷತೆ ಹಾಗೂ ನಿಷ್ಠೆಯಿಂದ ಕಾರ್ಯ ನಿರ್ವಹಿಸುತ್ತಿದ್ದರು. ಅವರ ಈ ನಿಷ್ಠೆ, ಕೆಲಸದಲ್ಲಿ ದಕ್ಷತೆ ಹಾಗೂ ಅವರ ನಡೆ ನುಡಿಗಳನ್ನು ಇಂದಿನ ಸಮಾಜ ಅನುಸರಿಸಬೇಕು ಎಂದರು.

ಶ್ರೀರಂಗಪಟ್ಟಣ ತರಬೇತಿ ಸಂಪನ್ಮೂಲ ವ್ಯಕ್ತಿ ಗೀತಾ ಹರೀಶ್ ಮಾತನಾಡಿ, ಹಡಪದ ಅಪ್ಪಣ್ಣನವರು ಅಂದಿನ ಸಮಾಜದಲ್ಲಿದ್ದ ಜಾತಿ ವ್ಯವಸ್ಥೆ, ಮೂಢನಂಬಿಕೆ, ಕಂದಾಚಾರ, ಅಸ್ಪೃಶ್ಯತೆ ವಿರುದ್ಧ ತಮ್ಮ ವಚನಗಳ ಮೂಲಕ ಹೋರಾಡಿದವರು. ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ ತರಲು ಶ್ರಮಿಸಿರುವುದು ಅವಿಸ್ಮರಣೀಯ ಎಂದರು.

ಅಪ್ಪಣ್ಣನವರು ಬಾಲ್ಯದಿಂದಲೇ ಅಧ್ಯಾತ್ಮದ ಕಡೆ ಒಲವನ್ನು ಹೊಂದಿದ್ದರು. ಅಪ್ಪಣ್ಣ 250 ವಚನಗಳನ್ನು ರಚನೆ ಮಾಡಿದ್ದು, ಬಸವಪ್ರಿಯ ಕೂಡಲ ಚೆನ್ನ ಬಸವಣ್ಣ ಎಂಬುದು ಅವರ ಅಂಕಿತ ನಾಮವಾಗಿದೆ. ಮೌಢ್ಯತೆ ನಾಶ ಮಾಡುವ ಹಾಗೂ ಅಜ್ಞಾನದಿಂದ ಸುಜ್ಞಾನದೆಡೆಗೆ ಕರೆದೊಯ್ಯುವಂತಹ ವಿಷಯಗಳನ್ನೊಳಗೊಂಡತೆ ಅವರ ವಚನಗಳಿವೆ ಎಂದರು.

ಇದೇ ವೇಳೆ 2024ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸಿದ ಸವಿತ ಸಮಾಜದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮುಖಂಡರಾದ ಎಲ್.ಸಂದೇಶ್, ರಾಜಣ್ಣ ಸೇರಿದಂತೆ ಇನ್ನಿತರರಿದ್ದರು.

ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿ ಪೂಜೆ

ಪಾಂಡವಪುರ, ಜು.23– ತಾಲೂಕಿನ ನೀಲನಹಳ್ಳಿ ಹಾಗೂ ಮೇಲುಕೋಟೆಯಲ್ಲಿ ಒಂದು ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಮಂಗಳವಾರ ಗುದ್ದಲಿಪೂಜೆ ನೆರವೇರಿಸಿದರು.

ತಾಲೂಕಿನ ನೀಲನಹಳ್ಳಿಯಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ಪರಿಶಿಷ್ಟ ಜಾತಿ ಕಾಲೋನಿಗೆ ಸಂಪರ್ಕಿಸುವ ರಸ್ತೆ, ಮೇಲುಕೋಟೆಯಲ್ಲಿ 50 ಲಕ್ಷ ರೂ. ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಶಾಸಕ ದರ್ಶನ್ ಮಾತನಾಡಿ, ನೀಲನಹಳ್ಳಿ, ಮೇಲುಕೋಟೆ ಗ್ರಾಮದಲ್ಲಿ ಪರಿಶಿಷ್ಟ ಕಾಲೋನಿಯ ರಸ್ತೆಗಳನ್ನು ಸಮಾಜ ಕಲ್ಯಾಣ ಇಲಾಖೆಯ 1 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲು ಭೂಮಿ ಪೂಜೆ ಮಾಡಲಾಗಿದ್ದು, ಗುತ್ತಿಗೆದಾರರು ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಸೂಚಿಸಿದರು. ಈ ವೇಳೆ ಮುಖಂಡರಾದ ಕೆ.ಎಸ್.ದಯಾನಂದ್, ಉದ್ಯಮಿ ಪರಮೇಶ್‌ಗೌಡ, ವಿಜೇಂದ್ರ, ಸಿ.ಆರ್. ರಮೇಶ್, ಕೋಕಿಲ ಜ್ಞಾನೇಶ್, ಕುಮಾರ್, ದೇವರಾಜು, ಯೋಗನರಸಿಂಹೇ ಗೌಡ, ಗ್ರಾಪಂ ಅಧ್ಯಕ್ಷೆ ಮಣಿಮುರುಗನ್, ಸದಸ್ಯ ಜಯರಾಮೇಗೌಡ, ಪಿಡಿಓ ರಾಜೇಶ್ವರ ಸೇರಿದಂತೆ ಹಲವರಿದ್ದರು.



ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಗುದ್ದಲಿ ಪೂಜೆ ನೆರವೇರಿಸಿದರು.

ಶತಾಯುಷಿ ದೇವೇಗೌಡ ನಿಧನ



ಭಾರತೀನಗರ, ಜು.23– ಭಾರತೀನಗರದ ಅನುಪಮ ಸ್ಟೋರ್ ಮಾಲೀಕ ಶತಾಯುಷಿ ದೇವೇಗೌಡ(102) ಮಂಗಳವಾರ ಮಧ್ಯಾಹ್ನ ನಿಧನರಾದರು. ಮೃತರು ಮೂವರು ಪುತ್ರರು, ಓರ್ವ ಪುತ್ರಿ, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಬೂಹಳ್ಳಿಯ ರುದ್ರಭೂಮಿಯಲ್ಲಿ ಬುಧವಾರ ಬೆಳಗ್ಗೆ 11 ಗಂಟೆಗೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಕೊಲೆಗೆ ಯತ್ನಿಸಿದ್ದ ಇಬ್ಬರಿಗೆ ಐದು ವರ್ಷ ಜೈಲು

ಕೆ.ಆರ್.ಪೇಟೆ, ಜು.23– ಚಾಕುವಿನಿಂದ ಇರಿದು ವ್ಯಕ್ತಿ ಕೊಲೆಗೆ ಯತ್ನಿಸಿದ ಇಬ್ಬರಿಗೆ ಶ್ರೀರಂಗಪಟ್ಟಣ 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ 5 ವರ್ಷ ಜೈಲು ಶಿಕ್ಷೆ ಹಾಗೂ ತಲಾ 50 ಸಾವಿರ ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ. ಪಾಂಡವಪುರ ತಾಲೂಕಿನ ಕೆನ್ನಾಳು ಗ್ರಾಮದ ಸ್ವಾಮಿ ಹಾಗೂ ಗಿರೀಶ್ ಶಿಕ್ಷೆಗೊಳಗಾದವರು.

ವಿವರ: 2017, ಜೂ.3ರಂದು ಪಾಂಡವಪುರ ತಾಲೂಕಿನ ವಿಶ್ವೇಶ್ವರ ನಗರದ ಅರಳಿಕಟ್ಟೆ ಬಳಿ ಜಮೀನಿನ ವ್ಯಾಜ್ಯಕ್ಕೆ ಸಂಬಂಧಪಟ್ಟ ದ್ವೇಷದ ಹಿನ್ನೆಲೆಯಲ್ಲಿ ಕೆನ್ನಾಳು ಗ್ರಾಮದ ನಿವಾಸಿ ಚಂದ್ರಶೇಖರ್ ಅವರಿಗೆ ಅದೇ ಗ್ರಾಮದ ಸ್ವಾಮಿ ಹಾಗೂ ಗಿರೀಶ ಚಾಕುವಿನಿಂದ ಇರಿದು ಪರಾರಿಯಾಗಿದ್ದರು. ಈ ಸಂಬಂಧ ಪಾಂಡವಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಅಂದಿನ ಎಸ್‌ಐ ಬಿ.ಸುಮಾರಾಣಿ ಸದರಿ ಪ್ರಕರಣದ ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಸದರಿ ಪ್ರಕರಣದ ವಾದ ಪ್ರತಿವಾದ ಆಲಿಸಿದ ಶ್ರೀರಂಗಪಟ್ಟಣದ 3ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಟಿ. ಗೋಪಾಲ ಕೃಷ್ಣ ರೈ ಅವರು ಪ್ರಕರಣದ ವಿಚಾರಣೆ ನಡೆಸಿ ಇಬ್ಬರಿಗೂ 5 ವರ್ಷ ಜೈಲು ಶಿಕ್ಷೆ ಹಾಗೂ ತಲಾ 50 ಸಾವಿರ ರೂ. ದಂಡ ವಿಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಪ್ರಕರಣದಲ್ಲಿ ಸರ್ಕಾರಿ ಅಭಿಯೋಜಕ ಪ್ರಫುಲ್ಲಾ.ಎಂ.ಕೆ ಅವರು ಪಿರ್ಯಾದಿ ಚಂದ್ರಶೇಖರ್ ಪರ ವಾದ ಮಂಡಿಸಿದ್ದರು.

ಸದನದಲ್ಲಿ ಕೆ.ಆರ್.ಪೇಟೆ ಹೇಮಾವತಿ ಬಡಾವಣೆ ನಿವೇಶನ ಸಮಸ್ಯೆ ಚರ್ಚಿಸಿದ ಶಾಸಕ ಹೆಚ್‌ಟಿಎಂ



ಕೆ.ಆರ್.ಪೇಟೆ, ಜು.23– ಪಟ್ಟಣದ ಹೇಮಾವತಿ ಬಡಾವಣೆಯ 582 ನಿವೇಶನದಾರರ ಸಂಕಷ್ಟ ಪರಿಹಾರಕ್ಕೆ ಮುಂದಾಗಿರುವ ಶಾಸಕ ಹೆಚ್.ಟಿ. ಮಂಜು ರಾಜ್ಯ ವಿಧಾನಸಭೆಯಲ್ಲಿ ವಿಷಯ ಪ್ರಸ್ತಾಪಿಸಿ ಸಮಸ್ಯೆಯನ್ನು ಎಳೆ ಎಳೆಯಾಗಿ ಸದನದ ಮುಂದಿಟ್ಟರು.

ಕೆ.ಆರ್.ಪೇಟೆ ಪುರಸಭೆ 1977, ಜೂ.23ರಲ್ಲಿ 51.30 ಎಕರೆ ಭೂಮಿ ಸ್ವಾಧೀನಪಡಿಸಿಕೊಂಡು 1984, ಜೂ.16ರಂದು ವಸತಿ ವಿನ್ಯಾಸ ನಕ್ಷೆ ಸಿದ್ದಪಡಿಸಿ ಅನುಮೋದನೆ ಪಡೆದುಕೊಂಡಿದೆ. 1985 ರಿಂದ 2001 ರವರೆಗೆ ವಿವಿಧ ಅವಧಿಗಳಲ್ಲಿ ಅಧ್ಯಕ್ಷರಾಗಿದ್ದವರು ಮತ್ತು ಅಧಿಕಾರಿಗಳು ಮಾಡಿದ ಸಣ್ಣಪುಟ್ಟ ವ್ಯತ್ಯಾಸಗಳಿಂದ ನಿವೇಶನ ಪಡೆದವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ನಿವೇಶನ ಹಂಚಿಕೆ ಸಂದರ್ಭ ಪುರಸಭೆಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆದು ನಿವೇಶನದಾರರಿಂದ ಕಿಮ್ಮತ್ತು ಹಣ ಕಟ್ಟಿಸಿಕೊಂಡು ಖಾತೆ ಮಾಡಿಕೊಡಲಾಗಿದೆ. ಬಡಾವಣೆಯ ಶೇ.90ರಷ್ಟು ಜನ ಈಗಾಗಲೇ ಇಲ್ಲಿ ಮನೆ ಕಟ್ಟಿಕೊಂಡು ವಾಸಿಸುತ್ತಿದ್ದಾರೆ. ಕೆಲವರು ಮಾರಾಟ ಮಾಡಿದ್ದು ಎರಡ್ಮೂರು ಕೈ ಬದಲಾವಣೆಯಾಗಿದೆ. ಗ್ರಾಮೀಣ ರೈತರು ತಮ್ಮ ಹೊಲ ಮನೆಗಳನ್ನು ಮಾರಿ ತಮ್ಮ ಜೀವಿತಾವಧಿ ದುಡಿಮೆಯಿಂದ ಇಲ್ಲಿ ನಿವೇಶನ ಪಡೆದುಕೊಂಡಿದ್ದಾರೆ. ಈಗ ಇವರು ಎಲ್ಲಿ ಹೋಗಬೇಕು ಎಂದು ಸದನದಲ್ಲಿ ಪ್ರಶ್ನಿಸಿದ ಶಾಸಕ ಹೆಚ್.ಟಿ.ಮಂಜು ಸಕ್ರಮವಾಗದೆ ಉಳಿದಿರುವ 582 ನಿವೇಶನಗಳನ್ನು ಸಕ್ರಮಗೊಳಿಸುವಂತೆ ಆಗ್ರಹಿಸಿದರು.

ಶಾಸಕರ ಪ್ರಶ್ನೆಗೆ ಉತ್ತರಿಸಿದ ರಾಜ್ಯ ಪೌರಾಡಳಿತ ಸಚಿವ ರಹೀಂಖಾನ್ ಇದು 40 ವರ್ಷಗಳ ಸಮಸ್ಯೆ. ಈ ಬಗ್ಗೆ ಲೋಕಾಯುಕ್ತ ತನಿಖಾ ವರದಿ ಬಂದಿದೆ. ಇದನ್ನು ವಿಶೇಷ ಪ್ರಕರಣ ಎಂದು ಪರಿಗಣಿಸಿ ಶಾಸಕ ಹೆಚ್.ಟಿ.ಮಂಜು ಅವರೊಂದಿಗೆ ಮಾತನಾಡಿ ಅಂತಿಮಗೊಳಿಸುವ ಭರವಸೆ ನೀಡಿದರು.

ಏನಿದು ಸಮಸ್ಯೆ: ಪಟ್ಟಣದ ಅಭಿವೃದ್ಧಿ ಹಿನ್ನೆಲೆಯಲ್ಲಿ 1976–77ರಲ್ಲಿ ಇಲ್ಲಿನ ಪುರಸಭೆ 51.30 ಎಕರೆ ಭೂಮಿಯನ್ನು ಭೂ ಸ್ವಾಧೀನ ಪ್ರಕ್ರಿಯೆ ಮೂಲಕ ಪಡೆದು ನಿವೇಶನಗಳ ಹಂಚಿಕೆಗೆ ಯೋಜನೆ ರೂಪಿಸಿತ್ತು. 1984ರಲ್ಲಿ ಟೌನ್ ಪ್ಲಾನ್ ನಕ್ಷೆ ಸಿದ್ಧಪಡಿಸಿ 1276 ನಿವೇಶನಗಳನ್ನು ರಚಿಸಿ ಕಾಲ ಕಾಲಕ್ಕೆ ಪುರಸಭೆ ಅಧ್ಯಕ್ಷರಾದವರು ನಿವೇಶನಗಳ ಹಂಚಿಕೆ ಮಾಡಿದ್ದರು. ಸದರಿ ಹೇಮಾವತಿ ಬಡಾವಣೆ ನಿವೇಶನಗಳ ಹಂಚಿಕೆ ನಿಯಮಾನುಸಾರ ನಡೆದಿಲ್ಲ ಎಂದು 2003ರಲ್ಲಿ ಪುರಸಭಾ ಸದಸ್ಯರಾಗಿದ್ದ ಕೆ.ಸಿ.ಮಂಜುನಾಥ್ ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಲೋಕಾಯುಕ್ತ ತನಿಖಾ ವರದಿ ನಂತರ ಈ ಹಿಂದಿನ ಬಿಜೆಪಿ ಸರ್ಕಾರದಲ್ಲಿ ಸಚಿವ ಸಂಪುಟ ಸಭೆಯಲ್ಲಿ ವಿಷಯವನ್ನಿಟ್ಟು ತಾಲೂಕು ಬಿಜೆಪಿ ಮುಖಂಡ ದಿ.ಕೆ.ಎನ್. ಕೆಂಗೇಗೌಡರ ಅವಧಿಯಲ್ಲಿ ಹಂಚಿಕೆಯಾಗಿದ್ದ 515 ನಿವೇಶನಗಳು ಸೇರಿ ಒಟ್ಟು 694 ನಿವೇಶನಗಳನ್ನು ವಿಶಾಲ ತಳಹದಿ ಮೇಲೆ ಸಕ್ರಮಗೊಳಿಸಿ ಕಾಂಗ್ರೆಸ್ ಪಕ್ಷದ ಅಧ್ಯಕ್ಷರ ಅವಧಿಯಲ್ಲಿ ಹಂಚಿಕೆಯಾಗಿದ್ದ ಉಳಿದ 582 ನಿವೇಶನಗಳ ರದ್ಧತಿಯ ಬಗ್ಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿತ್ತು.

ಅಕ್ರಮ ನಿವೇಶನಗಳನ್ನು ರದ್ದುಪಡಿಸುವ ಮುನ್ನ ಜಿಲ್ಲಾಧಿಕಾರಿಗಳು ನಿವೇಶನದಾರರಿಗೆ ನೋಟಿಸ್ ನೀಡಿ ಅವರಿಂದ ಬರುವ ಉತ್ತರ ಪರಿಶೀಲಿಸಿ ಆನಂತರ ರದ್ಧತಿಯ ಬಗ್ಗೆ ಕ್ರಮ ವಹಿಸುವಂತೆ ರಾಜ್ಯ ಸರ್ಕಾರ ನಿರ್ದೇಶಿಸಿದ್ದರೂ, ಇದುವರೆಗೆ ಜಿಲ್ಲಾಧಿಕಾರಿಗಳಿಂದ ನಿವೇಶನ ರದ್ಧತಿ ಬಗ್ಗೆ ಯಾರಿಗೂ ನೋಟಿಸ್ ನೀಡಿಲ್ಲ.

ಒಂದನೇ ಪುಟದಿಂದ

ಮಹಿಳೆಯರಿಗೆ ಮಹಾಶಕ್ತಿ

ಮತ್ತು ಪೋಷಣಾ 2.0, ಮಿಷನ್ ವಾತ್ಸಲ್ಯ, ಮಿಷನ್ ಶಕ್ತಿ, ಪೌಷ್ಠಿಕತೆ, ಮಕ್ಕಳ ರಕ್ಷಣೆ ಮತ್ತು ಮಹಿಳಾ ಸಬಲೀಕರಣವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಮಿಷನ್ ವಾತ್ಸಲ್ಯ ಯೋಜನೆಗೆ 772 ಕೋಟಿ, ಸಂಬಲ್ ಯೋಜನೆಯಡಿ 'ಬೇಟಿ ಬಚಾವೋ ಬೇಟಿ ಪಡಾವೋ' ಮತ್ತು ಮಹಿಳಾ ಸಮಕ್ಷತೆಗಾಗಿ ಒನ್ ಸ್ಟಾಪ್ ಸೆಂಟರ್‌ಗಳಂತಹ ಯೋಜನೆಗಳಿಗೆ 929 ಕೋಟಿ ರೂ. ಘೋಷಿಸಲಾಗಿದೆ. ಮಿಷನ್ ಶಕ್ತಿ ಇನ್ನಿತರ ಯೋಜನೆಗಳಿಗೆ 3,145 ಕೋಟಿ ರೂ. ಮೀಸಲಿಡಲಾಗಿದೆ.

ದೇಶದಲ್ಲಿ ಚಿನ್ನದ ಬೆಲೆ ಗಗನಕ್ಕೇರುತ್ತಿರುವುದರಿಂದ ಅದನ್ನು ನಿಯಂತ್ರಣಕ್ಕೆ ತರುವ ನಿಟ್ಟಿನಲ್ಲಿ ಚಿನ್ನ ಮತ್ತು ಬೆಳ್ಳಿ ಕಸ್ಟಮ್ಸ್ ಶುಲ್ಕವನ್ನು ಶೇ.6ರಷ್ಟು ಮತ್ತು ಪ್ಲಾಟಿನಂ ಮೇಲೆ ಶೇ.6.4 ರಷ್ಟು ಕಡಿತಗೊಳಿಸಲು ನಿರ್ಧರಿಸಲಾಗಿದೆ. ಜೊತೆಗೆ ರೆಸಿಸ್ಟರ್‌ಗಳು ಹಾಗೂ ಕನೆಕ್ಟರ್‌ಗಳ ಉತ್ಪಾದನೆಗೆ ಬಳಸಲಾಗುವ ಆಕ್ಸಿಜನ್ ಮತ್ತು ಮುಕ್ತ ತಾಮ್ರದ ಮೇಲಿನ ಮೂಲ ಶುಲ್ಕವನ್ನು ತೆರವುಗೊಳಿಸಲಾಗಿದೆ. ಎಲೆಕ್ಟ್ರಾನಿಕ್ ವಲಯಕ್ಕೆ ಬಜೆಟ್‌ನಲ್ಲಿ ಪ್ರೋತ್ಸಾಹ ನೀಡಲಾಗಿದೆ. ಮೊಬೈಲ್ ಫೋನ್ ಬಿಡಿ ಭಾಗಗಳ ಆಮದು ಮೇಲಿನ ಕಸ್ಟಂ ಶುಲ್ಕವನ್ನು ಶೇ.15ರಷ್ಟು ಇಳಿಸಲಾಗಿದೆ.

ದೇಶೀಯವಾಗಿ ಉತ್ಪನ್ನವಾಗುವ ಮೊಬೈಲ್‌ಗಳ ಮೇಲಿನ ಉತ್ಪಾದನಾ ವೆಚ್ಚವನ್ನು ಗಣನೀಯವಾಗಿ ತಗ್ಗಿಸುವ ಪ್ರಯತ್ನ ಮಾಡಲಾಗಿದೆ. ಮೇಕ್ ಇನ್ ಇಂಡಿಯಾ ಅಡಿ ತಯಾರಾಗುವ ಮೊಬೈಲ್‌ಗಳ ಬೆಲೆ ಕಡಿಮೆಯಾಗುವುದು ಮಾತ್ರವಲ್ಲದೇ ಟ್ಯಾಬ್‌ಗಳ ಬೆಲೆಯೂ ಇಳಿಮುಖವಾಗಲಿದೆ.

ನವ ಉದ್ಯೋಗಿಗೆ ಕೊಡುಗೆ: ಯುವ ಉದ್ಯೋಗಿಗಳಿಗೆ ಬಂಪರ್ ಕೊಡುಗೆ ನೀಡಲಾಗಿದೆ. ಮೊದಲ ಬಾರಿಗೆ ಕೆಲಸಕ್ಕೆ ಸೇರುವ ಯುವ ಉದ್ಯೋಗಿಗಳಿಗೆ ಅವರ ಕಂಪನಿ ವೇತನದ ಜೊತೆಗೆ ಮೊದಲ ತಿಂಗಳ ಸಂಬಳವನ್ನು ಸರ್ಕಾರ ಆ ಉದ್ಯೋಗಿಗೆ ನೀಡಲಿದೆ. ಇಂಟರ್‌ಶಿಪ್‌ಗಾಗಿ ವಿಶೇಷ ಯೋಜನೆ ಜಾರಿಗೊಳಿಸಲಾಗಿದ್ದು, ಅಗ್ರಗಣ್ಯ 50 ಕಂಪನಿಗಳಲ್ಲಿ ಇಂಟರ್‌ಶಿಪ್ ತರಬೇತಿ ಪಡೆಯುವವರಿಗೆ ಭತ್ಯೆಯಾಗಿ 5 ಸಾವಿರ ರೂ. ಹಾಗೂ ಒಂದು ಬಾರಿ ಪ್ರೋತ್ಸಾಹ ಧನವಾಗಿ 6 ಸಾವಿರ ರೂ. ನೀಡಲಾಗುವುದು ಎಂದು ವಿತ್ತ ಸಚಿವೆ ಹೇಳಿದರು.

ಕೌಶಲ್ಯ ಸಾಲ: ಮಾದರಿ ಕೌಶಲ್ಯ ಸಾಲ ಯೋಜನೆಯಡಿ ಸರ್ಕಾರದ ಪ್ರಚಾರ ನಿಧಿಯಿಂದ ಖಾತರಿಯೊಂದಿಗೆ 7.5 ಲಕ್ಷದವರೆಗೆ ಸಾಲ ಒದಗಿಸಲಾಗುವುದು. ಇದರಿಂದ ಪ್ರತೀ ವರ್ಷ 25 ಸಾವಿರ ವಿದ್ಯಾರ್ಥಿಗಳಿಗೆ ನೆರವಾಗುವ ನಿರೀಕ್ಷೆ ಇದೆ.

ಕ್ಯಾನ್ಸರ್ ಔಷಧಿಗೆ ರಿಯಾಯ್ತಿ: ಕ್ಯಾನ್ಸರ್ ಔಷಧಗಳಿಗೆ ವಿನಾಯಿತಿ ನೀಡಲು ಮುಂದಾಗಿರುವ ಕೇಂದ್ರ ಸರ್ಕಾರ, ಕ್ಯಾನ್ಸರ್ ಚಿಕಿತ್ಸೆಯ 3 ಔಷಧಗಳಿಗೆ ಸುಂಕ ವಿನಾಯಿತಿ ನೀಡಲಾಗಿದೆ. ಇದು ಕ್ಯಾನ್ಸರ್ ಚಿಕಿತ್ಸೆಗೆ ಒಳಪಡುವ ರೋಗಿಗಳ ಮೇಲಿನ ಹೊರೆಯನ್ನು ತಗ್ಗಿಸಲಿದ್ದು, ಆರೋಗ್ಯ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಉತ್ತಮ ಬೆಳವಣಿಗೆಯಾಗಿದೆ.

ಸೌರ ಶಕ್ತಿ ಬಳಕೆಯನ್ನು ಉತ್ತೇಜಿಸುವ ಸಲುವಾಗಿ ಪಿಎಂ ಸೂರ್ಯಾ ಘರ್ ಉಚಿತ ವಿದ್ಯುತ್ ಯೋಜನೆಯನ್ನು ಪರಿಚಯಿಸಲಾಗಿದ್ದು ದೇಶದ 1 ಕೋಟಿಗೂ ಹೆಚ್ಚಿನ ಮನೆಗಳಿಗೆ ಪ್ರತೀ ತಿಂಗಳು 300 ಯೂನಿಟ್ ವಿದ್ಯುತ್ ಉಚಿತವಾಗಿ ಸಿಗುವಂತೆ ಹಮ್ಮಿಕೊಂಡಿರುವ ಯೋಜನೆಗೆ ಪ್ರಾರಂಭಿಕ ಹಂತದಲ್ಲಿ ಉತ್ತಮ ಪ್ರತಿಕ್ರಿಯೆ ದೊರೆತಿರುವುದರಿಂದ ಈ ಯೋಜನೆಗೆ ಮತ್ತಷ್ಟು ಬಲ ತುಂಬಲು ನಿರ್ಧರಿಸಲಾಗಿದೆ.

ಹೊಸ ತೆರಿಗೆ ಪದ್ಧತಿಗೆ ಒಂದಷ್ಟು ವಿನಾಯಿತಿ ನೀಡಿರುವ ವಿತ್ತ ಸಚಿವೆ, 50 ಸಾವಿರದವರೆಗೆ ಇದ್ದ ಸ್ಟ್ಯಾಂಡರ್ಡ್ ಡಿಡಕ್ಷನ್ ಅನ್ನು 50 ಸಾವಿರ ರೂ.ಗಳಿಂದ 75 ಸಾವಿರ ರೂ.ಗಳಿಗೆ ಏರಿಕೆ ಮಾಡಿದ್ದಾರೆ. ಸ್ಲ್ಯಾಬ್‌ಗಳನ್ನು ಒಂದಷ್ಟು ಬದಲಾವಣೆ ಮಾಡಿದ್ದು, ಆದಾಯ ತೆರಿಗೆ ಪಾವತಿದಾರರಿಗೆ 17500 ರೂ. ಲಾಭ ಆಗಲಿದೆ ಎಂದು ಅವರು ಹೇಳಿದ್ದಾರೆ.

ಹೊಸ ತೆರಿಗೆ ಸ್ಲ್ಯಾಬ್‌ನಂತೆ 3 ಲಕ್ಷದವರೆಗಿನ ಆದಾಯಕ್ಕೆ ಯಾವುದೇ ತೆರಿಗೆ ಇಲ್ಲ. 3 ಲಕ್ಷದಿಂದ 7 ಲಕ್ಷದವರೆಗಿನ ಆದಾಯಕ್ಕೆ ಶೇ.5, 7 ಲಕ್ಷದಿಂದ 10 ಲಕ್ಷದವರೆಗೆ ಶೇ.10, 10 ಲಕ್ಷದಿಂದ 12 ಲಕ್ಷದವರೆಗೆ ಶೇ.15, 12 ಲಕ್ಷದಿಂದ 15 ಲಕ್ಷದವರೆಗೆ ಶೇ.20, 15 ಲಕ್ಷಕ್ಕಿಂತ ಮೇಲ್ಪಟ್ಟ ಆದಾಯಕ್ಕೆ ಶೇ.30ರಷ್ಟು ತೆರಿಗೆ ವಿಧಿಸಲಾಗಿದೆ. ಟಿಡಿಎಸ್ ಮರುಪಾವತಿ ವಿಳಂಬವಾಗುವುದನ್ನು ತಡೆಯಲು ಕ್ರಮ ಕೈಗೊಳ್ಳಲಾಗಿದೆ. ಇ–ಕಾಮರ್ಸ್ ಮೇಲಿನ ತೆರಿಗೆಯನ್ನು ಇಳಿಸಲು ತೀರ್ಮಾನಿಸಲಾಗಿದೆ. ಆದರೆ ಮ್ಯೂಚುವಲ್ ಫಂಡ್ ಮೇಲಿನ ಹೂಡಿಕೆಗೆ ತೆರಿಗೆ ವಿನಾಯಿತಿ ಇರುವುದಿಲ್ಲ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಅದೇ ವೇಳೆ ಜಿಎಸ್‌ಟಿಯನ್ನು ಇನ್ನಷ್ಟು ಸರಳಗೊಳಿಸಲು ಸರ್ಕಾರ ತೀರ್ಮಾನಿಸಿದೆ ಎಂದು ಅವರು ಹೇಳಿದ್ದಾರೆ.

ದೇಶದ ಮಿಲ್ಟ್ರಿ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಈ ಬಜೆಟ್‌ನಲ್ಲಿ ರಕ್ಷಣಾ ಇಲಾಖೆಗೆ 6.21 ಲಕ್ಷ ಕೋಟಿ ರೂ. ಘೋಷಿಸಲಾಗಿದೆ. ಅಮೃತಸರ–ಕೊಲ್ಕತ್ತಾ ಕೈಗಾರಿಕಾ ಕಾರಿಡಾರ್, ಅಮೃತಸರ–ಗಯಾ ಎಕನಾಮಿಕ್ ಕಾರಿಡಾರ್ ಸೇರಿದಂತೆ ದೇಶದಲ್ಲಿ 12 ಕೈಗಾರಿಕಾ ಕಾರಿಡಾರ್‌ಗಳನ್ನು ಸ್ಥಾಪಿಸುವುದಾಗಿ ಅವರು ಹೇಳಿದ್ದಾರೆ.

ಬಿಹಾರ್, ಆಂಧ್ರಕ್ಕೆ ಬಂಪರ್: ಮಿತ್ರ ಪಕ್ಷಗಳ ಆಡಳಿತ ನಡೆಸುವ ಬಿಹಾರ ಮತ್ತು ಆಂಧ್ರಗೆ ಬಜೆಟ್‌ನಲ್ಲಿ ಸಾವಿರಾರು ಕೋಟಿ ರೂ. ಒದಗಿಸಲಾಗಿದೆ. ಗುಜರಾತ್‌ನ ಸೇತುವೆ ಹಾಗೂ ಎಕ್ಸ್‌ಪ್ರೆಸ್ ವೇಗಳಿಗೆ 26 ಸಾವಿರ ಕೋಟಿ ರೂ., ಬಿಹಾರ ಪ್ರವಾಹ ಪರಿಸ್ಥಿತಿ ನಿಭಾಯಿಸಲು 11,500 ಕೋಟಿ ರೂ. ನೀಡಿರುವುದಲ್ಲದೆ, ಬಿಹಾರದ ಗಯಾ ಮತ್ತು ಬುದ್ಧಗಯಾ ದೇವಸ್ಥಾನಗಳನ್ನು ಕಾಶಿ ಮಾದರಿ ಅಭಿವೃದ್ಧಿಪಡಿಸಲಾಗುವುದು. ನಳಂದಾವನ್ನು ಪ್ರವಾಸಿ ಕೇಂದ್ರವಾಗಿ ಮಾಡಲಾಗುವುದು ಎಂದು ವಿತ್ತ ಸಚಿವರು ತಿಳಿಸಿದ್ದಾರೆ.

ಆಂಧ್ರಪ್ರದೇಶದಲ್ಲಿ 21,400 ಕೋಟಿ ಅನುದಾನದಲ್ಲಿ ಪಿರಪಂತಿಯಲ್ಲಿ 24 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಸ್ಥಾವರ, ಆಂಧ್ರಪ್ರದೇಶಕ್ಕೆ ವಿಶೇಷ ಆರ್ಥಿಕ ಸಹಾಯದಡಿ 15 ಸಾವಿರ ಕೋಟಿ ರೂ., ನೀಡಲಾಗಿದೆ.

75 ಸಾವಿರ ರೂ.ಗೆ ಏರಿಕೆ

ಒಂದು ಸ್ಲ್ಯಾಬ್ ಮಾಡಲಾಗಿದೆ. ಟಿಡಿಎಸ್ ನಿಯಮಗಳನ್ನೂ ಸುಲಭಗೊಳಿಸಲು ತೀರ್ಮಾನಿಸಲಾಗಿದೆ. ಟಿಡಿಎಸ್ ಮರುಪಾವತಿ ವಿಳಂಬವಾಗುವುದನ್ನೂ ತಡೆಯಲು ಕ್ರಮ ತೆಗೆದುಕೊಳ್ಳಲಾಗಿದೆ. ಇ–ಕಾಮರ್ಸ್ ಮೇಲಿನ ತೆರಿಗೆಯನ್ನೂ ಇಳಿಸಲು ತೀರ್ಮಾನಿಸಲಾಗಿದೆ. ಆದರೆ, ಮ್ಯೂಚುವಲ್ ಫಂಡ್ ಮೇಲಿನ ಹೂಡಿಕೆಗೆ ತೆರಿಗೆ ವಿನಾಯಿತಿ ಇರುವುದಿಲ್ಲ ಎಂಬುದಾಗಿ ನಿರ್ಮಲಾ ಸೀತಾರಾಮನ್ ತಿಳಿಸಿದರು.

ಕಸ್ಟಮ್ಸ್ ತೆರಿಗೆ ಇಳಿಕೆ: ಜಿಎಸ್‌ಟಿಯು ಬಡವರ ಮೇಲಿನ ತೆರಿಗೆ ಹೊರೆಯನ್ನು ಇಳಿಸಿದೆ. ಜಿಎಸ್‌ಟಿಯನ್ನು ಇನ್ನಷ್ಟು ಸರಳಗೊಳಿಸಲು ಕೇಂದ್ರ ಸರ್ಕಾರ ತಿಳಿಸಿದೆ. ಕಸ್ಟಮ್ಸ್ ಸುಂಕವನ್ನು ಇದಕ್ಕೂ ಮೊದಲು ಇಳಿಸಲಾಗಿದೆ. ಇನ್ನಷ್ಟು ಕಸ್ಟಮ್ಸ್ ಸುಂಕವನ್ನು ಇಳಿಸಲು ಪ್ರಸ್ತಾಪ ಇದೆ. ಅದರಂತೆ, ಔಷಧ, ಮೆಡಿಕಲ್ ಉಪಕರಣಗಳು, ಮೂರು ಕ್ಯಾನ್ಸರ್ ಔಷಧಿಗಳನ್ನು ಕಸ್ಟಮ್ಸ್ ಸುಂಕದಿಂದ ಮುಕ್ತಗೊಳಿಸಲಾಗಿದೆ. ಒಟ್ಟಾರೆಯಾಗಿ ಕೇಂದ್ರ ಸರ್ಕಾರವು ಶೇ.15ರಷ್ಟು ಕಸ್ಟಮ್ಸ್ ಸುಂಕವನ್ನು ಇಳಿಸಿದೆ. ಆಮದು ಮಾಡಿಕೊಳ್ಳುವ ಮೊಬೈಲ್, ಮೊಬೈಲ್ ಭಾಗಗಳ ಮೇಲಿನ ಸುಂಕವನ್ನೂ ಕೇಂದ್ರ ಸರ್ಕಾರ ಇಳಿಸಿದೆ. ಚಿನ್ನ ಹಾಗೂ ಬೆಳ್ಳಿಯ ಮೇಲಿನ ಅಬಕಾರಿ ಸುಂಕವನ್ನೂ, ಶೇ.6ರಷ್ಟು ಇಳಿಕೆ ಮಾಡಿದೆ. ಇದರಿಂದ ಚಿನ್ನದ ವ್ಯಾಪಾರಿಗಳು ಹಾಗೂ ಖರೀದಿಸುವ ಗ್ರಾಹಕರಿಗೆ ಅನುಕೂಲವಾಗಲಿದೆ.

ಮಧ್ಯಮ ವರ್ಗಕ್ಕೆ ಶಕ್ತಿ

ಮೂಲ ಸೌಕರ್ಯ ಉತ್ಪಾದಿಸುವಲ್ಲಿ ಜಾಗತಿಕ ಮಳಿಗೆಯಾಗುತ್ತದೆ. ಭಾರತದ ಅಭಿವೃದ್ಧಿಗೆ ಹೊಸ ವೇಗ ಸಿಗಲಿದೆ. ಅಷ್ಟರಮಟ್ಟಿಗೆ, ಪ್ರಸಕ್ತ ಸಾಲಿನ ಬಜೆಟ್ ದೇಶದ ಏಳಿಗೆಯನ್ನು ಪ್ರತಿನಿಧಿಸುತ್ತದೆ ಎಂದು ಹೇಳಿದ್ದಾರೆ. ಅಂತೆಯೇ ಶಿಕ್ಷಣ ಹಾಗೂ ಕೌಶಲ ವೃದ್ಧಿಯ ದೃಷ್ಟಿಯಿಂದಲೂ ಬಜೆಟ್ ಪ್ರಮುಖವಾಗಿದೆ. ಶಿಕ್ಷಣ ಹಾಗೂ ಕೌಶಲಾಭಿವೃದ್ಧಿಯಿಂದ ಮಧ್ಯಮ ವರ್ಗದ ಜನರಿಗೆ ಭಾರಿ ಅನುಕೂಲವಾಗಲಿದೆ ಎಂದಿರುವ ಪ್ರಧಾನಿ ಮೋದಿ, ಯುವಕರಿಗೆ ಹೊಸ ಶಕ್ತಿ ಸಿಗಲಿದೆ. ದಲಿತರು ಹಾಗೂ ಬುಡಕಟ್ಟು ಸಮುದಾಯದವರಿಗೂ ಇದರಿಂದ ನೆರವಾಗಲಿದೆ. ಹಣಕಾಸು ನೆರವು ಕೂಡ ಸಿಗುವುದರಿಂದ ದಮನಿತರು ಏಳಿಗೆಯ ಹಾದಿ ಹಿಡಿಯಲು ಸಾಧ್ಯವಾಗಲಿದೆ ಎಂದರು. ಅಲ್ಲದೆ ಕಳೆದ 10 ವರ್ಷದಲ್ಲಿ ದೇಶದ 25 ಕೋಟಿ ಬಡವರು ಬಡತನದಿಂದ ಮುಕ್ತರಾಗಿದ್ದಾರೆ. ನವೋದ್ಯಮಗಳಿಗೆ ಆದ್ಯತೆ ನೀಡಿರುವುದು, ಮಹಿಳೆಯರಿಗೂ ಉದ್ಯೋಗಾವಕಾಶ, ಸಣ್ಣ ಉದ್ಯಮಗಳಿಗೆ ಆರ್ಥಿಕ, ಸಾಲದ ನೆರವು ಸೇರಿ ಹತ್ತಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಈಗ ಮಂಡಿಸಿರುವ ಬಜೆಟ್‌ನಿಂದ ಕೂಡ ಮಧ್ಯಮ ವರ್ಗದವರ ಅನುಕೂಲವಾಗಲಿದೆ ಎಂದು ಹೇಳಿದರು.

'ಕುರ್ಚಿ ಉಳಿಸುವ ಬಜೆಟ್'

ಮಂಗಳವಾರ ಲೋಕಸಭೆಯಲ್ಲಿ ನಿರ್ಮಲಾ ಸೀತಾರಾಮನ್ ಮಂಡಿಸಿದ 2024–25ನೇ ಸಾಲಿನ ಬಜೆಟ್‌ಗೆ ಪ್ರತಿಕ್ರಿಯೆ ನೀಡಿರುವ ಅವರು, ಮೋದಿ ಸರ್ಕಾರದ 'ಕಾಪಿಕ್ಯಾಟ್ ಬಜೆಟ್' ಕಾಂಗ್ರೆಸ್ ನ್ಯಾಯದ ಅಜೆಂಡಾವನ್ನು ಸರಿಯಾಗಿ ನಕಲು ಕೂಡ ಮಾಡಿಲ್ಲ. ಮೋದಿ ತನ್ನ ಸಮ್ಮಿಶ್ರ ಪಾಲುದಾರರನ್ನು ವಂಚಿಸಲು ಸರ್ಕಾರದ ಬಜೆಟ್‌ನಲ್ಲಿ ಅರೆಮನಸ್ಸಿನಿಂದ 'ಜುಮ್ಲಾ'ಗಳನ್ನು ಹಂಚುತ್ತಿದೆ, ಇದರಿಂದ ಎನ್‌ಡಿಎ ಸರಕಾರ ಉಳಿಯುತ್ತದೆ. ಇದು 'ದೇಶದ ಪ್ರಗತಿಗಾಗಿ ಇರುವ ಬಜೆಟ್ ಅಲ್ಲ', ಇದು 'ಮೋದಿ ಸರಕಾರ ಉಳಿಸಿ' ಬಜೆಟ್ ಎಂದು ಅವರು ಲೇವಡಿ ಮಾಡಿದ್ದಾರೆ. ತಮ್ಮ ಪೋಸ್ಟ್‌ನಲ್ಲಿ 10 ಅಂಶಗಳನ್ನು ಉಲ್ಲೇಖಿಸಿ, ಸರಕಾರನ್ನು ಉಳಿಸಲು ನಿರ್ಮಲಾ ಸೀತಾರಾಮನ್ ಬಜೆಟ್ ರಚಿಸಿದ್ದಾರೆ ಎಂದು ಟೀಕಿಸಿದ್ದಾರೆ. ಅಲ್ಲದೆ ಇದು ಮೋದಿ ಬಚಾವೋ ಬಜೆಟ್ ಎಂದು ಬಣ್ಣಿಸಿದ್ದಾರೆ.

ಕಾಂಗ್ರೆಸ್ ನೇತೃತ್ವದ – ಯುಪಿಎ ಜಾರಿಗೆ ತಂದಂತೆ ಈ ಬಜೆಟ್‌ನಲ್ಲಿ ದಲಿತರು, ಆದಿವಾಸಿಗಳು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು, ಮಧ್ಯಮ ವರ್ಗ ಮತ್ತು ಗ್ರಾಮೀಣ ಬಡ ಜನರಿಗೆ ಕ್ರಾಂತಿಕಾರಿ ಯೋಜನೆಗಳು ಯಾವುದೂ ಇಲ್ಲ ಎಂದು ಖರ್ಗೆ ವಾದಿಸಿದ್ದು, ಬಡವರು ಎಂಬ ಪದವು ಕೇವಲ ಸ್ವಯಂ–ಬ್ರಾಂಡಿಂಗ್ ಸಾಧನವಾಗಿದ್ದು, ಇದನ್ನು ಪುಷ್ಟೀಕರಿಸಲು ಬಜೆಟ್‌ನಲ್ಲಿ ಏನೂ ಇಲ್ಲ ಎಂದು ಹರಿಹಾಯ್ದಿದ್ದಾರೆ. ಮೋದಿ ಸರ್ಕಾರವು ಜನರು ಕಷ್ಟಪಟ್ಟು ಸಂಪಾದಿಸಿದ ಹಣವನ್ನು ದೋಚುತ್ತಿದ್ದು, ಅದನ್ನು ತನ್ನ ಬಂಡವಾಳಶಾಹಿ ಸ್ನೇಹಿತರಿಗೆ ಹಂಚುತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ. ಆದಾಯ ತೆರಿಗೆಯಲ್ಲಿ ಸ್ಟಾಂಡರ್ಡ್ ಡಿಡಕ್ಷನ್ ಅಲ್ಪ ಏರಿಕೆ, ಕ್ಯಾಪಿಟಲ್ ಗೇನ್ಸ್ ಮೇಲಿನ ತೆರಿಗೆ ಹೆಚ್ಚಳದ ಹಿನ್ನೆಲೆಯಲ್ಲಿ ಇದು ಮಹತ್ವ ಪಡೆದುಕೊಂಡಿದೆ.

ಉನ್ನತ ಮಟ್ಟದ ಸಭೆ

ಆಧಾರಿತ ಮಾಹಿತಿಯನ್ನು ಪಡೆದುಕೊಂಡರು. ಈ ಭಾರಿ ಉತ್ತಮ ಮಳೆಯಾಗಿ ಜಲಾಶಯಗಳು ಭರ್ತಿಯಾಗಿರುವುದರಿಂದ 2024ರ ನಾಡಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲು ಸರ್ಕಾರ ನಿರ್ಧರಿಸುವ ಸಾಧ್ಯತೆ ಇರುವ ಕಾರಣ, ಯುವ ಸಂಭ್ರಮ, ಯುವ ದಸರಾ, ಆಹಾರ ಮೇಳ, ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಗಳು, ಪಂಜಿನ ಕವಾಯತು ಪ್ರದರ್ಶನ ಹಾಗೂ ದೀಪಾಲಂಕಾರವನ್ನು ಅತ್ಯುತ್ತಮವಾಗಿ ಮಾಡಲು ನಾವು ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳಬೇಕೆಂದು ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ನವರಾತ್ರಿ ಉತ್ಸವದ ಎಲ್ಲಾ ಕಾರ್ಯಕ್ರಮಗಳ ಪಟ್ಟಿ, ವಿವಿಧ ಉಪಸಮಿತಿಗಳು, ದಸರಾ ಅಭಿವೃದ್ಧಿ ಕಾಮಗಾರಿಗಳು, ಸ್ವಚ್ಛತೆ, ಸಾರಿಗೆ, ಪ್ರಚಾರ, ನಿರ್ವಹಣೆ, ಅರಮನೆ ಕಾರ್ಯಕ್ರಮಗಳು, ಪ್ರವಾಸೋದ್ಯಮ ಅಭಿವೃದ್ಧಿ ಕುರಿತಂತೆ ಪೂರ್ವ ತಯಾರಿ ಮಾಡಿಕೊಂಡು ಸಂಪೂರ್ಣ ಮಾಹಿತಿಯೊಂದಿಗೆ ಉನ್ನತ ಮಟ್ಟದ ಸಮಿತಿ ಸಭೆಗೆ ವಿವರಿಸಬೇಕಾಗಿರುವುದರಿಂದ ಎಲ್ಲರೂ ಉತ್ತಮ ರೀತಿಯಲ್ಲಿ ತಯಾರಿ ಮಾಡಿಕೊಳ್ಳುವಂತೆಯೂ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಎಡಿಸಿ ಪಿ.ಶಿವರಾಜು, ನಗರ ಪೊಲೀಸ್ ಕಮಿಷನರ್ ಸೀಮಾ ಲಾಟ್ಕರ್, ಎಸ್ಪಿ ಎನ್.ವಿಷ್ಣುವರ್ಧನ್, ಡಿಸಿಪಿಗಳಾದ ಎಂ.ಮುತ್ತುರಾಜ್, ಎಸ್.ಜಾಹ್ನವಿ, ಪಾಲಿಕೆ ಕಮಿಷನರ್ ಆಶಾದ್ ಉರ್ ರೆಹಮಾನ್ ಷರೀಫ್, ಮುಡಾ ಕಮಿಷನರ್ ರಘುನಂದನ್, ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕ ಎಂ.ಕೆ.ಸವಿತಾ, ಅರಮನೆ ಮಂಡಳಿ ಉಪ ನಿರ್ದೇಶಕ ಟಿ.ಎಸ್. ಸುಬ್ರಹ್ಮಣ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಚೊಂಬು ನೀಡಿದ ನಿರ್ಮಲಾ ಸೀತಾರಾಮನ್!

ಉಳಿಸಿಕೊಳ್ಳುವ ಉದ್ದೇಶದಿಂದ ಆಂಧ್ರಪ್ರದೇಶ ಮತ್ತು ಬಿಹಾರ ರಾಜ್ಯಗಳಿಗೆ ವಿಶೇಷ ಅನುದಾನ ಒದಗಿಸಿದ್ದು, ಇತರ ರಾಜ್ಯಗಳನ್ನು ಕಡೆಗಣಿಸಿದ್ದಾರೆ ಎಂದರು. ಬಜೆಟ್ ಪೂರ್ವ ಸಭೆಯಲ್ಲಿ ರಾಜ್ಯ ಸರ್ಕಾರ ಹಲವಾರು ಮನವಿಗಳನ್ನು ಮುಂದಿರಿಸಿತ್ತು. ಆದರೆ ಯಾವುದೇ ಬೇಡಿಕೆಗಳಿಗೂ ಕೇಂದ್ರ ಹಣಕಾಸು ಸಚಿವರು ಸ್ಪಂದಿಸಿಲ್ಲ. ಭದ್ರಾ ಮೇಲ್ದಂಡೆ ಯೋಜನೆಗೆ 5300 ಕೋಟಿ ರೂ. ಅನುದಾನ ಒದಗಿಸುವುದಾಗಿ ಹಿಂದಿನ ಬಜೆಟ್‌ನಲ್ಲಿ ನಿರ್ಮಲಾ ಸೀತಾರಾಮ್ ಅವರು ಘೋಷಿಸಿದ್ದರು. ಆದರೆ ಈ ಯೋಜನೆಗೆ ನಯಾ ಪೈಸೆ ಒದಗಿಸಿಲ್ಲ. ಈ ಆಯವ್ಯಯದಲ್ಲಿ ಒದಗಿಸುವಂತೆ ಕೋರಲಾಗಿತ್ತು.

ಸಹಕಾರಿ ಸ್ವಾಯತ್ತತೆಗೆ ಸರ್ಕಾರದಿಂದ ಎಳ್ಳು ನೀರು

ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷರೂ ಆದ ಶಾಸಕ ಹರೀಶ್‌ಗೌಡ ಆಕ್ರೋಶ



ಬೆಂಗಳೂರು, ಜು.23– ಕೇಂದ್ರ ಸರ್ಕಾರದ ವೈದ್ಯನಾಥನ್ ವರದಿ ಪ್ರಕಾರ ನಬಾರ್ಡ್‌ನೊಂದಿಗೆ ಮಾಡಿಕೊಂಡಿರುವ ಕರಾರನ್ನು ರಾಜ್ಯ ಸರ್ಕಾರ ಯಾವುದೇ ಅನುಮತಿ ಇಲ್ಲದೆ ರದ್ದುಪಡಿಸಿ, ಸಹಕಾರ ಕ್ಷೇತ್ರದಲ್ಲಿ ಸರ್ವಾಧಿಕಾರ ಧೋರಣೆ ಅನುಸರಿಸುತ್ತಿದೆ ಎಂದು ಹುಣಸೂರು ಕ್ಷೇತ್ರದ ಶಾಸಕರೂ ಆದ ಎಂಸಿಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಜಿ.ಡಿ. ಹರೀಶ್‌ಗೌಡ ಕಿಡಿಕಾರಿದರು.


ವಿಧಾನಸಭೆಯಲ್ಲಿ ಮಂಗಳವಾರ ವಿಷಯ ಪ್ರಸ್ತಾಪಿಸಿ, ರಾಜ್ಯದ ಎಲ್ಲಾ ಡಿಸಿಸಿ ಬ್ಯಾಂಕ್‌ಗಳ ಆಡಳಿತ ಮಂಡಳಿಯ ಅವಧಿ ಮುಗಿಯುತ್ತಿದ್ದಂತೆ ಚುನಾವಣೆ ನಡೆಸಲಾಗಿದೆ. ಆದರೆ ಮೈಸೂರು ಮತ್ತು ಕೋಲಾರ ಡಿಸಿಸಿ ಬ್ಯಾಂಕ್‌ಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸದೆ ತಮ್ಮ ಹಿತಾಸಕ್ತಿಗೆ ಒತ್ತು ನೀಡಿ, ಸಹಕಾರ ಬಿಲ್–2024 ಅನ್ನು ತಂದು ಸರ್ವಾಧಿಕಾರ ಧೋರಣೆ ಅನುಸರಿಸಲಾಗುತ್ತಿದೆ. ಇದು ಪವಿತ್ರ ಸಹಕಾರ ಕ್ಷೇತ್ರದಲ್ಲಿ ಅಪಚಾರ ವಿದ್ದಂತೆ ಇದರ ಬಗ್ಗೆ ಸಹಕಾರ ಸಚಿವರು ಉತ್ತರ ನೀಡಬೇಕೆಂದು ಆಗ್ರಹಿಸಿದರು.

ನಾನು ಕಳೆದ ಎರಡು ಅಧಿವೇಶನದಲ್ಲೂ ಈ ಬಗ್ಗೆ ಪ್ರಶ್ನೆ ಮಾಡಿದ್ದರೂ, ಸಹಕಾರ ಸಚಿವರು ಇದಕ್ಕೆ ಉತ್ತರವನ್ನೇ ನೀಡಿಲ್ಲ. ಮೀಸಲಾತಿ ತರುವುದರ ಬಗ್ಗೆ ನಮ್ಮ ವಿರೋಧವಿಲ್ಲ. ಆದರೆ ಮಸೂದೆ ತಂದಿರುವ ಉದ್ದೇಶವೇನು ಎಂಬುದರ ಕುರಿತು ಸಚಿವರು ಸ್ಪಷ್ಟನೆ ನೀಡಬೇಕು. ಕೇಂದ್ರ ಸರ್ಕಾರದಿಂದ ವೈದ್ಯನಾಥನ್ ವರದಿ ಅಡಿಯಲ್ಲಿ ನಬಾರ್ಡ್ ಬ್ಯಾಂಕಿನಿಂದ ಸಹಾಯಧನ ಪಡೆದು, ರಾಜ್ಯ ಸಹಕಾರಿ ಸಂಸ್ಥೆ ಕರಾರು ಒಪ್ಪಂದ ಮಾಡಿಕೊಂಡು, ಸಹಕಾರಿ ಸಂಸ್ಥೆಗಳು ಸ್ವಾಯತ್ತತೆ ಪಡೆದುಕೊಂಡು ಕಾರ್ಯ ನಿರ್ವಹಿಸುತ್ತಿವೆ. ಆದರೆ ರಾಜ್ಯ ಸರ್ಕಾರ ಏಕಾಏಕಿ ಯಾವುದೇ ಪೂರ್ವಾನುಮತಿ ಇಲ್ಲದೆ ಸಹಕಾರಿ ತತ್ವಕ್ಕೆ ಎಳ್ಳುನೀರು ಬಿಟ್ಟಿದೆ.

ಸಹಕಾರಿ ಸಂಸ್ಥೆಯಲ್ಲಿ ರಾಜಕೀಯ ಹಸ್ತಕ್ಷೇಪ ಮಾಡಬಾರದೆಂದು ಜಾರಿಗೆ ಬಂದಿರುವ ಕಾಯ್ದೆಯನ್ನು ಧಿಕ್ಕರಿಸಿ, ಚುನಾಯಿತ ಪ್ರತಿನಿಧಿಗಳ ಹಕ್ಕನ್ನು ಕಸಿದುಕೊಂಡು ರಾಜ್ಯ ಸರ್ಕಾರ 2024ರ ಸಹಕಾರ ಮಸೂದೆ ಮಂಡಿಸಿ, ರೈತಾಪಿ ವರ್ಗದ ಹಿತ ಕಾಪಾಡುವ ಸಂಸ್ಥೆಯನ್ನು ರಾಜಕೀಯ ಲಾಭಕ್ಕೆ ಬಳಸುವ ಹುನ್ನಾರ ನಡೆಸುತ್ತಿದೆ.


ಮೈಸೂರು ಡಿಸಿಸಿ ಬ್ಯಾಂಕಿನಲ್ಲಿ ಈ ಹಿಂದೆ ಅವ್ಯವಹಾರದಲ್ಲಿ ಭಾಗಿಯಾಗಿದ್ದ ನೌಕರರನ್ನು ಅಮಾನತುಪಡಿಸಲಾಗಿತ್ತು. ಆದರೆ ಸರ್ಕಾರ ಆ ಭ್ರಷ್ಟರನ್ನೇ ಇನ್ನೂ ಕರ್ತವ್ಯದಲ್ಲಿ ಮುಂದುವರಿಸಿದೆ. ಆಡಳಿತ ಮಂಡಳಿ ಅವಧಿ ಮುಗಿದರೂ ಚುನಾವಣೆ ನಡೆಸದೆ ಆಡಳಿತಾಧಿಕಾರಿಯನ್ನು ನೇಮಕ ಮಾಡಿ, ಅವರ ಅವಧಿಯೂ ಪೂರ್ಣಗೊಂಡಿದ್ದರೂ ಚುನಾವಣೆ ನಡೆಸದೆ ನ್ಯಾಯಾಲಯದತ್ತ ಕೈ ತೋರಿಸಿ, ಸಹಕಾರಿ ಬಿಲ್–2024 ಅನ್ನು ಪಾಸ್ ಮಾಡಿಕೊಂಡು, ನಂತರದಲ್ಲಿ ಚುನಾವಣೆ ನಡೆಸಲು ಪ್ರಯತ್ನ ಮಾಡುತ್ತಿದೆ ಎಂದು ಹರೀಶ್‌ಗೌಡರು ದೂರಿದರು. ಇದೊಂದು ರೀತಿ ದ್ವೇಷ ಸಾಧನೆಯ ಉದ್ದೇಶವಾಗಿದೆ. ಸಹಕಾರಿ ಕ್ಷೇತ್ರಕ್ಕೆ ಇದು ಅಪಾಯಕಾರಿ ಎಂದು ಅಭಿಪ್ರಾಯಪಟ್ಟಿದ್ದಾರೆ.

ಕೆಆರ್‌ಎಸ್ ನೀರಿನ ಮಟ್ಟ



ಗರಿಷ್ಠ ಮಟ್ಟ	124.80 ಅಡಿ
ಮಂಗಳವಾರ	123.25 ಅಡಿ
ಒಳಹರಿವು	33241 ಕ್ಯೂಸೆಕ್
ಹೊರಹರಿವು	11852 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಮಂಗಳವಾರ	2282.82 ಅಡಿ
ಒಳಹರಿವು	17877 ಕ್ಯೂಸೆಕ್
ಹೊರಹರಿವು	25000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಮಂಗಳವಾರ	2855.72 ಅಡಿ
ಒಳಹರಿವು	5871 ಕ್ಯೂಸೆಕ್
ಹೊರಹರಿವು	4000 ಕ್ಯೂಸೆಕ್

ಮೈಸೂರು ಮಿತ್ರ ಬುಧವಾರ 24 ಜುಲೈ 2024

ದೇಶ - ವಿದೇಶ

ಇಥಿಯೋಪಿಯಾದಲ್ಲಿ ಭಾರಿ ಭೂಕುಸಿತ; 157 ಮಂದಿ ಸಾವು

ಅಡಿಸ್ ಅಬಾಬಾ: ಭಾರೀ ಮಳೆಯಿಂದ ಹಾನಿಗೊಳಗಾದ ಇಥಿಯೋಪಿಯಾದಲ್ಲಿ ಭೂ ಕುಸಿತವಾಗಿ 157 ಜನರು ಸಾವನ್ನಪ್ಪಿದ್ದಾರೆ. ಮಣ್ಣಿನ ಅಡಿಯಲ್ಲಿ ಸಿಲುಕಿರುವ ಹಲವು ಜನರನ್ನು ರಕ್ಷಿಸಲು ಪ್ರಯತ್ನಿಸಿದ್ದಾರೆ ಎಂದು ಸ್ಥಳೀಯ ಅಧಿಕಾರಿಗಳು ಇಂದು ತಿಳಿಸಿದ್ದಾರೆ. ದಕ್ಷಿಣ ಇಥಿಯೋಪಿಯಾದ ಕೆಂಚೋ ಶಾಚಾ ಗೊಜ್ಡಿ ಜಿಲ್ಲೆಯಲ್ಲಿ ಸಂಭವಿಸಿದ ಭೂ ಕುಸಿತದಲ್ಲಿ ಬಲಿಯಾದವರಲ್ಲಿ ಚಿಕ್ಕ ಮಕ್ಕಳು, ಗರ್ಭಿಣಿಯರು ಕೂಡ ಸೇರಿದ್ದಾರೆ. ಇನ್ನೂ ಮಣ್ಣಿನ ಅಡಿಯಲ್ಲಿ ಹಲವು ಜನರು ಸಿಲುಕಿರುವ ಸಾಧ್ಯತೆಯಿದೆ. ಆದರೆ, ಅವರು ಬದುಕುಳಿದಿರುವ ಸಾಧ್ಯತೆ ಕಡಿಮೆ ಎನ್ನಲಾಗುತ್ತಿದೆ. ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಮುಂದುವರೆದಿದೆ. ಗೋಫಾ ವಲಯವು ಕೆಸರುಗದ್ದೆಗಳು ತುಂಬಿರುವ ಪ್ರದೇಶವಾಗಿದೆ. ಅಪಘಾತದಿಂದ ತಾಯಿ, ತಂದೆ, ಸಹೋದರ, ಸಹೋದರಿ ಸೇರಿದಂತೆ ಇಡೀ ಕುಟುಂಬವನ್ನು ಕಳೆದುಕೊಂಡು ಶವಗಳನ್ನು ತಬ್ಬಿಕೊಂಡು ಅಳುತ್ತಿರುವ ದೃಶ್ಯ ಮನಕಲಕುವಂತಿದೆ.




ಅಪ್ಪನ ಗನ್ ಜೊತೆ ಆಟವಾಡುತ್ತಾ ಮುಖಕ್ಕೆ ಶೂಟ್ ಮಾಡಿಕೊಂಡ 3 ವರ್ಷದ ಬಾಲಕ

ಲೂಸಿಯಾನ: ಅಮೆರಿಕದ ಲೂಸಿಯಾನ ರಾಜ್ಯದಲ್ಲಿ ಮೂರು ವರ್ಷದ ಬಾಲಕ ತನ್ನ ತಂದೆಯ ಗನ್ ಜೊತೆ ಆಟ ವಾಡುವಾಗ ಆಕಸ್ಮಿಕವಾಗಿ ತನ್ನ ಮುಖಕ್ಕೆ ಗುಂಡು ಹಾರಿಸಿಕೊಂಡಿದ್ದಾನೆ. ಇದರಿಂದ ಆ ಬಾಲಕ ಸಾವನ್ನಪ್ಪಿದ್ದಾನೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ತನ್ನ ಬೆಡ್ ರೂಂನಲ್ಲಿ ಇಟ್ಟಿದ್ದ ತನ್ನ ತಂದೆಯ ಗನ್ ಅನ್ನು ತೆಗೆದುಕೊಂಡ ಬಾಲಕ ಅದರೊಂದಿಗೆ ಆಟವಾಡುತ್ತಿದ್ದ. ಇದು ಯಾರ ಗಮನಕ್ಕೂ ಬರಲಿಲ್ಲ. ಈ ವೇಳೆ ಆತ ತನ್ನ ಮುಖದ ಮುಂದೆ ಗನ್ ಹಿಡಿದುಕೊಂಡು ಟ್ರಿಗರ್ ಒತ್ತಿದ್ದಾನೆ. ಇದರಿಂದ ಆತ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಶಬ್ದ ಕೇಳಿ ಓಡಿಬಂದ ಆತನ ತಂದೆ ಅವನನ್ನು ಬದುಕಿಸಲು ಸಾಕಷ್ಟು ಪ್ರಯತ್ನಿಸಿದ್ದಾರೆ. ಆದರೆ ಆತ ಸ್ಥಳದಲ್ಲೇ ಸಾವನ್ನಪ್ಪಿದ್ದ. ಆ ಗನ್ ಅನ್ನು ಹಾಸಿಗೆಯ ಮೇಲ್ಭಾಗದಲ್ಲಿದ್ದ ಶೆಲ್ಫ್‌ನಲ್ಲಿ ಇರಿಸಲಾಗಿತ್ತು. ಹೀಗಾಗಿ, ಆ ಮಗುವಿಗೆ ಅದು ಸುಲಭವಾಗಿ ಸಿಕ್ಕಿತ್ತು.



ಮದುವೆಯಾದ ಮೂರೇ ನಿಮಿಷಕ್ಕೆ ಡೈವೋರ್ಸ್!

ಕುವೈತ್: 'ಇನ್ನುಂದೆ ನೀವು ಪತಿ-ಪತ್ನಿ' ಎಂದು ಘೋಷಿಸಿದ ಮೂರೇ ನಿಮಿಷಕ್ಕೆ ದಂಪತಿ ಬೇರೆಯಾಗಿದ್ದಾರೆ. ಮದುವೆ ಸಮಾರಂಭ ನಡೆದ ಕೋರ್ಟ್ ಹಾಲ್‌ನಲ್ಲೇ ಈ ಘಟನೆ ನಡೆದಿದೆ. ಇದಕ್ಕೆಲ್ಲಾ ಕಾರಣವಾಗಿದ್ದು ವರ ಮಹಾಶಯನ ದರ್ಪ. ಮದುವೆಯಾದ ಕೂಡಲೇ ವರ ಮಹಾಶಯ ವಧುವಿಗೆ ಅವಹೇಳನ ಮಾಡಿದನಂತೆ. ಹೀಗಾಗಿ, ಕೂಡಲೇ ವಧು ವಿಚ್ಛೇದನಕ್ಕೆ ತೀರ್ಮಾನಿಸಿದ್ದಾಳೆ. ಕುವೈತ್‌ನ ಕೋರ್ಟ್ ಹೌಸ್‌ನಲ್ಲಿ ಈ ವಿವಾಹ ಸಮಾರಂಭ ಏರ್ಪಾಡಾಗಿತ್ತು. ಮದುವೆಯ ಸಾಂಪ್ರದಾಯಿಕ ನಿಯಮಾವಳಿಗಳು ಪೂರ್ಣಗೊಂಡ ನಂತರ ವಧು-ವರರು ಕೋರ್ಟ್ ಹೌಸ್‌ನಿಂದ ಹೊರಗೆ ಬರುವ ವೇಳೆ ವಧು ತನ್ನ ವಿಚ್ಛೇದನ ತೀರ್ಮಾನ ಪ್ರಕಟಿಸಿದ್ದಾಳೆ ಎಂದು ಮಾಧ್ಯಮಗಳು ವರದಿ ಮಾಡಿವೆ. ವರನ ಜೊತೆ ವಧು ನಡೆದು ಬರುವಾಗ ಆಕೆ ವರನ ಕಡೆಗೆ ಸ್ವಲ್ಪ ವಾಲಿದಳು. ಆಗ ವರ ಮಹಾಶಯ ಆಕೆಗೆ 'ಮೂರ್ಖ ಹೆಣ್ಣು' ಎಂದು ಬೈದಿದ್ದಾನೆ. ಇದನ್ನು ಕೇಳಿಸಿಕೊಂಡ ವಧು ಕೂಡಲೇ ಹಿಂದಕ್ಕೆ ತಿರುಗಿ ನ್ಯಾಯಾಧೀಶರಿಗೆ ತಮ್ಮ ಮದುವೆ ರದ್ದು ಮಾಡುವಂತೆ ಮನವಿ ಮಾಡಿದಳು. ವರ ಮದುವೆಯ ಪ್ರಕ್ರಿಯೆಗಳನ್ನು ಮುಗಿಸಿದ ಕೂಡಲೇ ಎಲ್ಲರ ಎದುರಲ್ಲೇ ಆಡಿದ ಮಾತುಗಳನ್ನು ನ್ಯಾಯಾಧೀಶರೂ ಕೇಳಿಸಿಕೊಂಡಿದ್ದರು. ಹೀಗಾಗಿ, ಅವರು ವಧುವಿನ ವಾದಕ್ಕೆ ಸಮ್ಮತಿ ಸೂಚಿಸಿ ಮದುವೆಯನ್ನು ರದ್ದು ಮಾಡಿದ್ದಾರೆ.



ಗ್ಯಾಂಗ್‌ಸ್ಟರ್ ಜೊತೆ ಓಡಿ ಹೋಗಿದ್ದ ಐಎಎಸ್ ಅಧಿಕಾರಿ ಪತ್ನಿ ಮರಳಿ ಮನೆಗೆ ಬಂದು ಆತ್ಮಹತ್ಯೆ!

ಗಾಂಧಿನಗರ (ಗುಜರಾತ್): ಗಂಡ ಐಎಎಸ್ ಅಧಿಕಾರಿ. ಸಮಾಜದಲ್ಲಿ ಹೆಸರು-ಗೌರವ, ಮನೆಯಲ್ಲಿ ಶ್ರೀಮಂತಿಕೆ ಎಲ್ಲವೂ ಇತ್ತು. ಆದರೆ ಐಎಎಸ್ ಅಧಿಕಾರಿ ಪತ್ನಿ ಮೋಹದ ಬಲೆಗೆ ಬಿದ್ದಿದ್ದಳು. ಗ್ಯಾಂಗ್‌ಸ್ಟರ್ ಜೊತೆ ಪರಾರಿಯಾಗಿದ್ದಳು. 9 ತಿಂಗಳ ಬಳಿಕ ಗಂಡನ ಮನೆಗೆ ವಾಪಸ್ ಆಗಿದ್ದಳು. ಮುಂದೆ ಪಶ್ಚಾತ್ತಾಪಪಟ್ಟು ಆತ್ಮಹತ್ಯೆಗೆ ಶರಣಾದಳು.

ಗುಜರಾತ್ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಕಾರ್ಯದರ್ಶಿ ರಂಜಿತ್‌ಕುಮಾರ್ ಅವರ ಪತ್ನಿ ಸೂರ್ಯ ಜಯ ದುರಂತ ಘಟನೆ ಇದು. 45 ವರ್ಷದ ಸೂರ್ಯ ಜಯ 9 ತಿಂಗಳ ಹಿಂದೆ ದರೋಡೆಕೋರನ ಜೊತೆ ಓಡಿ ಹೋಗಿದ್ದಳಂತೆ. ಕಳೆದ ಶನಿವಾರ ಗುಜರಾತ್‌ನಲ್ಲಿರುವ ತನ್ನ ಐಎಎಸ್ ಗಂಡನ ಮನೆಗೆ ಹಿಂದಿರುಗಿದ್ದಳು. ಅಲ್ಲಿ ಆಕೆ ಆತ್ಮಹತ್ಯೆಗೆ ಯತ್ನಿಸಿದಳು. ಕೂಡಲೇ ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಿಸದೆ ಒಂದು ದಿನದ ನಂತರ ಸಾವನ್ನಪ್ಪಿದ್ದಾರೆ. ಗಾಂಧಿನಗರದ ಸೆಕ್ಟರ್ 19 ರಲ್ಲಿ ಈ ಘಟನೆ ವರದಿಯಾಗಿದೆ.


ಸೂರ್ಯ ಜಯ

ಕಮಲಾ ಹ್ಯಾರಿಸ್ ಗೆಲುವಿಗೆ ಪೂಜೆ

ತಿರುವರೂರು: ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಅನಿವಾಸಿ ಭಾರತೀಯ ಮಹಿಳೆ ಕಮಲಾ ಹ್ಯಾರಿಸ್ ಅವರು ಗೆಲುವು ಸಾಧಿಸಲಿ ಎಂದು ಅವರ ಕುಟುಂಬವರ್ಗದವರು ತಮಿಳುನಾಡಿನ ತಿರು ವರೂರು ಜಿಲ್ಲೆಯ ತುಳ ಸೇಂದ್ರಪುರಂನ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು. ಜೋ-ಬೈಡನ್ ಅವರು ಅಮೆರಿಕ ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿದ ನಂತರ ಅವರು, ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿಯಾಗಿ ಕಮಲಾ ಹ್ಯಾರಿಸ್ ಅವರನ್ನು ಅನುಮೋದಿಸಿದ್ದಾರೆ. ಅಮೆರಿಕ ಚುನಾವಣೆಗೆ ಕಮಲಾ ಹ್ಯಾರಿಸ್ ಅವರ ಹೆಸರನ್ನು ಅಧ್ಯಕ್ಷೀಯ ಅಭ್ಯರ್ಥಿಯಾಗಿ ಘೋಷಿಸಿದ ನಂತರ ತುಳಸೇಂದ್ರಪುರಂ ಮತ್ತೆ ಪುಳಕಿತಗೊಂಡಿದೆ. ಗ್ರಾಮದ ಧರ್ಮಶಾಸ್ತಾ ದೇವಾ ಲಯ ವಿಶಿಷ್ಟವಾದ ಗೋಡೆಯನ್ನು ಹೊಂದಿದ್ದು, ಕೊಡುಗೆ ನೀಡಿದ ಜನರ ಹೆಸರನ್ನು ತಮಿಳು ಭಾಷೆಯಲ್ಲಿ ಕೆತ್ತಲಾಗಿದೆ. ಇದರಲ್ಲಿ 2025ರ ಯುಎಸ್ ಚುನಾವಣೆಗೆ ಡೆಮಾಕ್ರಟಿಕ್ ಅಧ್ಯಕ್ಷೀಯ ಅಭ್ಯರ್ಥಿ ಹ್ಯಾರಿಸ್ ಕೂಡ ಒಬ್ಬರಾಗಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಗ್ರಾಮಸ್ಥರು, ಕಮಲಾ ಹ್ಯಾರಿಸ್ ಬಗ್ಗೆ ಹೆಮ್ಮೆ ವ್ಯಕ್ತಪಡಿಸಿದರು. ಯುಎಸ್ ಅಧ್ಯಕ್ಷೀಯ ಚುನಾವಣೆಯಲ್ಲಿ ಕಮಲಾ ಹ್ಯಾರಿಸ್‌ಗಾಗಿ ಪ್ರಾರ್ಥಿಸುತ್ತಿರುವುದಾಗಿ ತಿಳಿಸಿದರು.



ಟ್ರಂಪ್ ಹತ್ಯೆ ಯತ್ನ ಪ್ರಕರಣ: ಅಮೆರಿಕ ರಹಸ್ಯ ಸೇವೆಯ ನಿರ್ದೇಶಕಿ ಕಿಂಬರ್ಲಿ ಚೀಟಲ್ ರಾಜೀನಾಮೆ

ವಾಷಿಂಗ್ಟನ್: ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹತ್ಯೆ ಯತ್ನವನ್ನು ತಡೆಯುವ ಕಾರ್ಯಾಚರಣೆಯಲ್ಲಿ ತನ್ನ ಸಂಸ್ಥೆ ವಿಫಲವಾಗಿದೆ ಎಂದು ಒಪ್ಪಿಕೊಂಡ ಒಂದು ದಿನದ ನಂತರ ಯುಎಸ್ ಸೀಕ್ರೆಟ್ ಸರ್ವೀಸ್ ಡೈರೆಕ್ಟರ್ ಕಿಂಬರ್ಲಿ ಚೀಟಲ್ ಮಂಗಳವಾರ ರಾಜೀನಾಮೆ ನೀಡಿದ್ದಾರೆ. ಜು.13 ರಂದು ಪೆನ್ಸಿಲ್ವೇನಿಯಾದ ಬಟ್ಲರ್‌ನಲ್ಲಿ ನಡೆದ ಪ್ರಚಾರ ಸಭೆಯಲ್ಲಿ 20 ವರ್ಷದ ಬಂದೂಕುಧಾರಿ ಮಾಜಿ ರಿಪಬ್ಲಿಕನ್ ಅಧ್ಯಕ್ಷ ಮತ್ತು ಪ್ರಸ್ತುತ ಶ್ವೇತಭವನದ ಅಭ್ಯರ್ಥಿಯನ್ನು ಗಾಯಗೊಳಿಸಿದ ನಂತರ ಚೀಟಲ್ ರಾಜೀ ನಾಮೆ ನೀಡಬೇಕು ಎಂದು ರಾಜಕೀಯ ಪಕ್ಷಗಳು ಒತ್ತಾಯಿಸುತ್ತಲೇ ಇದ್ದವು. ಸಮಯ ಮೀರಿದೆ. ಅವರು ಇದನ್ನು ಕನಿಷ್ಠ ಒಂದು ವಾರದ ಹಿಂದೆ ಮಾಡಬೇಕಾಗಿತ್ತು. ಅವರು ರಿಪಬ್ಲಿಕನ್ ಮತ್ತು ಡೆಮೋಕ್ರಾಟ್‌ಗಳ ಕರೆಗೆ ಓಗೊಟ್ಟಿರುವುದನ್ನು ನೋಡಿ ನನಗೆ ಸಂತೋಷವಾಗಿದೆ ಎಂದು ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನ ರಿಪಬ್ಲಿಕನ್ ಸ್ಪೀಕರ್ ಮೈಕ್ ಜಾನ್ಸನ್ ಸುದ್ದಿಗಾರರಿಗೆ ತಿಳಿಸಿದ್ದಾರೆ.



ಇನ್ನು ಮುಂದೆ ಫುಟ್‌ಪಾತ್, ಹೆದ್ದಾರಿಯಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ ಮಾಡಿದರೆ ಜೋಕೆ...

ಪೊಲೀಸರಿಂದ ಪ್ರಕರಣ ದಾಖಲು; ಆಗಸ್ಟ್ 1ರಿಂದ ವಿಶೇಷ ಕಾರ್ಯಾಚರಣೆ


ಅಲೋಕ್‌ಕುಮಾರ್


ಸಾಂದರ್ಭಿಕ ಚಿತ್ರ


ಸಂಗ್ರಹ ಚಿತ್ರ


ಫೈಲ್ ಚಿತ್ರ

ಮೈಸೂರು, ಜು.23(ಬಿಎಲ್‌ಯು)-ಟ್ರಾಫಿಕ್ ಜಾಮ್ ಸೇರಿದಂತೆ ಇತರೆ ಸಂದರ್ಭದಲ್ಲಿ ಫುಟ್‌ಪಾತ್ ಮೇಲೆ ಹಾಗೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ ಮಾಡಿದರೆ ಪೊಲೀಸರು ಪ್ರಕರಣ ದಾಖಲಿಸಲಿದ್ದಾರೆ. ಸಂಬಂಧ ಆಗಸ್ಟ್ 1ರಿಂದ ಕಾರ್ಯಾಚರಣೆ ಆರಂಭಿಸಲಿದ್ದಾರೆ. ದಕ್ಷ ಪೊಲೀಸ್ ಅಧಿಕಾರಿ, ಅಲೋಕ್ ಕುಮಾರ್ ರಾಜ್ಯ ಸಂಚಾರ ಮತ್ತು ರಸ್ತೆ ಸುರಕ್ಷತಾ ಎಡಿಜಿಪಿ ಆದ ತರುವಾಯ ಅಪಘಾತ ತಡೆ ಹಾಗೂ ರಸ್ತೆ ಸುರಕ್ಷತಾ ಸಂಚಾರದಲ್ಲಿ ಬಹಳಷ್ಟು ಸುಧಾರಣೆ ತಂದಿದ್ದಾರೆ. ಕಣ್ಣು ಕುಕ್ಕುವ ಎಲ್‌ಇಡಿ ಹೈ ಬೀಮ್ ಲೈಟ್‌ಗಳನ್ನು ಅಳವಡಿಸಿರುವ ವಾಹನ ಸವಾರರಿಗೂ ದಂಡಾಸ್ತ್ರ ಪ್ರಯೋಗಿಸುವ ವಿಶೇಷ ಕಾರ್ಯಾಚರಣೆ ಕೈಗೊಂಡ ನಂತರ ಶಿಸ್ತುಬದ್ಧ ರಸ್ತೆ ನಿಯಮ ಪಾಲನೆಗಾಗಿ ಅಲೋಕ್‌ಕುಮಾರ್ ಮತ್ತೊಂದು ವಿಶಿಷ್ಟ ಕಾರ್ಯಾಚರಣೆ ಆರಂಭಿಸಿದ್ದಾರೆ. ಸಾಮಾನ್ಯವಾಗಿ ಟ್ರಾಫಿಕ್ ಜಾಮ್ ಹಾಗೂ ಇತರೆ ಸಂದರ್ಭದಲ್ಲಿ ವಾಹನ ಸವಾರರು ಫುಟ್‌ಪಾತ್ ಮೇಲೆ ವಾಹನ ಚಲಾಯಿಸುತ್ತಿದ್ದರು. ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಿರುದ್ಧ ದಿಕ್ಕಿನಲ್ಲಿ (Wrong side driving) ವಾಹನ ಚಲಾಯಿಸಿ, ಅಪಘಾತಗಳು ಸಂಭವಿಸುವುದರ ಜೊತೆಗೆ ರಸ್ತೆ ಸಂಚಾರದಲ್ಲಿ ಅಶಿಸ್ತು ತಾಂಡವವಾಡುತ್ತಿತ್ತು. ಫುಟ್‌ಪಾತ್ ಮೇಲೆ ವಾಹನ ಚಲಾಯಿಸಿ ಪಾದಚಾರಿಗಳಿಗೆ ಡಿಕ್ಕಿ ಹೊಡೆದು ಸಾವು-ನೋವು ಉಂಟಾಗುತ್ತಿತ್ತು.

ಈ ಹಿನ್ನೆಲೆಯಲ್ಲಿ ರಾಜ್ಯ ಸಂಚಾರ ಮತ್ತು ರಸ್ತೆ ಸುರಕ್ಷತಾ ಎಡಿಜಿಪಿ ಅಲೋಕ್‌ಕುಮಾರ್, ಫುಟ್‌ಪಾತ್ ಮೇಲೆ ವಾಹನ ಚಾಲನೆ ಹಾಗೂ ಹೆದ್ದಾರಿಯಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ ಮಾಡುವ ವಾಹನಗಳ ಚಾಲಕರ ವಿರುದ್ಧ ಆ.1ರಿಂದ ವಿಶೇಷ ಕಾರ್ಯಾಚರಣೆ ಆರಂಭಿಸಲಾಗುವುದು ಎಂದು ತಿಳಿಸಿದ್ದು, ಸುತ್ತೋಲೆ ಕೂಡ ಹೊರಡಿಸಿದ್ದಾರೆ.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಿರುದ್ಧ ದಿಕ್ಕಿನಲ್ಲಿ ವಾಹನ ಚಾಲನೆ ಮಾಡುವುದು ಜೀವಕ್ಕೆ ಅಪಾಯಕಾರಿ. ಈ ಹಿನ್ನೆಲೆಯಲ್ಲಿ ಬಿಎನ್‌ಎಸ್ 281 ಅಡಿ ಮತ್ತು 184 ಐಎಂವಿ ಕಾಯ್ದೆಯಡಿ ಇಂತಹ ವಾಹನ ಚಾಲಕರ ವಿರುದ್ಧ ಎಫ್‌ಐಆರ್ ದಾಖಲಿಸಲಾಗುವುದು ಎಂದು ಎಚ್ಚರಿಸಿದ್ದಾರೆ. ಇದರ ಜೊತೆಗೆ ಡಿಫೆಕ್ಟಿವ್ ನಂಬರ್ ಪ್ಲೇಟ್ (ದೋಷಪೂರಿತ ನಂಬರ್ ಪ್ಲೇಟ್) ವಿರುದ್ಧ ಕೂಡ ಆ.1ರಿಂದ ಕಾರ್ಯಾಚರಣೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ದಂಡ ಪಾವತಿಯಿಂದ ಪಾರಾಗಲು ಪ್ರತಾಪ್ ಸಿಂಹ ವಾಮಮಾರ್ಗ ಅನುಸರಣೆ

ಮುಡಾ ಅಧ್ಯಕ್ಷ ಕೆ.ಮರೀಗೌಡ ಆರೋಪ


ಕೆ.ಮರಿಗೌಡ

ಮೈಸೂರು, ಜು.23(ಬಿಎಲ್‌ಯು)- ಮುಡಾದ ಶೇಕಡ 50:50 ಅನುಪಾತದ ಅಕ್ರಮ ನಿವೇಶನ ಹಂಚಿಕೆ ಹಗರಣ ಬಯಲಾದ ನಂತರ ಕೆಲವು ರಾಜಕಾರಣಿಗಳು ಮುಡಾದಲ್ಲಿ ನಡೆಸಿರುವ ಒಂದೊಂದೇ ಅಕ್ರಮ ಬಟಾಬಯಲಾಗುತ್ತಿದೆ. ಮೈಸೂರಿನ ವಿಜಯನಗರದಲ್ಲಿ ಮನೆ ನಿರ್ಮಿಸುವಾಗ ದಂಡ ಪಾವತಿಯಿಂದ ತಪ್ಪಿಸಿಕೊಳ್ಳಲು ಮಾಜಿ ಸಂಸದ ಪ್ರತಾಪ್ ಸಿಂಹ ವಾಮಮಾರ್ಗ ಅನುಸರಿಸಿದ್ದಾರೆಂಬ ಆರೋಪ ಈಗ ಕೇಳಿ ಬಂದಿದೆ.

ಈ ಸಂಬಂಧ ಹಾಲಿ ಮುಡಾ ಅಧ್ಯಕ್ಷ ಕೆ.ಮರಿಗೌಡ ದಂಡ ಪಾವತಿಯಿಂದ ತಪ್ಪಿಸಿಕೊಳ್ಳಲು ಪ್ರತಾಪ್ ಸಿಂಹ ಅನುಸರಿಸಿದ ವಾಮಮಾರ್ಗವನ್ನು ಎಳೆ ಎಳೆಯಾಗಿ ಬಿಡಿಸಿಟ್ಟಿದ್ದಾರೆ. ಮೈಸೂರಿನ ವಿಜಯನಗರ 4ನೇ ಹಂತ, 2ನೇ ಘಟ್ಟದಲ್ಲಿ ಪ್ರತಾಪ್ ಸಿಂಹ ಪತ್ನಿ ಡಾ.ಅರ್ಪಿತಾ ಜೆ.ಎಸ್.ಅವರಿಗೆ ಸರ್ಕಾರದಿಂದ ಜಿ ಪ್ರವರ್ಗದಡಿ ನಿವೇಶನ ಸಂಖ್ಯೆ 12194/ಐನಲ್ಲಿ 40X60 ಅಳತೆಯ ನಿವೇಶನ ಮಂಜೂರಾಗಿದೆ.

ಈ ನಿವೇಶನದಲ್ಲಿ ಹಕ್ಕು ಪತ್ರ ಪಡೆಯುವ ಸಂದರ್ಭದಲ್ಲಿ ಮನೆ ನಿರ್ಮಿಸಬೇಕು. ಇಲ್ಲವೆ ಚಾಲ್ತಿ ಉಪ ನೋಂದಣಾಧಿಕಾರಿಗಳ ಮಾರುಕಟ್ಟೆ ಮೌಲ್ಯದ ಶೇಕಡ 25ರಷ್ಟು ಮೊತ್ತವನ್ನು ದಂಡದ ರೂಪದಲ್ಲಿ ಪಾವತಿ ಮಾಡಬೇಕಾಗಿರುತ್ತದೆ.

ಆದರೆ ಪ್ರತಾಪ್ ಸಿಂಹ ತಮ್ಮ ಪ್ರಭಾವ ಬಳಸಿ ತಮ್ಮ ಪತ್ನಿ ಹೆಸರಿಗೆ ಆಗಸ್ಟ್ 9, 2021ರಲ್ಲಿ ನಕ್ಷೆ ಮಂಜೂರಾತಿ ಪಡೆದಿದ್ದಾರೆ. ಆ ನಿವೇಶನದಲ್ಲಿ ಒಂದು ಎ.ಸಿ.ಶೀಟಿನ ರೂಂ ಮಾತ್ರ ನಿರ್ಮಾಣ ಮಾಡಿದ್ದಾರೆ. ಮುಂದೆ ಇದೇ ಎ.ಸಿ. ಶೀಟಿನ ರೂಂ ಅನ್ನೆ ಮನೆಯೆಂದು ಬಿಂಬಿಸಿ, ಮುಡಾದಿಂದ ಅಕ್ಟೋಬರ್ 4, 2021ರಲ್ಲಿ ಕಟ್ಟಡ ಪೂರ್ಣಗೊಂಡ ವರದಿ ಪಡೆದಿದ್ದಾರೆ ಎಂದು ಮರೀಗೌಡ ಆರೋಪಿಸಿದ್ದಾರೆ.

ತರುವಾಯ ಮನೆ ಕಂದಾಯವನ್ನು ಅಕ್ಟೋಬರ್ 21ರಂದು ನಿಗದಿಪಡಿಸಿ, ನವೆಂಬರ್ 10, 2021ರಂದು ಕ್ರಯಪತ್ರ ಕೂಡ ಪಡೆದಿದ್ದಾರೆ. ನಂತರ ಎ.ಸಿ. ಶೀಟಿನ ಕಟ್ಟಡದ ಬಗ್ಗೆ ದೂರು ಸ್ವೀಕೃತವಾದ ಹಿನ್ನೆಲೆಯಲ್ಲಿ ಈ ಹಿಂದೆ ನೀಡಲಾಗಿದ್ದು, ಕಟ್ಟಡ ಪೂರ್ಣಗೊಂಡ ವರದಿಯನ್ನು ಸೆಪ್ಟೆಂಬರ್ 27, 2023ರಂದು ರದ್ದುಪಡಿಸಲಾಗಿದೆ ಎಂದು ದೂರಿದ್ದಾರೆ.

ಈ ವಿಚಾರವನ್ನು ಕೂಲಂಕುಷವಾಗಿ ಗಮನಿಸಿದರೆ ಪ್ರತಾಪ್ ಸಿಂಹ ಪತ್ನಿ ಹೆಸರಿನ ನಿವೇಶನಕ್ಕೆ ಕ್ರಯಪತ್ರ ಪಡೆಯಲು ಮುಡಾಗೆ ಪಾವತಿಸಬೇಕಿದ್ದ ಉಪನೋಂದಣಾಧಿಕಾರಿಗಳ ಮಾರುಕಟ್ಟೆ ಮೌಲ್ಯದ ಶೇ.25ರಷ್ಟು ಮೊತ್ತದ ದಂಡ ತಪ್ಪಿಸಲು ವಾಮಮಾರ್ಗ ಅನುಸರಿಸಿ ನಿವೇಶನಕ್ಕೆ ಕ್ರಯಪತ್ರ ಪಡೆದಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಎಂದು ಆಪಾದಿಸಿದ್ದಾರೆ.

ಈ ಮೂಲಕ ತಮ್ಮ ಆಡಳಿತಾವಧಿಯಲ್ಲಿ ಪ್ರತಾಪ್ ಸಿಂಹ ಮುಡಾದ ಸಂಪೂರ್ಣ ಪ್ರಯೋಜನವನ್ನು ಎಷ್ಟರಮಟ್ಟಿಗೆ ಪಡೆದಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ ಎಂದು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ನಿವೇಶನ ಪಡೆದಿರುವ ವಿಚಾರವಾಗಿ ಪ್ರತಾಪ್ ಸಿಂಹ ಮಾಡಿರುವ ಆರೋಪಕ್ಕೆ ಈ ವಿಚಾರವನ್ನು ಉಲ್ಲೇಖಿಸಿ ಮರೀಗೌಡ ತಿರುಗೇಟು ನೀಡಿದ್ದಾರೆ.

ಮುಡಾದಲ್ಲಿ ಶೇಕಡ 50:50 ಅನುಪಾತದ ನಿವೇಶನ ಹಂಚಿಕೆ ಬಗ್ಗೆ ಈಗಾಗಲೇ ಸರ್ಕಾರ ಉನ್ನತ ಮಟ್ಟದ ತನಿಖಾ ತಂಡ ರಚಿಸಿದೆ. ಜೊತೆಗೆ ಆರು ತಿಂಗಳಲ್ಲಿ ವರದಿ ಸಲ್ಲಿಸಲು ನ್ಯಾಯಾಂಗ ತನಿಖೆಗೂ ಕೂಡ ಆದೇಶ ನೀಡಿದೆ. ಆದ ಕಾರಣ ಈ ಪ್ರಕರಣದ ಬಗ್ಗೆ ನಾನು ಹೆಚ್ಚಿನ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಹೇಳಿದ್ದಾರೆ.

ಪ್ರತಾಪ್ ಸಿಂಹ ಏನೇ ಆರೋಪ ಮಾಡಿದ್ದರೂ ಸಿದ್ದರಾಮಯ್ಯ ಮಾತ್ರ ಪತ್ನಿ ಹೆಸರಿಗೆ ನಿವೇಶನ ಮಂಜೂರಾಗಲು ಪ್ರಭಾವ ಬಳಸಿಲ್ಲ. ಜೊತೆಗೆ ಬಿಜೆಪಿ ಸರ್ಕಾರದ ಅವಧಿಯಲ್ಲೇ ನಿವೇಶನ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಪ್ರತಾಪ್ ಸಿಂಹ ನೀಡಿರುವ ಹೇಳಿಕೆ ಖಂಡನೀಯ ಎಂದು ಮರೀಗೌಡರು ತಿಳಿಸಿದ್ದಾರೆ

ಸಿಆರ್ ರದ್ದಾಗಿರುವುದು ಹೊಸ ವಿಚಾರವಲ್ಲ, ಬಿಡಿ



ಮೈಸೂರಿನ ವಿಜಯನಗರದಲ್ಲಿ ತಾವು ನಿರ್ಮಾಣ ಮಾಡಿರುವ ಕಟ್ಟಡಕ್ಕೆ ಸಿಆರ್ ನೀಡಿರುವುದನ್ನು ಈಗಾಗಲೇ ರದ್ದು ಮಾಡಲಾಗಿದೆ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಸ್ಪಷ್ಟಪಡಿಸಿದ್ದಾರೆ.

ಈ ವಿಚಾರಕ್ಕೂ ಮುಡಾದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರಕ್ಕೂ ತಳಕು ಹಾಕುವುದು ಸರಿಯಲ್ಲ. ಈಗಾಗಲೇ ಸಿಆರ್ ರದ್ದು ಮಾಡಿರುವುದರಿಂದ ಹೊಸ ವಿಚಾರಗಳು ಉದ್ಭವವಾಗುವುದಿಲ್ಲ. ಈಗ ಮರಿಗೌಡರೇ ಮುಡಾ ಅಧ್ಯಕ್ಷರಾಗಿದ್ದು, ಸಿಆರ್ ವಿಚಾರಕ್ಕೆ ಸಂಬಂಧಿಸಿದಂತೆ ಕಾನೂನಾತ್ಮಕ ಕ್ರಮ ಕೈಗೊಳ್ಳಲಿ ಎಂದು ಪ್ರತಾಪ್ ಸಿಂಹ ಸವಾಲು ಹಾಕಿದ್ದಾರೆ.

ಮುಡಾದಲ್ಲಿ ನಾನು ಈ ತನಕ 50:50 ಅನುಪಾತ ನಿವೇಶನ ಸೇರಿದಂತೆ ಬೇರೆ ಯಾವುದೇ ನಿವೇಶನ ಪಡೆದಿಲ್ಲ. ಇದನ್ನು ನಾನು ಎದೆಗಾರಿಕೆಯಿಂದ ಹೇಳುತ್ತೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಮುಡಾದಿಂದ ಪಡೆದಿರುವ 50:50 ಅನುಪಾತದ ನಿವೇಶನ ವಾಪಸು ನೀಡುವ ಮೂಲಕ ಮೇಲ್ಪಂಕ್ತಿ ಹಾಕಬೇಕು ಎಂದು ಸಲಹೆ ನೀಡಿದ್ದೆ. ಆದರೆ ಸಿದ್ದರಾಮಯ್ಯ ಈ ವಿಚಾರವಾಗಿ ಸಕಾರಾತ್ಮಕ ಪ್ರತಿಕ್ರಿಯೆ ನೀಡಿಲ್ಲ. ಮೊದಲು ಮರಿಗೌಡರು ಈ ವಿಚಾರವಾಗಿ ಉತ್ತರ ಕೊಡಬೇಕು ಎಂದು ಪ್ರತಾಪ್ ಸಿಂಹ ಪಂಥಾಹ್ವಾನ ನೀಡಿದ್ದಾರೆ.

ಪರಿಶಿಷ್ಟರ ಹಣ ಅನ್ಯ ಉದ್ದೇಶಕ್ಕೆ ಬಳಕೆ ಖಂಡಿಸಿ ಬಿಎಸ್‌ಪಿ ಜು.26ಕ್ಕೆ ಪ್ರತಿಭಟನೆ

ಮೈಸೂರು, ಜು.23(ಜಿಎ)-ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ರಾಜ್ಯ ಸರಕಾರ ಎಸ್‌ಸಿ, ಎಸ್‌ಟಿಗಳ ಅಭಿವೃದ್ಧಿಗೆಂದು ಮೀಸಲಿದ್ದ ಎಸ್‌ಇಪಿ, ಟಿಎಸ್‌ಪಿ ಹಣವನ್ನು ಅನ್ಯ ಉದ್ದೇಶಗಳಿಗೆ ಬಳಸುತ್ತಿರುವುದನ್ನು ಖಂಡಿಸಿ ಜು.26 ಬಹುಜನ ಸಮಾಜ ಪಕ್ಷದ ವತಿಯಿಂದ ಬೃಹತ್ ಪ್ರತಿಭಟನಾ ಧರಣಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ನಗರಾಧ್ಯಕ್ಷ ಸಿ.ಶ್ರೀನಿವಾಸ ಪ್ರಸಾದ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊಸ ಜಿಲ್ಲಾಧಿಕಾರಿ ಕಚೇರಿ ಬಳಿ ಅಂದು ಬೆಳಗ್ಗೆ 11ಕ್ಕೆ ಪ್ರತಿಭಟನೆ ನಡೆಸಲಿದ್ದು, ಇದುವರೆಗೆ ಈ ರೀತಿಯಾಗಿ ಸುಮಾರು 70 ಸಾವಿರ ಕೋಟಿ ದುರ್ಬಳಕೆ ಆಗಿದೆ. ಇಷ್ಟು ಹಣದಿಂದ ರಾಜ್ಯದ ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳ ಪ್ರಾಥಮಿಕ ಶಿಕ್ಷಣದಿಂದ ಬಿಇ, ಎಂಬಿಬಿಎಸ್, ಪಿಎಚ್‌ಡಿವರೆಗೆ ಉಚಿತ ಶಿಕ್ಷಣ ಮತ್ತು ಲಕ್ಷಾಂತರ ಎಸ್‌ಸಿ, ಎಸ್‌ಟಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡಬಹುದಾಗಿತ್ತು. ಈ ವರ್ಗದ ಮನೆ ಇಲ್ಲದವರಿಗೆ ಸ್ವಂತ ಮನೆ ಕಟ್ಟಿಸಿಕೊಡಬಹುದಾಗಿತ್ತು. ಆದ್ದರಿಂದ ಈ ಅನ್ಯಾಯ ಖಂಡಿಸಿ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಉಸ್ತುವಾರಿ ಚಂದ್ರಶೇಖರ್, ದಂಡಿನಕೆರೆ ಬಸವಣ್ಣ, ಲಿಂಗರಾಜು, ರಂಗದಾಸ್, ನಂಜುಂಡ, ಬಿ.ಮಹದೇವಸ್ವಾಮಿ ಉಪಸ್ಥಿತರಿದ್ದರು.

ಮಾನಸಗಂಗೋತ್ರಿಯ ಬಯಲು ರಂಗ ಮಂದಿರದಲ್ಲಿ ಜು.26, 27ರಂದು ಸಂಗೀತ ಸಂಜೆ

ಮೈಸೂರು,ಜು.23(ಎಂಟಿವೈ)- ಮೈಸೂರು ವಿಶ್ವವಿದ್ಯಾನಿಲಯದ ಬಯಲು ರಂಗಮಂದಿರದಲ್ಲಿ ಜು.26 ಮತ್ತು 27ರಂದು ಸಂಜೆ 5ರಿಂದ 'ಮೈಸೂರು ಪರ್ವ-ಮ್ಯೂಸಿಕಲ್ ಮಸ್ತಿ' ಸಂಗೀತ ರಸಸಂಜೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಸಾರ್ವಜನಿಕರಿಗೆ ಉಚಿತ ಪ್ರವೇಶಾವಕಾಶ ಕಲ್ಪಿಸಲಾಗಿದೆ ಎಂದು ಡ್ರೀಮ್ಸ್ ಇಂಕ್ ಸಂಸ್ಥೆಯ ನಿರ್ದೇಶಕರಾದ ಕೌಸಲ್ಯಾ ಬಾಯಿ ತಿಳಿಸಿದ್ದಾರೆ.

ಡ್ರೀಮ್ಸ್ ಇಂಕ್ ವತಿಯಿಂದ ಆಯೋಜಿಸಿರುವ 'ಮೈಸೂರು ಪರ್ವ-ಮ್ಯೂಸಿಕಲ್ ಮಸ್ತಿ' ಸಂಗೀತಸಂಜೆ ಕಾರ್ಯಕ್ರಮವನ್ನು ಜು.26ರಂದು ಸಂಜೆ 5ಕ್ಕೆ ರಂಗಕರ್ಮಿ ಮಂಡ್ಯ ರಮೇಶ್ ಹಾಗೂ ಹಿನ್ನೆಲೆ ಗಾಯಕಿ ಡಾ.ಶ್ರೀದೇವಿ ಕುಳನೂರು ಉದ್ಘಾಟಿಸಲಿದ್ದಾರೆ. ಬಳಿಕ ರ‍್ಯಾಪ್ ಗೀತೆಗಳ ಗಾಯನದಲ್ಲಿ ಹೆಸರು ಮಾಡಿರುವ ರಾಹುಲ್ ಡಿಟೊ ಮತ್ತು ಎಂ.ಸಿ.ಬಿಜ್ಜು ಅವರಿಂದ ಗಾಯನ ನಡೆಯಲಿದೆ. ನಂತರ ಝೀ ಕನ್ನಡ ಸರಿಗಮಪ ಗ್ರಾಂಡ್ ಫೈನಲಿಸ್ಟ್ ಮೈಸೂರಿನ ಅಮೂಲ್ಯ ಅವರಿಂದ ಗಾಯನವಿದೆ.

ಜು.27ರಂದು ಸಂಜೆ 5ರಿಂದ ಗಾಯಕಿ ಅನನ್ಯ ಭಟ್ ಹಾಗೂ ತಂಡದವರ ಗಾಯನ ಕಾರ್ಯಕ್ರಮ ಜರುಗಲಿದೆ. ಅಲ್ಲದೆ, ಕಾಮಿಡಿ ಕಿಲಾಡಿಗಳು ಖ್ಯಾತಿಯ ರಾಘವೇಂದ್ರಆಚಾರ್ ಹಾಸ್ಯ, ಸರಿಗಮಪ ಖ್ಯಾತಿಯ ಕಂಬದ ರಂಗಯ್ಯ ಅವರಿಂದಲೂ ಗಾಯನ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ತಿಳಿಸಿದ್ದಾರೆ.

ವಿನಾಯಕನಗರ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ನೋಟ್ ಪುಸ್ತಕ ವಿತರಣೆ


ಮೈಸೂರಿನ ವಿನಾಯಕನಗರದಲ್ಲಿರುವ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪಂಚ ಗರುಡೋತ್ಸವ ಸೇವಾ ಸಮಿತಿ ವತಿಯಿಂದ ನೋಟ್ ಪುಸ್ತಕಗಳನ್ನು ವಿತರಿಸಲಾಯಿತು. ಚಿತ್ರದಲ್ಲಿ ಸಮಿತಿ ಅಧ್ಯಕ್ಷ ಲಕ್ಷ್ಮೀಶ್, ಕಾರ್ಯದರ್ಶಿ ಪ್ರದೀಪ್, ಖಜಾಂಚಿ ಎಚ್.ಎಲ್.ವಿ.ಆಚಾರ್ಯ ಹಾಗೂ ಸದಸ್ಯರಾದ ಕಾಳಿದಾಸ ರಸ್ತೆ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದ ಮುಖ್ಯಸ್ಥ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್), ಶ್ರೀಮತಿ ನಾಗಮಣಿ, ರಾಮಸ್ವಾಮಿ ಅಯ್ಯಂಗಾರ್ ಹಾಗೂ ಪುರೋಹಿತರಾದ ವೀರರಾಘವನ್ ಉಪಸ್ಥಿತರಿದ್ದರು.

ಸಮುದ್ರದ ಮಧ್ಯೆ ಸಿಲುಕಿದ್ದ 43 ಮೀನುಗಾರರ ರಕ್ಷಣೆ

ಕೋಝಿಕೋಡ್: ಕೇರಳದ ಕರಾವಳಿಯಲ್ಲಿ ದೋಣಿಗಳ ತಾಂತ್ರಿಕ ದೋಷದಿಂದ ಸಮುದ್ರದ ಮಧ್ಯದಲ್ಲಿ ಸಿಲುಕಿದ್ದ 43 ಮೀನುಗಾರರನ್ನು ರಕ್ಷಿಸಲಾಗಿದೆ. ಇಲ್ಲಿನ ಕೊಯಿಲಾಂಡಿ ಮತ್ತು ಬೇಪೂರ್ ಬಂದರುಗಳಿಂದ ಮೀನುಗಾರಿಕೆಗೆಂದು ಸಮುದ್ರಕ್ಕೆ ಇಳಿದಿದ್ದ 2 ದೋಣಿಗಳ ಇಂಜಿನ್‌ಗಳು ಕೆಲಸ ಮಾಡದೇ ಸಮುದ್ರದಲ್ಲಿ ಮಧ್ಯದಲ್ಲಿ ಸಿಲುಕಿದ್ದವು. ಈ ಮಾಹಿತಿ ತಿಳಿಯುತ್ತಿದ್ದಂತೆಯೇ ಬೇಪೂರ್ ಮೀನುಗಾರಿಕೆ ಸಹಾಯಕ ನಿರ್ದೇಶಕರ ನಿರ್ದೇಶನದಂತೆ ಕೋಝಿಕ್ಕೋಡ್‌ನಲ್ಲಿ ಮೀನುಗಾರಿಕೆ ಸಾಗರ ಜಾರಿ ಇಲಾಖೆ ಶೀಘ್ರದಲ್ಲೇ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿತು ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ಸಮುದ್ರದಿಂದ ರಕ್ಷಿಸಲ್ಪಟ್ಟ ನಂತರ, ಮೀನುಗಾರರನ್ನು ಸುರಕ್ಷಿತವಾಗಿ ಆಯಾ ಬಂದರುಗಳಿಗೆ ಕರೆತರಲಾಗಿದೆ.

ಕರ್ನಾಟಕ ಸಂಭ್ರಮ-50: ದಸರಾ ವಸ್ತುಪ್ರದರ್ಶನ ಆವರಣದಲ್ಲಿ ನಾಳೆಯಿಂದ ಬೃಹತ್ ಗ್ರಾಹಕ ಮೇಳ

- ವಿವಿಧ ಕ್ಷೇತ್ರದ ಸಾಧಕರ ಸಾಧನೆ ಅನಾವರಣ; ನಿತ್ಯವೂ ಮನರಂಜನಾ ಕಾರ್ಯಕ್ರಮ
- ಮನರಂಜನೆ, ಕಣ್ಮನ ಸೆಳೆಯುವ ಡ್ರೆಸ್ ಮೆಟೀರಿಯಲ್, ಖಾದ್ಯಗಳ ಮಾರಾಟ

ಮೈಸೂರು, ಜು.23(ಜಿಎ)-ಕರ್ನಾಟಕ ಸಂಭ್ರಮ-50ರ ಸವಿನೆನಪಿಗಾಗಿ ಮೈಸೂರಿನಲ್ಲಿ ಸೈಮನ್ ಎಕ್ಸಿಬಿಟರ್ಸ್ ವತಿಯಿಂದ ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಬೃಹತ್ ಗ್ರಾಹಕ ಮೇಳ-ಕರ್ನಾಟಕ ಸಂಭ್ರಮ-50 ಆಯೋಜಿಸಲಾಗಿದೆ ಎಂದು ಸೈಮನ್ ಎಕ್ಸಿಬಿಟರ್ಸ್‌ನ ನಿರ್ದೇಶಕ ಎಂ.ಎಸ್.ನಾಗಚಂದ್ರ ತಿಳಿಸಿದರು.

ಮೈಸೂರಿನ ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 1973ರ ನವೆಂಬರ್ 1ರಂದು ಮೈಸೂರು ರಾಜ್ಯವನ್ನು ಕರ್ನಾಟಕ ಎಂದು ಮರುನಾಮಕರಣ ಮಾಡಿದ ಸುವರ್ಣ ಮಹೋತ್ಸವದ ಅಂಗವಾಗಿ ಜುಲೈ 25ರಿಂದ ಆಗಸ್ಟ್ 25ರವರೆಗೆ ಮೇಳ ಆಯೋಜಿಸಲಾಗಿದೆ. ಗ್ರಾಹಕ ಮೇಳದ ಜೊತೆಗೆ ರಾಜ್ಯದಲ್ಲಿ ಇದುವರೆಗೆ ಅಧಿಕಾರ ನಡೆಸಿದ ಮುಖ್ಯಮಂತ್ರಿಗಳು, ಕನ್ನಡ ಚಿತ್ರರಂಗದ ಗಣ್ಯರು, ಕ್ರೀಡಾಪಟುಗಳು, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ಸೇರಿದಂತೆ ನಾಡಿನ ಹಲವು ಮಹನೀಯರ ಸಾಧನೆಗಳ ಮಾಹಿತಿಯನ್ನು ಇಲ್ಲಿ ಪ್ರದರ್ಶಿಸಲಾಗುತ್ತದೆ ಎಂದು ಮಾಹಿತಿ ನೀಡಿದರು.

ಮೇಳದಲ್ಲಿ 100ಕ್ಕೂ ಹೆಚ್ಚು ಮಳಿಗೆಗಳು ಇರಲಿವೆ. ಈ ಮೇಳವು ರೋಬೋಟಿಕ್ ಬಟರ್‌ಫ್ಲೈ, ಅನಿಮಲ್ ಕಿಂಗ್‌ಡಮ್, ಹಿಮಾಲಯನ್ ಅನಿಮಲ್ಸ್ ಮತ್ತು ಅವತಾರ್ ಎಂಬ ನಾಲ್ಕು ಪರಿಕಲ್ಪನೆಗಳು ಪ್ರದರ್ಶನದಲ್ಲಿ ಗಮನ ಸೆಳೆಯಲಿವೆ ಎಂದರು.


ಮೈಸೂರು ವಸ್ತುಪ್ರದರ್ಶನದಲ್ಲಿ ಸೈಮನ್ ಎಕ್ಸಿಬಿಟರ್ಸ್‌ನ ವತಿಯಿಂದ ನಿರ್ಮಿಸಿರುವ ರೋಬೋಟಿಕ್ ಬಟರ್‌ಫ್ಲೈಗಳನ್ನು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್, ಸಿಇಓ ರಾಜೇಶ್ ಜಿ.ಗೌಡ ವೀಕ್ಷಿಸಿದರು.

ನಾಡಿನ ವಿವಿಧ ಕ್ಷೇತ್ರದ ಸಾಧಕರ ಸಾಧನೆ ಸಂಗ್ರಹಗಳು, ನಾನಾ ಕ್ರೀಡಾಪಟುಗಳು, ಚಲನಚಿತ್ರ ನಟರಾದ ಡಾ.ರಾಜ್‌ಕುಮಾರ್, ವಿಷ್ಣುವರ್ಧನ್ ಮತ್ತು ಅಂಬರೀಶ್ ಸೇರಿದಂತೆ ಶ್ರೇಷ್ಠ ಚಲನಚಿತ್ರ ನಟರು, ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಗಣ್ಯರ ಮಾಹಿತಿಯನ್ನು ಪ್ರದರ್ಶಿಸಲಾಗುತ್ತದೆ ಎಂದು ತಿಳಿಸಿದರು.

ಡ್ರೆಸ್ ಮೆಟೀರಿಯಲ್ಸ್, ರೆಡಿಮೇಡ್ ಉಡುಪು, ಸೀರೆ, ಕುರ್ತಾ ಪೈಜಾಮಾ, ಶರ್ಟಿಂಗ್ ಮತ್ತು ಸೂಟಿಂಗ್ಸ್ ನಾನಾ ರೀತಿಯ ಡ್ರೆಸ್ ಮೆಟಿರಿಯಲ್ಸ್ ಖರೀದಿಗೆ ಜನರು ಎಕ್ಸ್‌ಪೋಗೆ ಭೇಟಿ ನೀಡಬಹುದು. ವ್ಯಾಪಕ ಶ್ರೇಣಿಯ ಮಸಾಲಾ ಪುಡಿಗಳು, ಜೇನುತುಪ್ಪ, ಚಾಕೊಲೇಟ್, ಚಟ್ನಿ ಪುಡಿ, ಉಪ್ಪಿನಕಾಯಿ, ಒಣ ಹಣ್ಣುಗಳು, ನಾನಾ ಕಂಪನಿಗಳ ಉತ್ಪನ್ನಗಳು ಒಂದೇ ಸೂರಿನಡಿ ಲಭ್ಯವಿದೆ. ಮಕ್ಕಳು ಮತ್ತು ಹಿರಿಯರಿಗೆ ಮನೋರಂಜನಾ ಉದ್ಯಾನವನವು ಆಕರ್ಷಿಸಲಿದೆ. ಖಾದ್ಯ ಪ್ರಿಯರಿಗೆ ಫುಡ್ ಕೋರ್ಟ್ ಕೂಡ ಸ್ಥಾಪಿಸಲಾಗಿದೆ. ಪ್ರೇಕ್ಷಕರ ಮನರಂಜಿಸಲು ಪ್ರತಿದಿನ ವೇದಿಕೆ ಕಾರ್ಯಕ್ರಮಗಳನ್ನೂ ಏರ್ಪಡಿಸಲಾಗುತ್ತಿದೆ. ಪ್ರತಿದಿನ ಸಂಜೆ 4ರಿಂದ ರಾತ್ರಿ 9.30ರವರೆಗೆ ಮೇಳ ಸಾರ್ವಜನಿಕರಿಗೆ ತೆರೆದಿರುತ್ತದೆ ಎಂದರು. ಸುದ್ದಿಗೋಷ್ಠಿಯಲ್ಲಿ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ಅಧ್ಯಕ್ಷ ಅಯೂಬ್‌ಖಾನ್, ಸಿಇಓ ರಾಜೇಶ್ ಜಿ.ಗೌಡ ಉಪಸ್ಥಿತರಿದ್ದರು.

ಖಾಸಗಿ, ಸರ್ಕಾರಿ ಮೇಳಗಳಿಗೆ ವಸ್ತುಪ್ರದರ್ಶನ ಆವರಣ ಸೂಕ್ತ ಸ್ಥಳ

ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳು, ನಿಗಮ-ಮಂಡಳಿ, ಪ್ರಾಧಿಕಾರ, ಸ್ವಾಯತ್ತ ಸಂಸ್ಥೆಗಳು ಸರ್ಕಾರದ ಕಾರ್ಯಕ್ರಮಗಳನ್ನು ಕರ್ನಾಟಕ ವಸ್ತುಪ್ರದರ್ಶನ ಆವರಣದಲ್ಲೇ ಆಯೋಜಿಸುವಂತೆ ರಾಜ್ಯ ಸರ್ಕಾರ ಆದೇಶಿಸಿದ್ದು, ಈ ಹಿನ್ನೆಲೆಯಲ್ಲಿ ವರ್ಷಪೂರ್ತಿ ಕಾರ್ಯಕ್ರಮಗಳು, ವಸ್ತುಪ್ರದರ್ಶನಗಳ ಆಯೋಜನೆಗೆ ತಕ್ಕಂತೆ ಆವರಣವನ್ನು ಸಜ್ಜುಗೊಳಿಸಲಾಗುವುದು ಎಂದು ಪ್ರಾಧಿಕಾರದ ಅಧ್ಯಕ್ಷ ಅಯೂಬ್‌ಖಾನ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಸಜ್ಜಿತ ಮಳಿಗೆಗಳು ಇರುವುದರಿಂದ ಖಾಸಗಿ ಹಾಗೂ ಸರ್ಕಾರದ ವಸ್ತುಪ್ರದರ್ಶನಗಳನ್ನು ವಸ್ತುಪ್ರದರ್ಶನ ಆವರಣದಲ್ಲಿ ಆಯೋಜಿಸಬಹುದು. 48 ಕೋಟಿ ರೂ. ವೆಚ್ಚದಲ್ಲಿ ಮಳಿಗೆಗಳನ್ನು ಪಾರಂಪರಿಕ ಶೈಲಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ. ಮುಂಬರುವ ದಸರಾ ವಸ್ತುಪ್ರದರ್ಶನದ ಬಳಿಕ ಕಾಮಗಾರಿ ಆರಂಭವಾಗಲಿದೆ ಎಂದರು.

ಪ್ರವಾಸಿ ತಾಣವಾದ ಮೈಸೂರಿಗೆ ಬರುವ ಪ್ರವಾಸಿಗರಿಗೆ ಸಂಜೆ ವೇಳೆ ಮನರಂಜನೆ ಹಾಗೂ ನಾನಾ ವಸ್ತುಗಳ ಖರೀದಿಗೆ ಅನುಕೂಲವಾಗಲೆಂದು ವರ್ಷಪೂರ್ತಿ ವಸ್ತುಪ್ರದರ್ಶನ ಆಯೋಜಿಸಲಾಗುತ್ತಿದೆ. ಸ್ವದೇಶಿ ದರ್ಶನ್ ಯೋಜನೆಯಡಿ ವಸ್ತುಪ್ರದರ್ಶನದಲ್ಲಿ ಉದ್ದೇಶಿಸಿದ್ದ ಯೋಜನೆಯನ್ನು ಇಲ್ಲಿಗೆ ಬದಲಾಗಿ ಹಳೇ ಜಿಲ್ಲಾಧಿಕಾರಿ ಕಚೇರಿ ವಸ್ತು ಸಂಗ್ರಹಾಲಯವಾಗಿ (ಮ್ಯೂಸಿಯಂ) ಪರಿವರ್ತಿಸುವುದು ಹಾಗೂ ಟಾಂಗಾ ಪ್ರವಾಸೋದ್ಯಮಕ್ಕೆ ಸಂಬಂಧಿಸಿದ ಯೋಜನೆಯನ್ನು ಪ್ರವಾಸೋದ್ಯಮ ಇಲಾಖೆಯಿಂದ ಕೈಗೆತ್ತಿಗೊಳ್ಳಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವತಿಯಿಂದ ಯೂನಿಟಿ ಮಾಲ್ ನಿರ್ಮಿಸಲು ವಸ್ತುಪ್ರದರ್ಶನ ಆವರಣದ ನಾಲ್ಕೂವರೆ ಎಕರೆ ಜಾಗವನ್ನು ಬಳಕೆ ಮಾಡಿಕೊಳ್ಳಲಾಗುತ್ತಿದೆ. ಇದರಿಂದ ವಸ್ತುಪ್ರದರ್ಶನದ ಪಾರ್ಕಿಂಗ್‌ಗೆ ತೊಂದರೆಯಾಗಲಿದ್ದು ಕಟ್ಟಡದ ಕೆಳ ಭಾಗವನ್ನು ವಾಹನ ನಿಲುಗಡೆಗೆ ಬಳಕೆ ಮಾಡುವಂತೆ ಸಲಹೆ ನೀಡಲಾಗಿದೆ ಎಂದರು. ಈ ವೇಳೆ ಸಿಇಓ ರಾಜೇಶ್ ಜಿ.ಗೌಡ, ಸೈಮನ್ಸ್ ಎಕ್ಸಿಬಿಟರ್ ನಿರ್ದೇಶಕ ಎಂ.ಎಸ್.ನಾಗಚಂದ್ರ ಉಪಸ್ಥಿತರಿದ್ದರು.

ಪ್ಯಾನಿಕ್ ಬಟನ್, ಜಿಪಿಆರ್‌ಎಸ್ ಅವೈಜ್ಞಾನಿಕ ಸಾಧನ ಅಳವಡಿಕೆ ಆದೇಶ ಕಡೆಗಣನೆ

ಸಾರಿಗೆ ಇಲಾಖೆ ವಿರುದ್ಧ ಟ್ಯಾಕ್ಸಿ ಚಾಲಕರ ಪ್ರತಿಭಟನೆ



ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಎದುರು ಸಾರಿಗೆ ಇಲಾಖೆ ವಿರುದ್ಧ ಕರ್ನಾಟಕ ಟ್ಯಾಕ್ಸಿ ಡ್ರೈವರ್ಸ್ ಅಸೋಸಿಯೇಷನ್‌ನಿಂದ ಪ್ರತಿಭಟನೆ ನಡೆಸಲಾಯಿತು.

ಮಡಿಕೇರಿ, ಜು.23–ಬಾಡಿಗೆ ವಾಹನಗಳಿಗೆ 'ಪ್ಯಾನಿಕ್ ಬಟನ್' ಮತ್ತು 'ಜಿಪಿಆರ್‌ಎಸ್' ಅವೈಜ್ಞಾನಿಕ ಸಾಧನ ಅಳವಡಿಕೆಯನ್ನು ಸಾರಿಗೆ ಇಲಾಖೆ ಸರ್ಕಾರದ ಆದೇಶ ಕಡೆಗಣಿಸಿ ಕಡ್ಡಾಯಗೊಳಿಸಿದೆ ಎಂದು ಆರೋಪಿಸಿ ಕರ್ನಾಟಕ ಟ್ಯಾಕ್ಸಿ ಡ್ರೈವರ್ಸ್ ಅಸೋಸಿಯೇಷನ್‌ನ ಕೊಡಗು ಜಿಲ್ಲಾ ಘಟಕ ಮಂಗಳವಾರ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿತು.

ಅಸೋಸಿಯೇಷನ್ ಜಿಲ್ಲಾಧ್ಯಕ್ಷ ಎಂ.ಎಸ್. ವಿನೋದ್, ರಾಜ್ಯ ಸಂಘಟನಾ ಕಾರ್ಯದರ್ಶಿ ವಿನ್ಸೆಂಟ್ ಬಾಬು ನೇತೃತ್ವದಲ್ಲಿ ಜಿಲ್ಲೆಯ ಬಸ್ ಮಾಲೀಕರು ಮತ್ತು ಚಾಲಕರು, ಜೀಪ್ ಚಾಲಕರ ಸಂಘ ಸೇರಿದಂತೆ ವಿವಿಧ ಸಂಘಟನೆಗಳ ಸಹಕಾರದೊಂದಿಗೆ ನೂರಾರು ಟ್ಯಾಕ್ಸಿ ಚಾಲಕರು ನಗರದ ಸುದರ್ಶನ ವೃತ್ತದಿಂದ ಮುಖ್ಯ ರಸ್ತೆಗಳಲ್ಲಿ ಮೆರವಣಿಗೆ ನಡೆಸಿ, ನಂತರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಟ್ಯಾಕ್ಸಿಗಳಿಗೆ ಪ್ಯಾನಿಕ್ ಬಟನ್ ಮತ್ತು ಜಿಪಿಆರ್‌ಎಸ್ ಅವೈಜ್ಞಾನಿ ಸಾಧನ ಅಳವಡಿಕೆ ಸೂಚನೆಯಿಂದ ಆರ್ಥಿಕ ತೊಂದರೆಯಲ್ಲಿರುವ ಟ್ಯಾಕ್ಸಿ ಚಾಲಕರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಾಧನ ಅಳವಡಿಕೆಗೆ ಕೇಂದ್ರ ಸರ್ಕಾರ 7890 ರೂ. ನಿಗದಿಪಡಿಸಿದೆ. ಆದರೆ, ರಾಜ್ಯದ ಎಲ್ಲಾ ಸಾರಿಗೆ ಕಚೇರಿಗಳಲ್ಲಿ ಇವುಗಳ ಅಳವಡಿಕೆಗೆ 13 ಸಾವಿರದಿಂದ 15 ಸಾವಿರ ರೂ.ವರೆಗೆ ವಸೂಲಿ ಮಾಡಲಾಗುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸಾರಿಗೆ ಸಚಿವರು ಪ್ಯಾನಿಕ್ ಬಟನ್ ಮತ್ತು ಜಿಪಿಆರ್‌ಎಸ್ ಅಳವಡಿಕೆಗೆ ಸೆಪ್ಟೆಂಬರ್ ವರೆಗೆ ಅವಕಾಶ ನೀಡಿದ್ದು, ಇವುಗಳನ್ನು ಅಳವಡಿಸದೆ ಫಿಟ್‌ನೆಸ್ ಸರ್ಟಿಫಿಕೇಟ್(ಎಫ್‌ಸಿ)ಗೆ ಅವಕಾಶ ನೀಡಿದ್ದಾರೆ. ಆದರೆ, ಸಾರಿಗೆ ಅಧಿಕಾರಿಗಳು ಸಚಿವರ ಆದೇಶವನ್ನು ನಿರ್ಲಕ್ಷಿಸಿ, ಎಫ್‌ಸಿ ಮಾಡಲು ಪ್ಯಾನಿಕ್ ಬಟನ್ ಮತ್ತು ಜಿಪಿಆರ್‌ಎಸ್ ಕಡ್ಡಾಯ ಮಾಡಲಾಗಿದೆ.

ಈಗಾಗಲೆ ವಾಣಿಜ್ಯ ಉದ್ದೇಶದ ಎಲ್ಲೋ ಬೋರ್ಡ್ ವಾಹನದವರು ದುಬಾರಿ ತೆರಿಗೆ, ಸ್ಪೀಡ್ ಗವರ್ನರ್, ಇನ್ಶೂರೆನ್ಸ್‌ಗಳಿಂದ ಆರ್ಥಿಕ ಹೆಚ್ಚಿನ ಹೊರೆ ಅನುಭವಿಸುತ್ತಿದ್ದಾರೆ. ಇವುಗಳ ನಡುವೆ ಹಳದಿ ಬೋರ್ಡ್ ಮಾಡದೆ 'ವೈಟ್ ಬೋರ್ಡ್' ನಲ್ಲೇ ಸಾಕಷ್ಟು ಮಂದಿ ಬಾಡಿಗೆ ಮಾಡುತ್ತಿರುವುದರಿಂದ ಹಳದಿ ಬೋರ್ಡ್ ವಾಹನ ಚಾಲಕರಿಗೆ ನಷ್ಟವುಂಟಾಗುತ್ತಿದೆ ಎಂದು ಆರೋಪಿಸಿದರು.

ಆದೇಶ ರದ್ದಾಗಲಿ: ಟ್ಯಾಕ್ಸಿ ಮಾಲೀಕರ ಮತ್ತು ಚಾಲಕರ ಸಮಸ್ಯೆಗಳನ್ನು ಪರಿಗಣಿಸಿ ಟ್ಯಾಕ್ಸಿಗಳಿಗೆ ಸಂಬಂಧಿಸಿದ ನೂತನ ಆದೇಶ ರದ್ದುಗೊಳಿಸಲು ವಿಧಾನಸಭಾ ಅಧಿವೇಶನದಲ್ಲಿ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಮುಖ್ಯಮಂತ್ರಿಗಳು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಸಾರಿಗೆ ಸಚಿವರು, ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರಿಗೆ ಮನವಿ ಮಾಡಲಾಗಿದೆ ಎಂದರು.

ನಂತರ ಉಪವಿಭಾಗಾಧಿಕಾರಿ ವಿನಾಯಕ ನರ್ವಾಡೆ ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಅಸೋಸಿಯೇಷನ್ ಜಿಲ್ಲಾ ಕಾರ್ಯದರ್ಶಿ ಕಿರಣ್, ಜಂಟಿ ಕಾರ್ಯದರ್ಶಿ ಲಿಜೇಶ್, ಮಡಿಕೇರಿ ತಾಲೂಕು ಅಧ್ಯಕ್ಷ ಸಂತು ಕಾರ್ಯಪ್ಪ, ಖಾಸಗಿ ಬಸ್ ಮಾಲೀಕರು ಮತ್ತು ಚಾಲಕರ ಸಂಘದ ಅಧ್ಯಕ್ಷ ರಮೇಶ್ ಜೋಯಪ್ಪ ಹಾಗೂ ಟ್ಯಾಕ್ಸಿ ಚಾಲಕರು ಪಾಲ್ಗೊಂಡಿದ್ದರು.

ಶಾಲೆಗಳಲ್ಲಿ ಮಕ್ಕಳಿಗೆ ಕಲಿಕಾ ವಾತಾವರಣ ನಿರ್ಮಿಸಿ

ಜಿಲ್ಲಾ ಮಟ್ಟದ ಕಾರ್ಯಾಗಾರದಲ್ಲಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಹೇಳಿಕೆ



ಮಡಿಕೇರಿ ಗಾಂಧಿ ಭವನದಲ್ಲಿ ನಡೆದ ಸೈಬರ್ ಸುರಕ್ಷತೆ ಹಾಗೂ ಮಕ್ಕಳ ರಕ್ಷಣೆ ಕುರಿತ ಕಾರ್ಯಾಗಾರವನ್ನು ಜಿಲ್ಲಾಧಿಕಾರಿ ವೆಂಕಟ್ ರಾಜಾ ಉದ್ಘಾಟಿಸಿದರು.

> ಮಕ್ಕಳಿಗೆ ಯಾವುದೇ ತೊಂದರೆಯಾಗದಂತೆ ವಿಶೇಷ ಆಸಕ್ತಿ ವಹಿಸುವುದು ಮುಖ್ಯ. ಮಕ್ಕಳಿಗೆ ನೋವಾಗದಂತೆ ನಡೆದುಕೊಳ್ಳುವುದು ಅತ್ಯವಶ್ಯಕವಾಗಿದೆ. ಮಕ್ಕಳಿಗೆ ಒಳ್ಳೆಯ ಮಾರ್ಗದರ್ಶನ ನೀಡಿದ್ದಲ್ಲಿ ಭವಿಷ್ಯದಲ್ಲಿ ಒಳ್ಳೆಯ ಪ್ರಜೆಗಳಾಗಿ ರೂಪುಗೊಳ್ಳುತ್ತಾರೆ.
>
> -ರಂಗಧಾಮಪ್ಪ,
> ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕ

ಮಡಿಕೇರಿ, ಜು.23– ಶಾಲೆಯಲ್ಲಿ ಮಕ್ಕಳಿಗೆ ಕಲಿಕಾ ವಾತಾವರಣ ನಿರ್ಮಿಸಬೇಕು. ಜೊತೆಗೆ ಮಕ್ಕಳ ರಕ್ಷಣೆ ಮತ್ತು ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ತಿಳಿಸಿದರು.

ನಗರದ ಗಾಂಧಿ ಭವನದಲ್ಲಿ ಮಂಗಳವಾರ ನವದೆಹಲಿಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ನಡೆದ ಸೈಬರ್ ಸುರಕ್ಷತೆ ಹಾಗೂ ಮಕ್ಕಳ ರಕ್ಷಣೆ ಕುರಿತ ಜಿಲ್ಲಾ ಮಟ್ಟದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶಾಲೆಯಲ್ಲಿ ಪಾಠದ ಜೊತೆಗೆ ಆಟೋಟ, ಸಂಗೀತ, ಕಲೆ, ಸಾಹಿತ್ಯ ಹೀಗೆ ಹಲವು ಉತ್ತಮ ಪರಿಸರವನ್ನು ನಿರ್ಮಾಣ ಮಾಡಬೇಕು. ಮನೆ ಮತ್ತು ಶಾಲೆಯಲ್ಲಿ ಮಕ್ಕಳಿಗೆ ಉತ್ತಮ ವಾತಾವರಣವಿದ್ದಲ್ಲಿ ಮಕ್ಕಳು ಅದನ್ನು ಅನುಸರಿಸುತ್ತಾರೆ. ಇದರಿಂದ ಕಲಿಕಾ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಸಹಕಾರಿಯಾಗಲಿದೆ ಎಂದು ಹೇಳಿದರು. ಇಂದಿನ ಅಂತರ್ಜಾಲ ಹಾಗೂ ಮೊಬೈಲ್ ಯುಗದಲ್ಲಿ ಒಳಿತು–ಕೆಡುಕುಗಳ ಬಗ್ಗೆ ನಿಗಾವಹಿಸಬೇಕಿದೆ. ಆದ್ದರಿಂದ ಒಳಿತನ್ನು ಬಳಸಿಕೊಂಡು ಕೆಡುಕುಗಳನ್ನು ನಿರ್ಬಂಧಿಸಲು ಅವಕಾಶವಿದೆ. ಸಮಾಜದಲ್ಲಿ ಮಕ್ಕಳು ಉತ್ತಮ ನಾಗರಿಕರಾಗಿ ಬೆಳೆಯುವಂತಾಗಲು ಸರಿಯಾದ ಮಾಹಿತಿ ಮತ್ತು ಮಾರ್ಗದರ್ಶನ ಅತ್ಯಗತ್ಯ. ಆ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಉತ್ತಮ ವಾತಾವರಣ ನಿರ್ಮಿಸಬೇಕು. ಶಿಕ್ಷಕರು, ಪೋಷಕರು ಸೇರಿದಂತೆ ಎಲ್ಲರೂ ಮಕ್ಕಳಲ್ಲಿ ಸಂವೇದನಾಶೀಲತೆ ಬೆಳೆಸಬೇಕು ಎಂದರು.

ರಾಷ್ಟ್ರೀಯ ಮಕ್ಕಳ ಹಕ್ಕುಗಳ ಆಯೋಗದ ಪ್ರತಿನಿಧಿ ಡಾ.ಋಷಿ ತಮನ್ನ ಮಾತನಾಡಿ, ಮಕ್ಕಳಿಗೆ ಕನಿಷ್ಠ ಮೂಲ ಸೌಲಭ್ಯ ಕಲ್ಪಿಸಬೇಕು. ಶಿಕ್ಷಣಕ್ಕೆ ಪ್ರಥಮ ಆದ್ಯತೆ ನೀಡಬೇಕು. ಮಕ್ಕಳಿಗೆ ಯಾವುದೇ ಕಾರಣಕ್ಕೂ ಕಿರುಕುಳ ನೀಡಬಾರದು. ಮಕ್ಕಳನ್ನು ಗೌರವಿಸಬೇಕು. ಮೊಬೈಲ್ ಬಳಕೆಯಿಂದ ಕಾಲಹರಣವಾಗುತ್ತದೆಯೇ ಹೊರತು, ಗುರಿ ಸಾಧನೆ ಮಾಡಲು ಸಾಧ್ಯವಿಲ್ಲ. ಇದರಿಂದ ಗಮನ ಬೇರೆಡೆ ಹೋಗುತ್ತದೆ. ಆದ್ದರಿಂದ ಸೈಬರ್ ಸುರಕ್ಷತೆ ಬಗ್ಗೆ ಎಚ್ಚರವಹಿಸಬೇಕು ಎಂದು ಸಲಹೆ ನೀಡಿದರು.

ಕೂಡಿಗೆ ಡಯಟ್ ಪ್ರಾಂಶುಪಾಲ ಎಂ. ಚಂದ್ರಕಾಂತ್, ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿ ಸೌಮ್ಯ ಪೊನ್ನಪ್ಪ, ಶಿಕ್ಷಣಾಧಿಕಾರಿ ಎಂ.ಮಹಾದೇವಸ್ವಾಮಿ, ವಿಷಯ ಪರಿವೀಕ್ಷಕಿ ಬಿಂದು, ಎಂ.ಕೃಷ್ಣಪ್ಪ ಮಾತನಾಡಿದರು.

ಆ.11ರಂದು ನಿವೃತ್ತ 20 ಕದನ ಕಲಿಗಳಿಗೆ ಸನ್ಮಾನ



ಸುದ್ದಿಗೋಷ್ಠಿಯಲ್ಲಿ ಕೊಟ್ಟುಕತ್ತೀರ ಪಿ.ಸೋಮಣ್ಣ ಮಾತನಾಡಿದರು.

ಮಡಿಕೇರಿ, ಜು.23–ನಿವೃತ್ತ 20 ಯುದ್ಧ ಕಲಿಗಳನ್ನು ಅಖಿಲ ಕರ್ನಾಟಕ ಮಾಜಿ ಸೈನಿಕರ ಸಂಘದ ಕೊಡಗು ಘಟಕದಿಂದ ಆ.11ರಂದು ನಡೆಯಲಿರುವ ಮಹಾಸಭೆಯಲ್ಲಿ ಸನ್ಮಾನಿಸಲಾಗುವುದು ಎಂದು ಸಂಘದ ಜಿಲ್ಲಾಧ್ಯಕ್ಷ ಕೊಟ್ಟುಕತ್ತೀರ ಪಿ.ಸೋಮಣ್ಣ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಕಾವೇರಿ ಹಾಲ್‌ನಲ್ಲಿ ಆ.11ರಂದು ಬೆಳಗ್ಗೆ 10.30 ಗಂಟೆಗೆ ಮಹಾಸಭೆ ಆಯೋಜಿಸಲಾಗಿದೆ. ಸಭೆಗೂ ಮುನ್ನ ಬೆಳಗ್ಗೆ 9.30ಕ್ಕೆ ಇಲ್ಲಿನ ಜನರಲ್ ಕೆ.ಎಸ್.ತಿಮ್ಮಯ್ಯ ಮ್ಯೂಸಿಯಂನಲ್ಲಿರುವ ಯುದ್ಧ ಸ್ಮಾರಕಕ್ಕೆ ಪುಷ್ಪ ನಮನ ಸಲ್ಲಿಸಲಾಗುವುದು ಮಾಹಿತಿ ನೀಡಿದರು.

ಮಹಾಸಭೆಯಲ್ಲಿ 1962ರ ಇಂಡೋ–ಚೀನಾ ಯುದ್ಧ, 1965ರ ಇಂಡೋ–ಪಾಕ್ ಯುದ್ಧ ಮತ್ತು 1971ರ ಬಾಂಗ್ಲಾ ವಿಮೋಚನಾ ಯುದ್ಧದಲ್ಲಿ ಪಾಲ್ಗೊಂಡು ನಿವೃತ್ತರಾಗಿರುವ 20 ಯೋಧರನ್ನು ಗೌರವಿಸಲಾಗುವುದು ಎಂದು ಹೇಳಿದರು.

ಇದೇ ವೇಳೆ ಮಾಜಿ ಸೈನಿಕರ ಕುಟುಂಬದ ಹೆಚ್ಚು ಅಂಕ ಪಡೆದ 12 ಮಕ್ಕಳನ್ನು ಪುರಸ್ಕರಿಸಲಾಗುವುದು. ಸಂಘದಲ್ಲಿ ಪ್ರಸ್ತುತ 603 ಸದಸ್ಯರಿದ್ದು, ನೂತನ ಸದಸ್ಯತ್ವ ಪಡೆಯಲು 1300 ರೂ., 3 ಭಾವಚಿತ್ರ, ಸೈನಿಕ ಕಲ್ಯಾಣ ಇಲಾಖೆಯ ಗುರುತಿನ ಚೀಟಿ, ಆಧಾರ್ ಕಾರ್ಡ್ ಪ್ರತಿಯನ್ನು ನೀಡಬೇಕು. ಮರಣ ನಿಧಿ ಪಡೆಯಲು ಇಚ್ಛಿಸುವ 60 ವರ್ಷದೊಳಗಿನವರು 2 ಸಾವಿರ ರೂ. ನೀಡಬೇಕು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ಸಿ.ಜಿ.ತಿಮ್ಮಯ್ಯ, ಸಂಚಾಲಕ ತಳೂರು ಕಾಳಪ್ಪ, ಮಹಿಳಾ ಘಟಕದ ಅಧ್ಯಕ್ಷೆ ಮಾಚಿಮಂಡ ಭವಾನಿ, ಸಹ ಕಾರ್ಯದರ್ಶಿ ಟಿ.ಬಿ.ಪ್ರಭಾಕರ್ ಉಪಸ್ಥಿತರಿದ್ದರು.

ಸುಂಟಿಕೊಪ್ಪ ವ್ಯಾಪ್ತಿ ನಾಟಿ ಕಾರ್ಯ ಆರಂಭ



ಸುಂಟಿಕೊಪ್ಪ, ಜು.23–ಆಶಾದಾಯಕ ಮುಂಗಾರು ಮಳೆಯಿಂದ ಕೃಷಿಕರು ಉತ್ಸಾಹದಿಂದ ಭತ್ತದ ನಾಟಿ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ.

ಮೇ ತಿಂಗಳಿನ ಆರಂಭದಲ್ಲಿ ಉತ್ತಮ ಮಳೆ ಆಗಿದ್ದರಿಂದ ಗದ್ದೆ ಉಳುಮೆ ಕಾರ್ಯಕ್ಕೆ ಸಹಕಾರಿಯಾಯಿತು. ಜೂನ್ ಬಹುಪಾಲು ಮಳೆಯಾಗಿದ್ದು, ಜುಲೈನಲ್ಲಿ ಪುನರ್ವಸು ಮಳೆ ಉತ್ತಮ ಆಗಿದೆ ಇದರಿಂದ ಕೊಡಗಿನ ಹೊಳೆ, ತೋಡು, ನಾಲೆ, ಜರಿಗಳು ತುಂಬಿ ಹರಿದಿದ್ದು, ಗದ್ದೆಗಳಲ್ಲೂ ನೀರು ತುಂಬಿರುವುದರಿಂದ ರೈತರು ಉಳುಮೆ ಮಾಡಿ ಭತ್ತ ಬಿತ್ತನೆ ಕಾರ್ಯದಲ್ಲಿ ನಿರತರಾಗಿದ್ದಾರೆ. ಮೊದಲೇ ಬೀಜ ಹಾಕಿದ ರೈತರಿಗೆ ಸಸಿಮಡಿ ಬೆಳೆದಿದ್ದರಿಂದ ನಾಟಿ ಕಾರ್ಯಕ್ಕೆ ಅನುಕೂಲವಾಗಿದೆ. ಸುಂಟಿಕೊಪ್ಪದ ಗದ್ದೆಹಳ್ಳ ನಿವಾಸಿ ಪ್ರಗತಿಪರ ಕೃಷಿಕರಾದ ಪಟ್ಟೆಮನೆ ಉದಯ ಕುಮಾರ್, ಪ್ರಸನ್ನ, ಮಧು, ಸದಾಶಿವ ಅವರು ನಾಟಿ ಕಾರ್ಯದಲ್ಲಿ ಮಗ್ನರಾಗಿರುವುದು ಕಂಡು ಬಂತು. ಕೊಡಗರಹಳ್ಳಿ, ಕಂಬಿಬಾಣೆ, ಹೆರೂರು, ಹರದೂರು, ಹಾರ್‌ಬೈಲ್, ಕೆದಕಲ್, ಹೊರೂರು, ಹಾಲೇರಿ, ಕಾಂಡನಕೊಲ್ಲಿ ಮೊದಲಾದ ಗ್ರಾಮದಲ್ಲೂ ಬಿರುಸಿನಿಂದ ಕೃಷಿ ಚಟುವಟಿಕೆ ನಡೆಯುತ್ತಿದೆ.

ಸರ್ಕಾರದ ಯೋಜನೆ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಿ

ಪಿಡಿಓಗಳಿಗೆ ಜಿಪಂ ಸಿಇಓ ಆನಂದ ಪ್ರಕಾಶ್ ಮೀನಾ ಸೂಚನೆ



ಮಡಿಕೇರಿ ಜಿಪಂ ಕಚೇರಿಯಲ್ಲಿ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಜಿಪಂ ಸಿಇಓ ಆನಂದ ಪ್ರಕಾಶ್ ಮೀನಾ ಮಾತನಾಡಿದರು.

ಮಡಿಕೇರಿ, ಜು.23–ಸರ್ಕಾರದ ಯೋಜನೆಗಳನ್ನು ಕಾಲಮಿತಿಯೊಳಗೆ ಅನುಷ್ಠಾನಗೊಳಿಸುವಂತೆ ಗ್ರಾಮ ಅಭಿವೃದ್ಧಿ ಅಧಿಕಾರಿಗಳಿಗೆ ಜಿಪಂ ಸಿಇಓ ಆನಂದ ಪ್ರಕಾಶ್ ಮೀನಾ ಸೂಚಿಸಿದರು.

ನಗರದ ಜಿಪಂ ಕಚೇರಿಯಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದಂತೆ ತೆರಿಗೆ ವಸೂಲಾತಿ, ಗ್ರಂಥಾಲಯಗಳ ಉನ್ನತೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ನರೇಗಾ ಯೋಜನೆಯಡಿ ಈಗಾಗಲೇ ಜಿಲ್ಲೆಗೆ 5 ಲಕ್ಷ ಮಾನವ ದಿನಗಳನ್ನು ಸೂಚಿಸುವ ಗುರಿ ನೀಡಲಾಗಿದೆ. ಈವರೆಗೆ ಉತ್ತಮವಾಗಿ ಕಾರ್ಯನಿರ್ವಹಿಸಿದ್ದು, ಮುಂದಿನ ದಿನಗಳಲ್ಲೂ ಸಾಕಷ್ಟು ಅಭಿವೃದ್ಧಿ ಕಾರ್ಯ ಮುಂದುವರೆಸಬೇಕು. ಸಾಮಾಜಿಕ ಲೆಕ್ಕಪರಿಶೋಧನೆಗೆ ಸಂಬಂಧಿಸಿದಂತೆ ವಸೂಲಾತಿ ಮಾಡಿ, ಕೈಗೊಂಡ ಕ್ರಮದ ಬಗ್ಗೆ ವರದಿ ನೀಡಬೇಕು ಎಂದು ಸೂಚಿಸಿದರು.

ನರೇಗಾ ಯೋಜನೆಯಡಿ ಪ್ರತಿತಿಂಗಳು ರೋಜ್‌ಗಾರ್ ದಿನ ಆಚರಿಸುವ ಮೂಲಕ ಜನರಿಗೆ ಯೋಜನೆಯ ಮಾಹಿತಿ ನೀಡಿ ಉದ್ಯೋಗ ಒದಗಿಸಬೇಕು. ಪ್ರತಿ ಗ್ರಾಮ ಪಂಚಾಯಿತಿ ಕಡ್ಡಾಯವಾಗಿ ಆರೋಗ್ಯ ಶಿಬಿರ ಆಯೋಜಿಸಬೇಕು. ಎನ್‌ಆರ್‌ಎಲ್‌ಎಂ ವತಿಯಿಂದ ಮಹಿಳೆಯರಿಗೆ ಸ್ವಚ್ಛ ವಾಹಿನಿ ಚಲಾಯಿಸಲು ವಾಹನ ಚಾಲನಾ ತರಬೇತಿ ನೀಡಲಾಗಿದ್ದು, ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಜಿಪಂ ಉಪ ಕಾರ್ಯದರ್ಶಿ ಜಿ.ಧನರಾಜು ಮಾತನಾಡಿ, ವಸತಿ ಯೋಜನೆಯಡಿ ಬಾಕಿ ಮನೆಗಳನ್ನು ಪೂರ್ಣಗೊಳಿಸಬೇಕು. ಈಗ ಮುಂಗಾರು ಮಳೆಗಾಲವಾಗಿದ್ದು, ಹೆಚ್ಚು ಎಚ್ಚರಿಕೆ ಮತ್ತು ಮುತುವರ್ಜಿಯಿಂದ ಪಿಡಿಓಗಳು ಕಾರ್ಯನಿರ್ವಹಿಸುವಂತೆ ತಿಳಿಸಿದರು. ಸಭೆಯಲ್ಲಿ ಮುಖ್ಯ ಲೆಕ್ಕಾಧಿಕಾರಿ ಝಿಯಾವಲ್ ಖಾನ್, ಸಹಾಯಕ ಯೋಜನಾಧಿಕಾರಿ ಜೀವನ್ ಕುಮಾರ್, ತಾಪಂ ಇಓಗಳಾದ ಶೇಖರ್, ಅಪ್ಪಣ್ಣ, ವೀರಣ್ಣ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಇಇ ಸುರೇಶ್ ಕುಮಾರ್ ಇತರರು ಇದ್ದರು.

ನೆಮ್ಮದಿ ಬದುಕಿಗೆ ಬುದ್ಧ ಮಾರ್ಗವೇ ಸನ್ಮಾರ್ಗ



ಚಾನಗರನಗರ ಸಾರಾನಾಥ ಬೌದ್ಧ ವಿಹಾರದಲ್ಲಿ ನಡೆದ ಧಮ್ಮ ಚಕ್ಕ ಪವತ್ತನಾ ಸುತ್ತ ದಿನಾಚರಣೆಯನ್ನು ಮೂಡ್ನಾಕೂಡು ಚಿನ್ನಸ್ವಾಮಿ ಉದ್ಘಾಟಿಸಿದರು.

ಚಾಮರಾಜನಗರ, ಜು.23–ಜಗತ್ತಿನಲ್ಲಿ ನೆಮ್ಮದಿ ಬದುಕಿಗೆ ಬುದ್ಧ ಮಾರ್ಗವೇ ಸನ್ಮಾರ್ಗವಾಗಿದೆ. ಭಗವಾನ್ ಗೌತಮ ಬುದ್ಧರು ಜಗತ್ತಿಗೆ ಜ್ಞಾನದ ಬೆಳಕನ್ನು ಬೋಧಿಸಿದ ದಿನವೇ ಧಮ್ಮ ಚಕ್ಕ ಪವತ್ತನಾ ಸುತ್ತ ದಿನವಾಗಿದೆ ಎಂದು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಮೂಡ್ನಾಕೂಡು ಚಿನ್ನಸ್ವಾಮಿ ಹೇಳಿದರು.

ನಗರದ ಸಾರಾನಾಥ ಬೌದ್ಧ ವಿಹಾರದಲ್ಲಿ ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾ ಶಾಖೆ ವತಿಯಿಂದ ನಡೆದ ಧಮ್ಮ ಚಕ್ಕ ಪವತ್ತನಾ ಸುತ್ತ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಗೌತಮ ಬುದ್ಧರು ಜ್ಞಾನೋದಯವಾದ ನಂತರ ಉತ್ತರ ಪ್ರದೇಶದ ಸಾರನಾಥ ಜಿಂಕೆ ವನದಲ್ಲಿ ಅಸಲು ಹುಣ್ಣಿಮೆ ದಿನದಂದು ಪ್ರಪ್ರಥಮವಾಗಿ ತಮ್ಮ 5 ಶಿಷ್ಯರಿಗೆ ತಾವು ಕಂಡುಕೊಂಡಂತಹ ಜ್ಞಾನವನ್ನು ಬೋಧಿಸಿದದರು ಎಂದರು.

ವಿಶ್ವದ ನಾನಾ ಬೌದ್ಧ ರಾಷ್ಟ್ರಗಳು ಮತ್ತು ಭಾರತದ ಬೌದ್ಧ ವಿಹಾರಗಳಲ್ಲಿ ಧಮ್ಮ ಚಕ್ಕ ಪವತ್ತಾ ಸುತ್ತ ದಿನ ಆಚರಿಸಲಾಗುತ್ತಿದೆ ಎಂದರು.

ಕೊಳ್ಳೇಗಾಲ ಚೇತವನ ಬುದ್ಧ ವಿಹಾರದ ಭಂತೆ ಮನೋರಕ್ಕಿತಾ ಥೇರ ಮಾತನಾಡಿ, ಭಗವಾನ್ ಬುದ್ಧ ನೀಡಿರುವ ಅಷ್ಟಾಂಗ ಮಾರ್ಗ ಮತ್ತು ಪಂಚಶೀಲ ತತ್ವಗಳನ್ನು ಪಾಲಿಸಿ ನೆಮ್ಮದಿ ಜೀವನ ಸಾಗಿಸಬಹುದು ಎಂದು ತಿಳಿಸಿದರು. ಧಮ್ಮ ಚಿಂತಕ ಮಹದೇವು ಕಲ್ಲಾರೆಪುರೆ ಸಂವಾದ ನೀಡಿದರು.

ಕಾರ್ಯಕ್ರಮದಲ್ಲಿ ಭಾರತೀಯ ಬೌದ್ಧ ಮಹಾಸಭಾ ಜಿಲ್ಲಾಧ್ಯಕ್ಷ ಆರ್.ಬಸವರಾಜು, ಬೌದ್ಧ ಬಂಧುಗಳು ಭಾಗವಹಿಸಿದ್ದರು.

ಜಿಲ್ಲೆಯಲ್ಲಿ ಸುರಕ್ಷತಾ ನಿಯಮ ಕಟ್ಟುನಿಟ್ಟಾಗಿ ಅನುಸರಿಸಿ

ರಸ್ತೆ ಅಪಘಾತ ಪ್ರಕರಣ ತಡೆಗಟ್ಟಬೇಕು

ಸಭೆಯಲ್ಲಿ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಶಿಲ್ಪನಾಗ್ ಸೂಚನೆ



ಚಾಮರಾಜನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಡಿಸಿ ಶಿಲ್ಪನಾಗ್ ಮಾತನಾಡಿದರು.

ಚಾಮರಾಜನಗರ, ಜು.23–ರಸ್ತೆ ಸುರಕ್ಷತಾ ನಿಯಮಗಳನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಅನುಸರಿಸುವ ಮೂಲಕ ಅಪಘಾತ ಪ್ರಕರಣಗಳನ್ನು ತಡೆಗಟ್ಟಬೇಕು. ರಸ್ತೆ ಸುರಕ್ಷತೆ ಕುರಿತು ಜನರಲ್ಲಿ ಪರಿಣಾಮಕಾರಿಯಾಗಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ವಾಹನ ಚಾಲನೆಯ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ರಸ್ತೆ ನಿರ್ಮಿಸುವಾಗ ಆಯಾ ಇಲಾಖೆಗಳು ತೆಗೆದುಕೊಳ್ಳಬೇಕಿದೆ. ಕೂಡು ರಸ್ತೆ, ಜಂಕ್ಷನ್ ಜನನಿಬಿಡ ಸ್ಥಳ, ಗ್ರಾಮಗಳು, ಇನ್ನಿತರ ಕಡೆ ಸುಗಮವಾಗಿ ವಾಹನ ಚಾಲನೆಗೆ ಎಲ್ಲಾ ಕಾರ್ಯಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ಹೈಮಾಸ್ಟ್ ದೀಪ ಹಾಗೂ ಸೂಚನಾ ಫಲಕಗಳನ್ನು ಅಳವಡಿಸಬೇಕು ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಸ್ತೆ ಸುರಕ್ಷತೆಗೆ ಪೊಲೀಸ್ ಇಲಾಖೆ ಇನ್ನಿತರ ಇಲಾಖೆಗಳ ನೆರವು, ಮಾರ್ಗದರ್ಶನ ಪಡೆದು ವಾಹನ ಚಾಲನೆಗೆ ಅನುವು ಮಾಡಬೇಕು. ರಸ್ತೆ ಬಾಕಿ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು. ಅಪಘಾತಗಳನ್ನು ತಪ್ಪಿಸಲು ವೈಜ್ಞಾನಿಕ ಕಾಮಗಾರಿ ನಡೆಸಬೇಕು. ನಗರ, ಪಟ್ಟಣ ಪ್ರದೇಶಗಳಲ್ಲಿ ಸಂಚಾರಿ ನಿಯಮ ಅನುಸರಿಸುವ ನಿಟ್ಟಿನಲ್ಲಿ ಕ್ರಮ ವಹಿಸಬೇಕಿದೆ. ವಾಹನಗಳ ನಿಲುಗಡೆಗೆ ನಿಗದಿತ ಸ್ಥಳಾವಕಾಶ ನೀಡಬೇಕು. ಸುಗಮ ಸಂಚಾರಕ್ಕೆ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಪೊಲೀಸರೊಂದಿಗೆ ಮುಂದಾಗಬೇಕು. ಸಾಕು ಪ್ರಾಣಿಗಳಿಂದ ರಸ್ತೆ ಸಂಚಾರಕ್ಕೆ ಅಡಚಣೆಯಾಗದಂತೆ ಸೂಚನೆ ನೀಡಬೇಕು ಎಂದು ತಿಳಿಸಿದರು.


ವಾಹನಗಳು ಮಿತಿ ಮೀರಿದ ಸರಕು ಸಾಗಾಣೆ ತಪ್ಪಿಸಬೇಕು. ಪ್ರಯಾಣಿಕರು, ಶಾಲಾ ವಾಹನಗಳಲ್ಲಿ ನಿಗದಿತ ಸಾಮರ್ಥ್ಯಕಿಂತ ಹೆಚ್ಚು ಸಂಖ್ಯೆಯಲ್ಲಿ ಕರೆದೊಯ್ಯುವುದಕ್ಕೆ ಕಡಿವಾಣ ಹಾಕಬೇಕು. ಸುರಕ್ಷತೆಯ ಉದ್ದೇಶದಿಂದ ತಪಾಸಣಾ ಕಾರ್ಯವನ್ನು ಕಟ್ಟುನಿಟ್ಟಾಗಿ ನಡೆಸಬೇಕು. ಶಾಲಾ ಆಡಳಿತ ಮಂಡಳಿಗಳಿಗೆ ವಿದ್ಯಾರ್ಥಿಗಳ ಸುರಕ್ಷೆ ಅನುಸರಿಸಲು ನೋಟಿಸ್ ನೀಡಬೇಕು ಎಂದು ತಿಳಿಸಿದರು.

> ರಸ್ತೆಗಳಲ್ಲಿ ಸುಗಮವಾಗಿ ವಾಹನ ಚಾಲನೆಗೆ ಅನುಕೂಲವಾಗುವ ವ್ಯವಸ್ಥೆಗಳನ್ನು ರಸ್ತೆ ನಿರ್ಮಾಣ ಪ್ರಾಧಿಕಾರ, ಆಯಾ ಇಲಾಖೆಗಳು ಕಲ್ಪಿಸಬೇಕು. ಪೊಲೀಸ್ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲಿಸಿ, ಸೂಕ್ತ ಕ್ರಮಕ್ಕೆ ಮುಂದಾಗಬೇಕು. ರಸ್ತೆ ಸುರಕ್ಷತೆಯ ಎಲ್ಲಾ ಮಾರ್ಗದರ್ಶನ ಮಾಡಲಾಗುವುದು.
>
> -ಡಾ.ಬಿ.ಟಿ.ಕವಿತಾ,
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಜಿಲ್ಲೆಯಲ್ಲಿ ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಸಾರ್ವಜನಿಕರು, ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ವಿಶೇಷ ಅಭಿಯಾನವನ್ನು ವಿವಿಧ ಇಲಾಖೆಗಳ ಸಹಕಾರದೊಂದಿಗೆ ಹಮ್ಮಿಕೊಳ್ಳಬೇಕು. ನಗರ, ಪಟ್ಟಣ ಹಾಗೂ ತಾಲೂಕು ಕೇಂದ್ರಗಳಲ್ಲೂ ಎಲ್ಲರ ಸಹಕಾರ ಪಡೆದು ಅರಿವು ಮೂಡಿಸುವ ಕಾರ್ಯಕ್ಕೆ ಅಧಿಕಾರಿಗಳು ರೂಪುರೇಷೆ ತಯಾರಿಸಿ ಅನುಷ್ಠಾನಗೊಳಿಸಬೇಕು. ರಸ್ತೆ ಸುರಕ್ಷತೆ ಕುರಿತು ಶಾಲಾ– ಕಾಲೇಜು ಹಂತದಲ್ಲಿ ತಿಳಿವಳಿಕೆ ನೀಡುವ ಕಾರ್ಯಕ್ರಮಗಳನ್ನು ಶಿಕ್ಷಣ ಇಲಾಖೆ ಅಧಿಕಾರಿಗಳು ಏರ್ಪಾಡು ಮಾಡಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ರಾಹುಲ್ ಗುಪ್ತಾ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಮಹೇಶ್, ಕೆಶಿಪ್ ಕಾರ್ಯಪಾಲಕ ಇಂಜಿನಿಯರ್ ಶ್ರೀನಿವಾಸ್, ಅಬಕಾರಿ ಉಪಆಯುಕ್ತ ಆರ್.ನಾಗಶಯನ, ಪ್ರಾದೇಶಿಕ ಸಾರಿಗೆ ಅಧಿಕಾರಿ ಗಾಯತ್ರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಸುಧಾ, ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ಆರ್.ಅಶೋಕ್ ಕುಮಾರ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ ಪ್ರಸನ್ನ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್, ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ಆಲೂರುಹೊಮ್ಮದಲ್ಲಿ ಮಂಟೇಸ್ವಾಮಿ ಕಂಡಾಯೋತ್ಸವ



ಆಲೂರುಹೊಮ್ಮ ಗ್ರಾಮದಲ್ಲಿ ಮಂಟೇಸ್ವಾಮಿ ಕಂಡಾಯೋತ್ಸವ ನಡೆಸಲಾಯಿತು.

ಚಾಮರಾಜನಗರ, ಜು.23–ತಾಲೂಕಿನ ಆಲೂರುಹೊಮ್ಮ ಗ್ರಾಮದಲ್ಲಿ ನಾಯಕ ಸಮುದಾಯದ ವತಿಯಿಂದ ಶ್ರೀ ಮಂಟೇಸ್ವಾಮಿ ಕಂಡಾಯೋತ್ಸವ ಸೋಮವಾರ ರಾತ್ರಿ ವಿಜೃಂಭಣೆಯಿಂದ ನಡೆಯಿತು.

ಹೊಂಗನೂರು ಸಮೀಪದ ಕುರುಬರಹುಂಡಿನಲ್ಲಿ ಮರದಕಟ್ಟೆ ಗದ್ದಿಗೆ ಮನೆಯಿಂದ ತಂದ ಕಂಡಾಯಗಳನ್ನು ಗ್ರಾಮದ ಸರ್ಕಾರಿ ಶಾಲೆ ಹತ್ತಿರದ ಅಶ್ವತ್ಥಕಟ್ಟೆಯಲ್ಲಿ ಶುಚಿಗೊಳಿಸಲಾಯಿತು. ನಂತರ ಹೊಂಬಾಳೆ, ವಿವಿಧ ಹೂವುಗಳಿಂದ ಅಲಂಕರಿಸಿ ಪೂಜೆ ಸಲ್ಲಿಸಿ, ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಗ್ರಾಮದ ಪ್ರಮುಖ ಸ್ಥಳಗಳಲ್ಲಿ ಹಸಿರು ತೋರಣ, ವಿದ್ಯುತ್ ದೀಪಗಳಿಂದ ಶೃಂಗರಿಸಲಾಗಿತ್ತು. ಮೆರವಣಿಗೆ ರಸ್ತೆಯಲ್ಲಿ ಬಣ್ಣ ಬಣ್ಣದ ಚಿತ್ತಾರ ಬಿಟ್ಟು ಕಂಡಾಯಗಳಿಗೆ ಪೂಜೆ ಸಲ್ಲಿಸಲಾಯಿತು. ಇದೇ ವೇಳೆ ದೇವರಗುಡ್ಡರು, ನಾಯಕ ಸಮುದಾಯದವರು, ಗ್ರಾಮಸ್ಥರಿದ್ದರು.

ಕೇಂದ್ರ ಬಜೆಟ್: ಗಡಿ ಜಿಲ್ಲೆ ಜನರ ನಿರೀಕ್ಷೆ ಹುಸಿ

ಚಾಮರಾಜನಗರ, ಜು.23–ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಗಳವಾರ ಮಂಡಿಸಿರುವ 2024–25ನೇ ಸಾಲಿನ ಬಜೆಟ್‌ನಲ್ಲಿ ಗಡಿ ಜಿಲ್ಲೆಯ ಜನರ ನಿರೀಕ್ಷೆಗಳು ಹುಸಿಯಾಗಿದೆ.

ಕಳೆದ 5 ವರ್ಷದ ಕೇಂದ್ರ ಬಜೆಟ್‌ನಲ್ಲಿ ಜಿಲ್ಲೆಗೆ ಯಾವುದೇ ಯೋಜನೆಯಾಗಲೀ ಅಥವಾ ಹೊಸ ರೈಲಾಗಲೀ ದೊರೆತಿಲ್ಲ. ಅದು ಈ ಬಾರಿಯೂ ಮುಂದುವರಿದಿದ್ದು, ಜಿಲ್ಲೆ ಜನರು ಮತ್ತೊಮ್ಮೆ ನಿರಾಸೆ ಅನುಭವಿಸುವಂತಾಗಿದೆ. ಚಾಮರಾಜನಗರದಲ್ಲಿ ಸ್ವಚ್ಛತಾ ಘಟಕ ಸಹ ಇಲ್ಲ. ಮೈಸೂರಿನಲ್ಲಿರುವ ಸ್ವಚ್ಛತಾ ಘಟಕದಲ್ಲಿ ಈಗ ಹೆಚ್ಚು ಒತ್ತಡವಿದ್ದು, ಅನೇಕ ರೈಲುಗಳು ಅಲ್ಲೇ ನಿಲ್ಲಬೇಕಾಗಿದೆ. ಅದಕ್ಕೆ ಸ್ಥಳಾವಕಾಶವೂ ಇಲ್ಲದಂತಾಗಿದೆ. ಒಟ್ಟಾರೆ ಈ ಬಾರಿಯ ಬಜೆಟ್‌ನಲ್ಲಿ ಜಿಲ್ಲೆಯ ಸಾಕಷ್ಟು ನಿರೀಕ್ಷೆಗಳನ್ನು ಮಾಡಲಾಗಿತ್ತು. ಆದರೆ, ನಿರೀಕ್ಷೆಗಳೆಲ್ಲಾ ಹುಸಿಯಾಗಿದೆ.

ಜು.25ರಿಂದ ಕುಡಿತ ಬಿಡಿಸುವ ಶಿಬಿರ



ಯಳಂದೂರು, ಜು.23– ಶ್ರೀ ಸುತ್ತೂರು ಮಠ, ಜೆಎಸ್‌ಎಸ್ ಮಹಾವಿದ್ಯಾಪೀಠ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದಲ್ಲಿ ಕುಡಿತ ಬಿಡಿಸುವ 18ನೇ ಉಚಿತ ಶಿಬಿರವನ್ನು ಜು.25 ರಿಂದ ಆ.3ರ ವರೆಗೆ ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಏರ್ಪಡಿಸಲಾಗಿದೆ.

ಶಿಬಿರಾರ್ಥಿಗಳು ಹೆಸರು ನೋಂದಾಯಿಸಿಕೊಳ್ಳಬೇಕು. ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿ, ಭಾವಚಿತ್ರ, ಅಗತ್ಯ ಬಟ್ಟೆ ಹಾಗೂ ಹೊದಿಕೆಗಳನ್ನು ತರಬೇಕು. ಮಾಹಿತಿಗೆ ಚುಂಚನಹಳ್ಳಿ ಶ್ರೀಗಳು, ಡಾ.ಎಂ.ಪಿ.ಸೋಮಶೇಖರ್ ಮತ್ತು ಎಸ್.ಬಸವರಾಜು ಅವರನ್ನು (ಮೊ.ಸಂ: 9945494612, 94486 53897) ಸಂಪರ್ಕಿಸಬಹುದು.

ಪಠ್ಯೇತರ ಚಟುವಟಿಕೆಗಳಿಗೂ ಶಿಕ್ಷಣ ಇಲಾಖೆ ಆದ್ಯತೆ



ಚಾಮರಾಜನಗರ ಅಂಬೇಡ್ಕರ್ ಕ್ರೀಡಾಂಗಣದಲ್ಲಿ ನಡೆದ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಡಿಡಿಪಿಐ ರಾಮಚಂದ್ರರಾಜೇ ಅರಸ್ ಧ್ವಜಾರೋಹಣ ನೆರವೇರಿಸಿದರು.

ಚಾಮರಾಜನಗರ, ಜು.23–ಇತ್ತೀಚಿನ ದಿನಗಳಲ್ಲಿ ಕ್ರೀಡೆ ಹಾಗೂ ಕಲಿಕೆ ಬೇರೆ ಬೇರೆಯಲ್ಲ, ಎರಡರಲ್ಲೂ ಮಕ್ಕಳು ಮುಂದಿರಬೇಕು ಎಂದು ಪೋಷಕರು ಬಯಸುತ್ತಿದ್ದಾರೆ. ಹಾಗಾಗಿ ಶಿಕ್ಷಣ ಇಲಾಖೆ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜೇ ಅರಸ್ ಹೇಳಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಜಿಪಂ, ಕ್ಷೇತ್ರ ಶಿಕ್ಷಣಾಧಿಕಾರಿ ಕಚೇರಿ, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ನಡೆದ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲಾ ಆಲೂರು ವಲಯ ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ತಮ್ಮ ಮಕ್ಕಳು ಕಲಿಕೆಯಷ್ಟೇ ಸಾಂಸ್ಕೃತಿಕ, ಕ್ರೀಡೆ ಚಟುವಟಿಕೆಯಲ್ಲಿ ಮುಂದೆ ಇರಬೇಕು ಎಂದು ಆಶಯ ವ್ಯಕ್ತಪಡಿಸುತ್ತಿರುವ ಪೋಷಕರು ಇದ್ದಾರೆ. ಹಾಗಾಗಿ ಕ್ರೀಡೆಗೆ ಒತ್ತು ನೀಡುವ ಕೆಲಸವನ್ನು ಇಲಾಖೆ ಮಾಡುತ್ತಿದೆ ಎಂದರು.

ಶಿಕ್ಷಸಪ್ತ ಜಾರಿ: ಶಿಕ್ಷಣ ಇಲಾಖೆ ಶಿಕ್ಷಸಪ್ತ ಕಾರ್ಯಕ್ರಮವನ್ನು ಸೋಮವಾರದಿಂದ ಜಾರಿ ಮಾಡಿದ್ದು, ಶಾಲೆಗಳಲ್ಲಿ ಒಂದು ವಾರ ಮಕ್ಕಳಿಗೆ ಪಾಠಪ್ರವಚನದ ಜೊತೆಗೆ ಒಂದೊಂದು ದಿನ ಒಂದು ಮಹತ್ವದ ಬಗ್ಗೆ ತಿಳಿಸಬೇಕು. ವಿಶೇಷವಾಗಿ ಒಂದು ಸುತ್ತೋಲೆ ಹೊರಡಿಸಲಾಗಿದೆ. ಬುಧವಾರ ಕ್ರೀಡಾ ಚಟುವಟಿಕೆಯನ್ನು ಮಕ್ಕಳಲ್ಲಿ ಗುರುತಿಸಿ, ಪ್ರೋತ್ಸಾಹಿಸಲು ಮೂಲಕ ಬೆಳಸಬೇಕು ಎಂದು ತಿಳಿಸಲಾಗಿದೆ ಎಂದು ತಿಳಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿ.ಮಂಜುನಾಥ ಪ್ರಸನ್ನ ಕ್ರೀಡಾ ಜ್ಯೋತಿ ಸ್ವೀಕರಿಸಿದರು. ಗುರುಮಲ್ಲೇಶ್ವರ ಶಿಕ್ಷಣ ಸಂಸ್ಥೆ ಅಧ್ಯಕ್ಷ ರಮೇಶ್ ಅಧ್ಯಕ್ಷತೆ ವಹಿಸಿದ್ದರು. ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಕೆ. ರಾಮಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹದೇವಸ್ವಾಮಿ, ಎಪಿಎಂಸಿ ನಿರ್ದೇಶಕ ಆಲೂರು ಪ್ರತಾಪ್, ಗ್ರಾಪಂ ಸದಸ್ಯ ರವಿ, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಎ.ಸಿ. ಮಹದೇವಸ್ವಾಮಿ, ಉಪಾಧ್ಯಕ್ಷ ಎಲ್. ಪರಶಿವಪ್ಪ, ಎಸ್‌ಬಿಸಿ ಸಮಿತಿ ಅಧ್ಯಕ್ಷ ಸುರೇಶ್, ಗೌರವಾಧ್ಯಕ್ಷ ನಾಗೇಶ್, ಜಿಪಿಟಿ ಸಂಘದ ಅಧ್ಯಕ್ಷ ಮಹೇಶ್, ಜಿಲ್ಲಾಧ್ಯಕ್ಷ ಸೈಮನ್, ಲೋಕೇಶ್, ವಲಯ ಮಟ್ಟದ ಕ್ರೀಡಾಕೂಟ ಸಂಘಟಕ ಶಂಕರಪ್ಪ ದೈಹಿಕ ಶಿಕ್ಷಣ ಶಿಕ್ಷಕರು, ಸಿಆರ್‌ಪಿಗಳು, ಮುಖ್ಯ ಶಿಕ್ಷಕರು, ಹಾಜರಿದ್ದರು.

ವಾಲ್ಮೀಕಿ ನಿಗಮ ಹಗರಣ: ಅಧಿಕಾರಿಗಳ ವಿರುದ್ಧ FIR ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಇಡಿ ಅರ್ಜಿ

ಬೆಂಗಳೂರು: ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಅಕ್ರಮದ ತನಿಖೆಯ ವೇಳೆ ಮಾಜಿ ಸಚಿವ ನಾಗೇಂದ್ರ ಅವರ ಹೆಸರು ಹೇಳುವಂತೆ ಒತ್ತಡ ಹೇರಿರುವ ಆರೋಪದ ಮೇಲೆ ವಿಲ್ಸನ್ ಗಾರ್ಡನ್ ಠಾಣೆಯಲ್ಲಿ ತಮ್ಮ ವಿರುದ್ಧ ಎಫ್‌ಐಆರ್ ದಾಖಲಿಸಿರುವುದನ್ನು ಪ್ರಶ್ನಿಸಿ ಜಾರಿ ನಿರ್ದೇಶನಾಲಯದ (ಇಡಿ) ಇಬ್ಬರು ಅಧಿಕಾರಿಗಳು ಹೈಕೋರ್ಟ್ ಮೊರೆ ಹೋಗಿದ್ದಾರೆ.




ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯವು ನಡೆಸುತ್ತಿರುವ ತನಿಖೆಯನ್ನು ಬುಡಮೇಲು ಮಾಡುವ ಉದ್ದೇಶದಿಂದ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಇಡಿ ತನ್ನ ಅರ್ಜಿಯಲ್ಲಿ ಹೇಳಿಕೊಂಡಿದೆ. ಯಾವುದೇ ಪ್ರಾಥಮಿಕ ವಿಚಾರಣೆಯಿಲ್ಲದೆ ಕರ್ನಾಟಕ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಇಡಿ ಹೇಳಿದೆ. ಇಡಿ ಪರ ವಕಾಲತ್ತು ವಹಿಸಿರುವ ಹಿರಿಯ ವಕೀಲ ಮಧುಕರ್ ದೇಶಪಾಂಡೆ, ಪ್ರಕರಣದ ತುರ್ತು ವಿಚಾರಣೆಯ ಅಗತ್ಯವಿದೆ ಎಂದು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಮಧ್ಯಾಹ್ನದ ವೇಳೆಗೆ ಹೈಕೋರ್ಟ್ ವಿಚಾರಣೆ ಕೈಗೆತ್ತಿಕೊಳ್ಳುವ ಸಾಧ್ಯತೆ ಇದೆ.

ಮಾಜಿ ಸಚಿವ ಬಿ.ನಾಗೇಂದ್ರ ಒತ್ತಡದಿಂದ ಅಕ್ರಮವಾಗಿ ಹಣ ವರ್ಗಾವಣೆ ಮಾಡಿರುವುದಾಗಿ ಒಪ್ಪಿಕೊಳ್ಳುವಂತೆ ತಮ್ಮ ಮೇಲೆ ಇಡಿ ಅಧಿಕಾರಿಗಳು ಒತ್ತಡ ಹಾಕಿದ್ದಾರೆ ಹಾಗೂ, ಮಾನಸಿಕವಾಗಿ ಹಿಂಸೆ ನೀಡಿದ್ದಾರೆ ಎಂದು ಆರೋಪಿಸಿ ನಿಗಮದ ಹಿಂದಿನ ವ್ಯವಸ್ಥಾಪಕ ನಿರ್ದೇಶಕ ಕಲ್ಲೇಶ್.ಬಿ ದೂರು ನೀಡಿದ್ದರು. ಸೋಮವಾರವಷ್ಟೇ (ಜುಲೈ 22ರಂದು) ನಗರದ ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯ ಪೊಲೀಸರು, ಕಣ್ಣನ್ ಹಾಗೂ ಮಿತ್ತಲ್ ಎಂಬ ಇಡಿ ಅಧಿಕಾರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು. ಈ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಈ ಅಧಿಕಾರಿಗಳು ಮಂಗಳವಾರ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಕೇಂದ್ರದಿಂದ ಮಹಿಳಾ ವಸತಿ ನಿಲಯಗಳ ಸ್ಥಾಪನೆ

ನವದೆಹಲಿ, ಜು.23– ಔದ್ಯೋಗಿಕ ಕ್ಷೇತ್ರಗಳಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಉತ್ತೇಜಿಸಲು ಕೇಂದ್ರ ಸರ್ಕಾರವು ಮಹಿಳಾ ವಸತಿ ನಿಲಯಗಳನ್ನು ಸ್ಥಾಪಿಸಲಿದೆ ಎಂದು ನಿರ್ಮಲಾ ಸೀತಾರಾಮನ್ ಹೇಳಿದರು.



ಇಂದು 18ನೇ ಲೋಕಸಭೆಯ ಮೊದಲ ಬಜೆಟ್ ಮಂಡನೆ ಮಾಡಿದ ಅವರು, ಮಹಿಳೆಯರು ಮತ್ತು ಹೆಣ್ಣುಮಕ್ಕಳಿಗೆ ಅನುಕೂಲವಾಗುವ ಯೋಜನೆಗಳಿಗೆ ಸರ್ಕಾರ ರೂ. 3 ಲಕ್ಷ ಕೋಟಿಗೂ ಹೆಚ್ಚು ಅನುದಾನ ಮೀಸಲಿಡಲಿದೆ ಎಂದರು.

ಮಧ್ಯಂತರ ಬಜೆಟ್‌ನಲ್ಲಿ ಹೇಳಿರುವಂತೆ ಬಡವರು, ಮಹಿಳೆಯರು, ಯುವಕರು ಮತ್ತು ರೈತರ ಬಗ್ಗೆ ಗಮನಹರಿಸುವ ಅಗತ್ಯವಿದೆ ಎಂದು ಹೇಳಿದರು. ಉದ್ಯೋಗಗಳಲ್ಲಿ ಮಹಿಳಾ ಭಾಗವಹಿಸುವಿಕೆಯನ್ನು ಉತ್ತೇಜಿಸುವ ಉದ್ದೇಶದಿಂದ ಕೈಗಾರಿಕಾ ಸಂಸ್ಥೆಗಳ ಸಹಯೋಗದೊಂದಿಗೆ ಮಹಿಳಾ ವಸತಿ ನಿಲಯಗಳನ್ನು ಸ್ಥಾಪಿಸುವ ಗುರಿ ಹೊಂದಿದ್ದೇವೆ. ಕೌಶಲ ಕಾರ್ಯಕ್ರಮಗಳ ಮೂಲಕ ಔದ್ಯೋಗಿಕ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚು ತೊಡಗಿಕೊಳ್ಳುವಂತೆ ಮಾಡಲಿದ್ದೇವೆ. ಶಿಶುವಿಹಾರಗಳನ್ನು ಸ್ಥಾಪಿಸುವ ಮೂಲಕ ಉದ್ಯೋಗದಲ್ಲಿರುವ ಮಹಿಳೆಯರಿಗೆ ಸರ್ಕಾರ ನೆರವಾಗಲಿದೆ ಎಂದರು.

'ಸೆಮಿಕಂಡಕ್ಟರ್'ಗೆ 901 ಎಕರೆ ಭೂಮಿ ಮೀಸಲು

ಬೆಂಗಳೂರು: ಸೆಮಿಕಂಡಕ್ಟರ್ ಚಿಪ್ ತಯಾರಿಕಾ ಕಂಪನಿಗಳನ್ನು ಆಕರ್ಷಿಸಿ, ಕಾರ್ಖಾನೆಗಳನ್ನು ಸ್ಥಾಪಿಸಲು 901 ಎಕರೆ ಒಳಗೊಂಡ ನಾಲ್ಕು ಕ್ಲಸ್ಟರ್‌ಗಳನ್ನು ಸಿದ್ಧಗೊಳಿಸಲಾಗುತ್ತಿದೆ ಎಂದು ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ವಿಧಾನಪರಿಷತ್‌ನಲ್ಲಿ ಮಂಗಳವಾರ ಜೆಡಿಎಸ್‌ನ ಕೆ.ಎ. ತಿಪ್ಪೇಸ್ವಾಮಿ ಪ್ರಶ್ನೆಗೆ ಉತ್ತರಿಸಿದ ಅವರು, ಹುಬ್ಬಳ್ಳಿ ಸಮೀಪದ ಕೋಟೂರ್–ಬೇಲೂರು ಬಳಿ 224.5 ಎಕರೆ, ಮೈಸೂರಿನ ಕೋಚನಹಳ್ಳಿ ಬಳಿ 245.67 ಎಕರೆ, ತುಮಕೂರು ಜಿಲ್ಲೆಯ ವಸಂತನರಸಾಪುರ ಕೈಗಾರಿಕಾ ಪ್ರದೇಶದಲ್ಲಿ 218.20 ಎಕರೆ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆದಿನಾರಾಯಣ ಹೊಸಹಳ್ಳಿ ಸಮೀಪ 213.14 ಎಕರೆ ಪ್ರದೇಶವನ್ನು ಸಜ್ಜುಗೊಳಿಸಲಾಗಿದೆ. ಅದಕ್ಕಾಗಿ 714.49 ಕೋಟಿ ವೆಚ್ಚ ಮಾಡಲಾಗುತ್ತಿದೆ ಎಂದರು.

ಫಿಸಿಕ್ಸ್ ಮೋಟಾರ್ಸ್, ಕಾರ್ಬನ್ ಎಲೆಕ್ಟ್ರಾನಿಕ್ಸ್, ರವಿಸ್ಮಾಕ್, ಆಸ್ತ್ರ ಡಿಫೆನ್ಸ್, ನ್ಯಾನೊಫಿಕ್ಸ್, ನ್ಯೂರಿಗಾಮಿ, ವೈಡ್ ಮೊಬಿಲಿಟಿ, ಕೆಮಿಯೊಪ್ಟಿಕ್ಸ್ ಹೆಲ್ತ್‌ಕೇರ್, ಗೋಪಾಲನ್ ಏರೋಸ್ಪೇಸ್, ಕ್ರಿಪ್ಟನ್ ಸಲ್ಯೂಷನ್ಸ್ ಮತ್ತಿತರ ಕಂಪನಿಗಳು ಆಸಕ್ತಿ ತೋರಿವೆ. ಎರಡು ಕ್ಲಸ್ಟರ್‌ಗಳ ಅಭಿವೃದ್ಧಿಗೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಶೇ 50ರಷ್ಟು ವೆಚ್ಚ ಭರಿಸುತ್ತಿದೆ ಎಂದು ಹೇಳಿದರು.

ಉತ್ತರಕ್ಕೆ ಸೆಳೆಯುವುದನ್ನು ತಪ್ಪಿಸಿ: ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ಮಾತನಾಡಿ, ಭಾರತಕ್ಕೆ ಬರುವ ಕಂಪನಿಗಳು ಸಹಾಯಧನಕ್ಕೆ ಅರ್ಜಿ ಸಲ್ಲಿಸಿದ ತಕ್ಷಣ ಅವುಗಳನ್ನು ಉತ್ತರ ರಾಜ್ಯಗಳತ್ತ ಕೇಂದ್ರ ಸರ್ಕಾರವೇ ಸೆಳೆಯುತ್ತದೆ. ಹಾಗಾಗಿ, ಬಿಜೆಪಿ–ಜೆಡಿಎಸ್‌ನ ಸಂಸದರು ಕೇಂದ್ರದ ಮನವೊಲಿಸಿ, ಶೇ 50ರಷ್ಟು ಪ್ರೋತ್ಸಾಹಧನ ಕೊಡಿಸಬೇಕು. ರಾಜ್ಯದತ್ತಲೂ ಸೆಮಿಕಂಡಕ್ಟರ್ ಕಂಪನಿಗಳನ್ನು ಕರೆತರಬೇಕು ಎಂದು ಹೇಳಿದರು.

ಗುಜರಾತ್ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ನೆಲೆಗೊಳ್ಳುತ್ತಿರುವ ಸೆಮಿಕಂಡಕ್ಟರ್ ಕಂಪನಿಗಳಿಗೆ ಒಟ್ಟು ಹೂಡಿಕೆಯಲ್ಲಿ ಕೇಂದ್ರ ಸರ್ಕಾರ ಶೇ. 50 ಹಾಗೂ ಅಲ್ಲಿನ ರಾಜ್ಯ ಸರ್ಕಾರಗಳು ಶೇ.30ರಷ್ಟು ಪ್ರೋತ್ಸಾಹ ಧನ ನೀಡುತ್ತಿವೆ. ಕರ್ನಾಟಕವೂ ಶೇ.30ರಷ್ಟು ಪ್ರೋತ್ಸಾಹ ಧನ ನೀಡಲು ಸಿದ್ಧವಿದೆ ಎಂದರು.

ನನ್ನ ಕುಟುಂಬದ ತೇಜೋವಧೆಗೆ ಷಡ್ಯಂತ್ರ

ಬಿಡುಗಡೆ ಬಳಿಕ ಸೂರಜ್ ರೇವಣ್ಣ ಪ್ರತಿಕ್ರಿಯೆ

ಬೆಂಗಳೂರು: ನನ್ನ ಕುಟುಂಬ ಹಾಗೂ ನನ್ನ ವಿರುದ್ಧ ಷಡ್ಯಂತ್ರ ಮಾಡಿ, ತೇಜೋವಧೆ ಮಾಡುವ ದುರುದ್ದೇಶದಿಂದ ಪ್ರಕರಣ ದಾಖಲಿಸಿದ್ದಾರೆ. ಸತ್ಯವನ್ನು ಮುಚ್ಚಿಡಲು ಸಾಧ್ಯವಿಲ್ಲ. ಆದಷ್ಟು ಬೇಗ ಹೊರಬರಲಿದೆ ಎಂದು ವಿಧಾನಪರಿಷತ್ ಸದಸ್ಯ ಸೂರಜ್ ರೇವಣ್ಣ ಹೇಳಿದ್ದಾರೆ.

ಎರಡು ಪ್ರಕರಣದಲ್ಲಿ ಜಾಮೀನು ಸಿಕ್ಕಿದ ಹಿನ್ನೆಲೆಯಲ್ಲಿ ಪರಪ್ಪನ ಅಗ್ರಹಾರ ಜೈಲಿನಿಂದ ಇಂದು ಸೂರಜ್ ರೇವಣ್ಣ ಬಿಡುಗಡೆಯಾದರು. ಬಿಡುಗಡೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನದ ರಾಜಕಾರಣ ಏನಿದೆ ಅದು ನಡೆದೇ ನಡೆಯುತ್ತದೆ. ಸತ್ಯವನ್ನು ಯಾರಿಂದಲೂ ಮುಚ್ಚಿಡಲು ಸಾಧ್ಯವಿಲ್ಲ. ಕುತಂತ್ರ ಮಾಡಿ ನಮ್ಮ ಕುಟುಂಬ ಮುಗಿಸಲು ಹೊರಟಿದ್ದಾರೆ. ಪ್ರತಿಯೊಂದು ವಿಚಾರಕ್ಕೂ ಎರಡು ಮೂರು ದಿನದಲ್ಲಿ ಪತ್ರಿಕಾಗೋಷ್ಠಿ ಕರೆದು ಸ್ಪಷ್ಟೀಕರಣ ಕೊಡುತ್ತೇನೆ ಎಂದಿದ್ದಾರೆ.



ಎಲ್ಲಾ ತನಿಖೆಗೂ ನಾನು ಸಹಕಾರ ಕೊಟ್ಟಿದ್ದೇನೆ. ಕಾನೂನಿನ ಮೇಲೆ ನನಗೆ ವಿಶ್ವಾಸ ಇದೆ. ಹೆದರಿ ಓಡಿ ಹೋಗುವುದಿಲ್ಲ. ಇದು ನನ್ನ ಮೇಲೆ ನಡೆದಿರುವ ಷಡ್ಯಂತ್ರ ಎಂದೇ ಹೇಳುತ್ತೇನೆ. ಶಿವಕುಮಾರ್ ನನ್ನ ಕಾರು ಚಾಲಕ ಅಲ್ಲ. ನನಗೆ ಇರುವುದು ಲೋಕೇಶ್ ಒಬ್ಬನೇ ಕಾರು ಚಾಲಕ ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.

ಏನಿದು ಪ್ರಕರಣ: ಅಸಹಜ ಲೈಂಗಿಕ ಪ್ರಕರಣ ಸಂಬಂಧ ಹೊಳೆನರಸೀಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ 377ರ ಅಡಿ ದಾಖಲಾಗಿದ್ದ ಎಫ್‌ಐಆರ್‌ನಲ್ಲಿ ಸೂರಜ್ ರೇವಣ್ಣ ಅವರನ್ನು ಜೂ.23 ರಂದು ಸಿಐಡಿ ಅರೆಸ್ಟ್ ಮಾಡಿತ್ತು.

ಮೊದಲ ಪ್ರಕರಣದ ಹೊತ್ತಲ್ಲೇ ಸೂರಜ್ ರೇವಣ್ಣ ಕಾರ್ ಚಾಲಕ ಎರಡನೇ ದೂರು ದಾಖಲಿಸಿದ್ದರು. ಆದರೆ ಈ ಪ್ರಕರಣದಲ್ಲಿ ಬಂಧನ ಆಗಿರಲಿಲ್ಲ. ಹೀಗಾಗಿ ವಿಶೇಷ ಜನಪ್ರತಿನಿಧಿಗಳ ಕೋರ್ಟ್ ಜು.22 ರಂದು ಷರತ್ತುಬದ್ಧ ಜಾಮೀನು ನೀಡಿದೆ.

ಕೇಂದ್ರ ಬಜೆಟ್‌ಗೆ ಮಿಶ್ರ ಪ್ರತಿಕ್ರಿಯೆ

ಆಡಳಿತಾರೂಢ ಪಕ್ಷಗಳ ಸ್ವಾಗತ; ವಿಪಕ್ಷಗಳಿಂದ ತಾರತಮ್ಯ ಆರೋಪ

ಮೈಸೂರು, ಜು.23(ಎಸ್‌ಬಿಡಿ)– ಕೇಂದ್ರದ ಬಜೆಟ್ ಬಗ್ಗೆ ಮೈಸೂರಿನ ರಾಜಕೀಯ ಮುಖಂಡರೂ ಸೇರಿದಂತೆ ವಿವಿಧ ಕ್ಷೇತ್ರದ ಪ್ರತಿನಿಧಿಗಳಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಬಾರಿ ಯುವ ಸಮುದಾಯ, ಮಹಿಳೆಯರು, ರೈತರು ಸೇರಿದಂತೆ ಒಂಬತ್ತು ಕ್ಷೇತ್ರಗಳಿಗೆ ಆದ್ಯತೆ ನೀಡಲಾಗಿದ್ದು, ಹಲವು ಸುಧಾರಣೆ ತರಲಾಗಿದೆ ಎಂದು ಕೆಲವರು ಪ್ರಶಂಸಿಸಿದ್ದರೆ, ಮತ್ತಷ್ಟು ಮಂದಿ ಬಿಜೆಪಿ ಸರ್ಕಾರದ ತಾರತಮ್ಯ ಈ ಬಜೆಟ್‌ನಲ್ಲಿ ವ್ಯಕ್ತವಾಗಿದೆ ಎಂದು ಟೀಕಿಸಿದ್ದಾರೆ.

ಒಕ್ಕೂಟ ವ್ಯವಸ್ಥೆಯ ಮಹತ್ವ ಅರಿಯದ ಬಜೆಟ್



ಅತೀ ಹೆಚ್ಚು ತೆರಿಗೆ ಪಾವತಿಸುವ ಕರ್ನಾಟಕ ರಾಜ್ಯಕ್ಕೆ ಹಲವು ಬೇಡಿಕೆಗಳ ಹೊರತಾಗಿಯೂ ಕೇಂದ್ರ ಬಜೆಟ್‌ನಲ್ಲಿ ಸಿಕ್ಕಿರುವುದು ಶೂನ್ಯ. ಸುಮಾರು 11 ಸಾವಿರ ಕೋಟಿಗಳಷ್ಟು ಅಗತ್ಯತೆ ಬಗ್ಗೆ ಕನಿಷ್ಠ ಪ್ರಸ್ತಾಪ ಮಾಡದೆ ಕೇಂದ್ರ ಸರ್ಕಾರ, ಒಕ್ಕೂಟ ವ್ಯವಸ್ಥೆಯ ವಾಸ್ತವ ಮರೆತಂತಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಏಳಿಗೆಗಾಗಿ ಬಾಕಿ ಜೊತೆಗೆ ಹೊಸ ಅನುದಾನ ಮಂಜೂರು ವಿಚಾರವನ್ನೂ ಪ್ರಸ್ತಾಪಿಸಿಲ್ಲ. ಮುಖ್ಯವಾಗಿ ತೆರಿಗೆ ಮಿತಿಯನ್ನು 7ರಿಂದ 3 ಲಕ್ಷಕ್ಕೆ ಇಳಿಕೆ ಮಾಡುವ ಮೂಲಕ ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗಗಳ ಮೇಲೆ ಬರೆ ಎಳೆಯಲಾಗಿದೆ. ಯಾವುದೇ ಜನಪರ ಯೋಜನೆ ನೀಡದೆ ತೆರಿಗೆ ವಿಧಿಸುವುದೇ ಪ್ರಮುಖ ಉದ್ದೇಶವಾಗಿದೆ. ಬಿಹಾರ ಹಾಗೂ ಆಂಧ್ರಕ್ಕೆ ಅತೀ ಹೆಚ್ಚು ಅನುದಾನ ಘೋಷಿಸಿರುವುದು ಬಿಜೆಪಿಯ ಧೋರಣೆಗೆ ಸಾಕ್ಷಿಯಾಗಿದೆ. ಎಂದಿನಂತೆ ಈ ಬಾರಿಯ ಬಜೆಟ್ ಕೂಡ ಒಂದು ಘೋಷಣೆಯಾಗಲಿದೆ ಹೊರತು ಜನರಿಗೆ ಯಾವುದೇ ಪ್ರಯೋಜನವಾಗುವುದಿಲ್ಲ.

-ಡಾ.ಹೆಚ್.ಸಿ.ಮಹದೇವಪ್ಪ, ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ

ಉದ್ಯೋಗ ಸೃಷ್ಟಿಗೆ ಒತ್ತು ಸ್ವಾಗತಾರ್ಹ



ಉದ್ಯೋಗ ಸೃಷ್ಟಿ ಮತ್ತು ಕೌಶಲ ತರಬೇತಿಗಾಗಿ 1.48 ಲಕ್ಷ ಕೋಟಿ ಮೀಸಲಿಟ್ಟು, ಸುಮಾರು 20 ಲಕ್ಷ ಯುವ ಜನತೆಗೆ ಕೌಶಲ ತರಬೇತಿ ನೀಡಲು ಮುಂದಾಗಿರುವುದು ಒಳ್ಳೆಯ ಬೆಳವಣಿಗೆ. ಇದಲ್ಲದೆ ಸಣ್ಣ ಕೈಗಾರಿಕೆಗಳಿಗೆ ಭದ್ರತೆ ರಹಿತ ಸಾಲ ನೀಡಲು 100 ಕೋಟಿ ನಿಧಿ ಸ್ಥಾಪನೆ ಮಾಡಲಾಗಿದೆ. ಇದರಿಂದ ಕೈಗಾರಿಕಾ ಕ್ಷೇತ್ರಕ್ಕೆ ಮತ್ತಷ್ಟು ಪ್ರೋತ್ಸಾಹ ದೊರೆಯಲಿದೆ. ಹೈದರಾಬಾದ್–ಬೆಂಗಳೂರು ಕೈಗಾರಿಕಾ ಕಾರಿಡಾರ್, ಪಿಪಿಪಿ ಯೋಜನೆಯಲ್ಲಿ ಕೈಗಾರಿಕಾ ಕಾರ್ಮಿಕರಿಗೆ ವಸತಿ ಯೋಜನೆ ರೂಪಿಸಿರುವುದು ಕೂಡ ಒಳ್ಳೆಯ ತೀರ್ಮಾನ.

-ಸಿ.ಎನ್.ಮಂಜೇಗೌಡ, ವಿಧಾನಪರಿಷತ್ ಸದಸ್ಯ

ವರ್ಷಪೂರ್ತಿ ಸ್ಟ್ರೀಟ್ ಫುಡ್ ಹಬ್‌ಗೆ ವಿರೋಧ



ಕೇಂದ್ರ ಬಜೆಟ್‌ನಲ್ಲಿ ತರಕಾರಿ, ಹೂವು, ಹಣ್ಣು ಬೆಳೆದು ಮಾರಾಟ ಮಾಡುವವರ ಅನುಕೂಲಕ್ಕಾಗಿ 1.52 ಲಕ್ಷ ಕೋಟಿ ಮೀಸಲಿಟ್ಟಿರುವುದು ಸ್ವಾಗತಾರ್ಹ. ಜೊತೆಗೆ ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೆ ಒತ್ತು ನೀಡಿದ್ದು, ಇದರಿಂದ ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಯಾಗುತ್ತದೆ. ಆದರೆ ಸ್ಟ್ರೀಟ್ ಫುಡ್ ಹಬ್ ಅನ್ನು ವರ್ಷಪೂರ್ತಿ ಎಲ್ಲಾ ಕಡೆ ವಿಸ್ತರಿಸುವ ಯೋಜನೆ ಸರಿಯಲ್ಲ. ಇದರಿಂದ ಪರವಾನಗಿ ಪಡೆದು ತೆರಿಗೆ ಪಾವತಿಸಿ ಹೋಟೆಲ್ ನಡೆಸುವವರು ತೀವ್ರ ಕಷ್ಟಕ್ಕೆ ಸಿಲುಕುತ್ತಾರೆ. ಹೋಟೆಲ್ ಉದ್ಯಮವೇ ಮುಳುಗುವ ದುಸ್ಥಿತಿ ನಿರ್ಮಾಣವಾಗಲಿದೆ.

-ಸಿ.ನಾರಾಯಣ ಗೌಡ, ಅಧ್ಯಕ್ಷರು, ಮೈಸೂರು ಹೋಟೆಲ್ ಮಾಲೀಕರ ಸಂಘ

ಬಿಜೆಪಿ ಸರ್ಕಾರದ ತಾರತಮ್ಯ ಧೋರಣೆ



ಬಿಜೆಪಿಯೇತರ ಪಕ್ಷಗಳ ಸರ್ಕಾರವಿರುವ ದಕ್ಷಿಣ ಭಾರತದ ರಾಜ್ಯಗಳ ಆದಾಯವನ್ನು ಕಸಿದುಕೊಂಡು ಉತ್ತರದ ರಾಜ್ಯಗಳಿಗೆ ಹಂಚುವ ತಾರತಮ್ಯ ನೀತಿ, ನಿರ್ಮಲಾ ಸೀತಾರಾಮನ್ ಮಂಡಿಸಿರುವ ಬಜೆಟ್‌ನಲ್ಲಿ ಸ್ಪಷ್ಟವಾಗಿದೆ. ನಮ್ಮ ರಾಜ್ಯಕ್ಕೆ ಜಿಎಸ್‌ಟಿ ಸೇರಿದಂತೆ ಇತರೆ ಆದಾಯದ ಪಾಲು ನ್ಯಾಯಯುತವಾಗಿ ನಮಗೆ ದಕ್ಕಿಲ್ಲ. ಮೇಕೆದಾಟು, ಮಹದಾಯಿ ಯೋಜನೆಗೆ ನ್ಯಾಯ ಸಿಕ್ಕಿಲ್ಲ. ರಾಜ್ಯಕ್ಕೆ ಹೊಸ ಐಐಟಿ, ಐಐಎಂಎಸ್ ಕ್ಯಾಂಪಸ್ ಮಂಜೂರಾಗಿಲ್ಲ. ಆಂಧ್ರಪ್ರದೇಶ ಹೊರತುಪಡಿಸಿ ದಕ್ಷಿಣದ ಉಳಿದೆಲ್ಲಾ ರಾಜ್ಯಗಳನ್ನೂ ನಿರ್ಲಕ್ಷಿಸಲಾಗಿದೆ.

-ಹೆಚ್.ಎ.ವೆಂಕಟೇಶ್, ಕೆಪಿಸಿಸಿ ವಕ್ತಾರ

ರೈತರ ಮೂಗಿಗೆ ತುಪ್ಪ ಸವರಲಾಗಿದೆ



ಕೇಂದ್ರ ಬಜೆಟ್ ರೈತರ ಅಭಿವೃದ್ಧಿಗೆ ಪೂರಕವಾಗಿಲ್ಲ. ರೈತರ ಸಾಲ ಮನ್ನಾ, ಎಲ್ಲಾ ಬೆಳೆಗಳಿಗೂ ಎಂಎಸ್‌ಪಿ ಖಾತ್ರಿ ಯೋಜನೆ, ರೈತರ ಕೃಷಿ ಸೋಲಾರ್ ಯೋಜನೆಯಲ್ಲಿ ಶೇ.90ರಷ್ಟು ಸಹಾಯಧನ, ಕೃಷಿ ಯಂತ್ರೋಪಕರಣಗಳ ಮೇಲಿನ ಜಿಎಸ್‌ಟಿ ಶೇ.5ರಷ್ಟು ಇಳಿಕೆ, ಬೆಳೆ ವಿಮೆ ಡಿಜಿಟಲೀಕರಣ, ಎಂ.ಎಸ್.ಸ್ವಾಮಿನಾಥನ್ ವರದಿ ಜಾರಿ ಸೇರಿದಂತೆ ರೈತರ ಅಭಿವೃದ್ಧಿಗೆ ಪೂರಕವಾದ ಯಾವುದೇ ಬೇಡಿಕೆಗಳಿಗೂ ಸ್ಪಂದಿಸದೆ ಕೇಂದ್ರ ಸರ್ಕಾರ ರೈತನ ಮೂಗಿಗೆ ತುಪ್ಪ ಸವರುವ ಕೆಲಸವನ್ನು ಮಾಡಿದೆ.

-ಹಳ್ಳಿಕೆರೆಹುಂಡಿ ಭಾಗ್ಯರಾಜ್, ರಾಜ್ಯಾಧ್ಯಕ್ಷ, ರಾಜ್ಯ ರೈತ ಸಂಘಟನೆಗಳ ಒಕ್ಕೂಟ

ದೇಶದ ಆರ್ಥಿಕ ಅಭಿವೃದ್ಧಿಗೆ ಪೂರಕ



ಕೇಂದ್ರ ಸರ್ಕಾರದ ನಿರ್ಧಾರಗಳಿಂದ ದೇಶ ನಿರೀಕ್ಷೆಗೂ ಮೀರಿ ಸಾಧನೆ ಮಾಡಲಿದೆ. ಎಲ್ಲ ವರ್ಗಗಳನ್ನೊಳಗೊಂಡ ಅಭಿವೃದ್ಧಿಗೆ ಬಜೆಟ್‌ನಲ್ಲಿ ಹಣ ಮೀಸಲಿಟ್ಟಿರುವುದು ಸ್ವಾಗತಾರ್ಹ. ದೇಶದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಿರುವುದು ಸಂತಸದ ಸಂಗತಿ. ಇದು ದೇಶದ ಆರ್ಥಿಕತೆ ಅಭಿವೃದ್ಧಿಗೆ ಪೂರಕವಾಗಿದೆ. ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ದೇಶ, ಸಮಗ್ರ ಅಭಿವೃದ್ಧಿ ಹಾದಿಯಲ್ಲಿ ಸಾಗುವುದರಲ್ಲಿ ಯಾವುದೇ ಸಂಶಯವಿಲ್ಲ. ಕೃಷಿ, ಕೈಗಾರಿಕೆ, ಆರೋಗ್ಯ, ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಿರುವುದು ಉತ್ತಮ ನಿರ್ಧಾರ.

-ಟಿ.ಎಸ್.ಶ್ರೀವತ್ಸ, ಶಾಸಕರು, ಕೃಷ್ಣರಾಜ ವಿಧಾನಸಭಾ ಕ್ಷೇತ್ರ

ರಾಜ್ಯಕ್ಕೆ ದಕ್ಕಿದ್ದು ಸೊನ್ನೆಯಷ್ಟೇ



ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಉಳಿಸಿಕೊಳ್ಳಲು ಈ ಬಜೆಟ್ ಮಂಡಿಸಿದ್ದಾರೆ. ಈ ನಿಟ್ಟಿನಲ್ಲಿ ಬಿಹಾರ ಮತ್ತು ಆಂಧ್ರಪ್ರದೇಶಕ್ಕೆ ಆದ್ಯತೆ ನೀಡಿದ್ದಾರೆ. ಇಂಡಿಯಾ ಮೈತ್ರಿಕೂಟ ಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳನ್ನು ಕಡೆಗಣಿಸಲಾಗಿದೆ. ಕೇವಲ ಬಿಜೆಪಿ ಹಾಗೂ ಮಿತ್ರಪಕ್ಷಗಳ ಆಡಳಿತವಿರುವ ರಾಜ್ಯಗಳಿಗೆ ಅನುಕೂಲ ಮಾಡಿಕೊಡಲಾಗಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ಈ ತಾರತಮ್ಯ ಖಂಡನೀಯ. 19 ಸಂಸದರು ಅವರಲ್ಲಿ ಐವರು ಕೇಂದ್ರ ಸಚಿವರಿದ್ದರೂ ಬಜೆಟ್‌ನಲ್ಲಿ ರಾಜ್ಯಕ್ಕೆ ದಕ್ಕಿರುವುದು ಸೊನ್ನೆಯಷ್ಟೇ. ಮೇಕೆದಾಟು ಯೋಜನೆಗೆ ಅನುಮತಿ, ಭದ್ರಾ ಮೇಲ್ದಂಡೆ ಯೋಜನೆಗೆ ಅನುದಾನವನ್ನೂ ನೀಡದಿರುವುದು ವಿಷಾದನೀಯ.

-ಕೆ.ಹರೀಶ್ ಗೌಡ, ಶಾಸಕರು, ಚಾಮರಾಜ ವಿಧಾನಸಭಾ ಕ್ಷೇತ್ರ

ದೇಶದ ಸಮಗ್ರ ಅಭಿವೃದ್ಧಿಗೆ ಪೂರಕ



ವಿಶೇಷವಾಗಿ ಗ್ರಾಮೀಣ ಅಭಿವೃದ್ಧಿಗೆ 6 ಲಕ್ಷ ಕೋಟಿ ಹಾಗೂ ಕೃಷಿ ಕ್ಷೇತ್ರಕ್ಕೆ 1.52 ಲಕ್ಷ ಕೋಟಿ ಹಣ ಮೀಸಲು, ಯುವಕರಿಗೆ ಉದ್ಯೋಗದ ಜೊತೆಗೆ ಶಿಷ್ಯವೇತನ, ಚಿನ್ನ–ಬೆಳ್ಳಿಯ ಕಸ್ಟಮ್ ದರ ಇಳಿಕೆ, ಜಿಎಸ್‌ಟಿ ಸರಳೀಕರಣ, ವಿವಿಧ ಸ್ಲ್ಯಾಬ್‌ಗಳಲ್ಲಿ ತೆರಿಗೆಗೆ ಅವಕಾಶ, ಪ್ರವಾಸೋದ್ಯಮಕ್ಕೆ ಉತ್ತೇಜನ, ಐಟಿ ರಿಟರ್ನ್ಸ್ ಸಂಬಂಧ ಕಠಿಣ ನಿಯಮಗಳ ಸಡಿಲಿಕೆ, ನೈಸರ್ಗಿಕ ಕೃಷಿಗೆ ಉತ್ತೇಜನ, ಐದು ರಾಜ್ಯಗಳಲ್ಲಿ ಕಿಸಾನ್ ಕಾರ್ಡ್ ಯೋಜನೆ, ಯುವ ಸಮುದಾಯಕ್ಕೆ ಕೌಶಲ ತರಬೇತಿ, ಮಹಿಳಾ ಅಭಿವೃದ್ಧಿಗೆ ಆದ್ಯತೆ, ಬುಡಕಟ್ಟು ಜನರ ಅಭಿವೃದ್ಧಿಗೆ ಅನುದಾನ, 100 ನಗರಗಳಲ್ಲಿ ಕೈಗಾರಿಕಾ ಪಾರ್ಕ್, ಕ್ಯಾನ್ಸರ್ ಚಿಕಿತ್ಸೆ ಹಾಗೂ ಔಷಧಿಗಳ ಮೇಲಿನ ತೆರಿಗೆ ಇಳಿಕೆ, ಬೆಂಗಳೂರು–ಹೈದರಾಬಾದ್ ಇಂಡಸ್ಟ್ರಿಯಲ್ ಕಾರಿಡಾರ್. ಹೀಗೆ ಮೋದಿಯವರ 3.0 ಸರ್ಕಾರದ ಮೊದಲ ಬಜೆಟ್ ದೇಶದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿದೆ.

-ಡಾ.ಕೆ.ವಸಂತ ಕುಮಾರ್, ಮಾಜಿ ಸಿಂಡಿಕೇಟ್ ಸದಸ್ಯರು

ಇದು ಉದ್ಯಮ ಸ್ನೇಹಿ ಬಜೆಟ್



ಭವಿಷ್ಯದ ಗುರಿಯೊಂದಿಗೆ ಯೋಜನೆಗಳನ್ನು ರೂಪಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂಬುದಕ್ಕೆ ಇಂದಿನ ಬಜೆಟ್ ಸಾಕ್ಷಿಯಾಗಿದೆ. ಹೊಸ ಘೋಷಣೆಗಳಿಂದ ನಾಲ್ಕು ಕೋಟಿ ಜನರು ಹೊಸ ತೆರಿಗೆ ವ್ಯವಸ್ಥೆಯಿಂದ ವಾರ್ಷಿಕ 17,500 ರೂ.ವರೆಗೆ ಉಳಿತಾಯದ ಪ್ರಯೋಜನ ಪಡೆಯಲಿದ್ದಾರೆ ಎನ್ನುವುದು ಸುಳ್ಳು. ಇದರಿಂದ ಮಧ್ಯಮ ವರ್ಗಕ್ಕೆ ಮತ್ತಷ್ಟು ಬರೆ ಬೀಳಲಿದೆ. ರಾಜ್ಯ ಸರ್ಕಾರ 200 ಯೂನಿಟ್‌ವರೆಗೆ ಉಚಿತ ವಿದ್ಯುತ್ ನೀಡುತ್ತಿರುವ ಕಾರಣ ಸೌರ ವಿದ್ಯುತ್ ಯೋಜನೆ ಘೋಷಣೆ ಮೂಲಕ ಗೊಂದಲ ಸೃಷ್ಟಿಸುವ ಹುನ್ನಾರ ಮಾಡಿದ್ದಾರೆ. ಕೇಂದ್ರದ ಬಹುತೇಕ ಯೋಜನೆಗಳು ಬಡ ಹಾಗೂ ಮಧ್ಯಮ ವರ್ಗದವರ ಪಾಲಿಗೆ ದಕ್ಕಿಲ್ಲ ಎನ್ನುವುದನ್ನು ದಾಖಲೆಗಳೇ ಹೇಳುತ್ತವೆ. ಹಾಗಾಗಿ ಈ ಬಜೆಟ್‌ನಿಂದ ಯಾವ ಸುಧಾರಣೆಯೂ ಆಗುವುದಿಲ್ಲ.

-ಕೆ.ವಿ.ಮಲ್ಲೇಶ್, ಮಾಜಿ ಕಾರ್ಪೋರೇಟರ್

ಇದು ಉದ್ಯಮ ಸ್ನೇಹಿ ಬಜೆಟ್

ಉದ್ಯೋಗ ಸೃಷ್ಟಿ ಮತ್ತು ಕೌಶಲ ತರಬೇತಿಗೆ 1.48 ಲಕ್ಷ ಕೋಟಿ ರೂ. ಮೀಸಲು, ಈ ಮೂಲಕ 20 ಲಕ್ಷ ಯುವ ಜನತೆಗೆ ಕೌಶಲ ತರಬೇತಿಗೆ ನಿರ್ಧಾರ, ಸಣ್ಣ ಕೈಗಾರಿಕೆಗಳ ಭದ್ರತೆ ರಹಿತ ಸಾಲ ನೀಡಲು 100 ಕೋಟಿ ರೂ. ನಿಧಿ, ಹೈದರಾಬಾದ್–ಬೆಂಗಳೂರು ಕೈಗಾರಿಕಾ ಕಾರಿಡಾರ್, ಪಿಪಿಪಿ ಯೋಜನೆಯಡಿ ಕೈಗಾರಿಕಾ ಕಾರ್ಮಿಕರಿಗೆ ಸಮೂಹ ಬಾಡಿಗೆ ವಸತಿ ಯೋಜನೆ, ಕೈಗಾರಿಕಾ ಮಹಿಳಾ ಕಾರ್ಮಿಕರಿಗೆ ವಸತಿ ಹಾಗೂ ಮಕ್ಕಳ ಪಾಲನಾ ಕೇಂದ್ರಕ್ಕೆ ಒತ್ತು, 1000 ಐಟಿಐ ಉನ್ನತ ದರ್ಜೆಗೆ ಕ್ರಮ, ಹೊಸ ಉದ್ಯೋಗಿಗಳಿಗೆ ಮೊದಲ ಮೂರು ತಿಂಗಳು 5 ಸಾವಿರ ರೂ. ವೃತ್ತಿ ವೇತನ, ಪಿಪಿಪಿ ಯೋಜನೆಯಡಿ ರಫ್ತು ಹಬ್ ಸ್ಥಾಪನೆ ಹಾಗೂ ಇ–ಕಾಮರ್ಸ್ ಅಳವಡಿಕೆ, ಪ್ಲಗ್ ಅಂಡ್ ಪ್ಲೇ ಮಾದರಿ ಉತ್ಪಾದನೆಗೆ ಕೈಗಾರಿಕಾ ಪಾರ್ಕ್‌ಗಳ ಅಭಿವೃದ್ಧಿ, ಮುದ್ರಾ ಯೋಜನೆ ಸಾಲದ ಮಿತಿ 10 ರಿಂದ 20 ಲಕ್ಷ ರೂ.ಗೆ ಏರಿಸಲಾಗಿದೆ. ಒಟ್ಟಾರೆ ಈ ಬಾರಿಯ ಬಜೆಟ್ ಉದ್ಯಮ ಸ್ನೇಹಿ ಅದರಲ್ಲೂ ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆ ಕ್ಷೇತ್ರಕ್ಕೆ ಪ್ರೋತ್ಸಾಹದಾಯಕವಾಗಿದೆ ಎಂದು ಮೈಸೂರು ಕೈಗಾರಿಕೆಗಳ ಸಂಘದ ಅಧ್ಯಕ್ಷ ಪಿ.ವಿಶ್ವನಾಥ ಹಾಗೂ ಪ್ರಧಾನ ಕಾರ್ಯದರ್ಶಿ ಸುರೇಶ್ ಕುಮಾರ್ ಜೈನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಪಿ.ವಿಶ್ವನಾಥ



ಸುರೇಶ್ ಕುಮಾರ್

ಅಭಿವೃದ್ಧಿ ಪೂರಕ ಬಜೆಟ್



2024–25ನೇ ಸಾಲಿನ ಕೇಂದ್ರ ಸರ್ಕಾರ ಬಜೆಟ್ ದೇಶದ ಆರ್ಥಿಕತೆಗೆ ಪೂರಕವಾಗಿದ್ದು, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಸುದೀರ್ಘ ರಾಜಕೀಯ ಅನುಭವ ಹಾಗೂ ಕೇಂದ್ರ ಹಣಕಾಸು ಸಚಿವರ ಬುದ್ಧಿವಂತಿಕೆಯ ಫಲವಾಗಿ ಕೃಷಿ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ, ಶಿಕ್ಷಣ ಹಾಗೂ ವೈದ್ಯಕೀಯ ಕ್ಷೇತ್ರಗಳಿಗೆ ಅಭಿವೃದ್ಧಿ ಪೂರಕ ಬಜೆಟ್. ಅದರಲ್ಲೂ ನೌಕರರ ಸ್ನೇಹಿ, ತೆರಿಗೆದಾರರ ಸ್ನೇಹಿ ಬಜೆಟ್.

- ಸಂದೇಶ್ ಸ್ವಾಮಿ, ಮಾಜಿ ಮೇಯರ್

ನೀಟ್–ಯುಜಿ ಮರುಪರೀಕ್ಷೆ ಇಲ್ಲ

ಸುಪ್ರೀಂಕೋರ್ಟ್ ಮಹತ್ವದ ತೀರ್ಪು

ನವದೆಹಲಿ: ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಮರು ಪರೀಕ್ಷೆ ನಡೆಸಲು ಸುಪ್ರೀಂ ಕೋರ್ಟ್ ಮಂಗಳವಾರ ನಿರಾಕರಿಸಿದೆ.

NEET-UG ಮರುಪರೀಕ್ಷೆ ನಡೆಸುವಂತೆ ಕೋರಿ ಅಭ್ಯರ್ಥಿಗಳು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಸುಪ್ರೀಂ ಪೀಠ, ಪರೀಕ್ಷೆ ನಡೆಸುವಲ್ಲಿ ವ್ಯವಸ್ಥಿತ ದೋಷಗಳಿವೆ. ಇದರಿಂದ 155 ಅಭ್ಯರ್ಥಿಗಳು ಪ್ರಯೋಜನ ಪಡೆದಿದ್ದಾರೆ ಎಂದು ಹೇಳಿದೆ.

ನೀಟ್ ಪರೀಕ್ಷೆಯನ್ನು ಮತ್ತೆ ನಡೆಸುವುದೇ ಸರಿಯಾದ ಪರಿಹಾರ ಅಲ್ಲ. ಹಾಗೆ ಮಾಡಿದರೆ 24 ಲಕ್ಷ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಾರೆ ಎಂದು ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅವರು ಹೇಳಿದರು. ಮರು ಪರೀಕ್ಷೆ ನಡೆಸದಿದ್ದರೆ ನೀಟ್‌ನ ಪಾವಿತ್ರ್ಯತೆಗೆ ಧಕ್ಕೆಯಾಗುತ್ತದೆ ಎಂಬ ಅಭಿಪ್ರಾಯವನ್ನು ಸುಪ್ರೀಂ ಕೋರ್ಟ್ ಒಪ್ಪಲಿಲ್ಲ. ಈ ತೀರ್ಪಿನ ಆಕ್ಷೇಪಣೆಗಳನ್ನು ಆಗಸ್ಟ್ 21 ರಂದು ಆಲಿಸಲಾಗುವುದು ಎಂದು ಅವರು ತಿಳಿಸಿದರು.

ನೀಟ್ ಪರೀಕ್ಷೆಯನ್ನು ಮತ್ತೆ ನಡೆಸುವುದರಿಂದ ಅಡ್ಮಿಷನ್, ವೈದ್ಯಕೀಯ ಶಿಕ್ಷಣದ ಕೋರ್ಸ್‌ನ ಮೇಲೆ ಪರಿಣಾಮ ಬೀರುತ್ತದೆ. ಭವಿಷ್ಯದಲ್ಲಿ ಅರ್ಹ ವೈದ್ಯಕೀಯ ವೃತ್ತಿಪರರ ಲಭ್ಯತೆಯ ಮೇಲೆ ಪರಿಣಾಮ ಬೀರುತ್ತದೆ ಮತ್ತು ಸೀಟುಗಳ ಹಂಚಿಕೆಯಲ್ಲಿ ಗಂಭೀರವಾಗಿ ಅನನುಕೂಲಕವಾಗಲಿದೆ" ಎಂದು ನ್ಯಾಯಾಲಯ ಹೇಳಿದೆ.

ಎನ್‌ಟಿಎ ಮತ್ತು ಕೇಂದ್ರ ಶಿಕ್ಷಣ ಸಚಿವಾಲಯವು ಮೇ 5 ರಂದು ನಡೆಸಿದ ನೀಟ್ ಯುಜಿ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿದೆ ಮತ್ತು ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪಗಳ ಬಗ್ಗೆ ದೇಶಾದ್ಯಂತ ಆಕ್ರೋಶ ವ್ಯಕ್ತವಾಗಿತ್ತು. ಪರೀಕ್ಷೆಯಲ್ಲಿ ಅವ್ಯವಹಾರ ನಡೆದಿದ್ದು, ಮರು ಪರೀಕ್ಷೆ ನಡೆಸಬೇಕು ಎಂದು ಪ್ರತಿಪಕ್ಷಗಳು ಒತ್ತಾಯಿಸಿದ್ದವು. ಆದರೆ, ನೀಟ್ ಮರು ಪರೀಕ್ಷೆ ನಡೆಸುವ ಅಗತ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿರುವುದರಿಂದ ಕೇಂದ್ರ ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ.

ಬಜೆಟ್‌ನಲ್ಲಿ ಕರ್ನಾಟಕದ ಕಡೆಗಣನೆ

ನೀತಿ ಆಯೋಗದ ಸಭೆ ಬಹಿಷ್ಕಾರ: ಸಿದ್ದರಾಮಯ್ಯ

ಬೆಂಗಳೂರು: ಕೇಂದ್ರ ಸರ್ಕಾರ ಇಂದು ಮಂಡಿಸಿರುವ ಬಜೆಟ್‌ನಲ್ಲಿ ಕರ್ನಾಟಕವನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದೆ. ಈ ಹಿನ್ನೆಲೆಯಲ್ಲಿ ಇದೇ 27ರಂದು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ನಡೆಯಲಿರುವ ನೀತಿ ಆಯೋಗದ ಸಭೆಯನ್ನು ಬಹಿಷ್ಕರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ ಎಂದು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

ಕರ್ನಾಟಕದಿಂದಲೇ ಆಯ್ಕೆಯಾಗಿ ಹೋಗಿರುವ ಕೇಂದ್ರ ಸರ್ಕಾರದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರೂ ಸೇರಿದಂತೆ ರಾಜ್ಯದ ಸಂಸದರೆಲ್ಲರ ಸಭೆ ಕರೆದು ರಾಜ್ಯದ ಅತ್ಯವಶ್ಯಕ ಬೇಡಿಕೆಗಳನ್ನು ಮುಂದಿಟ್ಟು ಮನವರಿಕೆ ಮಾಡಿಕೊಟ್ಟಿದ್ದರೂ ಇಂದು ಮಂಡಿಸಲಾಗಿರುವ ಕೇಂದ್ರ ಬಿಜೆಪಿ ಸರ್ಕಾರದ ಬಜೆಟ್‌ನಲ್ಲಿ ಕರ್ನಾಟಕವನ್ನು ಸಂಪೂರ್ಣವಾಗಿ ಕಡೆಗಣಿಸಲಾಗಿದೆ. ಕೇಂದ್ರ ಸರ್ಕಾರದ ಈ ಉದ್ದೇಶ ಪೂರ್ವಕ ನಿರ್ಲಕ್ಷ್ಯ ಮತ್ತು ತಾರತಮ್ಯ ನೀತಿಯನ್ನು ಖಂಡಿಸಿ, ಇದೇ ಜುಲೈ ತಿಂಗಳ 27ರಂದು ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ದೆಹಲಿಯಲ್ಲಿ ಕರೆಯಲಾಗಿರುವ ನೀತಿ ಆಯೋಗದ ಸಭೆಯನ್ನು ಬಹಿಷ್ಕರಿಸಲು ನಮ್ಮ ಸರ್ಕಾರ ನಿರ್ಧರಿಸಿದೆ ಎಂದು ತಿಳಿಸಿದ್ದಾರೆ.

ರಾಜ್ಯದ ಯೋಜನೆಗಳ ಕಡೆಗಣನೆ...: ಇಂದು ಮಂಡಿಸಲಾದ 2024–25ರ ಸಾಲಿನ ಬಜೆಟ್ ನೋಡಿದ ನಂತರ ನಮಗೆ ಕೇಂದ್ರ ಸರ್ಕಾರದ ಮೇಲಿನ ವಿಶ್ವಾಸವೇ ಹೊರಟು ಹೋಗಿದೆ. ಬಜೆಟ್‌ನಲ್ಲಿ ರೈತರ ಕಲ್ಯಾಣದ ಕಾಳಜಿ ವ್ಯಕ್ತಪಡಿಸಿರುವ ಹಣಕಾಸು ಸಚಿವರು ನಮ್ಮ ಬಹುದಿನಗಳ ಬೇಡಿಕೆಯಾಗಿರುವ ಮೇಕೆದಾಟು ಯೋಜನೆಯ ಬಗ್ಗೆ ಪ್ರಸ್ತಾವವನ್ನೇ ಮಾಡಿಲ್ಲ. ಭದ್ರಾ ಮೇಲ್ದಂಡೆಗೆ ವಿಶೇಷ ನೆರವು ನೀಡುವ ತಮ್ಮದೇ ಭರವಸೆಯನ್ನೂ ಉಳಿಸಿಕೊಳ್ಳಲಿಲ್ಲ. ಕಳಸಾ – ಬಂಡೂರಿ ಯೋಜನೆಯನ್ನೂ ನಿರ್ಲಕ್ಷಿಸಲಾಗಿದೆ

ಬೆಂಗಳೂರು ಮೆಟ್ರೊ ರೈಲು ಕಾರ್ಪೋರೇಶನ್ ಮೆಟ್ರೊ 3ನೇ ಹಂತದ ಯೋಜನೆ ಮತ್ತು ಬೆಂಗಳೂರು ನಗರದ ಉದ್ದೇಶಿತ ಅಷ್ಟಪಥ ಪೆರಿಫೆರಲ್ ರಿಂಗ್ ರೋಡ್ ನಿರ್ಮಾಣಕ್ಕೆ ಅಗತ್ಯ ಅನುಮತಿ ಮತ್ತು ಅನುದಾನವನ್ನೂ ನೀಡಿಲ್ಲ ಎಂದು ಹೇಳಿದ್ದಾರೆ.

ಏಳು ಬಜೆಟ್ ಮಂಡನೆ ವೇಳೆ ದೇಶದ ಪಾರಂಪರಿಕ ಉಡುಗೆಗೆ ನಿರ್ಮಲಾ ಸೀತಾರಾಮನ್ ಗೌರವ ಸಲ್ಲಿಕೆ



ನವದೆಹಲಿ,ಜು.23– ತಮ್ಮ ಪ್ರತಿ ಬಜೆಟ್ ಮಂಡನೆ ವೇಳೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಾವು ಧರಿಸುವ ವಿಶಿಷ್ಟ ಸೀರೆಯಿಂದ ಗಮನ ಸೆಳೆಯುತ್ತಿದ್ದಾರೆ. ಆ ಮೂಲಕ ದೇಶದ ಕೈಮಗ್ಗ ಪರಂಪರೆಗೆ ಗೌರವ ಸಲ್ಲಿಸುವ ಜೊತೆಗೆ ಈ ಕರಕುಶಲತೆಗೆ ಉತ್ತೇಜನ ನೀಡಬೇಕೆಂಬ ಸಂದೇಶ ರವಾನಿಸುತ್ತಾ ಬಂದಿದ್ದಾರೆ.

2024–25ರ ಬಜೆಟ್ ಮಂಡನೆ ವೇಳೆ ಅವರು ಆಂಧ್ರಪ್ರದೇಶದ ಸಾಂಪ್ರದಾಯಿಕ ಶೈಲಿಯ ಕೆನ್ನೇರಳೆ ಬಾರ್ಡರ್ ಹೊಂದಿರುವ ಆಫ್ ವೈಟ್ ಮಂಗಳಗಿರಿ ಸೀರೆ ಧರಿಸಿದ್ದರು. ಈ ಹಿಂದೆ 2024ರ ಮಧ್ಯಂತರ ಬಜೆಟ್ ಮಂಡಿಸುವಾಗ ನೀಲಿ ಸೀರೆ ಧರಿಸಿದ್ದರು. ಇದು ಪಶ್ಚಿಮ ಬಂಗಾಳದಲ್ಲಿ ಪ್ರಸಿದ್ಧ ಕಾಂತ ಹೊಲಿಗೆಯನ್ನು ಹೊಂದಿತ್ತು.

2023ರಲ್ಲಿ ಅವರು ಕೈಯಿಂದ ನೇಯ್ದ, ಕಸೂತಿಯಲ್ಲಿ ಸಿದ್ಧಪಡಿಸಿದ್ದ ಕರ್ನಾಟಕದ ಧಾರವಾಡದ ಇಳಕಲ್ ರೇಷ್ಮೆ ಸೀರೆ ಧರಿಸಿದ್ದರು. ಈ ಸೀರೆಯು ಕೆಂಪು ದೇವಾಲಯ ಬಾರ್ಡರ್ ಹೊಂದಿತ್ತು.

2022ರಲ್ಲಿ ನಿರ್ಮಲಾ ಸೀತಾರಾಮನ್ ಅವರು ಕಂದು ಬಣ್ಣದ ಮೊಮ್ಮೈ ಸೀರೆಯನ್ನು ಧರಿಸಿದ್ದರು. ಇದು ಒಡಿಶಾದ ಗಂಜಾಂ ಜಿಲ್ಲೆಯ ಕೈಮಗ್ಗದ ಸೀರೆಯಾಗಿತ್ತು.

2021ರಲ್ಲಿ ಹೈದರಾಬಾದ್‌ನ ಪೋಚಂಪಲ್ಲಿ ಗ್ರಾಮದ ವಿಶಿಷ್ಟ ಮಾದರಿಗೆ ಹೆಸರುವಾಸಿಯಾದ ಆಫ್ ವೈಟ್ ಪೋಚಂಪಲ್ಲಿ ಸೀರೆ ಧರಿಸಿದ್ದರು. 2020ರ ಬಜೆಟ್ ಮಂಡಿಸುವಾಗ ಹಳದಿ ಬಣ್ಣದ ರೇಷ್ಮೆ ಸೀರೆಯನ್ನು ಮ್ಯಾಚಿಂಗ್ ಬ್ಲೌಸ್‌ನೊಂದಿಗೆ ಧರಿಸಿದ್ದರು. ಭಾರತದಲ್ಲಿ ಹಳದಿ ಬಣ್ಣವನ್ನು ಸಮೃದ್ಧಿಯ ಸಂಕೇತ ಎಂದು ಪರಿಗಣಿಸಲಾಗಿದೆ. ಜೊತೆಗೆ ಅಂದು ಅವರು ಧರಿಸಿದ್ದ ಸೀರೆಯು ದೇಶದ ಶ್ರೀಮಂತ ಸಂಸ್ಕೃತಿ ಮತ್ತು ಸಂಪತ್ತನ್ನು ಪ್ರತಿನಿಧಿಸುವಂತಿತ್ತು.

2019ರಲ್ಲಿ ಅವರು ಬ್ರೀಫ್‌ಕೇಸ್ ಬದಲಿಗೆ ಕೆಂಪು ಮತ್ತು ಸಮೃದ್ಧಿಯ ಸಂಕೇತವಾಗಿರುವ ಸಾಂಪ್ರದಾಯಿಕ 'ಬಹಿ ಖಾತಾ' (ಡಿಜಿಟಲ್ ಟ್ಯಾಬ್ಲೆಟ್ ಪೌಚ್) ತರುವ ಸಂಸ್ಕೃತಿಗೆ ನಾಂದಿ ಹಾಡಿದ್ದರು. ಅದನ್ನೇ ಈವರೆಗೆ ಮುಂದುವರಿಸಿದ್ದಾರೆ. ಬಹಿ ಖಾತಾದ ಮೇಲ್ಭಾಗದಲ್ಲಿ ರಾಷ್ಟ್ರೀಯ ಲಾಂಛನವಿರುವುದು ವಿಶೇಷ. 2019ರ ಬಜೆಟ್ ಮಂಡನೆ ವೇಳೆ ಅವರು ಚಿನ್ನದ ಗುಲಾಬಿ ಬಣ್ಣದ ಮಂಗಳಗಿರಿ ರೇಷ್ಮೆ ಸೀರೆಯನ್ನು ಧರಿಸಿದ್ದರು.

ಕೇಂದ್ರ ಬಜೆಟ್‌ನಲ್ಲಿ ತಮಿಳುನಾಡು ನಿರ್ಲಕ್ಷ್ಯ: ನೀತಿ ಆಯೋಗ ಸಭೆ ಬಹಿಷ್ಕರಿಸಿದ ಸ್ಟಾಲಿನ್

ಚೆನ್ನೈ: ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಜುಲೈ 27 ರಂದು ನಡೆಯಲಿರುವ ನೀತಿ ಆಯೋಗ ಸಭೆಯನ್ನು ಬಹಿಷ್ಕರಿಸುವ ನಿರ್ಧಾರವನ್ನು ಘೋಷಿಸಿದ್ದಾರೆ. 2024–25ರ ಕೇಂದ್ರ ಬಜೆಟ್‌ನಲ್ಲಿ ಕೇಂದ್ರ ಸರ್ಕಾರ ತಮಿಳುನಾಡನ್ನು ನಿರ್ಲಕ್ಷಿಸಿದೆ ಎಂಬ ಕಾರಣದಿಂದ ಪ್ರತಿಕ್ರಿಯೆಯಾಗಿ ಈ ನಿರ್ಧಾರವನ್ನು ತೆಗೆದುಕೊಂಡಿದ್ದಾರೆ ಎನ್ನಲಾಗಿದೆ. ಬಜೆಟ್‌ನಲ್ಲಿ ಕೇಂದ್ರ ಸರ್ಕಾರ ತಮಿಳುನಾಡನ್ನು ಬಹಿಷ್ಕರಿಸಿರುವುದರಿಂದ ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯನ್ನು ಬಹಿಷ್ಕರಿಸುವುದಾಗಿ ಸ್ಟಾಲಿನ್ ಹೇಳಿದ್ದಾರೆ.

ವೀರಶೈವ ಲಿಂಗಾಯತ ಸಮಾಜದ ಅಭಿವೃದ್ಧಿಗೆ ಶ್ರಮಿಸಿ

● ವಾಟಾಳು ಶ್ರೀಸಿದ್ದಲಿಂಗಶಿವಾಚಾರ್ಯ ಸ್ವಾಮೀಜಿ ಸಲಹೆ ● ಎಸ್‌ಎಂಆರ್ ಪ್ರಕಾಶ್, ತಂಡಕ್ಕೆ ಸನ್ಮಾನ



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಿ.ನರಸೀಪುರ ತಾಲೂಕು ಘಟಕದ ಚುನಾವಣೆಯಲ್ಲಿ ಜಯ ಗಳಿಸಿದ ಎಸ್‌ಎಂಆರ್ ಪ್ರಕಾಶ್ ನೇತೃತ್ವದ ತಂಡದ ಸದಸ್ಯರು ವಾಟಾಳು ಶ್ರೀಗಳ ಆಶೀರ್ವಾದ ಪಡೆದರು.

ತಿ.ನರಸೀಪುರ, ಜು.23– ವೀರಶೈವ ಲಿಂಗಾಯತ ಜನಾಂಗದವರು ಪಕ್ಷ ಭೇದ ಮರೆತು ಸಮಾಜದ ಅಭಿವೃದ್ಧಿಗೆ ಶ್ರಮಿಸಬೇಕು ಎಂದು ವಾಟಾಳು ಸೂರ್ಯ ಸಿಂಹಾಸನ ಮಠದ ಪೀಠಾಧ್ಯಕ್ಷ ಶ್ರೀಸಿದ್ದಲಿಂಗಶಿವಾಚಾರ್ಯ ಸ್ವಾಮೀಜಿ ಸಲಹೆ ನೀಡಿದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಎಸ್‌ಎಂಆರ್ ಪ್ರಕಾಶ್ ಹಾಗೂ ತಂಡದ ಸದಸ್ಯರನ್ನು ಮಠದ ವತಿಯಿಂದ ಸನ್ಮಾನಿಸಿ ಮಾತನಾಡಿದ ಅವರು, ಈಗ ಚುನಾವಣೆ ಮುಗಿದಿದೆ. ಸೋಲು ಗೆಲುವು ಸಹಜ. ನೂತನ ಕಾರ್ಯಕಾರಿ ಸಮಿತಿ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಹಾಗಾಗಿ ಸೋತ ತಂಡವನ್ನು ಹೀಗಳೆಯುವುದು ಬೇಡ. ಯಾರ ಮೇಲೂ ದ್ವೇಷ ಸಾಧಿಸದೆ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಸಮಾಜವನ್ನು ಅಭಿವೃದ್ಧಿ ಕಡೆಗೆ ಕೊಂಡೊಯ್ಯಲು ಒಗ್ಗೂಡಿ ಎಲ್ಲರೂ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಸೌಮ್ಯ ಸ್ವಭಾವದ ಪ್ರಕಾಶ್ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಎಲ್ಲರೂ ಅವರಿಗೆ ಬೆಂಬಲ ನೀಡುವ ಮೂಲಕ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಲು ಮುಂದಾಗಬೇಕು. ಅಧ್ಯಕ್ಷರಿಂದ ಮಾತ್ರಕ್ಕೆ ಎಲ್ಲವನ್ನು ಅವರೊಬ್ಬರೇ ಮಾಡಲು ಸಾಧ್ಯವಿಲ್ಲ. ಹಾಗಾಗಿ ಎಲ್ಲರೂ ಜವಾಬ್ದಾರಿ ಹೊತ್ತುಕೊಂಡು ಒಟ್ಟಾಗಿ ನಿಂತು ಕೆಲಸ ಮಾಡಬೇಕಿದೆ ಎಂದರು.

ಚುನಾವಣೆಯಲ್ಲಿ ಜಯ ಸಾಧಿಸಿದ ಪ್ರತಿಯೊಬ್ಬ ನಿರ್ದೇಶಕರು ಪ್ರತಿ ಗ್ರಾಮದಲ್ಲೂ ಹೆಚ್ಚು ಸದಸ್ಯರನ್ನು ಸಂಘಕ್ಕೆ ನೋಂದಣಿ ಮಾಡಿಸಲು ಗಮನಹರಿಸಬೇಕು. ನೂತನ ಕಾರ್ಯಕಾರಿ ಸಮಿತಿ ತಿಂಗಳಿಗೊಮ್ಮೆ ಅದು ಸಾಧ್ಯವಾಗದಿದ್ದಲ್ಲಿ 2 ತಿಂಗಳಿಗೊಮ್ಮೆ ಸಂಘದ ಸಭೆ ಕರೆದು ಆಗುಹೋಗುಗಳ ಬಗ್ಗೆ ಚರ್ಚೆ ಮಾಡಬೇಕು. ಮಹಿಳಾ ಸದಸ್ಯರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಅವರೂ ಕೂಡ ಸಂಘದ ಕಾರ್ಯ ಚಟುವಟಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು. ತಾಲೂಕು ಸಂಘಕ್ಕೆ ಎಲ್ಲಾ ರೀತಿಯ ಸಹಾಯ ಮಾಡುವಂತೆ ಜಿಲ್ಲಾಧ್ಯಕ್ಷರೊಂದಿಗೆ ಮಾತನಾಡಿದ್ದೇನೆ ಎಂದರು.

ಮದ್ದೂರಲಿಂಗಯ್ಯನಹುಂಡಿ ಮಠದ ಪೀಠಾಧ್ಯಕ್ಷ ಶ್ರೀಗೌರಿ ಶಂಕರ ಸ್ವಾಮೀಜಿ ಮಾತನಾಡಿದರು. ಈ ವೇಳೆ ಅಖಿಲ ಭಾರತ ವೀರಶೈವ ಮಹಾಸಭಾ ನೂತನ ಅಧ್ಯಕ್ಷ ಎಸ್‌ಎಂಆರ್ ಪ್ರಕಾಶ್, ಟಿ.ಪಿ.ಶಿವಕುಮಾರ್, ಜಿ.ನಂಜುಂಡ ಸ್ವಾಮಿ, ಕೆ.ಎಂ.ಮಲ್ಲು, ಪುರಸಭೆ ಸದಸ್ಯ ಎಸ್.ಕೆ.ಕಿರಣ್, ಎಸ್.ಬಿ.ಸುಗಂಧರಾಜು, ಓಂಕಾರಸ್ವಾಮಿ, ತೋಂಟೇಶ್, ಎಂ.ಪರಶಿವಮೂರ್ತಿ, ಗುರುಸ್ವಾಮಿ, ಎಂ.ಸುರೇಶ್, ಮಹಿಳಾ ನಿರ್ದೇಶಕರಾದ ಅಂಬಿಕಾ, ಮಲ್ಲಿಕಾ, ಜ್ಞಾನೇಶ್ವರಿ, ಸುಧಾ, ಕೃಷಿಕ ಸಮಾಜದ ಅಧ್ಯಕ್ಷ ಶಿವಮಲ್ಲಪ್ಪ, ಪಿಎಸಿಎಸ್ ಅಧ್ಯಕ್ಷ ಮಲ್ಲಣ್ಣ, ಬಸವರಾಜು, ಕಾರ್ಯದರ್ಶಿ ಪರಶಿವಮೂರ್ತಿ, ತಾಪಂ ಮಾಜಿ ಸದಸ್ಯ ಬಿ.ಗು. ಶಿವಸ್ವಾಮಿ, ಉಮೇಶಪ್ಪ, ಗುತ್ತಿಗೆದಾರ ಬಿ.ಮಂಟೇಲಿಂಗಪ್ಪ, ಪ್ರಕಾಶ್, ನವೀನ್, ಕೆ.ಸಿ.ವೀರೇಶ್, ಪರಶುಮೂರ್ತಿ, ಪಡುವಲು ಪೂಜೆ ಅಧ್ಯಕ್ಷ ಮಹೇಶ್ ಪಟೇಲ್, ನಾಗೇಂದ್ರ ಸಿದ್ದಲಿಂಗಸ್ವಾಮಿ ಮತ್ತಿತರರಿದ್ದರು.

ಸಮಾಜದ ಏಳಿಗೆಗೆ ಶ್ರಮಿಸುತ್ತೇನೆ

ವೀರಶೈವ ಲಿಂಗಾಯತ ಸಮುದಾಯದವರು ನನ್ನ ಮೇಲೆ ನಂಬಿಕೆ ಇಟ್ಟು ಚುನಾವಣೆಯಲ್ಲಿ ಎಲ್ಲರಿಗಿಂತ ಹೆಚ್ಚು 529 ಮತ ನೀಡಿ ನಿರ್ದೇಶಕನಾಗಿ ಆಯ್ಕೆ ಮಾಡಿ ಜವಾಬ್ದಾರಿ ಹೆಚ್ಚಿಸಿದ್ದಾರೆ. ಅವರ ನಂಬಿಕೆ ಹುಸಿಗೊಳಿಸದೆ ಅವರ ಆಶಯಕ್ಕೆ ಪೂರಕವಾಗಿ ಕೆಲಸ ಮಾಡುತ್ತೇನೆ. ಸಮಾಜ ಸೇವೆಯಲ್ಲಿ ತೊಡಗಿ ಸಮಾಜದ ಏಳಿಗೆಗೆ ಶಕ್ತಿ ಮೀರಿ ಶ್ರಮಿಸುತ್ತೇನೆ. ಪುರಸಭೆ ಅಥವಾ ವೀರಶೈವ ಸಮಾಜದಲ್ಲಿ ಯಾವುದೇ ಕೆಲಸವಾಗಬೇಕಾದರೇ ಯಾವುದೇ ಸಂದರ್ಭದಲ್ಲೂ ನನ್ನನ್ನು ಸಂಪರ್ಕಿಸಬಹುದು.

- ಎಸ್.ಕೆ.ಕಿರಣ್, ನೂತನ ನಿರ್ದೇಶಕ.

ಕಡೆಮನುಗನಹಳ್ಳಿಯಲ್ಲಿ ಮಕ್ಕಳಿಗೆ ಕಲಿಕಾ ಸಾಮಗ್ರಿ ವಿತರಣೆ



ಕಡೆಮನುಗನಹಳ್ಳಿ ಶಾಲೆ ಮಕ್ಕಳಿಗೆ ಕಲಿಕಾ ಸಾಮಗ್ರಿಗಳನ್ನು ವಿತರಿಸಲಾಯಿತು.

ಹನಗೋಡು, ಜು.23– ರಾಜ್ಯ ಸರ್ಕಾರ ಕಡ್ಡಾಯ ಶಿಕ್ಷಣ ಯೋಜನೆ ಜಾರಿಗೆ ತಂದಿದ್ದು, ಯಾವುದೇ ಮಗು ಶಿಕ್ಷಣದಿಂದ ವಂಚಿತರಾಗಬಾರದು ಎಂದು ಕಡೆಮನುಗನಹಳ್ಳಿ ಶಾಲೆ ಮುಖ್ಯ ಶಿಕ್ಷಕ ಸೀಮಾ ತಿಳಿಸಿದರು.

ಕಡೆಮನುಗನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಮೈಸೂರಿನ ಚಿನ್ನ ತಾಯಮ್ಮ ಟ್ರಸ್ಟ್ ವತಿಯಿಂದ ನೀಡಲಾದ ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಅವರು, ಶಿಕ್ಷಣ ಎಲ್ಲರ ಬಾಳಿಗೆ ಬೆಳಕಾಗಿದ್ದು, ಅತ್ಯಂತ ಅವಶ್ಯವಾಗಿದೆ. ಅದರಲ್ಲೂ ಸಮಾಜದ ಮುಖ್ಯವಾಹಿನಿಗೆ ಎಲ್ಲರು ಬರಬೇಕೆಂಬ ಉದ್ದೇಶದಿಂದ ಸರ್ಕಾರ ಶಿಕ್ಷಣಕ್ಕೆ ಒತ್ತು ನೀಡುತ್ತಾ ಬಂದಿದೆ. ಖಾಸಗಿ ಶಾಲೆಗಳ ಮೊರೆ ಹೋಗದೆ ಉತ್ತಮ ಶಿಕ್ಷಣ ನೀಡುವ ಸರ್ಕಾರಿ ಶಾಲೆಗಳನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಪೋಷಕರದ್ದಾಗಿದೆ. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿ ಕಲಿಕಾ ಕೇಂದ್ರಕ್ಕೆ ಕರೆತಂದು ಉಚಿತವಾಗಿ ವಿದ್ಯೆ, ವಿನಯ, ಸಂಸ್ಕಾರ ಹಾಗೂ ಬಿಸಿ ಊಟ, ಬಟ್ಟೆ ಕಲಿಕಾ ಸಾಮಗ್ರಿ ನೀಡುವಲ್ಲಿ ಹಲವು ಸಂಘ ಸಂಸ್ಥೆಗಳು ಮುಂದೆ ಬರಬೇಕು. ಚಿನ್ನ ತಾಯಮ್ಮ ಟ್ರಸ್ಟ್ ಸಹ ಒಂದಾಗಿದ್ದು, ಯಾವುದೇ ಫಲಾಪೇಕ್ಷೆ ಇಲ್ಲದೇ ಮಕ್ಕಳ ಶೈಕ್ಷಣಿಕ ಸೇವೆ ಮಾಡುತ್ತಿದೆ. ಇವರಿಗೆ ಸರ್ಕಾರ, ಸಾರ್ವಜನಿಕರು ಪ್ರೋತ್ಸಾಹ ನೀಡಬೇಕು ಎಂದರು. ಸಮಾರಂಭದಲ್ಲಿ ಶಿಕ್ಷಕರಾದ ಭಾಗ್ಯ, ಮಂಜುಳಾ, ಸುಮಾ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಕರುಗಳಿಗೆ ಲಸಿಕೆ ಹಾಕಿಸಲು ಮನವಿ

ನಂಜನಗೂಡು, ಜು.23– ರಾಸುಗಳಿಗೆ ತಗಲುವ ಕಂದುರೋಗ (ಬ್ರುಸೆಲ್ಲೋಸಿಸ್) ಅಥವಾ ಮಾಲ್ವಾ ಜ್ವರ ರೋಗ ತಡೆಗಟ್ಟಲು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ಲಸಿಕೆ ಅಭಿಯಾನ ಆರಂಭಿಸಿದ್ದು, 6 ರಿಂದ 8 ತಿಂಗಳ ಹೆಣ್ಣು ಕರುಗಳಿಗೆ ಲಸಿಕೆ ಹಾಕಿಸುವ ಮೂಲಕ ರೈತರು ಸಹಕಾರ ನೀಡಬೇಕು ಎಂದು ಪಶು ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಮನವಿ ಮಾಡಿದ್ದಾರೆ.

ಕಂದುರೋಗ ಹಸು, ಎಮ್ಮೆ, ಕುದುರೆ, ಹಂದಿ, ನಾಯಿ, ಕುರಿ, ಮೇಕೆ ಅಲ್ಲದೇ ವನ್ಯಪ್ರಾಣಿಗಳಿಗೂ ಬಾಧಿಸಲಿದೆ. ಇದರಿಂದ ರಾಸುಗಳಿಗೆ ನೋವಾಗದಿದ್ದರೂ ಬಂಜೆತನ, ಬೆಳವಣಿಗೆ ಕುಂಠಿತ ಸೇರಿದಂತೆ ಇನ್ನಿತರ ರೋಗಗಳು ಬರುವುದರಿಂದ ರೈತರು ತಮ್ಮ 4 ರಿಂದ 8 ತಿಂಗಳ ವರೆಗಿನ ಹೆಣ್ಣು ಕರುಗಳಿಗೆ ಲಸಿಕೆ ಹಾಕಿಸುವ ಮೂಲಕ ಕಂದುರೋಗ ತಡೆಗಟ್ಟಲು ಸಹಕಾರ ನೀಡಬೇಕು. ಅಲ್ಲದೇ ಈ ರೋಗ ಪ್ರಾಣಿಗಳಿಂದ ಮನುಷ್ಯರಿಗೆ ಬರಬಹುದಾದ ಪ್ರಾಣಿಜನ್ಯ ರೋಗವು ಆಗಿದೆ. ಹೀಗಾಗಿ ಈ ರೋಗವನ್ನು ಪ್ರಾರಂಭಿಕ ಹಂತದಲ್ಲಿ ಪತ್ತೆ ಹಚ್ಚುವುದು ಕಷ್ಟ. ಆದ್ದರಿಂದ ಈ ರೋಗ ತಡೆಗಟ್ಟಲು ಲಸಿಕೆ ನೀಡುವುದೊಂದೇ ಮಾರ್ಗ. ಆದ್ದರಿಂದ ಜು.25 ರಿಂದ ಆ.10ರವರೆಗೆ ನಡೆಯುವ ಕಂದುರೋಗದ ವಿರುದ್ಧದ 3ನೇ ಹಂತದ ಮೊದಲನೇ ಸುತ್ತಿನ ಲಸಿಕಾ ಅಭಿಯಾನದಲ್ಲಿ ಹೈನುಗಾರರು ತಮ್ಮ ಹೆಣ್ಣು ಕರುಗಳಿಗೆ ಲಸಿಕೆ ಹಾಕಿಸಬೇಕು ಎಂದು ಕೋರಿದ್ದಾರೆ. ಹೆಚ್ಚಿನ ಮಾಹಿತಿಗೆ ಹತ್ತಿರದ ಪಶು ವೈದ್ಯರನ್ನು ಸಂಪರ್ಕಿಸುವಂತೆ ಕೋರಲಾಗಿದೆ

ಕರೋಹಟ್ಟಿ ಗ್ರಾಪಂಗೆ ಮಂಜುಳಾ ರೇವಣ್ಣ ಅಧ್ಯಕ್ಷೆ



ಕರೋಹಟ್ಟಿ ಗ್ರಾಪಂ ಅಧ್ಯಕ್ಷೆಯಾಗಿ ಮಂಜುಳಾ ಆಯ್ಕೆಯಾಗಿದ್ದಾರೆ.

ತಿ.ನರಸೀಪುರ, ಜು.23– ತಾಲೂಕಿನ ಕರೋಹಟ್ಟಿ ಗ್ರಾಪಂ ಅಧ್ಯಕ್ಷೆಯಾಗಿ ಕೇತಹಳ್ಳಿ ಗ್ರಾಮದ ಮಂಜುಳಾ ರೇವಣ್ಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಆಂತರಿಕ ಒಪ್ಪಂದದಂತೆ ತಮ್ಮ 10 ತಿಂಗಳ ಅಧಿಕಾರ ಪೂರೈಸಿ ಅಧ್ಯಕ್ಷ ಸ್ಥಾನಕ್ಕೆ ಈ ಹಿಂದಿನ ಅಧ್ಯಕ್ಷೆ ಎಸ್.ಎಲ್.ಜಯಶ್ರೀ ರಾಜೀನಾಮೆ ಸಲ್ಲಿಸಿದ್ದರಿಂದ ಅವರಿಂದ ತೆರವಾದ ಸ್ಥಾನಕ್ಕೆ ಗ್ರಾಪಂ ಆವರಣದಲ್ಲಿ ನಡೆದ ಚುನಾವಣೆಯಲ್ಲಿ ಮಂಜುಳಾ ರೇವಣ್ಣ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಮಂಜುನಾಥ್ ಪ್ರಕಟಿಸಿದರು. ಈ ವೇಳೆ ಗ್ರಾಪಂ ಮುಂಭಾಗ ನೆರೆದಿದ್ದ ಬೆಂಬಲಿಗರು ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಉಪಾಧ್ಯಕ್ಷ ನಾಗರಾಜು, ನಿಕಟ ಪೂರ್ವ ಅಧ್ಯಕ್ಷೆ ಎಸ್.ಎಲ್.ಜಯಶ್ರೀ, ಸದಸ್ಯರಾದ ಕೆ.ಬಿ.ಜಗದೀಶ್, ಪುಟ್ಟಸ್ವಾಮಿ, ನಂದಿನಿ, ರೇವಣ್ಣ, ಮಮತ, ಶ್ರೀಪ್ರಭು, ಪುಟ್ಟಬಸಮ್ಮ, ಸುಶೀಲಮ್ಮ ಹಾಗೂ ಮಂಜು ಚುನಾವಣಾ ಸಭೆಗೆ ಹಾಜರಾಗಿ ನೂತನ ಅಧ್ಯಕ್ಷರ ಆಯ್ಕೆಗೆ ಅನುಮೋದನೆ ನೀಡಿದರೆ, ಸವಿತಾ, ದಿವ್ಯ, ಕೆ.ಎನ್.ನಾಗರಾಜು, ಪ್ರಕಾಶ್, ಸಿದ್ದಮ್ಮ ಹಾಗೂ ಪಿ.ಗೋವಿಂದ ಗೈರಾಗಿದ್ದರು.

ನೂತನ ಅಧ್ಯಕ್ಷರನ್ನು ಅಭಿನಂದಿಸಿ ಮಾತನಾಡಿದ ಬಿಜೆಪಿ ಹಿರಿಯ ಮುಖಂಡ ಕರೋಹಟ್ಟಿ ಮಹದೇವಯ್ಯ, ಸಾಮಾಜಿಕ ನ್ಯಾಯದಡಿ ಗ್ರಾಪಂನಲ್ಲಿ ಅಧ್ಯಕ್ಷರ ಆಯ್ಕೆ ನಡೆದಿದೆ. ಪಂಚಾಯಿತಿಯ ಎಲ್ಲಾ ಸದಸ್ಯರಲ್ಲಿ ಸಾಮರಸ್ಯ ಇರುವುದರಿಂದ ಅವಿರೋಧ ಆಯ್ಕೆ ಮಾಡಲಾಗಿದೆ. ಹಾಗಾಗಿ ಸದಸ್ಯರು, ಮುಖಂಡರು ನೂತನ ಅಧ್ಯಕ್ಷರಿಗೆ ಪಂಚಾಯಿತಿ ಅಭಿವೃದ್ಧಿಪಡಿಸಲು ಸಹಕರಿಸಬೇಕು. ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿ ಗಮನದಲ್ಲಿಟ್ಟುಕೊಂಡು ಅಧ್ಯಕ್ಷರು ಕಾರ್ಯ ನಿರ್ವಹಿಸಬೇಕೆಂದು ಸಲಹೆ ನೀಡಿದರು.

ಈ ವೇಳೆ ಕರೋಹಟ್ಟಿ ಪ್ರಭುಸ್ವಾಮಿ, ಕೇತಹಳ್ಳಿ ರಾಜಣ್ಣ, ಗುರುಮಲ್ಲಪ್ಪ, ಬಿ.ಎಂ.ಶಿವಕುಮಾರ್, ಕಂಟ್ರಾಕ್ಟರ್ ಕುಮಾರ್, ಪಿಡಿಓ ಸೋಲೋಮನ್ ರಾಜ್ ಮತ್ತಿತರರಿದ್ದರು.

ಭಾರಿ ಮಳೆಗೆ ಮನೆ ಕುಸಿತ, ಲಕ್ಷಾಂತರ ರೂ. ನಷ್ಟ



ಸರಗೂರಲ್ಲಿ ಭಾರಿ ಮಳೆಗೆ ಮನೆ ಕುಸಿದಿರುವುದು

ಸರಗೂರು, ಜು.23– ಸೋಮವಾರ ರಾತ್ರಿ ಸುರಿದ ಭಾರಿ ಮಳೆಗೆ ಪಟ್ಟಣದ 5ನೇ ವಾರ್ಡ್‌ನಲ್ಲಿ ಮನೆ ಕುಸಿದು ಲಕ್ಷಾಂತರ ರೂ. ನಷ್ಟ ಸಂಭವಿಸಿದೆ.

5ನೇ ವಾರ್ಡ್ ನಿವಾಸಿ ನಾಗಮ್ಮ ಎಂಬುವರ ಮನೆ ಕುಸಿದಿರುವುದು. ಕಳೆದ ನಾಲ್ಕೈದು ದಿನಗಳಿಂದ ಮಳೆ ಸುರಿಯುತ್ತಿದ್ದು, ಅದರಂತೆ ಸೋಮವಾರ ರಾತ್ರಿಯೂ ಭಾರಿ ಮಳೆಯಾಗಿದೆ. ಈ ವೇಳೆ ನಾಗಮ್ಮ ಅವರ ಮನೆ ಸಂಪೂರ್ಣ ಕುಸಿದಿದ್ದು, ಈ ವೇಳೆ ಮನೆಯಲ್ಲಿದ್ದ ರಾಗಿ ಸೇರಿದಂತೆ ದಿನಸಿ ಪದಾರ್ಥಗಳು, ಬಟ್ಟೆ, ದಿನಬಳಕೆಯ ವಸ್ತುಗಳು ಸೇರಿದಂತೆ ಇನ್ನಿತರ ಬೆಲೆಬಾಳುವ ವಸ್ತುಗಳು ನೀರು ಪಾಲಾಗಿ ಲಕ್ಷಾಂತರ ರೂ. ನಷ್ಟ ಸಂಭವಿಸಿದೆ ಎನ್ನಲಾಗಿದೆ.

ಸಂತ್ರಸ್ತೆ ನಾಗಮ್ಮ ಮಾತನಾಡಿ, ಭಾರಿ ಮಳೆಗೆ ಮನೆ ಸಂಪೂರ್ಣ ಕುಸಿದು ಹೋಗಿದೆ. ಅಲ್ಲದೇ ದಿನಬಳಕೆಯ ವಸ್ತುಗಳು ನೀರು ಪಾಲಾಗಿದೆ. ಮನೆ ಕುಸಿದಿರುವುದರಿಂದ ವಾಸಿಸಲು ಮನೆ ಇಲ್ಲದಂತಾಗಿದೆ. ಪತಿ ಕಳೆದುಕೊಂಡ ನನಗೆ ಮೂವರು ಪುತ್ರಿಯರಿದ್ದು, ಮನೆ ಮನೆಗೆ ಕೆಲಸಕ್ಕೆ ಹೋಗಿ ಜೀವನ ನಿರ್ವಹಣೆ ಮಾಡುತ್ತಿದ್ದೇನೆ. ಇದೀಗ ಮನೆ ಕುಸಿದಿರುವುದರಿಂದ ದಿಕ್ಕೇ ತೋಚದಂತಾಗಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಸರ್ಕಾರದಿಂದ ಸೂಕ್ತ ಪರಿಹಾರ ಕೊಡಿಸಬೇಕು ಎಂದು ಮನವಿ ಮಾಡಿದರು.

ಇದೇ ವೇಳೆ ಪಟ್ಟಣ ಪಂಚಾಯಿತಿ ಸದಸ್ಯ ನೂರಾಳಸ್ವಾಮಿ ಹಾಗೂ ಪಪಂ ನಾಮನಿರ್ದೇಶನ ಮಾಜಿ ಸದಸ್ಯ ರಂಗಸ್ವಾಮಿ ಭೇಟಿ ನೀಡಿ, ಪರಿಶೀಲನೆ ನಡೆಸಿ ಸರ್ಕಾರದಿಂದ ಪರಿಹಾರ ದೊರಕಿಸಿಕೊಡುವ ಭರವಸೆ ನೀಡಿದರು.

ಹುಣಸೂರಲ್ಲಿ ಗುರು ಪೂರ್ಣಿಮೆ



ಹುಣಸೂರು, ಜು.23– ನಮ್ಮ ನಮ್ಮ ಒಡಕಿನಿಂದ ದೇಶದಲ್ಲಿ ಬೇರೆಯವರು ಬೆಳೆಯುವಂತಾಗಿದೆ ಎಂದು ಜಹಗೀರ್ದಾರ್ ಅಭಿಪ್ರಾಯಪಟ್ಟರು.

ನಗರದ ರಾಘವೇಂದ್ರ ಸಭಾ ಭವನದಲ್ಲಿ ರಾಷ್ಟ್ರೀಯ ಸ್ವಯಂಸೇವಕ ಸಂಘದಿಂದ ಹಮ್ಮಿಕೊಂಡಿದ್ದ ಗುರು ಪೂರ್ಣಿಮೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಭಾರತ ದೇಶ ಸಂಪದ್ಭರಿತವಾಗಿತ್ತು. ಆದರೆ ಬ್ರಿಟಿಷರು ನಮ್ಮ ನಡುವೆಯೇ ಒಡಕು ತಂದು ನಮ್ಮನ್ನು ಗುಲಾಮರನ್ನಾಗಿ ಮಾಡಿಕೊಂಡು ತಮ್ಮ ಬೇಳೆ ಬೇಯಿಸಿಕೊಂಡರು. ಅದು ನಮಗೆ ತಡವಾಗಿ ಅರ್ಥವಾಯಿತು. ಇದನ್ನು ಅರಿತು ನಾವು ಅವರ ವಿರುದ್ಧ ತಿರುಗಿ ಬಿದ್ದಿದ್ದರಿಂದ ಬ್ರಿಟಿಷರು ದೇಶ ಬಿಡುವಂತಾಯಿತು ಎಂದು ತಿಳಿಸಿದರು.

ನಗರ ಸಂಚಾಲಕ ಮಹದೇವ್ ಬಾಗಲ್ ಮಾತನಾಡಿ, ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಶಿಸ್ತು, ಬದ್ಧತೆಯಿಂದ ಕೆಲಸ ಮಾಡುತ್ತಿದ್ದು ದೇಶ ಸಂರಕ್ಷಣೆಯಲ್ಲಿ ನಿಸ್ವಾರ್ಥ ಸೇವೆ ಮೆರೆಯುತ್ತಿದೆ ಎಂದು ಸಂಘದ ಸೇವೆಯನ್ನು ಪ್ರಶಂಸಿಸಿದರು.

ಜು.31, ಧ್ರುವನಾರಾಯಣ್ ಹುಟ್ಟುಹಬ್ಬ: ಉದ್ಯೋಗ ಮೇಳ



ಉದ್ಯೋಗ ಮೇಳ ಪ್ರಚಾರ ರಥಕ್ಕೆ ಮಾಜಿ ಶಾಸಕ ಕೇಶವ ಮೂರ್ತಿ ಚಾಲನೆ ನೀಡಿದರು.

ನಂಜನಗೂಡು, ಜು.23– ಮಾಜಿ ಸಂಸದ ದಿ.ಆರ್.ಧ್ರುವನಾರಾಯಣ್ ಅವರ ಹುಟ್ಟುಹಬ್ಬ ಅಂಗವಾಗಿ ಜು.31ರಂದು ನಗರದ ಮಂಗಳ ಮಂಟಪದಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಮಾಜಿ ಶಾಸಕ ಕಳಲೆ ಕೇಶವಮೂರ್ತಿ ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿ ಎದುರು ಉದ್ಯೋಗ ಮೇಳ ಪ್ರಚಾರ ರಥಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆರ್.ಧ್ರುವನಾರಾಯಣ್ ಅವರು ಈ ಭಾಗದಲ್ಲಿ 2 ಅವಧಿಗೆ ಸಂಸದರಾಗಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದಾರೆ. ಜೊತೆಗೆ ನಂಜನಗೂಡು ಕ್ಷೇತ್ರದ ಜನರೊಂದಿಗೆ ನಿಕಟ ಸಂಪರ್ಕ ಹೊಂದುವ ಮೂಲಕ ಎಲ್ಲರ ಪ್ರೀತಿ, ವಿಶ್ವಾಸಕ್ಕೆ ಪಾತ್ರರಾಗಿದ್ದರು. ಹೀಗಾಗಿ ಅವರು ಕ್ಷೇತ್ರದ ಜನರ ಸೇವೆ ಮಾಡುವ ಹಂಬಲದೊಂದಿಗೆ ಚುನಾವಣೆಗೂ ತಯಾರಿ ನಡೆಸಿದ್ದರು. ಅವರ ಆಸೆಯಂತೆ ತಾಲೂಕಿನ ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ. ಮೇಳದಲ್ಲಿ ನೂರಾರು ಹೆಸರಾಂತ ಕಂಪನಿಗಳು ಭಾಗವಹಿಸಲಿದ್ದು, ನಿಮ್ಮ ವಿದ್ಯಾರ್ಹತೆಗೆ ಅನುಗುಣವಾಗಿ ಸ್ಥಳದಲ್ಲೇ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಪದವೀಧರರು ಮತ್ತು ಯುವಕರು, ಉದ್ಯೋಗದ ಆಕಾಂಕ್ಷಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಈ ನಿಟ್ಟಿನಲ್ಲಿ ತಾಲೂಕಿನ ಎಲ್ಲಾ ಹಳ್ಳಿಗಳಲ್ಲೂ ಪ್ರಚಾರ ನಡೆಸಲು ಪ್ರಚಾರ ರಥಕ್ಕೆ ಚಾಲನೆ ನೀಡಲಾಗಿದೆ ಎಂದರು.

ಈ ವೇಳೆ ಹುಲ್ಲಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠನಾಯಕ, ಮಾಜಿ ನಗರಸಭಾ ಉಪಾಧ್ಯಕ್ಷ ದೊರೆಸ್ವಾಮಿ, ಮುಖಂಡರಾದ ಎನ್.ಎಂ.ಮಂಜುನಾಥ್, ಪುಟ್ಟಸ್ವಾಮಿ, ಶ್ರೀಧರ್, ರಂಗಸ್ವಾಮಿ, ನಾಗೇಶ್, ನಾಗರಾಜು, ಮಹೇಂದ್ರ, ಗೋವಿಂದರಾಜು, ಬಾಲು, ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ್ ಇದ್ದರು.

ವ್ಯಸನ ಕಿರುಚಿತ್ರ ವೀಕ್ಷಣೆ



ಹುಣಸೂರು, ಜು.23– ಗಗನ್ ಹುಣಸೂರು ಅವರ ವ್ಯಸನ ಕಿರುಚಿತ್ರವನ್ನು ಉಪವಿಭಾಗಾಧಿಕಾರಿ ಮತ್ತು ತಾಲೂಕು ದಂಡಾಧಿಕಾರಿ ಡಾ.ಸಿ.ಎನ್.ವೆಂಕಟರಾಜ್ ವೀಕ್ಷಿಸಿದರು.

ಗಗನ್ ಅವರು ಕಿರುಚಿತ್ರದಲ್ಲಿ ವ್ಯಕ್ತಿ ಮೇಲೆ ಮಾದಕ ವಸ್ತುಗಳು ಹೇಗೆ ಪರಿಣಾಮ ಬೀರುತ್ತದೆ ಎಂಬುದನ್ನು ಬಹಳ ಅಚ್ಚುಕಟ್ಟಾಗಿ, ಸೃಜನಾತ್ಮಕವಾಗಿ ಚಿತ್ರೀಕರಿಸಿ ನಿಮ್ಮ ಮುಂದೆ ತಂದಿದ್ದಾರೆ. ಎಲ್ಲರೂ ಈ ಕಿರುಚಿತ್ರವನ್ನು ತಪ್ಪದೆ ನೋಡಿ ಎಂದ ಅವರು, ಹುಣಸೂರು ತಾಲೂಕಿನ ಕಲಾವಿದರು ಹೀಗೆ ಅರಿವು ಮೂಡಿಸುವ ಕೆಲಸ ಮಾಡಬೇಕು. ಇದರಿಂದ ಸಾರ್ವಜನಿಕರಲ್ಲಿ ಬದಲಾವಣೆ ತರಲು ಸಾಧ್ಯ ಎಂದು ಕಿರುಚಿತ್ರ ತಂಡಕ್ಕೆ ಅಭಿನಂದನೆ ಸಲ್ಲಿಸಿದರು.

ಬುದ್ಧಿಮಾಂದ್ಯ ಮಹಿಳೆಯರ ದಾಖಲಾತಿ

ಕೆ.ಆರ್.ನಗರ, ಜು.23– ಪಟ್ಟಣದ ವಿದ್ಯಾನಗರದ ಮಾತೃಶ್ರೀ ಶಿಕ್ಷಣ ಸಂಸ್ಥೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಇಲಾಖೆ ವತಿಯಿಂದ ಅನುಪಾಲನ ಗೃಹ ನಡೆಸಲಾಗುತ್ತಿದ್ದು, 18 ವರ್ಷ ಮೇಲ್ಪಟ್ಟ ಬುದ್ಧಿಮಾಂದ್ಯ ಮಹಿಳೆಯರು ದಾಖಲಾಗಲು ಅವಕಾಶವಿದ್ದು ಪ್ರವೇಶದ ನಂತರ ಅವರಿಗೆ ಶಿಕ್ಷಣ, ವೃತ್ತಿ ತರಬೇತಿ ಜೊತೆಗೆ ಊಟ, ವಸತಿ ಹಾಗೂ ವೈದ್ಯಕೀಯ ಚಿಕಿತ್ಸೆ ಉಚಿತವಾಗಿ ನೀಡಲಾಗುತ್ತದೆ.

ಪ್ರವೇಶ ಪಡೆಯಬಯಸುವ ಅರ್ಹರು ಸಂಸ್ಥೆ ಕಾರ್ಯದರ್ಶಿ ಮಂಜುನಾಥ್ ಅವರನ್ನು ಸಂಪರ್ಕಿಸುವಂತೆ ಕೋರಲಾಗಿದೆ. ಹೆಚ್ಚಿನ ಮಾಹಿತಿಗೆ 9742434753 ಸಂಪರ್ಕಿಸಬಹುದಾಗಿದೆ. ಸಂಸ್ಥೆಯಲ್ಲಿ ಸ್ವಯಂ ಸೇವಕರಾಗಿ ಕೆಲಸ ನಿರ್ವಹಿಸುವವರಿಗೆ ಮುಕ್ತ ಅವಕಾಶವಿದ್ದು ಇಚ್ಛೆಯುಳ್ಳವರು ಈ ಸಮಾಜಮುಖಿ ಕಾರ್ಯದಲ್ಲಿ ತೊಡಗಿಸಿಕೊಳ್ಳಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹಾತ್ವಾಳು ಗ್ರಾಮದಲ್ಲಿ ಅನೈರ್ಮಲ್ಯ ತಾಂಡವ

ಮನೆಗೆ ನುಗ್ಗುತ್ತಿರುವ ಚರಂಡಿ, ಮಳೆ ನೀರು



ಕಂಚಮಳ್ಳಿ ಗ್ರಾಪಂ ವ್ಯಾಪ್ತಿಯ ಹಾತ್ವಳು ಗ್ರಾಮ ಅನೈರ್ಮಲ್ಯದಿಂದ ಕೂಡಿರುವುದು.

ಹಂಪಾಪುರ, ಜು.23– ಹೆಚ್.ಡಿ. ಕೋಟೆ ತಾಲೂಕು ಕಂಚಮಳ್ಳಿ ಗ್ರಾಪಂ ವ್ಯಾಪ್ತಿಯ ಹಾತ್ವಳು ಗ್ರಾಮದಲ್ಲಿ ಪಿಡಿಓ ಗ್ರಾಮದ ಸ್ವಚ್ಛತೆ ಕಾಪಾಡುವಲ್ಲಿ ವಿಫಲವಾಗಿದ್ದಾರೆ.

ಗ್ರಾಮಸ್ಥರು ಗ್ರಾಮದ ಕೆಲವರ ಮನೆ ಮುಂದೆಯೇ ತ್ಯಾಜ್ಯಗಳನ್ನು ಬಿಸಾಡುತ್ತಿದ್ದಾರೆ. ಚರಂಡಿ ನೀರು ಮನೆ ಮುಂದೆ ನಿಂತು ಕೊಳೆತು ನಾರುತ್ತಿದೆ. ಮನೆಯ ಅಕ್ಕಪಕ್ಕದಲ್ಲಿ ಸರ್ಕಾರಿ ಜಾಗವಿದ್ದು, ಗಿಡಗಂಟಿಗಳು ಬೆಳೆದುಕೊಂಡಿದೆ. ಇದರಿಂದಾಗಿ ಸೊಳ್ಳೆಗಳು ಉತ್ಪತ್ತಿಯಾಗುವ ಸಾಧ್ಯತೆ ಇದೆ. ಪಕ್ಕದಲ್ಲೇ ಹಲವು ಮನೆಗಳಲ್ಲಿ ಮಕ್ಕಳು, ವಯಸ್ಸಾದವರು ವಾಸಿಸುತ್ತಿದ್ದಾರೆ. 15 ದಿನದಿಂದ ಸುರಿಯುತ್ತಿರುವ ಭಾರೀ ಮಳೆ ಹಿನ್ನಲೆಯಲ್ಲಿ ಚರಂಡಿ, ಮಳೆ ನೀರು ಮನೆಗೆ ನುಗ್ಗುತ್ತಿದೆ. ಇದರಿಂದ ಇಲ್ಲಿನ ನಿವಾಸಿಗಳಿಗೆ ತೊಂದರೆಯಾಗಿದೆ. ಇದೆಲ್ಲವನ್ನು ಗ್ರಾಮಸ್ಥರು ಅಭಿವೃದ್ಧಿ ಅಧಿಕಾರಿಗೆ ತಿಳಿಸಿದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಇದರಿಂದ ಡೆಂಗ್ಯೂ ಹರಡುವ ಲಕ್ಷಣಗಳು ಕಂಡು ಬರುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ವಿದ್ಯಾರ್ಥಿಗೆ ಸನ್ಮಾನ



ಪಿರಿಯಾಪಟ್ಟಣದ ಪುಷ್ಪ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಎಹಸಾನ್ ಅಲಿ ಅವರ ಪಠ್ಯ, ಪಠ್ಯೇತರ ಚಟುವಟಿಕೆ ಗುರ್ತಿಸಿ ಬೆಂಗಳೂರಿನ ಜೈನ್ ಯೂನಿವರ್ಸಿಟಿಯಲ್ಲಿ ರಾಷ್ಟ್ರೀಯ ಚೇತನ ಪರಿಹಾರ ಸಂಸ್ಥೆ ವತಿಯಿಂದ ನಡೆದ ಗುರು ಪೂರ್ಣಿಮೆ ಕಾರ್ಯಕ್ರಮದಲ್ಲಿ ಏಕಲವ್ಯ ಪ್ರಶಸ್ತಿಯೊಂದಿಗೆ ನಗದು ಬಹುಮಾನ ನೀಡಿ ಸನ್ಮಾನಿಸಲಾಯಿತು. ಈತ ಆಗಸುಲ್ತಾನ್, ಶಮೀಮ್ ತಾಜ್ ದಂಪತಿ ಪುತ್ರ. ಈ ವೇಳೆ ನಿವೃತ್ತ ಐಪಿಎಸ್ ಅಧಿಕಾರಿ ಡಾ.ಗುರುಪ್ರಸಾದ್, ಕರ್ನಲ್ ಜೆ.ಎಂ.ಖಾನ್, ಖ್ಯಾತ ಲೇಖಕಿ, ವಿಮರ್ಶಕಿ ಪದ್ಮಿನಿ ನಾಗರಾಜ್, ವಿದ್ಯಾರ್ಥಿ ಪೋಷಕರು ಹಾಜರಿದ್ದರು.

ಜನಸಂಖ್ಯೆ ನಿಯಂತ್ರಣಕ್ಕೆ ಸಂತಾನಹರಣ ಶಸ್ತ್ರಚಿಕಿತ್ಸೆ ಉಪಯುಕ್ತ

ವಿಶ್ವ ಜನಸಂಖ್ಯಾ ದಿನಾಚರಣೆಯಲ್ಲಿ ಶಾಸಕ ಅನಿಲ್ ಮಾಹಿತಿ



ಜಿಲ್ಲಾ ಮತ್ತು ತಾಲೂಕು ವಿಶ್ವ ಜನಸಂಖ್ಯಾ ದಿನಾಚರಣೆ ಮತ್ತು ಸಂತಾನಹರಣ ಚಿಕಿತ್ಸಾ ಶಿಬಿರವನ್ನು ಶಾಸಕ ಅನಿಲ್ ಉದ್ಘಾಟಿಸಿದರು.

ಹೆಚ್.ಡಿ.ಕೋಟೆ, ಜು.23– ಆದಿವಾಸಿಗಳ ಕರೆತಂದು ಅವರನ್ನು ಸಂತಾನಹರಣ ಶಸ್ತ್ರಚಿಕಿತ್ಸೆಗೆ ಒಳಪಡಿಸಿರುವ ಆರೋಗ್ಯ ಇಲಾಖೆ ಕಾರ್ಯವೈಖರಿ ಶ್ಲಾಘನೀಯ ಎಂದು ಶಾಸಕ ಅನಿಲ್ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಜಿಪಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಹಯೋಗದಲ್ಲಿ ನಡೆದ ಜಿಲ್ಲಾ ಮತ್ತು ತಾಲೂಕು ವಿಶ್ವ ಜನಸಂಖ್ಯಾ ದಿನಾಚರಣೆ ಮತ್ತು ಸಂತಾನಹರಣ ಶಸ್ತ್ರಚಿಕಿತ್ಸಾ ಶಿಬಿರದಲ್ಲಿ ಅವರು ಮಾತನಾಡಿದರು.

ಆದಿವಾಸಿಗಳು ಆಸ್ಪತ್ರೆಗೆ ಬರುವುದು ಕಡಿಮೆ. ಶಸ್ತ್ರಚಿಕಿತ್ಸೆ ಎಂದರೆ ಅವರು ಮೈಲಿ ದೂರ ಹೋಗುತ್ತಾರೆ. ಅವರ ಮನವೊಲಿಸಿ ಸಂತಾನಹರಣ ಚಿಕಿತ್ಸೆಗೊಳಪಡಿಸುತ್ತಿರುವುದು ಸಂತಸದ ವಿಚಾರ. ಪ್ರಸ್ತುತ ವರ್ಷಕ್ಕೆ ಒಂದೂವರೆ ಕೋಟಿ ಮಕ್ಕಳು ಜನಿಸುತ್ತಿದ್ದು, ಜನಸಂಖ್ಯೆ ವೇಗವಾಗಿ ಬೆಳವಣಿಗೆಯಾಗುತ್ತಿದೆ. ಇದನ್ನು ತಡೆಗಟ್ಟಲು ಸಂತಾನಹರಣ ಚಿಕಿತ್ಸೆ ಉಪಯುಕ್ತ ಎಂದರು.

ಜನಸಂಖ್ಯೆ ಬೆಳೆದಂತೆ ಸರ್ಕಾರಗಳ ಆಡಳಿತವೂ ಏರುಪೇರಾಗುತ್ತಿರುತ್ತದೆ. ಇಂತಹ ಏರುಪೇರನ್ನು ಸರಿದೂಗಿಸಿಕೊಂಡು ಹೋಗುವ ಪ್ರಯತ್ನವನ್ನು ನಮ್ಮ ಸಿದ್ದರಾಮಯ್ಯ ಸರ್ಕಾರ ಮಾಡುತ್ತಿದೆ ಎಂದರು.

ಜಂಗಲ್ ಲಾಡ್ಜ್ ಸಿಎಸ್‌ಆರ್ ನಿಧಿಯಿಂದ ಒಂದು ಆಂಬುಲೆನ್ಸ್ ನೀಡುವ ಪ್ರಕ್ರಿಯೆ ನಡೆಯುತ್ತಿದೆ ಎಂದ ಅವರು, ತಾಲೂಕಿನಲ್ಲಿ ಡೆಂಗ್ಯೂಗೆ ಒಳಗಾಗಿದ್ದ 45 ಮಂದಿಯೂ ಗುಣಮುಖರಾಗಿದ್ದಾರೆ. ಯಾವುದೇ ಸಾವು ನೋವು ಕಂಡು ಬಂದಿಲ್ಲ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕುಮಾರಸ್ವಾಮಿ ಮಾತನಾಡಿ, ತಾಲೂಕಿನಲ್ಲಿ 60 ಮಂದಿ ಆದಿವಾಸಿಗಳಿಗೆ ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಿರುವುದು ರಾಜ್ಯದಲ್ಲಿ ಇದೇ ಮೊದಲ ಪ್ರಯತ್ನ ಎಂದರು.

ಜಿಲ್ಲಾ ಕುಟುಂಬ ಕಲ್ಯಾಣ ಮತ್ತು ಕುಷ್ಠರೋಗ ನಿರ್ಮೂಲನಾಧಿಕಾರಿ ಬೃಂದಾ ಮಾತನಾಡಿ, ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ವಿಶ್ವ ಜನಸಂಖ್ಯಾ ದಿನವನ್ನು ಆಚರಿಸಲಾಗುತ್ತಿದೆ ಎಂದರು.

ಆರೋಗ್ಯ ಇಲಾಖೆಯಿಂದ ತಾತ್ಕಾಲಿಕ ಕುಟುಂಬ ಕಲ್ಯಾಣ ಸೌಲಭ್ಯ ಪೂರ್ಣ ಪ್ರಮಾಣದ ಕುಟುಂಬ ಕಲ್ಯಾಣ ಸೌಲಭ್ಯಗಳಿದ್ದು ಈ ಯೋಜನೆಯ ಪ್ರಯೋಜನವನ್ನು ಫಲಾನುಭವಿಗಳು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಇದೇ ವೇಳೆ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ತಾಲೂಕಿನ 60 ಆದಿವಾಸಿ ಮಹಿಳೆಯರಿಗೆ ಸಂತಾನಹರಣ ಚಿಕಿತ್ಸೆ ಮಾಡಲಾಯಿತು. ಆಶಾ ಕಾರ್ಯಕರ್ತೆಯರಿಗೆ ಆಶಾ ಡೈರಿ ವಿತರಿಸಲಾಯಿತು. ನಂತರ ಜನಸಂಖ್ಯೆ ಕ್ಯಾಲೆಂಡರ್ ಬಿಡುಗಡೆಗೊಳಿಸಲಾಯಿತು.

ಹಾಡಿ ಜನರಿಗಾಗಿ ಆಯೋಜಿಸಿರುವ ಸಂತಾನಹರಣ ಶಸ್ತ್ರಚಿಕಿತ್ಸಾ ಶಿಬಿರ ರಾಜ್ಯದಲ್ಲೇ ಪ್ರಥಮವಾಗಿದ್ದು, ಕಳೆದ 5 ವರ್ಷದ ಹಿಂದೆ ಸಾವಿರಕ್ಕೆ 64 ಮಕ್ಕಳು ಹೆರಿಗೆ ಸಮಯದಲ್ಲಿ ಸಾವನ್ನಪ್ಪುತ್ತಿದ್ದರು. ಇದೀಗ ಆರೋಗ್ಯ ಇಲಾಖೆ ಪರಿಶ್ರಮದಿಂದ ಆ ಪ್ರಮಾಣ 12ಕ್ಕೆ ಇಳಿದಿದೆ.

-ರವಿಕುಮಾರ್, ತಾಲೂಕು ಆರೋಗ್ಯ ಅಧಿಕಾರಿ.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಶ್ರೀನಿವಾಸ್, ವೈದ್ಯರಾದ ಕೀರ್ತಿ, ಶರತ್, ವಿವೇಕಾನಂದ ಆಸ್ಪತ್ರೆ ಮಕ್ಕಳ ತಜ್ಞ ಕುಮಾರ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಮಣೀಂದ್ರಮ್ಮ, ಪದ್ಮಾವತಿ, ಅಧಿಕಾರಿಗಳಾದ ಮಹೇಶ್, ಆರೋಗ್ಯ ನಿರೀಕ್ಷಣಾಧಿಕಾರಿ ನಾಗೇಂದ್ರ, ರವಿರಾಜ್, ಪ್ರತಾಪ್, ಹಿರಿಯ ಪ್ರಾಥಮಿಕ ಆರೋಗ್ಯಾಧಿಕಾರಿ ಲಕ್ಷ್ಮಿ ಭಟ್, ರೇಖಾ, ಪ್ರತಾಪ್, ಅಧಿಕಾರಿಗಳಾದ ತಾಪಂ ಇಓ ಧರಣೇಶ್, ಮಹೇಶ್, ರಾಮಸ್ವಾಮಿ, ಮುಖಂಡರಾದ ಸತೀಶ್‌ಗೌಡ, ಬಸವರಾಜು, ಹೆಚ್.ಸಿ.ನರಸಿಂಹಮೂರ್ತಿ, ನಂಜರಾಜ್, ಚಿಕ್ಕವೀರನಾಯಕ, ಅಶೋಕ್, ರಾಜೇಗೌಡ, ಅಶೋಕ್, ಶಿವಬಸಪ್ಪ, ಸ್ವಾಮಿ, ಸೋಮಣ್ಣ ಇದ್ದರು.

ಹಾಲು ಉತ್ಪಾದಕ ಸಿಇಓಗಳಿಗೆ ತರಬೇತಿ

ಹಾಲಿನ ಉತ್ಪನ್ನಗಳ ಸಂಖ್ಯೆ ಹೆಚ್ಚಳಕ್ಕೆ ಸಹಕಾರ ಯೂನಿಯನ್ ಅಧ್ಯಕ್ಷ ರಾಜೀವ್ ಕರೆ

ಮೈಸೂರು,ಜು.23(ಎಂಟಿವೈ)– ದೇಶದಲ್ಲೇ ಹಾಲು ಉತ್ಪಾದನೆಯಲ್ಲಿ ಎರಡನೇ ಸ್ಥಾನ ಹೊಂದಿರುವ ಕರ್ನಾಟಕದಲ್ಲಿ ಕೆಎಂಎಫ್ ವತಿಯಿಂದ ಹಾಲಿನ ಉತ್ಪನ್ನಗಳ ಹೆಚ್ಚಿಸಿ ಗರಿಷ್ಟ ಲಾಭ ಗಳಿಸುವತ್ತ ಗಮನ ಹರಿಸಬೇಕು ಎಂದು ಮೈಸೂರು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹೆಚ್.ವಿ.ರಾಜೀವ್ ಸಲಹೆ ನೀಡಿದ್ದಾರೆ.

ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ಸಹಕಾರ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳ, ಮೈಸೂರು ಜಿಲ್ಲಾ ಸಹಕಾರ ಒಕ್ಕೂಟ, ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ಸಂಯುಕ್ತಾಶ್ರಯದಲ್ಲಿ ಮೈಸೂರು ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಆಯೋಜಿಸಿದ್ದ ಒಂದು ದಿನದ ವಿಶೇಷ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದೇಶದಲ್ಲಿಯೇ ಗುಜರಾತ್‌ನಲ್ಲಿ ಹೆಚ್ಚಿನ ಪ್ರಮಾಣದ ಹಾಲು ಉತ್ಪಾದನೆಯಾಗುತ್ತಿದೆ. ಅದನ್ನು ಹೊರತುಪಡಿಸಿದರೆ, ಕರ್ನಾಟಕ ಹಾಲು ಉತ್ಪಾದನೆಯಲ್ಲಿ ಎರಡನೇ ಸ್ಥಾನ ಹೊಂದಿದೆ. ಉತ್ಪಾದನೆಯಾಗುವ ಹಾಲಿನ ಪ್ರಮಾಣಕ್ಕೆ ಅನುಗುಣವಾಗಿ ವಿವಿಧಉತ್ಪನ್ನಗಳನ್ನು ತಯಾರಿಸುತ್ತಿರುವುದು ಪ್ರಗತಿದಾಯಕ ಎಂದರು.

ಪ್ರಸ್ತುತ ನಂದಿನಿ ಹಾಲಿನ ಉತ್ಪನ್ನಗಳನ್ನು ಹಾಲು ಒಕ್ಕೂಟ, ಕೇವಲ ಕರ್ನಾಟಕ ಮಾತ್ರವಲ್ಲದೆ ಕೇರಳ, ತಮಿಳುನಾಡು, ಬಾಂಬೆ ಸೇರಿದಂತೆ ಇನ್ನಿತರ ರಾಜ್ಯ ಹಾಗೂ ವಿದೇಶಕ್ಕೂ ಸರಬರಾಜು ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಇವುಗಳ ಸಂಖ್ಯೆ ಹೆಚ್ಚಳ ಮಾಡಲು ಕ್ರಮ ಕೈಗೊಳ್ಳಬೇಕು. ಆ ಮೂಲಕ ಹಾಲು ಉತ್ಪಾದಕರಿಗೆ ಗರಿಷ್ಟ ಮಟ್ಟದ ಲಾಭ ದೊರಕಿಸಿಕೊಡಬೇಕು. ಸಂಸ್ಥೆಗೆ ಲಾಭ ಹೆಚ್ಚಾದರೆ, ಗ್ರಾಮೀಣ ಪ್ರದೇಶದಲ್ಲಿರುವ ಹಾಲು ಉತ್ಪಾದಕರಿಗೆ ನೆರವಾಗಬಹುದು ಎಂದು ಅಭಿಪ್ರಾಯಪಟ್ಟರು.

ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯಕಾರ್ಯದರ್ಶಿಗಳು ಗ್ರಾಮೀಣ ಬದುಕಿನ ಆರ್ಥಿಕ ಸ್ತಂಭಗಳಾಗಿ ಕೆಲಸ ಮಾಡುತ್ತಿದ್ದಾರೆ. ವರ್ಷದ 365 ದಿನವೂ ಕಾರ್ಯದರ್ಶಿಗಳು ಪ್ರತಿದಿನ ಬೆಳಗ್ಗೆ ಮತ್ತು ಸಂಜೆ ಡೈರಿ ತೆರೆಯುತ್ತಾರೆ. ಈ ವೇಳೆ ಮಳೆ, ಬಿಸಿಲು, ಚಳಿ ಯಾವುದನ್ನೂ ಲೆಕ್ಕಿಸದೇ ಹಾಲು ಉತ್ಪಾದಕರಿಗೆ ನೆರವಾಗುತ್ತಿದ್ದಾರೆ. ತರಬೇತಿ ಕಾರ್ಯಾಗಾರಗಳಲ್ಲಿ ಕಲಿತದ್ದನ್ನು ಅಳವಡಿಸಿಕೊಳ್ಳುವ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿ, ಜನಸ್ನೇಹಿಯಾಗಿ ಕಾರ್ಯನಿರ್ವಹಿಸಬೇಕು. ಆಗ ಇನ್ನಷ್ಟು ಪ್ರಗತಿ ಸಾಧ್ಯ ಎಂದು ತಿಳಿಸಿದರು.

ಇದಕ್ಕೂ ಮುನ್ನ ಮೈಮುಲ್ ನಿರ್ದೇಶಕ ಕೆ.ಉಮಾಶಂಕರ್ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಮೈಸೂರು ಜಿಲ್ಲೆಯಲ್ಲಿ ಹಾಲು ಉತ್ಪಾದಕ ಸಹಕಾರ ಸಂಘಗಳು ನಿರೀಕ್ಷೆಗೂ ಮೀರಿ ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ. ಹಾಗಾಗಿ ಹಾಲು ಉತ್ಪಾದನೆ ಹೆಚ್ಚಾಗಿದೆ. ಇದರಿಂದ ಗ್ರಾಮೀಣ ರೈತರಿಗೆ ಸಹಾಯವಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಮೈಮುಲ್ ಉಪಾಧ್ಯಕ್ಷ ಬಿ.ಎನ್.ಸದಾನಂದ, ನಿರ್ದೇಶಕರಾದ ಲೀಲಾ ನಾಗರಾಜು, ಗುರುಸ್ವಾಮಿ, ಕುಮಾರ್, ಈರೇಗೌಡ, ಭೈರಪ್ಪ ಪ್ರಶಾಂತ್, ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಕೆ.ಎನ್.ಸುರೇಶ್ ನಾಯಕ್, ವ್ಯವಸ್ಥಾಪಕ ಎಲ್.ಆರ್.ಕರಿಬಸವರಾಜು ಇನ್ನಿತರರು ಉಪಸ್ಥಿತರಿದ್ದರು.



ಮೈಸೂರು ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಮೈಸೂರಿನ ಚಾಮರಾಜ ಜೋಡಿ ರಸ್ತೆಯಲ್ಲಿರುವ ಸಹಕಾರ ಭವನದಲ್ಲಿ ಆಯೋಜಿಸಿದ್ದ ವಿಶೇಷ ತರಬೇತಿ ಕಾರ್ಯಾಗಾರವನ್ನು ಮೈಮುಲ್ ನಿರ್ದೇಶಕ ಕೆ.ಉಮಾಶಂಕರ್ ಉದ್ಘಾಟಿಸಿದರು.

ಕೇಂದ್ರ ಬಜೆಟ್ ದೇಶದ ಆರ್ಥಿಕ ಬೆಳವಣಿಗೆಗೆ ಪೂರಕ

ಮೈಸೂರು ಚೇಂಬರ್ಸ್ ಆಫ್ ಕಾಮರ್ಸ್ ಅಧ್ಯಕ್ಷ ಕೆ.ಬಿ.ಲಿಂಗರಾಜು ಸ್ವಾಗತ



ಮೈಸೂರು, ಜು.23(ಎಸ್‌ಪಿಎನ್)– 2024–25ನೇ ಸಾಲಿನ ಕೇಂದ್ರ ಬಜೆಟ್ ಸಣ್ಣ ಮತ್ತು ಮಧ್ಯಮ ವರ್ಗದ ಕೈಗಾರಿಕೆಗಳ ಪೂರಕ ಬಜೆಟ್ ಎಂದು ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಸ್ವಾಗತಿಸಿದೆ.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ಬಜೆಟ್, ದೇಶದ ಆರ್ಥಿಕ ಬೆಳವಣಿಗೆಗೆ ಪೂರಕವಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಮೈಸೂರು ಘಟಕದ ಅಧ್ಯಕ್ಷ ಕೆ.ಬಿ.ಲಿಂಗರಾಜು ಅಭಿಪ್ರಾಯಪಟ್ಟಿದ್ದಾರೆ.

ಈ ಆಯವ್ಯಯದಲ್ಲಿ ಎಂಎಸ್‌ಎಂಇ ಉದ್ಯಮ ಉತ್ತೇಜನಕ್ಕೆ ಪ್ರಾಧಾನ್ಯತೆ ನೀಡಿರುವುದು ಗಮನಾರ್ಹ. ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಮುದ್ರಾ ಲೋನ್ ಅನ್ನು 10 ಲಕ್ಷದಿಂದ 20 ಲಕ್ಷಕ್ಕೆ ಏರಿಕೆ. ಕೈಗಾರಿಕೆ ಉತ್ಪನ್ನಗಳ ಖರೀದಿಗೆ ಸಾಲ ಸೌಲಭ್ಯ ಹಾಗೂ ಬಡ್ಡಿ ರಹಿತ ಸಾಲ ಸೌಕರ್ಯಕ್ಕೆ ಒತ್ತು. ದೇಶದಲ್ಲಿ 12 ಕೈಗಾರಿಕಾ ಪಾರ್ಕ್ ಮತ್ತು ಕೈಗಾರಿಕಾ ತರಬೇತಿ ಕೇಂದ್ರಗಳ ಸ್ಥಾಪನೆಗೆ ಒತ್ತು ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಯುವಕರಿಗೆ ಆಸಕ್ತ ವಿಷಯದಲ್ಲಿ ಕೌಶಲ ತರಬೇತಿ ಹಾಗೂ ಸಾಲ ಸೌಲಭ್ಯ, ಅಂತರ ರಾಷ್ಟ್ರೀಯ ಕೌಶಲ ಕೇಂದ್ರಗಳ ಸ್ಥಾಪನೆ, ಯುವಕರಿಗೆ ಕಲಿಕಾ ವೇತನ ನೀಡುವ ಯೋಜನೆ, ಪಿಎಂ ಸೌರಶಕ್ತಿ ಯೋಜನೆ, ಸೂರ್ಯ ಘರ್ ಯೋಜನೆಯಡಿಯಲ್ಲಿ ಉಚಿತ ವಿದ್ಯುತ್ ಯೋಜನೆ, ಜಿಎಸ್‌ಟಿ ಇಳಿಕೆ, ಕ್ಯಾನ್ಸರ್ ಔಷಧಿಗಳ ಮೇಲೆ ತೆರಿಗೆ ವಿನಾಯಿತಿ, ತೆರಿಗೆ ಪದ್ಧತಿ ಸರಳೀಕರಣ ದಿಂದ ಭಾರತೀಯ ಆರ್ಥಿಕತೆಯ ವೇಗ ಹೆಚ್ಚಲಿದೆ ಎಂದು ತಿಳಿಸಿದ್ದಾರೆ.

ಹೂಡಿಕೆದಾರರಿಗೆ ಹೆಚ್ಚು ಅವಕಾಶ, ಸ್ಟಾರ್ಟ್‌ಅಪ್‌ಗಳಿಗೆ ಪ್ರೋತ್ಸಾಹ, ತೆರಿಗೆ ಪಾವತಿದಾರರಿಗೆ ಹೊಸ ಸ್ಲಾಬ್ ಘೋಷಣೆ ಮಾಡಿರುವುದರಿಂದ ವಾರ್ಷಿಕ 17,500 ರೂಪಾಯಿ ಉಳಿತಾಯವಾಗಲಿದೆ. ಒಟ್ಟಾರೆ ಈ ಬಾರಿ ಕೇಂದ್ರ ಬಜೆಟ್ ಮಧ್ಯಮ ವರ್ಗದ ಸ್ನೇಹಿ ಬಜೆಟ್ ಎಂದು ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಸಂಘದಿಂದ ಈಚನೂರು ಕುಮಾರ್‌ಗೆ ಶ್ರದ್ಧಾಂಜಲಿ

ಮೈಸೂರು, ಜು.23(ಜಿಎ)–ಇತ್ತೀಚೆಗೆ ಅನಾರೋಗ್ಯದಿಂದ ನಿಧನರಾದ ಹಿರಿಯ ಪತ್ರಕರ್ತರಾದ ಈಚನೂರು ಕುಮಾರ್ ಅವರಿಗೆ ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಸಂಘದ ಭವನದಲ್ಲಿ ಮಂಗಳವಾರ ನುಡಿನಮನ ಸಲ್ಲಿಸಲಾಯಿತು.

ಈ ವೇಳೆ ಸಂಘದ ಮಾಜಿ ಅಧ್ಯಕ್ಷ ಎಸ್.ಟಿ.ರವಿಕುಮಾರ್ ಮಾತನಾಡಿ, ಈಚನೂರು ಕುಮಾರ್ ಅವರು ಪತ್ರಿಕೋದ್ಯಮ ಮಾತ್ರವಲ್ಲದೇ ಮೈಸೂರಿನ ಪರಂಪರೆ ಸಂಸ್ಕೃತಿಯನ್ನು ಸಾರಿದ್ದಾರೆ. ಮೈಸೂರು ಪಾರಂಪರಿಕ ಸಮಿತಿಗೆ ಅವರು ಇಲ್ಲದಂತ ಕಮಿಟಿ ಇರಲಿಲ್ಲ. ಮೈಸೂರಿನ ಬಹುತೇಕ ಪತ್ರಿಕೆಗಳಲ್ಲಿ ಕಾರ್ಯನಿರ್ವಹಿಸಿ ನಿಷ್ಠಾವಂತರಾಗಿ ನಡೆದುಕೊಂಡ ರೀತಿ ನಮಗೆ ಮಾರ್ಗದರ್ಶನವಾಗಿದೆ ಎಂದರು.

ಪತ್ರಕರ್ತರು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಮತ್ತು ಸಮಾಜ ಸೇವೆ ಸಲ್ಲಿಸಿರುವ ನಡುವೆ ತಮ್ಮ ಆರೋಗ್ಯದ ಬಗ್ಗೆ ಹೆಚ್ಚು ಒತ್ತು ನೀಡಬೇಕಿದೆ. ಹಾಗೇ ಕುಟುಂಬದವರೊಟ್ಟಿಗೆ ಹೆಚ್ಚಿನ ಸಮಯ ಕಳೆಯಲು ಪ್ರಯತ್ನಿಸಬೇಕಿದೆ ಎಂದು ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಸಂಘದ ಭವನದಲ್ಲಿ ಮಂಗಳವಾರ ಹಿರಿಯ ಪತ್ರಕರ್ತ ಈಚನೂರು ಕುಮಾರ್ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಹಿರಿಯ ಛಾಯಾಗ್ರಾಹಕ ಪ್ರತಿ ಗೋಪಾಲಕೃಷ್ಣ ಮಾತನಾಡಿ, 'ಮೈಸೂರು ಮಿತ್ರ' ಪತ್ರಿಕೆಗೆ ಪಾದಾರ್ಪಣೆ ಮಾಡಿದ ಅವರು ನಿಷ್ಠೆ, ಪ್ರಾಮಾಣಿಕತೆಯಿಂದ ಕಾರ್ಯ ನಿರ್ವಹಿಸುತ್ತಿದ್ದರು. ಜೊತೆ ಜೊತೆಗೆ ಮೈಸೂರಿನ ಇತಿಹಾಸ ಮತ್ತು ಪರಂಪರೆ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು ಎಂದು ಸ್ಮರಿಸಿದರು.

ಹಿರಿಯ ಪತ್ರಕರ್ತ ಮಹೇಂದ್ರ ಮಾತನಾಡಿ, ಈಚನೂರು ಕುಮಾರ್ ಅವರು ಯಾವುದೇ ವಿಷಯ ಬಗ್ಗೆ ಮಾತನಾಡಬೇಕಾದಾಗ ಆ ವಿಷಯದ ಬಗ್ಗೆ ಸಂಪೂರ್ಣವಾಗಿ ಅಧ್ಯಯನ ಮಾಡುತ್ತಿದ್ದರು. ಈ ಅಂಶವನ್ನು ಯುವ ಪತ್ರಕರ್ತರು ಅಳವಡಿಸಿಕೊಳ್ಳಬೇಕಿದೆ. ವಿನಾಕಾರಣ ಸಮಯವನ್ನು ಹಾಳು ಮಾಡುತ್ತಿದ್ದೇವೆ. ಅದರ ಬದಲು ಓದುವುದನ್ನು ಅಭ್ಯಾಸ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಈಚನೂರು ಕುಮಾರ್ ಅವರ ಪುತ್ರ ಪತ್ರಕರ್ತ ಅಜಿತ್ ಮಾತನಾಡಿ, ನಮ್ಮ ತಂದೆ ಜ್ಞಾನದ ಬಲದಿಂದ ತಮ್ಮನ್ನು ರೂಪಿಸಿಕೊಂಡಿದ್ದರು. ಅವರ ಜೀವನ ಶೈಲಿಯನ್ನು ಅಳವಡಿಸಿಕೊಳ್ಳಲು ನಾವು ಪ್ರಯತ್ನಿಸುತ್ತೇವೆ ಎಂದ ಅವರು, ತಂದೆ ಪಾರಂಪರಿಕತೆ ಬಗ್ಗೆ ಹೆಚ್ಚು ಒಲವು ಹೊಂದಿದ್ದರಿಂದ ಮೈಸೂರು ಪಾರಂಪರಿಕತೆ ಬಗ್ಗೆ ವಿಶೇಷ ವರದಿ ಮಾಡುವ ವರದಿಗಾರರಿಗೆ ಏನಾದರೂ ಮಾಡಬೇಕು ಎಂಬ ಚಿಂತನೆ ನಡೆದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಕೆ.ದೀಪಕ್, ಪ್ರಧಾನಕಾರ್ಯದರ್ಶಿ ಧರ್ಮಪುರ ನಾರಾಯಣ್, ಮಾಜಿ ಪ್ರಧಾನ ಕಾರ್ಯದರ್ಶಿ ಸುಬ್ರಮಣ್ಯ, ಈಚನೂರು ಕುಮಾರ್ ಪುತ್ರಿ ಅಕ್ಷರ, ಸಂಘದ ಕಾರ್ಯಕಾರಿಣಿ ಸದಸ್ಯರು ಉಪಸ್ಥಿತರಿದ್ದರು.

ಛಲವಾದಿ ನಾರಾಯಣ ಸ್ವಾಮಿ ಪರಿಷತ್ ವಿಪಕ್ಷ ನಾಯಕ

ಮೈಸೂರಲ್ಲಿ ಬಿಜೆಪಿ ಸಂಭ್ರಮಾಚರಣೆ



ಬಿಜೆಪಿ ಎಸ್ಸಿ ಮೋರ್ಚಾ ಪದಾಧಿಕಾರಿಗಳು, ಎಂಎಲ್‌ಸಿ ಛಲವಾದಿ ನಾರಾಯಣ ಸ್ವಾಮಿ ಅವರ ಆಯ್ಕೆಯನ್ನು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು.

ಮೈಸೂರು, ಜು.23(ಎಸ್‌ಪಿಎನ್)– ಕರ್ನಾಟಕ ವಿಧಾನಪರಿಷತ್ ವಿಪಕ್ಷ ನಾಯಕರಾಗಿ ಛಲವಾದಿ ನಾರಾಯಣ ಸ್ವಾಮಿ ಆಯ್ಕೆಯನ್ನು ಮೈಸೂರು ನಗರ ಮತ್ತು ಜಿಲ್ಲಾ ಎಸ್ಸಿ ಮೋರ್ಚಾ ಸ್ವಾಗತಿಸಿದೆ.

ಮೈಸೂರು ಚಾಮರಾಜಪುರಂನಲ್ಲಿರುವ ಬಿಜೆಪಿ ಕಚೇರಿ ಮುಂಭಾಗ ಎಸ್ಸಿ ಮೋರ್ಚಾ ಪದಾಧಿಕಾರಿಗಳು, ಎಂಎಲ್‌ಸಿ ಛಲವಾದಿ ನಾರಾಯಣ ಸ್ವಾಮಿ ಅವರ ಆಯ್ಕೆಯನ್ನು ಪಟಾಕಿ ಸಿಡಿಸಿ, ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ವೇಳೆ ಮೈಸೂರು ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೆಚ್.ಜಿ.ಗಿರಿಧರ್, ನಗರ ಜಿಲ್ಲಾ ಮೋರ್ಚಾ ಅಧ್ಯಕ್ಷ ಶೈಲೇಂದ್ರ, ಪ್ರಧಾನ ಕಾರ್ಯದರ್ಶಿ ಕಾರ್ತಿಕ್ ಮರಿಯಪ್ಪ ಸ್ವಾಮಿ, ಉಪಾಧ್ಯಕ್ಷ ಪ್ರತಾಪ್, ಮುಖಂಡರಾದ ಧರ್ಮರಾಜ್, ಚಲುವಣ್ಣ ಮುರುಳಿ, ಸತೀಶ್, ಚಾಮರಾಜ ಕ್ಷೇತ್ರದ ಅಧ್ಯಕ್ಷ ದಿನೇಶ್ ಗೌಡ, ಪ್ರಧಾನ ಕಾರ್ಯದರ್ಶಿ ರಾಮೇಗೌಡ, ಕ್ಷೇತ್ರದ ಎಸ್.ಸಿ ಮೋರ್ಚಾ ಅಧ್ಯಕ್ಷ ರವಿ, ರಂಗಸ್ವಾಮಿ, ಮೈಸೂರು ನಗರ ಜಿಲ್ಲಾ ಕಾರ್ಯದರ್ಶಿ ಕೃಷ್ಣಮೂರ್ತಿ ರಾವತ್, ಯುವ ಮೋರ್ಚಾ ಉಪಾಧ್ಯಕ್ಷ ಪುನೀತ್, ಕ್ಷೇತ್ರದ ಯುವ ಮೋರ್ಚಾ ಅಧ್ಯಕ್ಷ ನವೀನ್, ಸುರೇಂದ್ರ ಶಂಕರ್, ಸಿದ್ದಲಿಂಗಸ್ವಾಮಿ, ಶಿವಪ್ರಸಾದ್, ಸಿದ್ದರಾಜು, ಸೋಮೇಶ್, ಗಿರೀಶ್ ಸೇರಿದಂತೆ ಇತರೆ ಮುಖಂಡರು ಉಪಸ್ಥಿತರಿದ್ದರು.

ಇಂದು ಚಾ.ಬೆಟ್ಟದ ದೇವಸ್ಥಾನದ ಮಹಿಳೆಯರಿಗೆ ಬಾಗಿನ

ಮೈಸೂರು, ಜು. 23– ಶ್ರೀ ದುರ್ಗಾ ಫೌಂಡೇಶನ್ ಟ್ರಸ್ಟ್ ವತಿಯಿಂದ ಆಷಾಢ ಮಾಸದ ಪ್ರಯುಕ್ತ ಚಾಮುಂಡಿಬೆಟ್ಟದ ಶ್ರೀ ಚಾಮುಂಡೇಶ್ವರಿ ದೇವಸ್ಥಾನದ ಮಹಿಳಾ ಸಿಬ್ಬಂದಿಗೆ ಚಾಮುಂಡಿಬೆಟ್ಟದ ದೇವಸ್ಥಾನದ ಮುಂಭಾಗ ಜು.24ರ ಬೆಳಗ್ಗೆ 11 ಗಂಟೆಗೆ ಬಾಗಿನ ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ದೇವಸ್ಥಾನದ ಪ್ರಧಾನ ಅರ್ಚಕ ಡಾ.ಶಶಿಶೇಖರ್ ದೀಕ್ಷಿತ್, ಚಾಮುಂಡಿಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರೂಪ, ಮೈಸೂರು ನಗರ–ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ದೇವಸ್ಥಾನದ ನೌಕರರ ಸೋಮಣ್ಣ, ಮೈಸೂರು ವಿವಿ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಆರ್.ಎಚ್.ಪವಿತ್ರ, ಕಾಂಗ್ರೆಸ್ ಮುಖಂಡ ಎನ್.ಎಂ.ನವೀನ್ ಕುಮಾರ್, ಸಮಾಜ ಸೇವಕ ಬನ್ನೂರು ಮಹೇಂದ್ರ ಸಿಂಗ್ ಕಾಳಪ್ಪ, ಜೀವಧಾರ ರಕ್ತನಿಧಿ ಕೇಂದ್ರದ ನಿರ್ದೇಶಕರಾದ ಗಿರೀಶ್ ಹಾಗೂ ಮುತ್ತಣ್ಣ, ಕೆಪಿಸಿಸಿ ಸದಸ್ಯ ನಜರ್ ಬಾದ್ ನಟರಾಜ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಇನ್ನಿತರರು ಭಾಗವಹಿಸಲಿದ್ದಾರೆ.

ಮೈಸೂರು ಹಳೇ ಡಿಸಿ ಕಚೇರಿ ಕಟ್ಟಡದಲ್ಲಿ ಮ್ಯೂಸಿಯಂ, ಕಲಾ ಗ್ಯಾಲರಿ



- ಪ್ರವಾಸೋದ್ಯಮ ಇಲಾಖೆಯಿಂದ ಡಿಪಿಆರ್ ಸಿದ್ಧ
- ಡಿಸ್ಟ್ರಿಕ್ಟ್ ಡೆಸ್ಟಿನೇಷನ್ ಮ್ಯಾನೇಜ್‌ಮೆಂಟ್ ಕಮಿಟಿ

ಪರಿಶೀಲನೆ ನಂತರ ಸರ್ಕಾರಕ್ಕೆ 45 ಕೋಟಿಯ ವೆಚ್ಚದ ಪ್ರಸ್ತಾವನೆ

ಮೈಸೂರು, ಜು. 23(ಆರ್‌ಕೆ)– ಮೈಸೂರಿನ ಹೃದಯ ಭಾಗದಲ್ಲಿರುವ ಹಳೇ ಜಿಲ್ಲಾಧಿಕಾರಿ ಕಚೇರಿ (ಅಠಾರ ಕಚೇರಿ) ಪಾರಂಪರಿಕ ಕಟ್ಟಡವನ್ನು ಮೈಸೂರು ಸಂಸ್ಥಾನ ಆಳಿದ ರಾಜ ಮಹಾರಾಜರ ಇತಿಹಾಸ ಸಾರುವ ಸಂಗ್ರಹಾಲಯ ಹಾಗೂ ಕಲಾ ಗ್ಯಾಲರಿಯನ್ನಾಗಿ ರೂಪಿಸಲು ಪ್ರವಾಸೋದ್ಯಮ ಇಲಾಖೆ ಮುಂದಾಗಿದೆ.

ಮೈಸೂರು ರಾಜ್ಯದಲ್ಲಿ ಆಡಳಿತ ನಡೆಸಿದ ಅರಸರ ಹಿನ್ನೆಲೆ, ಇತಿಹಾಸ, ಇಲ್ಲಿನ ಪರಂಪರೆ, ಸಂಪ್ರದಾಯಗಳನ್ನೊಳಗೊಂಡ ಮಾಹಿತಿ, ಛಾಯಾಚಿತ್ರಗಳು, ಒಡೆಯರ್ ಆಳ್ವಿಕೆಯ ಮಾದರಿಗಳನ್ನು ಪಾರಂಪರಿಕ ಕಟ್ಟಡದಲ್ಲಿ ಪ್ರದರ್ಶಿಸಿ ಮುಂದಿನ ತಲೆಮಾರಿಗೆ ಪರಿಚಯಿಸುವುದು, ಪ್ರವಾಸಿ ತಾಣವಾಗಿ ಪರಿವರ್ತಿಸಿ ಮೈಸೂರಿಗೆ ಭೇಟಿ ನೀಡುವ ಪ್ರವಾಸಿಗರು ಈ ಸಂಗ್ರಹಾಲಯವನ್ನು ವೀಕ್ಷಿಸಲು ಅವಕಾಶವಾಗುವಂತೆ ಮಾಡುವುದು ಪ್ರಮುಖ ಉದ್ದೇಶವಾಗಿದೆ.

ರಾಜವಂಶಸ್ಥರ ಪರಿಚಯ, ಅವರು ನಾಡಿಗೆ ನೀಡಿದ ಕೊಡುಗೆ, ಪಾರಂಪರಿಕ ಕಟ್ಟಡಗಳು, ಸ್ಮಾರಕಗಳು, ಕಲೆ, ಸಂಸ್ಕೃತಿ, ಸಂಗೀತ, ನೃತ್ಯ, ಸಂಪ್ರದಾಯ, ಅಭಿವೃದ್ಧಿ ಕಾರ್ಯಗಳ ಬಗ್ಗೆಯೂ ಸಂಗ್ರಹಾಲಯದಲ್ಲಿ ಮಾಡೆಲ್ ಸಮೇತ ಮಾಹಿತಿಯನ್ನು ನೀಡಲು ತಯಾರಿ ನಡೆಯುತ್ತಿದೆ.

ಕೇಂದ್ರ ಪ್ರವಾಸೋದ್ಯಮ ಇಲಾಖೆಯ 'ಸ್ವದೇಶಿ ದರ್ಶನ' ಯೋಜನೆಯಡಿ ಸುಮಾರು 45 ಕೋಟಿ ರೂ. ವೆಚ್ಚದಲ್ಲಿ ಮ್ಯೂಸಿಯಂ ಮತ್ತು ಕಲಾ ಗ್ಯಾಲರಿ ರೂಪಿಸಲು ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ಇಲಾಖೆಯು ಖಾಸಗಿ ಏಜೆನ್ಸಿಯೊಂದರಿಂದ ಸಮಗ್ರ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸಿದ್ದು, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಡಿಸ್ಟ್ರಿಕ್ಟ್ ಡೆಸ್ಟಿನೇಷನ್ ಮ್ಯಾನೇಜ್‌ಮೆಂಟ್ ಕಮಿಟಿ ಮುಂದೆ ಪ್ರಸ್ತುತಪಡಿಸಲಿದೆ.

ಈ ಯೋಜನೆ ಕುರಿತಂತೆ ಮೈಸೂರು ಮಹಾನಗರ ಪಾಲಿಕೆ, ಪರಿಸರ ಇಲಾಖೆ, ಪಾರಂಪರಿಕ ಇಲಾಖೆ ಹಾಗೂ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳನ್ನು ಕರೆದು ಮ್ಯೂಸಿಯಂ ಮಾಡಲು ಆಕ್ಷೇಪಣೆಗಳಿದ್ದರೆ ಪರಿಶೀಲಿಸಿ ಇತ್ಯರ್ಥಗೊಳಿಸಿದ ಬಳಿಕ ಜಿಲ್ಲಾಧಿಕಾರಿಗಳು ಸರ್ಕಾರದ ಮಟ್ಟದಲ್ಲಿರುವ ರಾಜ್ಯ ಡೆಸ್ಟಿನೇಷನ್ ಅಂಡ್ ಮ್ಯಾನೇಜ್‌ಮೆಂಟ್ ಕಮಿಟಿಗೆ ಪ್ರಸ್ತಾವನೆ ಸಲ್ಲಿಸಲಿದ್ದಾರೆ.

ರಾಜ್ಯ ಮಟ್ಟದ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಚರ್ಚಿಸಿ ಡಿಪಿಆರ್‌ಗೆ ಅನುಮೋದನೆ ನೀಡಿದ ಬಳಿಕ ರಾಜ್ಯ ಸರ್ಕಾರದಿಂದ ಕೇಂದ್ರ ಪ್ರವಾಸೋದ್ಯಮ ಇಲಾಖೆಗೆ ಪ್ರಸ್ತಾವನೆ ರವಾನೆಯಾಗಬೇಕಿದೆ. ಯೋಜನೆಗೆ ಅನುಮೋದನೆ ದೊರೆತ ಬಳಿಕ ನಿಯಮಾನುಸಾರ ಕಾಮಗಾರಿ ಕೈಗೊಳ್ಳಲಾಗುವುದು ಎಂದು ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ. ಸವಿತಾ ತಿಳಿಸಿದ್ದಾರೆ.

ಹಳೇ ಡಿಸಿ ಕಚೇರಿ ಕಟ್ಟಡವನ್ನು ಮ್ಯೂಸಿಯಂ ಆಗಿ ಪರಿವರ್ತಿಸುವ ಜೊತೆಗೆ ಸುತ್ತಲಿನ ಪ್ರದೇಶದಲ್ಲಿ ಫುಡ್ ಕೋರ್ಟ್, ವಾಕಿಂಗ್ ಪಾಥ್, ಉದ್ಯಾನ, ಮನೋರಂಜನಾ ಪಾರ್ಕ್ ಸೇರಿದಂತೆ ಹಲವು ಆಕರ್ಷಣೆಗಳನ್ನು ಸೃಷ್ಟಿಸಿ ಪ್ರಮುಖ ಪ್ರವಾಸಿ ತಾಣವಾಗಿಸಿ ದೇಶ–ವಿದೇಶಗಳಿಂದ ಮೈಸೂರಿಗೆ ಬರುವ ಪ್ರವಾಸಿಗರನ್ನು ಸೆಳೆಯಲಾಗುವುದು ಎಂದು ಅವರು ತಿಳಿಸಿದರು.

ಡಿ. ದೇವರಾಜ ಅರಸು ರಸ್ತೆಯಲ್ಲಿ ಸಂಚಾರ ಸ್ಥಗಿತಗೊಳಿಸಿ, ಅಲ್ಲಿನ ಅಂಗಡಿ ಮಾಲೀಕರ ವಾಹನಗಳಿಗೆ ಸಮೀಪದಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸುವ ಮೂಲಕ ಅರಸು ರಸ್ತೆಯನ್ನು ಮ್ಯೂಸಿಯಂಗೆ ಹೋಗುವ ಮಾರ್ಗವನ್ನಾಗಿಸುವುದು ಹಾಗೂ ಪ್ರವಾಸಿಗರ ವಾಹನಗಳಿಗೆ ಮಾತ್ರ ನಿಲುಗಡೆಗೆ ಅವಕಾಶ ಕಲ್ಪಿಸುವ ಚಿಂತನೆ ಇದೆ. ಹಾಗೆಯೇ ಕೃಷ್ಣರಾಜ ಬುಲೇವಾರ್ಡ್ ರಸ್ತೆಯನ್ನೂ ವಿಶೇಷ ರೀತಿಯಲ್ಲಿ ಅಭಿವೃದ್ಧಿಪಡಿಸಿ ಮ್ಯೂಸಿಯಂ ನೋಡಲು ಬರುವವರ ವಿಹಾರಕ್ಕೆ ಉತ್ತಮ ವಾತಾವರಣ ಸೃಷ್ಟಿಸುವ ಉದ್ದೇಶವೂ ಇದೆ ಎಂದು ಸವಿತಾ ತಿಳಿಸಿದ್ದಾರೆ.

ಉಳಿದಂತೆ ಹಳೇ ಡಿಸಿ ಕಚೇರಿ ಕಟ್ಟಡವನ್ನು ರಿಪೇರಿ ಮಾಡಿಸಿ ಪಾರಂಪರಿಕ ಇಲಾಖೆಯು ನವೀಕರಿಸಲಿದೆ. ಅದೇ ರೀತಿ ಮೈಸೂರಿನ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಖಾಯಂ ಎಕ್ಸ್‌ಪೋ ನಿರ್ಮಿಸಲು ಸ್ವದೇಶಿ ದರ್ಶನ ಯೋಜನೆಯಡಿ ಪ್ರಕ್ರಿಯೆ ನಡೆಸುತ್ತಿದ್ದೇವೆ. ಅದು ಸಾಕಾರಗೊಂಡಲ್ಲಿ ಮಹಾರಾಜ ಕಾಲೇಜು ಮೈದಾನ, ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಇತರೆಡೆ ನಡೆಯುವ ಎಕ್ಸಿಬಿಷನ್‌ಗಳನ್ನು ಖಾಯಂ ಎಕ್ಸ್‌ಪೋದಲ್ಲೇ ನಡೆಸಬಹುದಾಗಿದೆ ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಕಿಲ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ನಾಟ್‌ಔಟ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಕಲ್ಕಿ (ಕ)	4 ಪ್ರದರ್ಶನಗಳು
ರಾಜಕಮಲ್	
ಟ್ವಿಸ್ಟರ್ (ಇಂ)	4 ಪ್ರದರ್ಶನಗಳು
ಸಂಗಂ	
ಹೆಜ್ಜಾರು (ಕ)	2 ಪ್ರದರ್ಶನಗಳು
ಇಂಡಿಯನ್ 2 (ತ)	2 ಪ್ರದರ್ಶನಗಳು
ಲಿಡೋ	
ಶಾಸ್ತ್ರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಪ್ರಭಾ	
ನಾಟ್‌ಔಟ್ (ಕ)	2 ಪ್ರದರ್ಶನಗಳು
ಹಿರಣ್ಯ (ಕ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10.10ಕ್ಕೆ, ಮ.1ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್‌ಪಿರೆಸಿ ಗೋದ್ರಾ (ಹಿಂ): ಮ.3.45ಕ್ಕೆ, ಸಂ.4.35ಕ್ಕೆ, ಕಲ್ಕಿ 2898 ಎಡಿ (ಕ): ಸಂ.6.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.10ಕ್ಕೆ
ಸ್ಕ್ರೀನ್ 2	ಟ್ವಿಸ್ಟರ್ಸ್ (ಇಂ): ಬೆ.10.30ಕ್ಕೆ, ಹೆಜ್ಜಾರು (ಕ): ಮ.1.10ಕ್ಕೆ, ಕಲ್ಕಿ 2898 ಎಡಿ(3ಡಿ) (ತೆ): ಮ.3.40ಕ್ಕೆ, ಆಕ್ಸಿಡೆಂಡ್ ಆರ್ ಕಾನ್ಸ್‌ಪಿರೆಸಿ ಗೋದ್ರಾ (ಹಿಂ): ರಾ.7.05ಕ್ಕೆ, ಕಲ್ಕಿ 2898 ಎಡಿ(3ಡಿ) (ಹಿಂ): ರಾ.10.05ಕ್ಕೆ
ಸ್ಕ್ರೀನ್ 3	ನಾಟ್‌ಔಟ್ 2024 (ಕ): ಬೆ.10.15ಕ್ಕೆ, ಕಲ್ಕಿ 2898 ಎಡಿ (ಕ): ಮ.1ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ಸಂ.4.30ಕ್ಕೆ, ಟ್ವಿಸ್ಟರ್ಸ್ (ಇಂ): ರಾ.7.25ಕ್ಕೆ, ರಾ.10ಕ್ಕೆ.
ಸ್ಕ್ರೀನ್ 4	ಇನ್‌ಸೈಡ್ ಔಟ್ 2 (3ಡಿ) (ಇಂ): ಬೆ.10.55ಕ್ಕೆ, ಬ್ಯಾಕ್ ಬೆಂಚರ್ಸ್ (ಕ): ಮ.1ಕ್ಕೆ, ಇಂಡಿಯನ್ 2 (ತ): ಮ.3.30ಕ್ಕೆ, ಬ್ಯಾಡ್ ನ್ಯೂಸ್ (ಹಿಂ): ರಾ.7ಕ್ಕೆ, ರಾ.9.55ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಕಲ್ಕಿ 2898 ಎಡಿ (ಕ): ಬೆ.10.30ಕ್ಕೆ, ಸಂ.6ಕ್ಕೆ, ಲವ್ ಲಿ (ಕ): ಮ.1.55ಕ್ಕೆ.
ಸ್ಕ್ರೀನ್ 2	ಇಂಡಿಯನ್ 2 (ತ): ಮ.1ಕ್ಕೆ, ಸಂ.4.25ಕ್ಕೆ, ರಾ.7.50ಕ್ಕೆ.
ಸ್ಕ್ರೀನ್ 3	ಕಲ್ಕಿ 2898 ಎಡಿ (3ಡಿ)(ತೆ): ಬೆ.11.10ಕ್ಕೆ, ಮ.2.40ಕ್ಕೆ, ಇಂಡಿಯನ್ 2 (ತ): ಸಂ.6.05ಕ್ಕೆ, ರಾ.9.30ಕ್ಕೆ.
ಸ್ಕ್ರೀನ್ 4	ಇಂಡಿಯನ್ 2 (ತ): ಬೆ.10ಕ್ಕೆ, ಕಲ್ಕಿ 2898 ಎಡಿ (ಕ): ಮ.1.25ಕ್ಕೆ, ರಾ.7.45ಕ್ಕೆ, ಖಾಲಿ ಕುಡುಕರು (ಕ): ಸಂ.4.50ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಬೇಸಿಗೆ ರೇಸ್

2ನೇ ದಿನ, ಬುಧವಾರ, 24–7–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ವಾರಣಾಸಿ ಪ್ಲೇಟ್–1200 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 2.00ಕ್ಕೆ
1. ಕಂಟ್ರೀಸ್ ಲೈಟ್ 2. ಶಿವಾಲಿಕ್ ಸೌಂಡ್ 3. ಆರ್‌ನಮೆಂಟ್

II. ಪಶ್ಚಿಮ ವಾಹಿನಿ ಪ್ಲೇಟ್–1400 ಮೀ. ರೇಟೆಡ್ 00 ರಿಂದ 25. ಮ.2.30ಕ್ಕೆ
1. ವಂದನ್ 2. ಕೂರ್ಗ್ ಜನರಲ್ 3. ವೈಟ್‌ಲೈಸ್

III. ಮೈಸೂರ್ ಟ್ರೋಫಿ ಡಿ2 –1200 ಮೀ. ರೇಟೆಡ್ 40 ರಿಂದ 65. ಮ.3.00ಕ್ಕೆ
1. ಅಬ್ಬೂಶಾನ್ 2. ಆಸ್ಪಿಂಗ್ ಸನ್‌ರೈಸ್ 3. ಮೂನ್‌ಲೈಟ್ ಕ್ವೀನ್

IV. ಕೋನಾರ್ಕ್ ಪ್ಲೇಟ್–1200 ಮೀ. ರೇಟೆಡ್ 20 ರಿಂದ 45. ಮ.3.30ಕ್ಕೆ
1. ರೈಸಿಂಗ್ ಸನ್ 2. ಮಬರಿ 3. NRI ಮಿಲೆನಿಯಂ

V. ಮೈಸೂರ್ ಟ್ರೋಫಿ ಡಿ1 –1200 ಮೀ. ರೇಟೆಡ್ 20 ರಿಂದ 45. ಸಂಜೆ 4.00ಕ್ಕೆ
1. ಮಿಸ್ಟಿಕ್ ಬಾಂಡ್ 2. ಶೀಬಾ 3. ಎಡ್ಡಿ ದ ಈಗಲ್

VI. ITARSI ಪ್ಲೇಟ್–1400 ಮೀ. ರೇಟೆಡ್ 60 ಮತ್ತು ಮೇಲ್ಪರ್ಗ. ಸಂ.4.30ಕ್ಕೆ
1. ಪ್ರಿನ್ಸ್ ಕಾರ್ಪೊರೇಟ್ 2. ಕುಶಾಕ್ 3. ಸಿಗೇರಾ

VII. ದೊಡ್ಡಬಳ್ಳಾಪುರ ಪ್ಲೇಟ್–1400 ಮೀ. ರೇಟೆಡ್ 20 ರಿಂದ 45. ಸಂ.5.00ಕ್ಕೆ
1. ರೋಡ್ ರನ್ನರ್ 2. ಸೆರ್ರೈ 3. ನಿವೇದಾ ಗ್ಲೋಡ್

ದಿನದ ಅತ್ಯುತ್ತಮ	ಪ್ರಿನ್ಸ್ ಕಾರ್ಪೊರೇಟ್
ಡಬ್ಬಲ್	ವಂದನ್, ರೈಸಿಂಗ್ ಸನ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಪಿಎಚ್.ಡಿ ಪದವಿ



ಮೈಸೂರು, ಜು. 23– ಡಾ. ವೈ.ಎಂ. ಮಂಜುನಾಥ್ ಮಾರ್ಗದರ್ಶನದಲ್ಲಿ ಎನ್. ನಕುಲ್ ಅವರು ಸಂಶೋಧನೆ ನಡೆಸಿ ಸಾದರಪಡಿಸಿದ 'ಬಿಹೇವಿಯರ್ ಆಫ್ ಕಾರ್ಬನ್ ಫೈಬರ್ ಅಂಡ್ ಪಿವಿಎ ಫೈಬರ್ ಹ್ಯಾಸ್ ರಿಎನ್‌ಫೋರ್ಸ್‌ಮೆಂಟ್ ಇನ್ ಕಾಂಕ್ರೀಟ್ ಮಹಾಪ್ರಬಂಧವನ್ನು ಬೆಳಗಾವಿ ವಿಟಿಯು ಕಾಲೇಜು ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಹಗರಣ: ಇಡಿ ವಿರುದ್ಧ ಸಿಡಿದೆದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ

ಸಂಪುಟ ಸಹೋದ್ಯೋಗಿಗಳೊಂದಿಗೆ ವಿಧಾನಸೌಧ ಆವರಣದಲ್ಲಿನ ಗಾಂಧಿ ಪ್ರತಿಮೆ ಮುಂದೆ ಧರಣಿ

ಹಗರಣದಲ್ಲಿ ಸಿಲುಕಿಸಲು ಇಡಿ ಸಂಚು; ಕಾನೂನು ಹೋರಾಟಕ್ಕೆ ಅಣಿ

ಬೆಂಗಳೂರು, ಜು. 23(ಕೆಎಂಶಿ)– ಮಹರ್ಷಿ ವಾಲ್ಮೀಕಿ ನಿಗಮದ ಅಕ್ರಮ ಹಣ ವರ್ಗಾವಣೆ ಹಗರಣಕ್ಕೆ ಸಂಬಂಧಿಸಿದಂತೆ ಇಡಿ ವಿರುದ್ಧವೇ ರಾಜ್ಯ ಸರ್ಕಾರ ತಿರುಗಿಬಿದ್ದ ಬೆನ್ನಲ್ಲೇ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಸಂಪುಟ ಸಹೋದ್ಯೋಗಿಗಳು ಇಡಿ ಅಧಿಕಾರಿಗಳನ್ನು ಬಂಧಿಸುವಂತೆ ಇಂದು ವಿಧಾನಸೌಧದ ಆವರಣದಲ್ಲಿನ ಮಹಾತ್ಮಗಾಂಧಿ ಪ್ರತಿಮೆ ಮುಂದೆ ಧರಣಿ ನಡೆಸಿದರು.

ಹಗರಣ ಕೇಂದ್ರ ಮತ್ತು ರಾಜ್ಯ ಸರ್ಕಾರದ ನಡುವೆ ಸಂಘರ್ಷಕ್ಕೆ ಎಡೆ ಮಾಡಿದ್ದು ಸಿದ್ದರಾಮಯ್ಯ ಅವರು, ಪಶ್ಚಿಮ ಬಂಗಾಳ ಸರ್ಕಾರ ಸಿಬಿಐ ವಿರುದ್ಧ ಟೊಂಕಕಟ್ಟಿ ನಿಂತಂತೆ ಇಡಿ ವಿರುದ್ಧ ಸಿಡಿದೆದ್ದಿದ್ದಾರೆ. ತನ್ನನ್ನೇ ಹಗರಣದಲ್ಲಿ ಸಿಲುಕಿಸಲು ಇಡಿ ಅಧಿಕಾರಿಗಳು ಸಂಚು ರೂಪಿಸುತ್ತಿದ್ದಾರೆ ಎಂದು ನೇರವಾಗಿ ಆರೋಪ ಮಾಡಿರುವುದಲ್ಲದೆ, ಕೇಂದ್ರದ ಕೈಗೊಂಬೆಯಾಗಿರುವ ತನಿಖಾಧಿಕಾರಿಗಳನ್ನು ಬಂಧಿಸಲು ಮುಂದಾಗಿದ್ದಾರೆ. ಹಗರಣಕ್ಕೆ ಸಂಬಂಧಿಸಿದಂತೆ ನಿನ್ನೆ ರಾತ್ರಿ ನಡೆದ ಸಚಿವ ಸಂಪುಟ ಸಭೆಯಲ್ಲೂ ಈ ಸಂಬಂಧ ಸುದೀರ್ಘ ಚರ್ಚೆ ನಡೆಸಿರುವ ಮುಖ್ಯಮಂತ್ರಿಗಳು ತಮ್ಮನ್ನು, ಉಪ ಮುಖ್ಯಮಂತ್ರಿ ಹಾಗೂ ಕೆಲವು ಸಚಿವರನ್ನು ಕೇಂದ್ರ ಸರ್ಕಾರ ಹಗರಣದಲ್ಲಿ ಸಿಲುಕಿಸುವ ಪ್ರಯತ್ನ ನಡೆಸಿದೆ.

ಬಿಜೆಪಿಯೇತರ ಆಡಳಿತದ ಕೆಲವು ಮುಖ್ಯಮಂತ್ರಿಗಳನ್ನು ಇಡಿ ಹೇಗೆ ಹಗರಣಗಳಲ್ಲಿ ಸಿಲುಕಿಸಿ ಜೈಲಿಗೆ ಕಳುಹಿಸಿತ್ತೋ, ಅದೇ ರೀತಿ ಕಾರ್ಯವನ್ನು ಕರ್ನಾಟಕದಲ್ಲೂ ಮಾಡುತ್ತಿದೆ. ಕೇಂದ್ರದ ಕೈಗೊಂಬೆಯಾಗಿರುವ ಇಡಿ ಮತ್ತು ಸಿಬಿಐ ವಿರುದ್ಧ ನಾನು ಹೋರಾಟ ಮಾಡುತ್ತೇನೆ. ಬುದ್ಧಿ ಕಲಿಸುತ್ತೇನೆ ಎಂದು ಶಪಥ ಮಾಡಿದ ಬೆನ್ನಲ್ಲೇ ಮುಖ್ಯಮಂತ್ರಿ ರಾಷ್ಟ್ರದ ಗಮನ ಸೆಳೆಯಲು ಧರಣಿ ನಡೆಸಿದರು.

ಕಾನೂನು ಹೋರಾಟಕ್ಕೆ ಸಿದ್ಧ: ಧರಣಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ ಅವರು, ಮಹರ್ಷಿ ವಾಲ್ಮೀಕಿ ನಿಗಮದ ಅಕ್ರಮ ಹಣ ವರ್ಗಾವಣೆ ಹಗರಣ ಕುರಿತ ಎಸ್‌ಐಟಿ ತನಿಖೆ ಮುಗಿದಿದೆ. ಇಡಿ, ಸಿಬಿಐ ಏನೇ ಇರಲಿ ಕಾನೂನಿನ ಹೋರಾಟಕ್ಕೆ ಸಿದ್ಧ ಎಂದರು. ರಾಜಕೀಯ ಸೇಡು, ದ್ವೇಷದ ನಡೆಯನ್ನು ಕಾಂಗ್ರೆಸ್ ಸರ್ಕಾರ ತೀವ್ರವಾಗಿ ಖಂಡಿಸುತ್ತದೆ. ಪ್ರಜಾಪ್ರಭುತ್ವಕ್ಕೆ ಮಾರಕವಾದ ನಡೆಯಿದು, ಕಾನೂನುಬಾಹಿರವಾಗಿ ತನಿಖೆ ಮಾಡುವಂತಿಲ್ಲ. ಕಾಂಗ್ರೆಸ್ ವರಿಷ್ಠರೊಂದಿಗೆ ಚರ್ಚಿಸಿದ್ದು ಇಡಿ ದುರುಪಯೋಗ ವಿಷಯವನ್ನು ಸಂಸತ್ತಿನಲ್ಲಿ ಪ್ರಸ್ತಾಪಿಸಲಾಗಿದೆ.

ಹಗರಣದಲ್ಲಿನ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು. ಯಾರೇ ತಪ್ಪು ಮಾಡಿದ್ದರೂ ಮುಲಾಜಿಗೆ ಒಳಗಾಗುವುದಿಲ್ಲ. ಯಾರನ್ನೂ ರಕ್ಷಣೆ ಮಾಡುವುದಿಲ್ಲ, ತಪ್ಪಿತಸ್ಥರಿಗೆ ಶಿಕ್ಷೆ ಕೊಟ್ಟೇ ಕೊಡುತ್ತೇವೆ. ಉಪ್ಪು ತಿಂದವರು ನೀರು ಕುಡಿಯಲೇಬೇಕು ಎಂದರು. ವಿಧಾನಸಭೆ ಹಾಗೂ ವಿಧಾನಪರಿಷತ್ತಿನಲ್ಲಿಯೂ ಪ್ರಸ್ತಾಪಿಸಲಿದ್ದೇವೆ. ಸದನದ ಹೊರಗೆ ಹೋರಾಟ ಕುರಿತು ಪಕ್ಷದ ವೇದಿಕೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಗುವುದು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಕುರಿತು ಮೂರು ತನಿಖಾ ಸಂಸ್ಥೆಗಳು ವಿಚಾರಣೆ ನಡೆಸುತ್ತಿವೆ. ಎಸ್‌ಐಟಿಯನ್ನು ಮೇ 31ರಂದು ರಚಿಸಲಾಗಿದೆ. ಜೂನ್ 3ರಂದು ಬ್ಯಾಂಕ್ ವತಿಯಿಂದ ಸಿಬಿಐಗೆ ದೂರು ನೀಡಲಾಗಿದೆ. ಜಾರಿ ನಿರ್ದೇಶನಾಲಯ ಸ್ವಯಂಪ್ರೇರಣೆಯಿಂದ ತನಿಖೆ ಮಾಡುತ್ತಿದೆ. ಒಂದೇ ಹಗರಣದಲ್ಲಿ ಮೂರು ತನಿಖಾ ಸಂಸ್ಥೆಗಳು ವಿಚಾರಣೆ ಮಾಡುತ್ತಿರುವುದು ವಿಶೇಷ. ಮೂರು ತನಿಖಾ ಸಂಸ್ಥೆಗಳು ಒಂದೇ ಪ್ರಕರಣದ ಬಗ್ಗೆ ತನಿಖೆ ಮಾಡುವುದು ಈವರೆಗೆ ನನ್ನ ಅನುಭವಕ್ಕೆ ಬಂದಿರಲಿಲ್ಲ ಎಂದರು. ವಾಲ್ಮೀಕಿ ಅಭಿವೃದ್ಧಿ ನಿಗಮ ದಲ್ಲಿ ಅಕ್ರಮ ನಡೆದಿಲ್ಲ ಎಂಬುದಾಗಿ ನಾವು ಹೇಳಿಲ್ಲ, ವಿರೋಧ ಪಕ್ಷದವರು ಪದೇ ಪದೆ 187.33 ಕೋಟಿ ರೂ.ಗಳ ದುರುಪಯೋಗವಾಗಿದೆ ಎಂದು ಆರೋಪಿಸುತ್ತಿದ್ದಾರೆ. ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಶಾಖೆಯಿಂದ ತೆಲಂಗಾಣಕ್ಕೆ ಹೋಗಿರುವುದು ಕೇವಲ 89.63 ಕೋಟಿ ರೂ. ಮಾತ್ರ, ಎಸ್‌ಐಟಿ ರಚನೆ ನಂತರ ತ್ವರಿತ ತನಿಖೆ ನಡೆಸಲಾಗುತ್ತಿದೆ.

ಈಗಾಗಲೇ 12 ಮಂದಿಯನ್ನು ಬಂಧಿಸಿದ್ದು, ಹಣ ಹಂಚಿಕೊಂಡಿದ್ದ ಮೊತ್ತದಲ್ಲಿ ಇದುವರೆಗೆ 34 ಕೋಟಿ ರೂ. ವಶಪಡಿಸಿಕೊಳ್ಳಲಾಗಿದೆ, ಫಸ್ಟ್ ಫೈನಾನ್ಸ್ ಕೋ ಆಪರೇಟಿವ್ ಬ್ಯಾಂಕ್, ರತ್ನಾಕರ ಬ್ಯಾಂಕ್ ಸೇರಿದಂತೆ ಒಟ್ಟು 85.25 ಕೋಟಿ ರೂ. ಮುಟ್ಟುಗೋಲು ಹಾಕಿಕೊಂಡಿದ್ದಾರೆ, ಒಟ್ಟು ಅಕ್ರಮವಾಗಿರುವುದು 85.63 ಕೋಟಿ ರೂ. ಮಾತ್ರ ಎಸ್‌ಐಟಿ ಶೇ.95ರಷ್ಟು ತನಿಖೆ ಪೂರ್ಣಗೊಳಿಸಿದೆ ಎಂದರು. ಅಕ್ರಮ ನಡೆಯಲು ಬ್ಯಾಂಕ್‌ನ ಪ್ರಧಾನ ವ್ಯವಸ್ಥಾಪಕ, ಉಪ ವ್ಯವಸ್ಥಾಪಕರು, ಕ್ರೆಡಿಟ್ ಅಧಿಕಾರಿಗಳು ಕಾರಣ ಎಂದು ಬ್ಯಾಂಕ್‌ನಿಂದ ದೂರು ನೀಡಲಾಗಿದ್ದು, ಸಿಬಿಐ ತನಿಖೆ ನಡೆಸುತ್ತಿದೆ.

ಮಾಜಿ ಸಚಿವ ಬಿ.ನಾಗೇಂದ್ರ ಹಾಗೂ ಶಾಸಕ ಬಸನಗೌಡ ದದ್ದಲ್ ಮನೆ ಮೇಲೆ ದಾಳಿ ಮಾಡಲಾಗಿದೆ, ನಾಗೇಂದ್ರ ಅವರನ್ನು ವಶಕ್ಕೆ ಪಡೆದು ನ್ಯಾಯಾಂಗ ಬಂಧನದಲ್ಲಿ ಇಟ್ಟಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ನಿಗಮದ ಅಧಿಕಾರಿ ಮೃತ ಚಂದ್ರಶೇಖರನ್ ಅವರ ಪತ್ನಿ ಕವಿತಾ ನೀಡಿರುವ ದೂರು, ಪದ್ಮನಾಭ ಅವರ ದೂರಿನನ್ವಯ ತನಿಖೆ ಸರಿಯಾದ ದಾರಿಯಲ್ಲಿ ಸಾಗಿದೆ ಎಂದರು.

ಬಿಜೆಪಿ ಅಧಿಕಾರಾವಧಿಯಲ್ಲಿ ನಡೆದ ಭೋವಿ ಅಭಿವೃದ್ಧಿ ನಿಗಮ, ದೇವರಾಜ ಅರಸ್ ಟ್ರಕ್ ಟರ್ಮಿನಲ್, ಎ.ಪಿ.ಎಂ.ಸಿ ಹಾಗೂ ಕೋವಿಡ್ ಹಗರಣಗಳ ತನಿಖೆಗೆ ಇಡಿ ಬರಲಿಲ್ಲ. ಸಿಬಿಐಗೆ ವಹಿಸುವಂತೆ ಬಿಜೆಪಿಯವರು ಹೇಳುತ್ತಾರೆ, ಅವರು ವಿರೋಧಪಕ್ಷದಲ್ಲಿದ್ದಾಗ ಸಿಬಿಐ ಅನ್ನು ಚೋರ್ ಬಚಾವ್ ಸಂಸ್ಥೆ ಎನ್ನುತ್ತಿದ್ದರು.

ಅವರ ಸರ್ಕಾರ ಕೇಂದ್ರದಲ್ಲಿರುವುದರಿಂದ ಸಿಬಿಐಗೆ ವಹಿಸುವಂತೆ ಒತ್ತಾಯಿಸುತ್ತಿದ್ದಾರೆ. ನಾವು ಅನೇಕ ಪ್ರಕರಣಗಳನ್ನು ಸಿಬಿಐಗೆ ವಹಿಸಿದ್ದೇವೆ. ರಾಘವೇಂದ್ರ ಕೋ–ಆಪರೇಟಿವ್ ಬ್ಯಾಂಕ್ ಪ್ರಕರಣ, ಪರೇಶ್ ಮೆಹ್ತಾ, ರವಿ, ಗಣಪತಿ, ಲಾಟರಿ ಪ್ರಕರಣಗಳನ್ನು ಸಿಬಿಐಗೆ ವಹಿಸಲಾಗಿದೆ. ವಿವೇಚನೆ ಆಧರಿಸಿ ಸರ್ಕಾರ ಪ್ರಕರಣಗಳ ತನಿಖೆಯನ್ನು ಸಿಬಿಐಗೆ ವಹಿಸುತ್ತದೆ. ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಮಾರ್ಗಸೂಚಿ ಪ್ರಕಾರ 25 ಕೋಟಿ ರೂ.ಗಿಂತ ಹೆಚ್ಚಿನ ಮೊತ್ತವಿದ್ದರೆ ಸಿಬಿಐ ತನಿಖೆ ಮಾಡಬಹುದು. ತನಿಖೆಗೆ ನಮ್ಮ ತಕರಾರಿಲ್ಲ. ಆದರೆ ಕಾನೂನುಬಾಹಿರ ತನಿಖೆ ಮಾಡುವುದನ್ನು ಖಂಡಿಸುತ್ತೇವೆ ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಸಂಪುಟ ಸಹೋದ್ಯೋಗಿಗಳು ಇಡಿ ಅಧಿಕಾರಿಗಳನ್ನು ಬಂಧಿಸುವಂತೆ ವಿಧಾನಸೌಧದ ಆವರಣದಲ್ಲಿನ ಮಹಾತ್ಮಗಾಂಧಿ ಪ್ರತಿಮೆ ಮುಂದೆ ಧರಣಿ ನಡೆಸಿದರು.

ನನ್ನ ಹೆಸರು ಹೇಳುವಂತೆ ಅಧಿಕಾರಿಗೆ ಇಡಿ ಬೆದರಿಕೆ

ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆ, ಹೆಚ್ಚುವರಿ ನಿರ್ದೇಶಕ ಕಲ್ಲೇಶ್ ಹೇಳಿಕೆ ಕೊಟ್ಟಿದ್ದರೂ, ಮುಖ್ಯಮಂತ್ರಿ ಹಾಗೂ ಇತರ ಸಚಿವರ ಹೆಸರುಗಳನ್ನು ಬರೆದು ಕೊಡುವಂತೆ ಒತ್ತಾಯ ಮಾಡಲಾಗುತ್ತಿದೆ. 187.33 ಕೋಟಿ ರೂ.ಗಳಲ್ಲಿ 43.33 ಕೋಟಿ ರೂ. ಖಜಾನೆಯಿಂದ ಹೋಗಿದೆ. ಅದಕ್ಕೂ ನಮಗೂ ಸಂಬಂಧವಿಲ್ಲ. ನಮ್ಮ ಹಾಗೂ ಆರ್ಥಿಕ ಇಲಾಖೆ ಪಾತ್ರ ಇಲ್ಲ. ಒಮ್ಮೆ ಬಜೆಟ್ ಅನುಮೋದನೆ ದೊರೆತ ನಂತರ ಅನುದಾನ ಕಾರ್ಯದರ್ಶಿಗಳಿಗೆ, ಅಲ್ಲಿಂದ ನಿರ್ದೇಶಕರಿಗೆ ಹೋಗುತ್ತದೆ, ನಿರ್ದೇಶಕರು ಅನುದಾನವನ್ನು ವ್ಯವಸ್ಥಾಪಕ ನಿರ್ದೇಶಕರಿಗೆ ಕೊಡುತ್ತಾರೆ. ಇದು ಸಹಜ ಪ್ರಕ್ರಿಯೆ ಎಂದು ಸಮರ್ಥಿಸಿಕೊಂಡರು.

ಕಲ್ಲೇಶ್ ಅವರನ್ನು ಹೆದರಿಸಿ, ಬೆದರಿಸಿ, ಜೀವ ಭಯ ಉಂಟು ಮಾಡಿ ಅನಗತ್ಯವಾಗಿ ನನ್ನ ಹೆಸರು ಹೇಳುವಂತೆ ಜಾರಿ ನಿರ್ದೇಶನಾಲಯದ ತನಿಖಾಧಿಕಾರಿಗಳು ಬೆದರಿಸಿದ್ದಾರೆ. ಕಾನೂನಿನಡಿ ನನ್ನ ಮೇಲೆ ಆರೋಪ ಬರುವಂತೆ ಒತ್ತಾಯಿಸಿದ್ದಾರೆ. ಕಲ್ಲೇಶ್ ದೂರು ನೀಡಿ ಪ್ರಕರಣ ದಾಖಲಾಗಿದೆ. ದೂರಿನಲ್ಲಿ ಏನೇನು ನಡೆಯಿತು ಎಂಬುದನ್ನು ವಿವರಿಸಿದ್ದಾರೆ.

ರಾಜ್ಯ ಸರ್ಕಾರ ಅಸ್ಥಿರಗೊಳಿಸಲು ಕೇಂದ್ರ ವಾಮಮಾರ್ಗ ಅನುಸರಿಸುತ್ತಿದೆ. ಮುಖ್ಯಮಂತ್ರಿಯನ್ನು ಗುರಿಯಾಗಿಸಿಕೊಂಡು ನನ್ನ ಮತ್ತು ಸರ್ಕಾರದ ವರ್ಚಸ್ಸು ಹಾಳು ಮಾಡುವ ಯತ್ನ ನಡೆದಿದೆ. ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿರುದ್ಧ ಇದೆ ಎಂಬುದಾಗಿ ರಾಜ್ಯದ ಜನತೆ ಮುಂದೆ ಬಿಂಬಿಸಲು ಹೊರಟಿದ್ದಾರೆ, ಸರ್ಕಾರ ಎಂದಿಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ದುರ್ಬಲ ವರ್ಗ, ಬಡವರು, ರೈತರು, ಕಾರ್ಮಿಕರ ಪರವಾಗಿದೆ. ಹೇಗಾದರೂ ಮಾಡಿ ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಇರಬಾರದೆಂಬ ಉದ್ದೇಶದಿಂದ ವಾಮಮಾರ್ಗ ಅನುಸರಿಸುತ್ತಿದ್ದಾರೆ. ಆರ್ಥಿಕ ಇಲಾಖೆಯಾಗಲೀ, ಮುಖ್ಯಮಂತ್ರಿಯಾಗಲೀ ಈ ಹಗರಣಕ್ಕೆ ಸಂಬಂಧಪಟ್ಟಿಲ್ಲ, ಹಗರಣ ನಡೆದಿರುವುದಕ್ಕೆ ತನಿಖೆ ಮಾಡಿಸುತ್ತಿದ್ದೇವೆ.

ಎಸ್‌ಐಟಿಯಿಂದ ಸಿಬಿಐಗೆ ವರ್ಗಾವಣೆ ಕೋರಿ ಯೂನಿಯನ್ ಬ್ಯಾಂಕ್ ಹೈಕೋರ್ಟ್ ಮೊರೆ

ಬೆಂಗಳೂರು, ಜು.23(ಕೆಎಂಶಿ)– ವಾಲ್ಮೀಕಿ ಹಗರಣದ ತನಿಖೆಯನ್ನು ಎಸ್‌ಐಟಿಯಿಂದ ಸಿಬಿಐಗೆ ವರ್ಗಾವಣೆ ಮಾಡುವಂತೆ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಅಧಿಕಾರಿಗಳ ವಿರುದ್ಧ ರಾಜ್ಯ ಸರ್ಕಾರ ಎಫ್‌ಐಆರ್ ದಾಖಲು ಮಾಡಿದ ಬೆನ್ನಲ್ಲೇ ಕೇಂದ್ರ ಸರ್ಕಾರ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತಿರುಗಿಬಿದ್ದಿದೆ.

ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಬಹುಕೋಟಿ ಹಗರಣವನ್ನು ಸಿಬಿಐಗೆ ವರ್ಗಾವಣೆ ಮಾಡುವಂತೆ ಸಲ್ಲಿಸಿರುವ ಅರ್ಜಿಗೆ ಸಂಬಂಧಿಸಿದಂತೆ ನ್ಯಾಯಾಲಯ ಸಿಬಿಐಗೆ ನೋಟಿಸ್ ಜಾರಿ ಮಾಡಿದೆ.

ಬ್ಯಾಂಕ್ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆಗೆ ಕೈಗೆತ್ತಿಕೊಂಡ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಪೀಠದ ಮುಂದೆ ಯೂನಿಯನ್ ಬ್ಯಾಂಕ್ ಪರ ಅಟಾರ್ನಿ ಜನರಲ್ ಆರ್.ವೆಂಕಟರಮಣಿ ಹಾಜರಾಗಿ, ಯಾವುದೇ ಪ್ರಕರಣದಲ್ಲಿ 50 ಕೋಟಿ ರೂ.ಗಿಂತಲೂ ಹೆಚ್ಚಿನ ಮೊತ್ತದ ಹಗರಣ ಕಂಡುಬಂದರೆ ಅದನ್ನು ಸಿಬಿಐ ತನಿಖೆಗೆ ಒಪ್ಪಿಸಬೇಕಾಗುತ್ತದೆ. ಆದರೆ, ಈ ಪ್ರಕರಣದಲ್ಲಿ ಸ್ಥಳೀಯ ಪೊಲೀಸರೇ ತನಿಖೆ ನಡೆಸುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಹಗರಣದ ತನಿಖೆಗೆ ಅಂತಾರಾಷ್ಟ್ರೀಯ ಪ್ರಾಮುಖ್ಯತೆ ಇದೆ. ಸ್ಥಳೀಯ ಪೊಲೀಸರು ಇಂತಹ ಪ್ರಕರಣಗಳ ತನಿಖೆ ನಡೆಸಬಾರದು ಎಂದು ಕೆಲವು ದಾಖಲೆಗಳನ್ನು ಪೀಠದ ಮುಂದೆ ಮಂಡಿಸಿ ಸಿಬಿಐಗೆ ವಹಿಸುವಂತೆ ಮನವಿ ಮಾಡಿದರು. ವಾದ–ಪ್ರತಿವಾದ ಆಲಿಸಿದ ನ್ಯಾಯಮೂರ್ತಿಗಳು ಸಿಬಿಐ ಮತ್ತು ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿ ವಿಚಾರಣೆಯನ್ನು ಆಗಸ್ಟ್ 7ಕ್ಕೆ ಮುಂದೂಡಿದರು. ರಾಜ್ಯ ಪೊಲೀಸರು ಇಡಿ ಅಧಿಕಾರಿಗಳ ವಿರುದ್ಧ ಮಾಡಿರುವ ಎಫ್‌ಐಆರ್ ರದ್ದುಪಡಿಸುವಂತೆ ಕೋರಿ ಜಾರಿ ನಿರ್ದೇಶನಾಲಯ ಹೈಕೋರ್ಟ್ ಮೆಟ್ಟಿಲೇರಿದೆ.

ನಿಗಮದಲ್ಲಿ ನಡೆದಿರುವ 94.73 ಕೋಟಿ ರೂ. ಅಕ್ರಮ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಆರೋಪಿಯನ್ನಾಗಿಸಲು ಒತ್ತಡ ಹೇರುತ್ತಿರುವ ಆರೋಪದಡಿ ಇಡಿ ಅಧಿಕಾರಿಗಳ ವಿರುದ್ಧ ನಿನ್ನೆ ನಗರದ ಪೊಲೀಸ್ ಠಾಣೆಯೊಂದರಲ್ಲಿ ದೂರು ದಾಖಲಾಗಿತ್ತು.

ಬೆಂಗಳೂರಲ್ಲಿ ಗೀಸರ್ ಗ್ಯಾಸ್ ಸೋರಿಕೆ; ಬಾತ್‌ರೂಮ್‌ನಲ್ಲೇ ತಾಯಿ–ಮಗ ದಾರುಣ ಸಾವು

ಬೆಂಗಳೂರು: ಬಾತ್‌ರೂಮ್‌ಗೆ ಹೋಗಿದ್ದಾಗ ಗೀಸರ್‌ನ ಗ್ಯಾಸ್ ಸೋರಿಕೆಯಾಗಿ ಉಸಿರುಗಟ್ಟಿ ತಾಯಿ–ಮಗ ಇಬ್ಬರು ಮೃತಪಟ್ಟಿರುವ ಘಟನೆ ಮಾಗಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮಾಗಡಿ ರಸ್ತೆಯ 39 ವರ್ಷದ ಶೋಭಾ ಮತ್ತು 16 ವರ್ಷದ ದಿಲೀಪ್ ಮೃತ ದುರ್ದೈವಿಗಳು. ಸ್ನಾನಕ್ಕೆಂದು ತೆರಳಿದ್ದ ಬಾಲಕ ಮೊದಲು ವಿಷಕಾರಿ ಅನಿಲವನ್ನು ಸೇವಿಸಿ ಕುಸಿದು ಬಿದ್ದಿದ್ದಾನೆ. ಎಷ್ಟೋ ಹೊತ್ತಾದರೂ ಹೊರಗೆ ಬಾರದೇ ಇದ್ದುದರಿಂದ ತಾಯಿ ನೋಡಲು ಹೋಗಿದ್ದಾರೆ. ನಂತರ ಆಕೆಯೂ ವಿಷಕಾರಿ ಕಾರ್ಬನ್ ಮಾನಾಕ್ಸೈಡ್ ಸೇವಿಸಿ ಪ್ರಜ್ಞೆ ತಪ್ಪಿ ಬಿದ್ದಿರಬಹುದು ಎಂದು ಶಂಕಿಸಲಾಗಿದೆ.

ಶಿರೂರು ಗುಡ್ಡ ಕುಸಿತ ದುರಂತ: 8 ದಿನಗಳ ಬಳಿಕ

ಮಹಿಳೆ ಶವ ಪತ್ತೆ; ಮೃತರ ಸಂಖ್ಯೆ 8ಕ್ಕೆ ಏರಿಕೆ

ಶಿರೂರು [ಉತ್ತರ ಕನ್ನಡ]: ಉತ್ತರ ಕನ್ನಡ ಜಿಲ್ಲೆಯ ಅಂಕೋಲದ ಶಿರೂರಿನಲ್ಲಿ ಭೂಕುಸಿತ ದುರಂತ ಸಂಭವಿಸಿ ಒಂದು ವಾರ ಕಳೆದಿದೆ. ಕಾರ್ಯಾಚರಣೆ ವೇಳೆ ಸೋಮವಾರ ಮತ್ತೊಂದು ಶವ ಸಿಕ್ಕಿದೆ.

ದುರಂತ ಸಂಭವಿಸಿದ ದಿನ ಸಣ್ಣಿ ಹನುಮಂತಗೌಡ ಅವರು ಮನೆಯಲ್ಲಿ ಒಬ್ಬರೇ ಇದ್ದರು. ಗುಡ್ಡ ಕುಸಿತದ ಪರಿಣಾಮ ನದಿಯಲ್ಲಿ ಕೊಚ್ಚಿಕೊಂಡು ಹೋಗಿದ್ದರು. ಘಟನೆ ಬಳಿಕ ಉಳ್ಳುವರೆ ಗ್ರಾಮಕ್ಕೆ ಸಚಿವ ಮಂಕಾಳ್ ವೈದ್ಯ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಭೇಟಿ ನೀಡಿದ ಸಂದರ್ಭದಲ್ಲಿ ಮಹಿಳೆಯ ಪುತ್ರ ಮಂಜುನಾಥ ಹನುಮಂತಗೌಡ ಅವರು ತಾಯಿ ಹುಡುಕಿಕೊಡುವಂತೆ ಮನವಿ ಮಾಡಿಕೊಂಡಿದ್ದರು.

ನಿನ್ನೆ ನಡೆದ ಶೋಧ ಕಾರ್ಯಾಚರಣೆ ವೇಳೆ ಗಂಗಕೊಳ್ಳ ಎಂದು ಕರೆಯಲ್ಪಡುವ ಗಂಗವಳ್ಳಿ ನದಿಯ 15 ಕಿಲೋಮೀಟರ್ ದೂರದಲ್ಲಿ ಶವ ಪತ್ತೆಯಾಗಿದೆ. ಅದೇ ಸ್ಥಳದಲ್ಲಿ 4 ವರ್ಷದ ಬಾಲಕಿ ಆವಂತಿಕಾಳ ಶವ ಕೂಡ ಪತ್ತೆಯಾಗಿತ್ತು. ಜುಲೈ 16ರ ಬೆಳಗ್ಗೆ ಉತ್ತರ ಕನ್ನಡ ಜಿಲ್ಲೆಯ ಶಿರೂರಿನ ರಾಷ್ಟ್ರೀಯ ಹೆದ್ದಾರಿ 66 ರಲ್ಲಿ ಗುಡ್ಡ ಕುಸಿತವಾಗಿತ್ತು. ಈ ದುರಂತದಲ್ಲಿ 11 ಮಂದಿ ಬಲಿಯಾಗಿದ್ದಾರೆ. ಈ ಪೈಕಿ ಈವರೆಗೆ 8 ಮೃತದೇಹಗಳು ಪತ್ತೆಯಾಗಿವೆ. ಉಳಿದವರಿಗಾಗಿ ಶೋಧಕಾರ್ಯ ನಡೆಯುತ್ತಿದೆ. ಕಾರ್ಯಾಚರಣೆಗೆ ಆಧುನಿಕ ತಂತ್ರಜ್ಞಾನದ ಮೊರೆಹೋಗಿರುವ ಜಿಲ್ಲಾಡಳಿತ ಇಸ್ರೋ ಜೊತೆಗೆ ಯೋಧರ ನೆರವು ಪಡೆದಿದೆ.



ಕಾರ್ಯಾಚರಣೆ



ಸಣ್ಣಿ ಹನುಮಂತಗೌಡ

ಒಂದೆಡೆ ಬಿಟ್ಟು ಬಿಡದ ಮಳೆ, ಮತ್ತೊಂದೆಡೆ ಪದೇ ಪದೆ ನೆಲಕ್ಕುರುಳುತ್ತಿರುವ ಗುಡ್ಡದ ಮಣ್ಣು. ಇದರ ನಡುವೆ ಜೀವ ಪಣಕ್ಕಿಟ್ಟು ರಕ್ಷಣಾ ಪಡೆಗಳು ಕಾರ್ಯಾಚರಣೆ ನಡೆಸುತ್ತಿವೆ. ಮಣ್ಣಿನ ಕುಸಿತದಿಂದ ನದಿಯಲ್ಲಿ ತೇಲಿ ಹೋದ ಗಂಗೆಕೊಳ್ಳದ ಲೋಕೇಶ್ ನಾಯ್ಕ, ಶಿರೂರಿನ ಜಗನ್ನಾಥ ಜಟ್ಟಿ, ಕೇರಳ ಮೂಲದ ಅರ್ಜುನ್ ಶವ ಪತ್ತೆಯಾಗಬೇಕಿದೆ. ಶಂಕಿತ ಸ್ಥಳದಲ್ಲಿ ಶೋಧ ಕಾರ್ಯ ಮಾಡಿದರೂ ಟ್ರಕ್, ಟ್ಯಾಂಕರ್‌ಗಳು ಮಾತ್ರ ಪತ್ತೆಯಾಗಿಲ್ಲ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಆರ್ಮಿ ಕಮಾಂಡೋಗಳ ತಂಡದಿಂದ ಶೋಧ ಕಾರ್ಯ ಮುಂದುವರೆದಿದೆ.

ಗುಡ್ಡದ ಮಣ್ಣು ತೆರವಿಗೆ ಮಳೆಯ ಅಬ್ಬರ ಅಡ್ಡಿ ಉಂಟು ಮಾಡಿದರೆ, ಮಳೆಯಿಂದ ಗುಡ್ಡದ ಭಾಗದಿಂದ ಬರುತ್ತಿರುವ ನೀರು ದೊಡ್ಡ ಕಂದಕವನ್ನೇ ಸೃಷ್ಟಿ ಮಾಡಿದೆ. ಇದರ ಜೊತೆಗೆ ಈ ಭಾಗದ ಮಣ್ಣನ್ನು ಪರೀಕ್ಷೆ ಮಾಡಿದ ಜಿಯಾಲಾಜಿಕಲ್ ಸರ್ವೆ ಆಫ್ ಇಂಡಿಯಾದ ಭೂ ವಿಜ್ಞಾನಿಗಳ ತಂಡ ಮತ್ತೆ ಈ ಭಾಗದಲ್ಲಿ ಗುಡ್ಡ ಕುಸಿಯುವ ಸಾಧ್ಯತೆ ವರದಿ ನೀಡಿದೆ. ಹೀಗಾಗಿ ಕಾರ್ಯಾಚರಣೆ ಮಾಡುವುದು ಸಹ ದೊಡ್ಡ ತೊಡಕಾಗಿದ್ದು, ಸಾರ್ವಜನಿಕರಿಗೆ ಮಣ್ಣು ತೆರವಾದ ರಸ್ತೆಯಲ್ಲಿ ಸಂಚಾರಕ್ಕೆ ನಿಷೇಧ ಹೇರಲಾಗಿದೆ



